ಸಂಪುಟ: 22, ಸಂಚಿಕೆ: 269, ಪುಟಗಳು: 8, ಮಂಗಳವಾರ, 8 ಜುಲೈ 2025 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ನೇಹಿಯ ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines

### ಸುಭಾಷಿತ

ಯಾರ ಮೇಲೂ ಅವಲಂಬಿತರಾಗಬೇಡಿ. ಏಕೆಂದರೆ ನೀವು ಕತ್ತಲಲ್ಲಿದ್ದಾಗ ನೆರಳೂ ಸಹ ನಿಮ್ಮ ಜೊತೆ ಇರುವುದಿಲ್ಲ.

### ಪಂಚಾಂಗ

(ಮಂಗಳವಾರ 8 ಜುಲೈ-2025)

- ಶ್ರೀ ವಿಶ್ವಾವಸು ನಾಮ ಸಂವತ್ಸರ
- ಉತ್ತರಾಯಣ, ಗ್ರೀಷ್ಮ ಋತು
- ಆಷಾಡ ಮಾಸ, ಶುಕ್ಲ ಪಕ್ಷ
- ತಿಥಿ: ತ್ರಯೋದಶಿ
- ನಕ್ಷತ್ರ: ಜೇಷ್ಠ
- ರಾಹುಕಾಲ: 3:38 ರಿಂದ 5:14
- ಗುಳಿಕಕಾಲ: 12:25 ರಿಂದ 2:21
- ಯಮಗಂಡಕಾಲ: 9:12 ರಿಂದ 10:48

## ಸಿಎಂ ಸಿದ್ದರಾಮಯ್ಯ ವಿರುದ್ಧ ಅವಹೇಳನಕಾರಿ ಕಮೆಂಟ್

# ಪೊಲೀಸರಿಗೆ ದೂರು ನೀಡಿದ ಕಾಂಗ್ರೆಸ್

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ನಿಯಮಿತ ವೈದ್ಯಕೀಯ ತಪಾಸಣೆಗಾಗಿ ಸೋಮವಾರ ಬೆಂಗಳೂರಿನ ಶೇಷಾದ್ರಿಪುರಂನಲ್ಲಿರುವ ಅಪೋಲೋ ಆಸ್ಪತ್ರೆಗೆ ಭೇಟಿ ನೀಡಿದ್ದರು. ಈ ವಿಚಾರವಾಗಿ ಪ್ರಕಟವಾಗಿರುವ ಸುದ್ದಿಗಳಿಗೆ ಕಿಡಿಗೇಡಿಗಳು ಕೆಟ್ಟದಾಗಿ ಕಮೆಂಟ್ ಮಾಡಿದ ಕಾರಣ ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಸಮಿತಿ ಪೊಲೀಸರಿಗೆ ದೂರು ನೀಡಿದೆ. ಸಿದ್ದರಾಮಯ್ಯ ಸಾವಿನ ಬಗ್ಗೆ ಪ್ರಸ್ತಾಪಿಸಿ ಅವಹೇಳನಕಾರಿಯಾಗಿ ಕಮೆಂಟ್ ಮಾಡಲಾಗಿದೆ. ಮುಖ್ಯಮಂತ್ರಿಗಳ ವಿರುದ್ಧ ಅಶ್ಲೀಲ



ಪದಗಳಿಂದ ನಿಂದನೆ ಮಾಡಲಾಗಿದೆ ಎಂದು ಪೀಣ್ಯ ಪೊಲೀಸರಿಗೆ ನೀಡಿದ ದೂರಿನಲ್ಲಿ ತಿಳಿಸಲಾಗಿದೆ. ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಕಮಿಟಿಯ ಕುಶಾಲ್ ಹರುವೇಗೌಡ ಹಾಗೂ ಸಂಜಯ್ ಎಂಬವರು ದೂರು ನೀಡಿದ್ದಾರೆ.

**ದೂರಿನಲ್ಲೇನಿದೆ?:** ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ಕುರಿತು ದಿನಾಂಕ 7-7-2025ರಂದು ''ದಿಢೀರ್ ಆಸ್ಪತ್ರೆಗೆ ತೆರಳಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ'' ಎಂದು ಖಾಸಗಿ ವಾಹಿನಿಯಲ್ಲಿ ಬಿತ್ತರವಾದ ಸುದ್ದಿಯ ಫೇಸ್ ಬುಕ್ ಪೋಸ್ಟ್‌ಗೆ ಮುಖ್ಯಮಂತ್ರಿಯ ಸಾವನ್ನು ಬಯಸುವ ಹೇಳಿಕೆಗಳನ್ನು ಸಾಮಾಜಿಕ ಮಾಧ್ಯಮದಲ್ಲಿ ಹಾಕಿರುವ ಇಂತಹ ವಿಕೃತ ಮನಸ್ಸಿನ ವ್ಯಕ್ತಿಗಳು ಮಾಡುವ ಅಪಪ್ರಚಾರದ ಸುಳ್ಳು ವದಂತಿ ಹಾಗೂ

ಪುಟ 2

## ಟ್ರಂಪ್ ಟ್ಯಾರಿಫ್‌ನಿಂದ ಬಚಾವಾದ ಭಾರತ

# ಅಮೆರಿಕದಿಂದ 14 ದೇಶಗಳ ಮೇಲೆ ಆಮದು ಸುಂಕ ಹೇರಿಕೆ

**ನವದೆಹಲಿ:** ಅಮೆರಿಕ ಸರ್ಕಾರ ಜಪಾನ್, ಬಾಂಗ್ಲಾದೇಶ, ಸೌತ್ ಕೊರಿಯಾ ಸೇರಿ 14 ದೇಶಗಳ ಮೇಲೆ ಹೊಸ ಆಮದು ಸುಂಕ ದರಗಳನ್ನು ಪ್ರಕಟಿಸಿದ್ದಾರೆ. ಇದರಲ್ಲಿ ಭಾರತವನ್ನು ಸೇರಿಸಲಾಗಿಲ್ಲ. ಭಾರತದ ಜೊತೆ ಒಪ್ಪಂದ ಕುದುರಿಸುವ ಹಂತದಲ್ಲಿದ್ದೇವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. 14 ದೇಶಗಳ ಮೇಲಿನ ಹೊಸ ಟ್ಯಾರಿಫ್ ಆಗಸ್ಟ್ 1ರಿಂದ ಚಾಲನೆಗೆ ಬರುತ್ತದೆ.




ಟ್ರಂಪ್ ಅವರು ತಮ್ಮ ಟ್ ರೂತ್ ಸೋಷಿಯಲ್ ನ ಅಕೌಂಟ್‌ನಲ್ಲಿ, ಜಪಾನ್ ಮತ್ತು ಸೌತ್ ಕೊರಿಯಾ ಮೇಲೆ ಶೇ. 25 ಟ್ಯಾರಿಫ್ ಹಾಕುತ್ತಿರುವುದಾಗಿ ಬರೆದಿದ್ದರು. ಅದರ ಬೆನ್ನಲ್ಲೇ ಇನ್ನೂ 12 ದೇಶಗಳ ಮೇಲೆ ಟ್ಯಾರಿಫ್ ಹಾಕುತ್ತಿರುವುದನ್ನು ತಿಳಿಸಿ, ಟ್ಯಾರಿಫ್ ಪತ್ರಗಳನ್ನು ಹಂಚಿಕೊಂಡಿದ್ದಾರೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಅನುಮಾನದ ಭೂತ: ಪತ್ನಿಯ ಮುಖವನ್ನು ಚಾಕುವಿನಿಂದ ವಿರೂಪಗೊಳಿಸಿದ ಪತಿ



**ಚಿಕ್ಕಬಳ್ಳಾಪುರ:** ಪತ್ನಿ ಮೇಲಿನ ಅನುಮಾನದಿಂದ ಪತಿರಾಯನೊಬ್ಬ ಆಕೆ ಮುಖವನ್ನು ವಿರೂಪಗೊಳಿಸಿದ ಅಮಾನವೀಯ ಘಟನೆ ಚಿಕ್ಕಬಳ್ಳಾಪುರದಲ್ಲಿ ನಡೆದಿದೆ. ಅಶ್ವತ್ಥನಾರಾಯಣ ಎನ್ನುವಾತ ತನ್ನ ಪತ್ನಿ ಪೂಜಾಳ ನಡತೆ ಮೇಲೆ ಅನುಮಾನ ಪಟ್ಟಿದ್ದು, ಯಾರೂ ನೋಡಬಾರದೆಂದು ಚಾಕುವಿನಿಂದ ಪತ್ನಿ ಮುಖ ಕೊಯ್ದು ವಿರೂಪಗೊಳಿಸಿ ವಿಕೃತಿ ಮೆರೆದಿದ್ದಾನೆ. ಅಶ್ವತ್ಥನಾರಾಯಣ ಈಗಾಗಲೇ ಎರಡು ಮದುವೆಯಾಗಿದ್ದು, ಇದೀಗ ಮೂರನೇ ಹೆಂಡ್ತಿ ಪೂಜಾಳ ಮೇಲೆ ಅನುಮಾನಪಟ್ಟು ಆಕೆಯ ಮುಖವನ್ನು ಚಾಕುವಿನಿಂದ ಕೊಯ್ದು ಅಟ್ಟಹಾಸ ಮೆರೆದಿದ್ದಾನೆ. ಮೊದಲಿಗೆ ಪೂಜಾಳ ಕತ್ತಿಗೆ ಚಾಕು ಹಿಡಿದಿದ್ದಾನೆ. ಆಕೆ ಜೋರಾಗಿ ಕಿರುಚಿಕೊಂಡು ತಪ್ಪಿಸಿಕೊಳ್ಳಲು ಪ್ರಯತ್ನಿಸಿದ್ದಾಳೆ. ಆದರೂ ಬಿಡದ ಪಾಪಿ, ಮನೆಯಲ್ಲಿ ಅಟ್ಟಾಡಿಸಿ ಚಾಕುವಿನಿಂದ ಪೂಜಾಳ ಕೆನ್ನೆ ಕೊಯ್ದಿದ್ದಾನೆ. ಕೊನೆಗೆ ಸ್ಥಳೀಯರ ಸಹಾಯದಿಂದ ಪೂಜಾ ಪ್ರಾಣಾಪಾಯದಿಂದ ಪಾರಾಗಿದ್ದು, ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿದ್ದಾಳೆ.

ಪುಟ 2

### ಬಿಹಾರದ ಪುರ್ನಿಯಾದಲ್ಲಿ ಒಂದೇ ಕುಟುಂಬದ ಐವರ ಸಜೀವ ದಹನ



**ಪಾಟ್ನಾ:** ಬಿಹಾರದ ಪುರ್ನಿಯಾ ಜಿಲ್ಲೆಯ ಮುಫಾಸಿಲ್ ಪೊಲೀಸ್ ಠಾಣೆ ಪ್ರದೇಶದ ಟೆಟ್ಗಾಮಾ ಗ್ರಾಮದಿಂದ ಆಘಾತಕಾರಿ ಘಟನೆಯೊಂದು ಬೆಳಕಿಗೆ ಬಂದಿದೆ. ಅಲ್ಲಿ ಒಂದೇ ಕುಟುಂಬದ ಐವರು ಸದಸ್ಯರನ್ನು ವಾಮಾಚಾರದ ಆರೋಪದ ಮೇಲೆ ಕ್ರೂರವಾಗಿ ಥಳಿಸಿ ನಂತರ ಜೀವಂತವಾಗಿ ಸುಟ್ಟುಹಾಕಲಾಗಿದೆ. ಈ ಭೀಕರ ಕೊಲೆ ಸುತ್ತಮುತ್ತಲೂ ಆಘಾತ ಸೃಷ್ಟಿಸಿದೆ. ಎಲ್ಲಾ ಆರೋಪಿಗಳು ಗ್ರಾಮದಿಂದ ಪರಾರಿಯಾಗಿದ್ದಾರೆ ಮತ್ತು ಪೊಲೀಸರು ಅವರಿಗಾಗಿ ಹುಡುಕುತ್ತಿದ್ದಾರೆ.

ಪುಟ 2

# ಎತ್ತಿನಹೊಳೆ ಯೋಜನೆಗೆ ಹಿನ್ನಡೆ

## ಹೆಚ್ಚುವರಿ ಅರಣ್ಯ ಬಳಕೆಗೆ ಅನುಮೋದನೆ ನಿರಾಕರಿಸಿದ ಕೇಂದ್ರ

**ನವದೆಹಲಿ:** ಹಾಸನ ಜಿಲ್ಲೆಯ ಸಕಲೇಶಪುರ ಪರಿಸರದಿಂದ ಬಯಲು ಸೀಮೆಯ ಜಿಲ್ಲೆಗಳಿಗೆ ನೀರು ಹರಿಸುವ ಬಹುನಿರೀಕ್ಷಿತ ಎತ್ತಿನಹೊಳೆ ಯೋಜನೆಗೆ ಇದೀಗ ಕೇಂದ್ರ ಸರ್ಕಾರ ಶಾಕ್ ನೀಡಿದೆ. ಯೋಜನೆಗೆ ಅಗತ್ಯವಿದ್ದ ಹೆಚ್ಚುವರಿ 423 ಎಕರೆ ಅರಣ್ಯ ಭೂಮಿ ಬಳಕೆಗೆ ಕೇಂದ್ರ ಪರಿಸರ ಸಚಿವಾಲಯ ಅನುಮೋದನೆ ನಿರಾಕರಿಸಿದೆ. ಇದರಿಂದ, ಯೋಜನೆ ಇನ್ನಷ್ಟು ವಿಳಂಬವಾಗುವ ಸಾಧ್ಯತೆ ಎದುರಾಗಿದೆ. ಹಾಸನ ಮತ್ತು ತುಮಕೂರು ಜಿಲ್ಲೆಗಳ ವ್ಯಾಪ್ತಿಯ 432 ಎಕರೆ ಅರಣ್ಯ ಭೂಮಿಯನ್ನು 'ಗುರುತ್ವಾಕರ್ಷಣೆ ಕಾಲುವೆ' ನಿರ್ಮಾಣಕ್ಕೆ ಬಳಸುವ ನಿಟ್ಟಿನಲ್ಲಿ ಈ ವರ್ಷದ ಮಾರ್ಚ್‌ನಲ್ಲಿ ಕೇಂದ್ರಕ್ಕೆ ಕರ್ನಾಟಕ ಸರ್ಕಾರ ಪ್ರಸ್ತಾವನೆ ಸಲ್ಲಿಸಿತ್ತು. ಇದಕ್ಕೆ ಸಂಬಂಧಿಸಿದಂತೆ ಕೇಂದ್ರ ಪರಿಸರ ಸಚಿವಾಲಯದ ಅರಣ್ಯ ಸಲಹಾ ಸಮಿತಿಯ ಅಧೀನದಲ್ಲಿದ್ದ ಡಿಐಜಿಎಫ್ ಪ್ರಣಿತಾ ಪೌಲ್ ನೇತೃತ್ವದ ಅಧಿಕಾರಿಗಳ ತಂಡ ಸ್ಥಳ ಪರಿಶೀಲನೆ ನಡೆಸಿ ವರದಿ ಸಲ್ಲಿಸಿತ್ತು.

ಜೂನ್ 26ರಂದು ದೆಹಲಿಯಲ್ಲಿ ನಡೆದ ಸಮಿತಿಯ ಸಭೆಯಲ್ಲಿ ಹೆಚ್ಚುವರಿ ಅರಣ್ಯ ಭೂಮಿ ಬಳಕೆ ಪ್ರಸ್ತಾವನೆ ಕುರಿತು ಚರ್ಚೆಯಾಗಿತ್ತು. ಅಂತಿಮವಾಗಿ ಕೇಂದ್ರ ಅರಣ್ಯ ಇಲಾಖೆಯು ಹೆಚ್ಚುವರಿ ಅರಣ್ಯ ಭೂಮಿ ಬಳಕೆಗೆ ಅನುಮತಿ ನೀಡಿಲ್ಲ.

ಪುಟ 2



### ಅರಣ್ಯ ಭೂಮಿ ಬಳಕೆಯಿಂದ ಹಿನ್ನಡೆ

**ಯೋಜನೆಗೆ ಅರಣ್ಯ ಭೂಮಿ ಬಳಕೆಗೆ ಕೇಂದ್ರ ಪರಿಸರ ಸಚಿವಾಲಯದಿಂದ ಅನುಮೋದನೆ ಲಭ್ಯವಾಗುವ ಮೊದಲೇ ಅರಣ್ಯ ಭೂಮಿಯನ್ನು ಬಳಸಲಾಗಿದೆ ಎಂದು ಡಿಐಜಿಎಫ್ ಪ್ರಣಿತಾ ಪೌಲ್ ನೇತೃತ್ವದ ಅಧಿಕಾರಿಗಳ ತಂಡ ಕೇಂದ್ರಕ್ಕೆ ಸಲ್ಲಿಸಿದ್ದ ವರದಿಯಲ್ಲಿ ತಿಳಿಸಿತ್ತು.**

## ಇಂದಿನಿಂದ ಅನ್ನಭಾಗ್ಯ ಆಹಾರ ಧಾನ್ಯ ಸಾಗಾಣಿಕೆ ಬಂದ್

# ಪಡಿತರ ವಿತರಣೆಯಲ್ಲಿ ವ್ಯತ್ಯಯ!

**ಬೆಂಗಳೂರು:** ನಾಲ್ಕು ತಿಂಗಳಿಂದ ರಾಜ್ಯ ಸರ್ಕಾರ ಪಡಿತರ ಆಹಾರ ಧಾನ್ಯ ಸಾಗಣಿಕೆ ವೆಚ್ಚ ನೀಡಿಲ್ಲ. 250 ಕೋಟಿ ರೂ. ಬಾಕಿ ಉಳಿಸಿಕೊಂಡಿದೆ. ಹೀಗಾಗಿ ಲಾರಿ ಮಾಲೀಕರು, ಚಾಲಕರು ಮುಷ್ಕರಕ್ಕೆ ಕರೆ ನೀಡಿದ್ದಾರೆ. ಆ ಮೂಲಕ ಈ ತಿಂಗಳ ಪಡಿತರ ವಿತರಣೆಯಲ್ಲಿ ವ್ಯತ್ಯಯ ಉಂಟಾಗುವ ಸಾಧ್ಯತೆ ಇದೆ. ಈ ಬಗ್ಗೆ ಮಾತನಾಡಿರುವ ರಾಜ್ಯ ಲಾರಿ ಮಾಲೀಕರ ಸಂಘದ ರಾಜ್ಯಾಧ್ಯಕ್ಷ ವಿ.ಆರ್. ಷಣ್ಮುಗಪ್ಪ ಇಂದಿನಿಂದ ಅನ್ನಭಾಗ್ಯ ಆಹಾರ ಧಾನ್ಯ ಸಾಗಾಣಿಕೆ ಬಂದ್ ಎಂದು ಮಾಹಿತಿ ನೀಡಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ವಿ.ಆರ್.ಷಣ್ಮುಗಪ್ಪ, ಯಾವುದೇ ಭರವಸೆ ಈಡೇರಿಸದ ಹಿನ್ನೆಲೆ ಇಂದಿನಿಂದ ಅನ್ನಭಾಗ್ಯ ಆಹಾರ ಧಾನ್ಯ ಸಾಗಾಣಿಕೆ ಬಂದ್ ಎಂದಿದ್ದಾರೆ. ನಮ್ಮ ಖಾತೆಗೆ ಹಣ ಬರುವವರೆಗೂ ಮುಷ್ಕರ ಹಿಂಪಡೆಯಲ್ಲ ಎಂದು ಹೇಳಿದ್ದಾರೆ.

5 ತಿಂಗಳಿನಿಂದ 260 ಕೋಟಿ ರೂ. ಬಿಡುಗಡೆ



ಆಗಬೇಕು. ಜೂ.19ರಂದು 100 ಕೋಟಿ ರೂ. ಹಾಕುವುದಾಗಿ ಹೇಳಿದ್ದರು. ಆದರೆ ಈವರೆಗೂ 1 ರೂ. ಹಣ ಬಂದಿಲ್ಲ ನಮ್ಮ ಖಾತೆಗೆ. ಆಹಾರ ಸಚಿವರು, ಅಧಿಕಾರಿಗಳು ಮಾತುಕತೆಗೆ ಕರೆದಿಲ್ಲ, ಹಾಗಾಗಿ ಇಂದಿನಿಂದ ಮುಷ್ಕರ ಮಾಡಲು ಮುಂದಾಗಿದ್ದೇವೆ. ಹಣ ಬಂದ ಮೇಲೆ ನಾವು ಅಕ್ಕಿ ಸರಬರಾಜು ಮಾಡಲು ಮುಂದಾಗುತ್ತೇವೆ ಎಂದಿದ್ದಾರೆ.

ಪುಟ 2

# ಆಂಧ್ರ ಪ್ರದೇಶದಲ್ಲಿ ಗಾಂಜಾ ಕಡಿಮೆ ಮಾಡಿದ ನಟ ಪವನ್ ಕಲ್ಯಾಣ್

**ಆಂಧ್ರ ಪ್ರದೇಶ:** ನಟ ಹಾಗೂ ಆಂಧ್ರ ಪ್ರದೇಶದ ಉಪ ಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರು ಅಧಿಕಾರ ಸ್ವೀಕರಿಸಿದ ಬಳಿಕ ಸಖತ್ ಆ ಯಕ್ಟೀವ್ ಆಗಿದ್ದಾರೆ. ಅವರು ಹಲವು ಪಾಸಿಟಿವ್ ಸ್ಟೆಪ್ ಗಳನ್ನು ತೆಗೆದುಕೊಂಡಿದ್ದಾರೆ. ಈ ಪೈಕಿ ಆಂಧ್ರ ಪ್ರದೇಶದಲ್ಲಿ ಗಾಂಜಾ ಬೆಳೆಯದಂತೆ ತಡೆದಿರೋದು ಕೂಡ ಒಂದು ಒಂದು. ಇದಕ್ಕೆ ಎಲ್ಲ ಕಡೆಗಳಿಂದ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಈ ವಿಚಾರದಲ್ಲಿ ಪವನ್ ಅವರನ್ನು ಅನೇಕರು ಹೊಗಳಿದ್ದಾರೆ.

ವೈಎಸ್ ಜಗನ್ ಅಧಿಕಾರದ ಅವಧಿಯಲ್ಲಿ ಆಂಧ್ರ ಪ್ರದೇಶದಲ್ಲಿ ಸಾಕಷ್ಟು ಗಾಂಜಾ ಬೆಳೆಯಲಾಗುತ್ತಿತ್ತು ಎನ್ನಲಾಗಿದೆ. ಪವನ್ ಕಲ್ಯಾಣ್ ಅಧಿಕಾರಕ್ಕೆ ಬರುತ್ತಿದ್ದಂತೆ ಅವರಿಗೆ ಅರಣ್ಯ ಖಾತೆ ನೀಡಲಾಯಿತು. ಹೀಗಾಗಿ, ಅವರು ಗಾಂಜಾ ಬೆಳೆ ತಡೆಗೆ ಸಾಕಷ್ಟು



ಕ್ರಮಗಳನ್ನು ತೆಗೆದುಕೊಂಡರು.

ಆಂಧ್ರದಲ್ಲಿ ಈ ಮೊದಲು ಸುಮಾರು 11 ಸಾವಿರ ಎಕರೆ ಭಾಗದಲ್ಲಿ ಅಕ್ರಮವಾಗಿ ಗಾಂಜಾ ಬೆಳೆಯಲಾಗುತ್ತಿತ್ತು ಎನ್ನಲಾಗಿತ್ತು. ಇದನ್ನು ಯಾರೂ ತಡೆಯುವವರೇ ಇರಲಿಲ್ಲ. ಪವನ್ ಸರ್ಕಾರ ಇದರ ವಿರುದ್ಧ ಕ್ರಮ ಕೈಗೊಂಡಿದೆ. ಇದಕ್ಕಾಗಿ ಈಗಲ್ ಹೆಸರಿನ ತಂಡ ರಚಿಸಲಾಗಿದೆ.

ಪುಟ 2

## ತೆಲಂಗಾಣ ಸಿಎಂ ರೇವಂತ್ ರೆಡ್ಡಿಯ ಭೇಟಿ ಮಾಡಿದ

# ಅಜಯ್ ದೇವಗನ್, ಮಹತ್ವದ ಮಾತುಕತೆ

**ತೆಲಂಗಾಣ:** ಬಾಲಿವುಡ್ ಸ್ಟಾರ್ ನಟ ಅಜಯ್ ದೇವಗನ್ ತೆಲಂಗಾಣ ಸಿಎಂ ರೇವಂತ್ ರೆಡ್ಡಿ ಅವರನ್ನು ನವದೆಹಲಿಯಲ್ಲಿ ಭೇಟಿ ಆಗಿದ್ದಾರೆ. ಅಜಯ್ ದೇವಗನ್ ಅವರು ಮಹತ್ವದ ಚರ್ಚೆಯೊಂದನ್ನು ತೆಲಂಗಾಣ ಸಿಎಂ ರೇವಂತ್ ರೆಡ್ಡಿ ಜೊತೆಗೆ ಮಾಡಿದ್ದು, ರೇವಂತ್ ರೆಡ್ಡಿ ಸಹ ದೇವಗನ್ ಅವರ ಹೂಡಿಕೆ ಉತ್ಸಾಹಕ್ಕೆ ಧನಾತ್ಮಕವಾಗಿ ಪ್ರತಿಕ್ರಿಯೆ ನೀಡಿದ್ದಾರೆ ಎನ್ನಲಾಗುತ್ತಿದೆ. ಸ್ಟಾರ್ ನಟ ಜೊತೆಗೆ ಉದ್ಯಮಿಯೂ ಆಗಿರುವ ಅಜಯ್ ದೇವಗನ್ ಅವರು ತೆಲಂಗಾಣದಲ್ಲಿ ಹೂಡಿಕೆ ಮಾಡಲು ಮುಂದಾಗಿದ್ದು, ಇದೇ ವಿಷಯವನ್ನು ರೇವಂತ್ ರೆಡ್ಡಿ ಜೊತೆಗೆ ಚರ್ಚೆ ನಡೆಸಿದ್ದಾರೆ.

ಅಜಯ್ ದೇವಗನ್ ರಿಯಲ್ ಎಸ್ಟೇಟ್, ಸಿನಿಮಾ ನಿರ್ಮಾಣ ಸಂಸ್ಥೆ, ಕನ್ ಸ್ಟ್ರಕ್ಷನ್ ಬ್ಯುಸಿನೆಸ್, ಸ್ಟುಡಿಯೋ ಬ್ಯುಸಿನೆಸ್ ಗಳನ್ನು ಮುಂಬೈ, ಪುಣೆಗಳಲ್ಲಿ ಹೊಂದಿದ್ದಾರೆ. ಇದೀಗ ತಮ್ಮ ಉದ್ಯಮವನ್ನು ತೆಲಂಗಾಣ ರಾಜ್ಯಕ್ಕೂ ವಿಸ್ತರಿಸುವ ಬಯಕೆಯನ್ನು ವ್ಯಕ್ತಪಡಿಸಿದ್ದು, ಇದೇ ಕಾರಣಕ್ಕೆ ಸಿಎಂ ರೇವಂತ್ ರೆಡ್ಡಿ ಅವರನ್ನು ಭೇಟಿ ಆಗಿ ಮಾತುಕತೆ ನಡೆಸಿದ್ದಾರೆ.

ಸಿಎಂ ರೇವಂತ್ ರೆಡ್ಡಿ ಅವರು ತೆಲಂಗಾಣದಲ್ಲಿ ಮಲ್ಟಿಮೀಡಿಯಾ ಮತ್ತು ಸಿನಿಮಾಗಳಿಗೆ ಹೆಚ್ಚಿನ ಮೂಲ ಸಂಪನ್ಮೂಲವನ್ನು ಒದಗಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿದ್ದು,

ಪುಟ 2



## ಸ್ಮಾರ್ಟ್ ಮೀಟರ್ ಪಕ್ಕದ ರಾಜ್ಯದಲ್ಲಿ 900 ರೂ. ಇಲ್ಯಾಕೆ 10 ಸಾವಿರ

# ಸರ್ಕಾರಕ್ಕೆ ಕೋರ್ಟ್ ಪ್ರಶ್ನೆ

**ಬೆಂಗಳೂರು:** ಬೆಸ್ಕಾಂನ ಸ್ಮಾರ್ಟ್ ಮೀಟರ್ ಕಡ್ಡಾಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್ ಪ್ರತಿಕ್ರಿಯಿಸಲು ಸರ್ಕಾರಕ್ಕೆ ಸೂಚನೆ ನೀಡಿದೆ. ಸ್ಮಾರ್ಟ್ ಮೀಟರ್ ಸಂಬಂಧ ಬೆಸ್ಕಾಂ ಕ್ರಮ ಪ್ರಶ್ನಿಸಿ ಜಯಲಕ್ಷ್ಮೀ ಎಂಬುರು ಸಲ್ಲಿಸಿದ್ದ ರಿಟ್ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್, ಪಕ್ಕದ ರಾಜ್ಯದಲ್ಲಿ 900 ರೂಪಾಯಿ ಇದೆ. ಆದ್ರೆ, ಇಲ್ಯಾಕೆ (ಕರ್ನಾಟಕ) 10 ಸಾವಿರ ರೂಪಾಯಿ ಎಂದು ಪ್ರಶ್ನಿಸಿದೆ. ಈ ಬಗ್ಗೆ ಪ್ರತಿಕ್ರಿಯಿಸಲು ಸರ್ಕಾರಕ್ಕೆ ಸೂಚಿಸಿರುವ ಹೈಕೋರ್ಟ್, ಮುಂದಿನ ವಿಚಾರಣೆಯನ್ನು ಜುಲೈ 9ಕ್ಕೆ ಮುಂದೂಡಿದೆ.

ರಾಜ್ಯ ಸರ್ಕಾರದ ಪರ ಎಜಿ ಶಶಿಕಿರಣ್ ಶೆಟ್ಟಿ ವಾ ಮಂಡಿಸಿದ್ದು, ತಾತ್ಕಾಲಿಕ ವಿದ್ಯುತ್ ಸಂಪರ್ಕಕ್ಕೆ ಪ್ರೀಪೇಯ್ಡ್ ಸ್ಮಾರ್ಟ್ ಮೀಟರ್. ಹೊಸ ವಿದ್ಯುತ್ ಸಂಪರ್ಕಕ್ಕೆ ಪೋಸ್ಟ್ ಪೇಯ್ಡ್ ಸ್ಮಾರ್ಟ್ ಮೀಟರ್. ಇನ್ನು ಹೊಸ ಗ್ರಾಹಕರಿಗೆ ಮಾತ್ರ ಈ ಸ್ಮಾರ್ಟ್



ಮೀಟರ್ ಕಡ್ಡಾಯ ಎಂದು ತಿಳಿಸಿದರು.

ಇದಕ್ಕೆ ಪ್ರತಿವಾದ ಮಂಡಿಸಿದ ಅರ್ಜಿದಾರ ಜಯಲಕ್ಷ್ಮೀ ಪರ ವಕೀಲ ಲಕ್ಷ್ಮೀ ಐಯ್ಯಂಗಾರ್, 3 ಫೇಸ್ ಸ್ಮಾರ್ಟ್ ಮೀಟರ್‌ಗೆ 10 ಸಾವಿರ ವಿಧಿಸಲಾಗುತ್ತಿದೆ. ಪ್ರತಿ ತಿಂಗಳು ಗುತ್ತಿಗೆದಾರ 75 ರೂಪಾಯಿ ರಾಜಶ್ರೀ ಎಲೆಕ್ಟ್ರಿಕಲ್ಸ್ ಗೆ ನೀಡಬೇಕಾಗಿದೆ ಎಂದರು.

ಈ ವಾದ ಪ್ರತಿವಾದ ಆಲಿಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ, ಗ್ರಾಹಕರಿಗೆ ಗೊಂದಲ ಉಂಟುಮಾಡುವ ನೀತಿ ಏಕೆ ರೂಪಿಸಿದ್ದೀರಿ ನೆರೆ ರಾಜ್ಯಗಳಿಗಿಂತ ನಮ್ಮ ಗ್ರಾಹಕರಿಗೆ ದರ ಏರಿಕೆ ಹೊಡೆತ ಬೀಳಬಾರದು. ಪಕ್ಕದ ರಾಜ್ಯದಲ್ಲಿ 900 ರೂಪಾಯಿ. ಇಲ್ಯಾಕೆ 10 ಸಾವಿರ ರೂಪಾಯಿ ಎಂದು ರಾಜ್ಯ ಸರ್ಕಾರವನ್ನು ಪ್ರಶ್ನಿಸಿದ್ದು, ಈ ಬಗ್ಗೆ ಬಗ್ಗೆ ಜುಲೈ 9ರಂದು ಪ್ರತಿಕ್ರಿಯಿಸಲು ಸರ್ಕಾರಕ್ಕೆ ಹೈಕೋರ್ಟ್ ಸೂಚನೆ ನೀಡಿದೆ.

ವಿದ್ಯುತ್ ಬಳಕೆ ಸಂಬಂಧ ರಿಯಲ್ ಟೈಂನಲ್ಲಿ ವಿದ್ಯುತ್ ಬಳಕೆ ಬಗ್ಗೆ ನಿಖರ ಮಾಹಿತಿ ಒದಗಿಸುವ ಸ್ಮಾರ್ಟ್ ಮೀಟರ್‌ಗಳಿಗೆ ಭಾರಿ ಮೊತ್ತದ ಹೆಚ್ಚುವರಿ ದರ ನಿಗದಿ ಆಕ್ಷೇಪಿಸಿ ಜಯಲಕ್ಷ್ಮೀ ಎನ್ನುವರು ಸಲ್ಲಿಸಿದ್ದರು. ಈ ಅರ್ಜಿಯನ್ನು ಈ ಹಿಂದೆ ವಿಚಾರಣೆ ನಡೆಸಿದ್ದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ,

ಪುಟ 2

## ಹೈಟೆಕ್ ಆಗಲಿದೆ ಬೆಂಗಳೂರು ಮೆಜೆಸ್ಟಿಕ್ ಬಸ್ ನಿಲ್ದಾಣ

# 40 ಎಕರೆಯಲ್ಲಿ ಟ್ರಾನ್ಸ್‌ಪೋರ್ಟ್ ಹಬ್

**ಬೆಂಗಳೂರು:** ಬೆಂಗಳೂರಿನ ಹೃದಯ ಭಾಗದಲ್ಲಿರುವ ಮೆಜೆಸ್ಟಿಕ್ ಬಸ್ ನಿಲ್ದಾಣಕ್ಕೆ ಪ್ರತಿನಿತ್ಯ ಲಕ್ಷಾಂತರ ಜನ ಬಂದು ಹೋಗುತ್ತಾರೆ. ಸುಮಾರು ಮೂವತ್ತು ವರ್ಷಗಳ ಇತಿಹಾಸವಿರುವ ಈ ಬಸ್ ನಿಲ್ದಾಣವನ್ನು ನವೀಕರಣ ಮಾಡಲು ಸರ್ಕಾರ ಮುಂದಾಗಿದೆ. ಮೆಜೆಸ್ಟಿಕ್ ಬಸ್ ನಿಲ್ದಾಣದ ಜಾಗವನ್ನು 'ಪ್ರಾಜೆಕ್ಟ್ ಮೆಜೆಸ್ಟಿಕ್ ಯೋಜನೆಯ ಅಡಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಆಧಾರದ ಮೇಲೆ ಪುನರ್ ಅಭಿವೃದ್ಧಿಪಡಿಸಿ, ವಾಣಿಜ್ಯ ಸಂಕೀರ್ಣದೊಂದಿಗೆ ಸಾರಿಗೆ ಹಬ್ ನಿರ್ಮಿಸಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಬಜೆಟ್ ನಲ್ಲಿ ಘೋಷಣೆ ಮಾಡಿದ್ದರು. ಇದೀಗ ಸಾರಿಗೆ ಇಲಾಖೆಯು ಮೆಜೆಸ್ಟಿಕ್ ಬಸ್ ನಿಲ್ದಾಣವನ್ನು ಇಂಟರ್ ಮಾಡೆಲ್ ಟ್ರಾನ್ಸ್ ಪೋರ್ಟ್ ಹಬ್ ಆಗಿ ಪರಿವರ್ತನೆಯಾಗಲು ಸಜ್ಜಾಗುತ್ತಿದೆ.

ಈ ಮಹತ್ವಾಕಾಂಕ್ಷೆಯ ಯೋಜನೆಯನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ



ಹಮ್ಮಿಕೊಳ್ಳಲು ಯೋಜನೆ ರೂಪಿಸಲಾಗಿದೆ. ಈ ಯೋಜನೆ ಬಗ್ಗೆ ತಂತ್ರಜ್ಞ ಸಲಹೆಗಾರರನ್ನು ನೇಮಿಸಲು ಕೆಎಸ್ ಆರ್ ಟಿಸಿ ಟೆಂಡರ್ ಕರೆದಿದೆ. ಮೆಜೆಸ್ಟಿಕ್ ಬಸ್ ನಿಲ್ದಾಣವನ್ನು ಅಭಿವೃದ್ಧಿಪಡಿಸುವ ಸರ್ಕಾರದ ಯೋಜನೆ ಬಗ್ಗೆ ಪ್ರಯಾಣಿಕರು ಸಂತಸ ವ್ಯಕ್ತಪಡಿಸಿದ್ದಾರೆ.

ಮೆಜೆಸ್ಟಿಕ್ ಟ್ರಾನ್ಸ್ ಪೋರ್ಟ್ ಹಬ್ ಯೋಜನೆಯ ಉದ್ದೇಶವೆಂದರೆ, ನಗರ ಮತ್ತು ಅಂತರನಗರ ಸಾರಿಗೆ. ಮೆಟ್ರೋ ಮತ್ತು ರೈಲ್ವೆ ಸೇವೆಗಳ ನಡುವೆ ಉತ್ತಮ ಸಂಪರ್ಕ ಕಲ್ಪಿಸಿ ಪ್ರಯಾಣಿಕರಿಗೆ ಸುಗಮ ಸಂಚಾರ ಅನುಭವ ಒದಗಿಸುವುದು. ಸುಮಾರು 40 ಎಕರೆ ಭೂಭಾಗದಲ್ಲಿ ಈ ಹಬ್ ನಿರ್ಮಾಣವಾಗಲಿದೆ, ಇದು ಈಗಿರುವ ಕೆಎಸ್‌ಆರ್‌ಟಿಸಿ ಟರ್ಮಿನಲ್ ಗಳು (1, 2, 3) ಅನ್ನು ಒಳಗೊಂಡಿರುತ್ತದೆ. ಶಾಪಿಂಗ್ ಕಾಂಪ್ಲೆಕ್ಸ್, ಆಹಾರ ಮಳಿಗೆಗಳು, ಕಚೇರಿ ಪ್ರದೇಶಗಳು ಸೇರಿ ವಾಣಿಜ್ಯ ವ್ಯವಸ್ಥೆಗೂ ಅವಕಾಶವಿರುತ್ತದೆ.

ಈಗ ಕೆಎಸ್‌ಆರ್‌ಟಿಸಿ ಟೆಂಡರ್‌ನಲ್ಲಿ ಆಯ್ಕೆಯಾದ ಸಲಹೆಗಾರರು ಸ್ಥಳ ಪರಿಶೀಲನೆ, ಸಂಚಾರದ ಚಟುವಟಿಕೆ ವಿಶ್ಲೇಷಣೆ, ಮಾರುಕಟ್ಟೆ ಅಗತ್ಯತೆಯ ಮುನ್ಸೂಚನೆ, ಪರಿಸರ ಹಾಗೂ ಸಾಮಾಜಿಕ ಪರಿಣಾಮಗಳ ಅಧ್ಯಯನದೊಂದಿಗೆ ಕಾರ್ಯಸಾಧ್ಯತಾ ವರದಿಯನ್ನು ಸಿದ್ದಪಡಿಸಬೇಕು.

ಒಟ್ಟಿನಲ್ಲಿ ಸರ್ಕಾರ ಈಗಲಾದರೂ ಮೆಜೆಸ್ಟಿಕ್ ಬಸ್ ನಿಲ್ದಾಣಕ್ಕೆ ಕಾಯಕಲ್ಪ ನೀಡತ್ತಿರುವುದು ಸಂತಸದ ವಿಷಯ. ಜೊತೆಗೆ ಈ ಬಸ್ ಸ್ಟಾಂಡ್ ಸಾರಿಗೆ ಹಬ್ ಆದರೆ ಲಕ್ಷಾಂತರ ಪ್ರಯಾಣಿಕರಿಗೆ ಸಹಾಯವಾಗುವುದಂತೂ ಸುಳ್ಳಲ್ಲ.

## ಹೃದಯಾಘಾತಕ್ಕೆ ಕೋವಿಡ್ ಲಸಿಕೆ ನೇರ ಕಾರಣ ಅಲ್ಲ

**ಬೆಂಗಳೂರು:** ಕೋವಿಡ್ ಲಸಿಕೆ ಹೃದಯಾಘಾತಕ್ಕೆ ನೇರ ಕಾರಣ ಅಲ್ಲ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.



ಹೃದಯಾಘಾತ ಕುರಿತು ಸಮೀಕ್ಷೆ ನಡೆಸಿದ ತಾಂತ್ರಿಕ ಸಲಹಾ ಸಮಿತಿಯಿಂದ ವರದಿ ಸ್ವೀಕರಿಸಿದ ಬಳಿಕ ಮಾತನಾಡಿದ ಅವರು, ಕೋವಿಸ್ ಲಸಿಕೆಯಿಂದ ಹೃದಯಾಘಾತ ಎನ್ನುವ ಆರೋಪವನ್ನು ಅಲ್ಲಗಳೆದಿದ್ದಾರೆ.

ಕೋವಿಡ್ ಲಸಿಕೆ ಹೃದಯಾಘಾತಕ್ಕೆ ನೇರ ಕಾರಣ ಅಲ್ಲ. ಮಧುಮೇಹ, ಕೊಬ್ಬು ಸೇರಿದಂತೆ ಅನೇಕ ಅಡ್ಡ ಪರಿಣಾಮಗಳು ಹೃದಯಾಘಾತಕ್ಕೆ ಕಾರಣ ಆಗಿವೆ. ರಕ್ತದೊತ್ತಡ, ಶುಗರ್, ದಪ್ಪ ಆಗಿರೋದು, ದೈಹಿಕ ಚಟುವಟಿಕೆ ಇಲ್ಲದೇ ಇರೋದು. ಹೃದಯಾಘಾತ ಹೆಚ್ಚಾಗೋದಕ್ಕೆ ಕಾರಣ ಆಗಿದೆ. ಜನರ ಜೀವನ ಶೈಲಿ ಕೂಡ ಹೃದಯಾಘಾತಕ್ಕೆ ಕಾರಣ ಆಗಿದೆ. ಕೊವಿಡ್ ಲಸಿಕೆಯಿಂದ ನೇರವಾಗಿ ಕಾರಣ ಅಲ್ಲ ಎಂದು ಹೇಳಿದ್ದಾರೆ.

## ಕವಡೆ ಶಾಸ್ತ್ರವೇ ನಿಜವಾದ್ರೆ, ಏನ್ ಮಾಡ್ತಾರೆ?

**ಹಾಸನ:** ಬಿಜೆಪಿ ನಾಯಕ ಆರ್ ಅಶೋಕ ಅವರಿಗೆ ತಮ್ಮ ಸ್ಥಾನಕ್ಕಿಂತ ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ಅವರ ಸ್ಥಾನಗಳ ಬಗ್ಗೆಯೇ ಹೆಚ್ಚು ಚಿಂತೆ ಇರುವಂತಿದೆ.



ತನ್ನದು ಕವಡೆ ಶಾಸ್ತ್ರ ಅಂತ ಕಾಂಗ್ರೆಸ್ ನಾಯಕರು ಹೇಗೆ ಮೂದಲಿಸುತ್ತಾರೆ? ತಾನು ಹೇಳಿದ್ದೇ ಸತ್ಯವಾಯಿತಲ್ಲ? ರಾಮನಗರ ಶಾಸಕ ಇಕ್ಬಾಲ್ ಹುಸ್ಸೇನ್ ಹೇಳಿದ್ದೇನು? ನೋಟೀಸ್ ಕೊಟ್ಟ ಮೇಲೂ ಅವರು ಎರಡೂವರೆ ವರ್ಷ ಸಿದ್ದರಾಮಯ್ಯ, ಎರಡೂವರೆ ವರ್ಷ ಶಿವಕುಮಾರ್ ಸಿಎಂ ಅಂತ ಹೇಳಿದ್ದಾರೆ ತಾನೇ? ಇದೆಲ್ಲ ಮ್ಯಾಚ್ ಫಿಕ್ಸಿಂಗ್ ಎಂದು ಅಶೋಕ ಹೇಳಿದರು. ಅವರಿವರು ಹೇಳೋದ್ಯಾಕೆ? ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರೇ ಸಿದ್ದರಾಮಯ್ಯ 5–ವರ್ಷ ಅವಧಿಗೆ ಮುಖ್ಯಮಂತ್ರಿ ಅಂತ ಹೇಳಲಿ, ಇಲ್ಲದಿದ್ದರೆ ಕೆಪಿಸಿಸಿ ಅಧ್ಯಕ್ಷ ಶಿವಕುಮಾರ್ ಅವರಾದರೂ ಹೇಳಲಿ, ಇಬ್ಬರಿಗೂ ತನ್ನದು ಮುಕ್ತ ಸವಾಲು ಎಂದು ಅಶೋಕ ಹೇಳಿದರು.

## ಚಿತ್ರದುರ್ಗದಲಿ ಹೃದಯಾಘಾತಕ್ಕೆ ವ್ಯಕ್ತಿ ಬಲಿ

ಚಿತ್ರದುರ್ಗ: ರಾತ್ರಿ ಮಲಗಿದ್ದ ವೇಳೆ ಹೃದಯಾಘಾತಕ್ಕೊಳಗಾಗಿ ವ್ಯಕ್ತಿ ಸಾವನ್ನಪ್ಪಿದ ಘಟನೆ ಚಿತ್ರದುರ್ಗದಲ್ಲಿ ನಡೆದಿದೆ. ಚಿತ್ರದುರ್ಗ ತಾಲೂಕಿನ ಸೊಲ್ಲಾಪುರ ನಾಯಕನಹಟ್ಟಿ ಗ್ರಾಮದ ಕಂಪ್ಲೇಶ್ (34) ಸಾವನ್ನಪ್ಪಿದ ವ್ಯಕ್ತಿ. ರಾತ್ರಿ ಮಲಗಿದ್ದಾಗ ಕಂಪ್ಲೇಶ್‌ಗೆ ಎದೆನೋವು ಕಾಣಿಸಿತ್ತು. ಎದೆನೋವು ಕಾಣಿಸಿಕೊಂಡ ಹಿನ್ನೆಲೆ ಚಿತ್ರದುರ್ಗ ಜಿಲ್ಲಾಸ್ಪತ್ರೆಗೆ ಬರುವ ಮಾರ್ಗಮಧ್ಯೆ ಕಂಪ್ಲೇಶ್ ಕೊನೆಯುಸಿರೆಳೆದಿದ್ದಾರೆ. ಬೆಳಗಿನ ಜಾವ 4:30ರ ಸುಮಾರಿಗೆ ಘಟನೆ ನಡೆದಿದೆ.

## ಹಾಸನದಲ್ಲಿ ಮಾತ್ರ ಹಾರ್ಟ್ ಅಟ್ಯಾಕ್ ಕೇಸ್ ಜಾಸ್ತಿ ಆಗಿಲ್ಲ, ಇಡೀ ದೇಶದಲ್ಲಿ ಆಗ್ತಿದೆ: ಎ.ಮಂಜು

**ಬೆಂಗಳೂರು:** ಹಾಸನದಲ್ಲಿ ಮಾತ್ರವಲ್ಲ ಇಡೀ ದೇಶದಲ್ಲಿ ಹೃದಯಾಘಾತದಿಂದ ಸಾವು ಪ್ರಕರಣ ಆಗುತ್ತಿದೆ. ಕೇವಲ ಹಾಸನದಲ್ಲಿ ಮಾತ್ರ ಆಗುತ್ತಿದೆ ಎಂದು ಬಿಂಬಿಸಬೇಡಿ ಎಂದು ಮಾಜಿ ಸಚಿವ, ಶಾಸಕ ಎ.ಮಂಜು ಮನವಿ ಮಾಡಿದ್ದಾರೆ.



ಹಾಸನದಲ್ಲಿ ಹೆಚ್ಚು ಹಾರ್ಟ್ ಅಟ್ಯಾಕ್ ಕೇಸ್ ಆಗುತ್ತಿರುವ ಬಗ್ಗೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಹೃದಯಾಘಾತದಿಂದ ಸಾವು ಕೇವಲ ಹಾಸನದಲ್ಲಿ ಮಾತ್ರ ಅಲ್ಲ, ಇಡೀ ದೇಶದಲ್ಲಿ ಆಗುತ್ತಿದೆ. ನೀವು ಟಿವಿಯವರು ಕೇವಲ ಹಾಸನದಲ್ಲಿ ಮಾತ್ರ ಆಗುತ್ತಿದೆ ಅಂತ ತೋರಿಸುತ್ತಿದ್ದೀರಾ. ಬೇರೆ ಜಿಲ್ಲೆ ಯಾಕೆ ತೋರಿಸುತ್ತಿಲ್ಲ ನಿಮ್ಮನ್ನ ಜನ ಬುಕ್ ಮಾಡಿಕೊಂಡು ಹಾಸನ ಜನರನ್ನು ತೋರಿಸಿಕೊಂಡು ಮಾರ್ಕೆಟ್ ಮಾಡ್ತಿದ್ದಾರೆ ಎಂಬುದು ನನಗೆ ಅನುಮಾನ ಇದೆ.ಇದನ್ನ ದಯವಿಟ್ಟು ಮಾಡಬೇಡಿ. ಹೃದಯಾಘಾತ ಬರೀ ಹಾಸನದಲ್ಲಿ ಯಾಕೆ ತೊರಿಸುತ್ತೀರಾ ಬೆಂಗಳೂರು ಮೈಸೂರು ಯಾಕೆ ತೋರಿಸಲ್ಲ ಬರೀ ಹಾಸನದ ಮೇಲೆ ಯಾಕೆ ಗೂಬೆ ಕೂರಿಸುತ್ತೀರಾ 100% ಬೇರೆ ಕಡೆಯೂ ಆಗಿದೆ, ನಿಮಗೆ ನಂಬರ್ ಗೊತ್ತಿಲ್ಲ ಅಷ್ಟೇ ಎಂದರು.

ಹಾಸನದಲ್ಲಿ ಸಾವನ್ನಪ್ಪಿರೋರಲ್ಲಿ ಇಬ್ಬರೇ ಪೋಸ್ಟ್ ಮಾರ್ಟಮ್ ಮಾಡಿಕೊಂಡಿದ್ದಾರೆ. ಲೈಫ್ ಸ್ಟೈಲ್ ಬದಲಾವಣೆ ಮಾಡಿಕೊಂಡರೆ ಯಾವ ಹೃದಯಾಘಾತವೂ ಆಗೋದಿಲ್ಲ. ಇನ್ನೊಂದು ಕಡೆ ಕೋವಿಡ್ ಇಂಜೆಕ್ಷನ್ ನಿಂದ ಬಂದಿದೆ ಅಂತ ಮುಖ್ಯಮಂತ್ರಿಗಳು ಹೇಳುತ್ತಾರೆ. ಅಲ್ಲಾ ರೀ ಮೋದಿ ಇಂಜೆಕ್ಷನ್ ತಯಾರು ಮಾಡ್ತಾರಾ ಲ್ಯಾಬ್‌ನಲ್ಲಿ ಇಂಜೆಕ್ಷನ್ ತಯಾರು ಮಾಡುತ್ತಾರೆ. ಲಸಿಕೆಗೂ ಹೃದಯಾಘಾತಕ್ಕೂ ಸಂಬಂಧವಿಲ್ಲ ಅಂತ ನಂಗೆ ರಿಪೋರ್ಟ್ ಬಂದಿದೆ. ಲೈಫ್ ಸ್ಟೈಲ್ ಬದಲಾವಣೆ ಮಾಡಿಕೊಂಡರೆ ಎಲ್ಲರೂ ಚೆನ್ನಾಗಿ ಇರುತ್ತಾರೆ. ಜಯದೇವ ಆಸ್ಪತ್ರೆಗೆ ಹೋಗಿ ಪರಿಶೀಲನೆ ಮಾಡಿ ಯಾರೋ ಹೇಳಿದ್ದನ್ನ ತೋರಿಸಬೇಡಿ. ಎಲ್ಲಾ ಜಿಲ್ಲೆಗಳಲ್ಲೂ ಹೃದಯಾಘಾತವಾಗುತ್ತಿದೆ ಎಂದು ತಿಳಿಸಿದರು.

ಮಾಂಸ ತಿನ್ನೋರು ಎಲ್ಲಿ ಜಾಸ್ತಿ ಇದ್ದಾರೆ ಅಲ್ಲಿ ಜಾಸ್ತಿಯಾಗಿದೆ ಎಂದು ಮಾಧ್ಯಮದವರು ತೋರಿಸುತ್ತಿದ್ದೀರಿ, ದಯವಿಟ್ಟು ಹಾಗೆ ತೋರಿಸಬೇಡಿ. ಲೈಫ್ ಸ್ಟೈಲ್ ಬದಲಾವಣೆ ಮಾಡಿಕೊಂಡರೆ ಎಲ್ಲರಿಗೂ ಒಳ್ಳೆಯದು ಎಂದು ಮನವಿ ಮಾಡಿದರು.

## ಒಂದೂವರೆ ತಿಂಗಳ ಗಂಡು ಮಗುವನ್ನು ಹಂಡೆಯಲ್ಲಿ ಮುಳುಗಿಸಿ ಕೊಂದ ತಾಯಿ

**ನೆಲಮಂಗಲ:** ಒಂದೂವರೆ ತಿಂಗಳ ಹಸುಗೂಸು ಗಂಡು ಮಗುವನ್ನು ನೀರು ಕಾಯಿಸುವ ಹಂಡೆಯಲ್ಲಿ ಮುಳುಗಿಸಿ ಪಾಪಿ ತಾಯಿ ಕೊಲೆ ಮಾಡಿರುವ ಘಟನೆ ಬೆಂಗಳೂರು ಹೊರವಲಯದ ವಿಶ್ವೇಶ್ವರಪುರದಲ್ಲಿ ನಡೆದಿದೆ.

ಬಡತನ ಹಾಗೂ ಮಗುವಿನ ಆರೈಕೆ ಕಷ್ಟವಾದ ಹಿನ್ನೆಲೆ ಮಗುವನ್ನು ತಾಯಿ ಕೊಲೆ ಮಾಡಿರಬಹುದು ಎಂದು ಶಂಕಿಸಲಾಗಿದೆ. ಶೌಚಾಲಯದಲ್ಲಿ ನೀರು ಕಾಯಿಸುವ ಹಂಡೆಯಲ್ಲಿ ತನ್ನ ಒಂದೂವರೆ ತಿಂಗಳ ಮಗುವನ್ನು ಮುಳುಗಿಸಿ ತಾಯಿ ಕೊಲೆ ಮಾಡಿದ್ದು, ಘಟನೆ ಕಂಡು ಸಾರ್ವಜನಿಕರು ಬೆಚ್ಚಿ ಬಿದ್ದಿದ್ದಾರೆ.

ನಗರದ ವಿಶ್ವೇಶ್ವರಪುರದಲ್ಲಿ ವಾಸವಾಗಿದ್ದ ಪವನ್ ಮತ್ತು ರಾಧಾ ದಂಪತಿಯ ಗಂಡು ಮಗುವನ್ನು ತಡರಾತ್ರಿ ನೀರಿನಲ್ಲಿ ಮುಳುಗಿಸಿ ಕೊಲೆ ಮಾಡಿದ್ದು, ಸ್ಥಳಕ್ಕೆ ನೆಲಮಂಗಲ ಟೌನ್ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಇನ್ನೂ ಆರೋಪಿ ರಾಧಾಳನ್ನು ವಶಕ್ಕೆ ಪಡೆದು ತನಿಖೆ ನಡೆಸಲಾಗುತ್ತಿದೆ.

ಪತಿ ಪವನ್ ಆಟೋ ಡ್ರೈವರ್ ಆಗಿದ್ದು, ಪ್ರತಿನಿತ್ಯ ಮದ್ಯಪಾನ ಮಾಡುತ್ತಿದ್ದ ಎನ್ನಲಾಗಿದೆ. ಇನ್ನೂ



ಈ ವಿಚಾರದಲ್ಲಿ ಇಬ್ಬರ ನಡುವೆ ಗಲಾಟೆ ಹಾಗೂ ಮನಸ್ತಾಪ ಇದ್ದು, ಮಗುವಿನ ಕೊಲೆಗೆ ನಿಖರವಾದ ಕಾರಣ ಕಲೆಹಾಕಲು ನೆಲಮಂಗಲ ಟೌನ್ ಪೊಲೀಸರು ಮುಂದಾಗಿದ್ದಾರೆ.



## ಬೇರೆ ಹೆಣ್ಣಿನ ಸಹವಾಸ, ಪತ್ನಿಗೆ ಕಿರುಕುಳ ಡಿವೈಎಸ್‌ಪಿ ವಿರುದ್ಧ ಎಫ್‌ಐಆರ್

**ಬೆಂಗಳೂರು:** ಬೇರೊಂದು ಹೆಣ್ಣಿಗಾಗಿ ಪತ್ನಿಗೆ ಕಿರುಕುಳ ನೀಡಿ ಹಲ್ಲೆ ನಡೆಸಿದ ಆರೋಪದ ಮೇಲೆ ಐಎಸ್‌ಡಿ ಡಿವೈಎಸ್‌ಪಿ ಮೇಲೆ ಎಫ್‌ಐಆರ್ ದಾಖಲಾಗಿದೆ.

ಡಿವೈಎಸ್‌ಪಿ ಶಂಕ್ರಪ್ಪ ವಿರುದ್ಧ ಅವರ ಪತ್ನಿ ದೂರು ನೀಡಿದ್ದು, ನಗರದ ಈಶಾನ್ಯ ಮಹಿಳಾ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಕಾಲೇಜ್‌ಗೆ ಹೋಗುತ್ತಿರುವ ಮಗನಿದ್ದು ಅನ್ಯ ಹೆಣ್ಣಿನ ಸಂಪರ್ಕ ಮಾಡಿ ಹಲ್ಲೆ ಹಾಗೂ ಮಾನಸಿಕ ಕಿರುಕುಳ ನೀಡಿದ್ದಾರೆ. ವರದಕ್ಷಿಣೆ ಹಣಕ್ಕಾಗಿ ಪೀಡಿಸಿದ್ದಾರೆ. ಅಕ್ರಮವಾಗಿ ಆ ಹೆಣ್ಣಿನ ಜೊತೆ ಮದುವೆಯಾಗಿದ್ದಾರೆ. ನನಗೆ ನ್ಯಾಯ ಕೊಡಿಸಬೇಕೆಂದು ಡಿಜಿ ಐಜಿಪಿಗೂ ಡಿವೈಎಸ್‌ಪಿ ಪತ್ನಿ ದೂರು ನೀಡಿದ್ದಾರೆ.

ನನ್ನ ಸಂಸಾರ ಹಾಳು ಮಾಡಬೇಡ ಎಂದು ಆ ಮಹಿಳೆಗೆ ಡಿವೈಎಸ್‌ಪಿ ಪತ್ನಿ ಪರಿಪರಿಯಾಗಿ ಕೇಳಿಕೊಂಡ್ರೂ, ಜೀವ ಬೆದರಿಕೆ ಹಾಕಿದ್ದಾರಂತೆ. ಸದ್ಯ ಇಬ್ಬರ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಅಧಿಕಾರದ ಪ್ರಭಾವದಿಂದ ಪೊಲೀಸರು ಕ್ರಮಕೈಗೊಂಡಿಲ್ಲ ಎಂದು ಡಿವೈಎಸ್‌ಪಿ ಪತ್ನಿ ಆರೋಪಿಸಿದ್ದಾರೆ.

## ಕಾರಿಗೆ ಟಚ್ ಮಾಡಿದಲ್ಲೇ ಲಾಂಗ್ ಹಿಡಿದು ಪೌರುಷ: ಜನ ಸೇರುತ್ತಿದ್ದಂತೆಯೇ ವಿದ್ನೋ ಬಿದ್ನೋ ಎಂದು ಓಡಿದ

**ಬೆಂಗಳೂರು:** ಕಾರು ಟಚ್ ಆಗಿದ್ದಕ್ಕೆ ನಡುರಸ್ತೆಯಲ್ಲಿ ಓರ್ವ ಕಾರು ಚಾಲಕನಿಂದ ಮತ್ತೋರ್ವ ಕಾರು ಚಾಲಕನಿಗೆ ಮಚ್ಚಿನಿಂದ ಹಲ್ಲೆಗೆ ಯತ್ನಿಸಿರುವಂತಹ ಘಟನೆ ಮಧ್ಯಾಹ್ನ 1:40 ರ ಸುಮಾರಿಗೆ ಶೇಷಾದ್ರಿಪುರಂ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಸದ್ಯ ಈ ಬಗ್ಗೆ ಶ್ರೀರಾಂಪುರ ಪೊಲೀಸರಿಗೆ ಹಲ್ಲೆಗೊಳಗಾದ ಕಾರು ಚಾಲಕ ದೂರು ನೀಡಿದ್ದಾರೆ.



ಶೇಷಾದ್ರಿಪುರಂ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯ ರೈಲ್ವೆ ಗೇಟ್ ಹಿಂಭಾಗ ಇಟಿಯೋಸ್ ಮತ್ತು ಇನ್ನೋವಾ ಕಾರು ಮಧ್ಯೆ ಟಚ್ ಆಗಿದೆ. ಕಾರು ಟಚ್ ಮಾಡಿದ ಇನ್ನೋವಾ ಕಾರು ಚಾಲಕನೇ ಇಟಿಯೋಸ್ ಕಾರು ಚಾಲಕನ ಮೇಲೆ ನಡು ರಸ್ತೆಯಲ್ಲಿ ಮಚ್ಚು ಹಿಡಿದು ಹಲ್ಲೆಗೆ ಯತ್ನಿಸಿದ್ದಾನೆ. ಗಾಡಿಯಲ್ಲಿ ಎಂಪ್ಲಾಯ್ಸ್ ಇದ್ದರು ಕೂಡ ಹಲ್ಲೆ ಮಾಡಲಾಗಿದೆ. ಬಳಿಕ ಮಾತಿಗೆ ಮಾತು ಬೆಳೆದು ಕಾರಿನಿಂದ ಮಚ್ಚು ತಂದ ಇನ್ನೋವಾ ಚಾಲಕ ಇಟಿಯೋಸ್ ಕಾರು ಚಾಲಕನ ಕುತ್ತಿಗೆಗೆ ಇಟ್ಟಿದ್ದಾನೆ.

ತಕ್ಷಣ ಇಟಿಯೋಸ್ ಕಾರು ಚಾಲಕನ ಸಹಾಯಕ್ಕೆ ಬಂದ ಜನ ತಡೆದು ಪೊಲೀಸರಿಗೆ ಫೋನ್ ಮಾಡಿದ್ದಾರೆ. ಎಲ್ಲರು ಬರ್ತಿದ್ದಂತೆ ಮಾತಾಡಿ ಎಸ್ಕೇಪ್ ಆಗಲು ಪ್ರಯತ್ನ ಮಾಡಿದ್ದಾನೆ. ಆಗ ಎಲ್ಲಾರೂ ಕಾರಿನ ಮೇಲೆ ಕಲ್ಲು ಎತ್ತಿಹಾಕಿ ತಡೆದಿದ್ದಾರೆ. ನಂತರ ಕಾರು ಅಲ್ಲೇ ಬಿಟ್ಟು ಇನ್ನೋವಾ ಚಾಲಕ ತಪ್ಪಿಸಿಕೊಂಡು ಹೋಗಿದ್ದಾನೆ. ಸದ್ಯ ಪೊಲೀಸರು ಆತನ ಪತ್ತೆ ಮಾಡಿದ್ದಾರೆ.

ಈ ಬಗ್ಗೆ ಇಟಿಯೋಸ್ ಕಾರು ಚಾಲಕ ಕುಮಾರ್ ಹೇಳಿಕೆ ನೀಡಿದ್ದು, ಮಧ್ಯಾಹ್ನ 1:40 ರ ಸುಮಾರಿಗೆ ಘಟನೆ ನಡೆದಿದೆ. ಹಿಂಭಾಗದಿಂದ ನನ್ನ ಕಾರಿಗೆ ಇನ್ನೋವಾ ಕಾರ್ ಟಚ್ ಆಯ್ತು. ಕಾರು ಚಾಲಕ ಇಳಿದು ಬಂದು ನನಗೆ ನಾಲ್ಕು ಏಟು ಹೊಡೆದಿದ್ದಾನೆ ಎಂದಿದ್ದಾರೆ.

ಗಾಡಿಯಲ್ಲಿ ಎಂಪ್ಲಾಯ್ಸ್ ಇದ್ದಿದ್ದರಿಂದ ನಾನು ಸುಮ್ಮನೆ ಇದ್ದೆ. ನಾನು ಕೂಡ ಕಾರಿನಿಂದ ಇಳಿದಿರಲಿಲ್ಲ. ಆಗ ಅವನು ಕಾರಿನಿಂದ ಮಚ್ಚು ತಂದು ಕುತ್ತಿಗೆಗೆ ಇಟ್ಟಿದ್ದ. ಸ್ಥಳೀಯರೆಲ್ಲಾ ಸೇರಿ ತಡೆದು ಪೊಲೀಸರಿಗೆ ಫೋನ್ ಮಾಡಿದ್ದಾರೆ. ಎಲ್ಲರ ಬರ್ತಿದ್ದಂತೆ ಮಾತಾಡಿ ಎಸ್ಕೇಪ್ ಆಗಲು ಪ್ರಯತ್ನ ಮಾಡಿದ್ದಾನೆ. ಆಗ ಎಲ್ಲಾರೂ ಕಾರಿನ ಮೇಲೆ ಕಲ್ಲು ಎತ್ತಿ ಹಾಕಿ ತಡೆದಿದ್ದಾರೆ. ನಂತರ ಕಾರು ಅಲ್ಲೇ ಬಿಟ್ಟು ಆತ ತಪ್ಪಿಸಿಕೊಂಡು ಓಡಿದ್ದಾನೆ ಎಂದು ಹೇಳಿದ್ದಾರೆ.

## ಮೈಸೂರಿನಲ್ಲಿ ಹೈಟೆಕ್ ವೇಶ್ಯಾವಾಟಿಕೆ ದಂಧೆ; ಇಬ್ಬರು ಮಹಿಳೆಯರು ಸೇರಿ 6 ಜನ ವಶಕ್ಕೆ

**ಮೈಸೂರು:** ವೇಶ್ಯಾವಾಟಿಕೆ ನಡೆಯುತಿದ್ದ ಮನೆಯ ಮೇಲೆ ಪೊಲೀಸರು ದಾಳಿ ಮಾಡಿ 6 ಜನ ಪುರುಷರು, ಇಬ್ಬರು ಮಹಿಳೆಯರನ್ನ ವಶಕ್ಕೆ ಪಡೆದಿರುವ ಘಟನೆ ಮೈಸೂರಿನಲ್ಲಿ ನಡೆದಿದೆ. ಮೈಸೂರು ತಾಲೂಕಿನ ದಾಸನಕೊಪ್ಪಲು ಗ್ರಾಮದ ಮನೆಯಲ್ಲಿ ಅನೈತಿಕ ಚಟುವಟಿಕೆ ನಡೆಯುತ್ತಿದ್ದ ಬಗ್ಗೆ ಖಚಿತ ಮಾಹಿತಿ ಪಡೆದ ಪೊಲೀಸರು ದಾಳಿ ನಡೆಸಿದ್ದಾರೆ. ಈ ವೇಳೆ 6 ಜನ ಪುರುಷರು ಇಬ್ಬರು ಮಹಿಳೆಯರು ಸಿಕ್ಕಿಬಿದ್ದಿದ್ದಾರೆ. ಮತ್ತೊಬ್ಬ ಮುಖ್ಯ ಆರೋಪಿ ಮಂಜು ಎಂಬಾತನನ್ನ ಪೊಲೀಸರು ಬಂಧಿಸಿದ್ದಾರೆ.

ಬಂಧಿತರು ಇಬ್ಬರು ಹೆಣ್ಣು ಮಕ್ಕಳನ್ನು ಕರೆದಂದು ಹೈಟೆಕ್ ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದರು ಎಂಬ ಆರೋಪ ಕೇಳಿಬಂದಿದೆ. ಆರೋಪಿಗಳು 30 ದಿನಗಳಿಗೆ ಒಮ್ಮೆ ಮನೆ ಬದಲಾಯಿಸಿ ವೇಶ್ಯಾವಾಟಿಗೆ ದಂಧೆ ನಡೆಸುತ್ತಿದ್ದರು. ಬೇರೆ ಬೇರೆ ಕಡೆಗಳಿಂದ ಯುವತಿಯರಿಗೆ ಹಣ ಕೊಟ್ಟು ಕರೆಸಿಕೊಂಡು ವೇಶ್ಯಾವಾಟಿಕೆ ನಡೆಸುತ್ತಿದ್ದರು. ಪೊಲೀಸರು ಖಚಿತ ಮಾಹಿತಿ ತಿಳಿದು ದಾಳಿ ಮಾಡಿದ ವೇಳೆ ರೆಡ್ ಹ್ಯಾಂಡ್ ಆಗಿ ಇಬ್ಬರು ಯುವತಿಯರು 6 ಪುರುಷರು ಸಿಕ್ಕಿಬಿದ್ದಿದ್ದಾರೆ.

# ಮಗನ ಕನಸಿಗೆ ತಂದೆ ಸಾಥ್

## ಖ್ಯಾತ ರೆಸ್ಲರ್ ಅಂಡರ್‌ಟೇಕರ್ ಅವರಂತೆ ಮನೆಯೊಳಗೆ ಎಂಟ್ರಿ ಕೊಟ್ಟ ಬಾಲಕ

ತಾಯಿ ಒಂಬತ್ತು ತಿಂಗಳು ಮಗುವನ್ನು ಹೊಟ್ಟೆಯಲ್ಲಿಟ್ಟುಕೊಂಡರೆ, ತಂದೆ ತನ್ನ ಹೆಗಲ ಮೇಲೆ ಕೂರಿಸಿಕೊಂಡು ಪ್ರಪಂಚ ತೋರಿಸುತ್ತಾನೆ. ತನ್ನ ಮಕ್ಕಳ ಆಸೆ ಕನಸುಗಳನ್ನು ನನಸು ಮಾಡಲು ಹಗಲು ರಾತ್ರಿಯೆನ್ನದೇ ಶ್ರಮಿಸುತ್ತಾನೆ. ಇದೀಗ ಇಲ್ಲೊಬ್ಬ ತಂದೆಯೂ ಮಗನ ಕನಸನ್ನು ನನಸು ಮಾಡಲು ಹೇಗೆ ಪ್ರಯತ್ನಿಸುತ್ತಿದ್ದಾನೆ ಎನ್ನುವುದನ್ನು ನೋಡಬಹುದು. ಮಗನಿಗೆ ಖ್ಯಾತ ರೆಸ್ಲರ್ ಅಂಡರ್‌ಟೇಕರ್ ಅವರಂತೆ ಆಗಬೇಕೆನ್ನುವ ಬಹುದೊಡ್ಡ ಕನಸಿದೆ. ತಂದೆ ಹಾಗೂ ಮಗ ಇಬ್ಬರೂ ಸೇರಿ WWE ರೆಸ್ಲರ್ ಅಂಡರ್‌ಟೇಕರ್ ಅವರು ಮನೆಗೆ ಪ್ರವೇಶಿಸುವುದನ್ನು ಮರುಸೃಷ್ಟಿಸಿದ್ದಾರೆ. ಮಗನು ಖ್ಯಾತ ರೆಸ್ಲರ್ ಅಂಡರ್‌ಟೇಕರ್ ಅವರಂತೆ ಮನೆಯೊಳಗೆ ಎಂಟ್ರಿ ಕೊಟ್ಟಿದ್ದು, ಈ ಹೃದಯಸ್ಪರ್ಶಿ ವಿಡಿಯೋವೊಂದು



ಸೋಶಿಯಲ್ ಮೀಡಿಯಾದಲ್ಲಿ ಸಿಕ್ಕಾಪಟ್ಟೆ ವೈರಲ್ ಆಗುತ್ತಿದೆ.

gauravsarwan ಹೆಸರಿನ ಇನ್ಸ್ಟಾಗ್ರಾಮ್ ಖಾತೆಯಲ್ಲಿ ವಿಡಿಯೋವನ್ನು ಶೇರ್ ಮಾಡಿಕೊಳ್ಳಲಾಗಿದ್ದು, ತಂದೆಯೊಬ್ಬರು ಹಾರ್ಮೋನಿಯಂನಲ್ಲಿ ಅಂಡರ್ ಟೇಕರ್ ಥೀಮ್ ಸಾಂಗ್ ಗ್ರೇವ್‌ಯಾರ್ಡ್ ಸಿಂಫನಿಯನ್ನು ನುಡಿಸುವುದರೊಂದಿಗೆ ವಿಡಿಯೋ ಪ್ರಾರಂಭವಾಗುತ್ತದೆ. ಮಗನು ಆತ್ಮವಿಶ್ವಾಸದಿಂದ ತನ್ನ ಎರಡು ಕೈಗಳನ್ನು ಮೇಲಕ್ಕೆತ್ತಿ, ರೆಸ್ಲರ್ ಅಂಡರ್ ಟೇಕರ್ ಅವರಂತೆ ಮನೆಯೊಳಗೆ ಪ್ರವೇಶಿಸುತ್ತಿರುವುದನ್ನು ಕಾಣಬಹುದು.

ಇಲ್ಲಿ ತಂದೆಯೂ ಮಗನ ಕನಸನ್ನು ನನಸು ಮಾಡಲು ಶ್ರಮಿಸುವುದನ್ನು ನೋಡಬಹುದು.

ಈ ವಿಡಿಯೋವೊಂದು ವೈರಲ್ ಆಗುತ್ತಿದ್ದಂತೆ ಹದಿನಾಲ್ಕು ಲಕ್ಷದವರೆಗೆ ವೀಕ್ಷಣೆಗಳನ್ನು ಪಡೆದುಕೊಂಡಿದೆ. ಈ ವಿಡಿಯೋಗೆ WWE ಖ್ಯಾತ ರೆಸ್ಲರ್ ಅಂಡರ್‌ಟೇಕರ್ ಈ ಪುಟ್ಟ ಬಾಲಕನ ಪ್ರಯತ್ನವನ್ನು ಹೊಗಳಿದ್ದು, ಚೆನ್ನಾಗಿ ಮಾಡಿದ್ದೀರಿ ಎಂದಿದ್ದಾರೆ. ಬಳಕೆದಾರರೊಬ್ಬರು, ತಂದೆ ಮಾತ್ರ ಮಗನ ಕನಸುಗಳನ್ನು ಈಡೇರಿಸಲು ಸಾಧ್ಯ ಎಂದಿದ್ದಾರೆ. ಇನ್ನೊಬ್ಬರು, ಈ ಮಗನ ನಡೆ ನುಡಿ, ಸ್ಟೈಲ್ ಹಾಗೂ ದೇಹ ಭಾಷೆ WWE ಸೂಪರ್ ಸ್ಟಾರ್ ಅಂಡರ್‌ಟೇಕರ್‌ನಂತೆಯೇ ಇದೆ ಎಂದು ಕಾಮೆಂಟ್ ಮಾಡಿದ್ದಾರೆ. ಇನ್ನು ಕೆಲವರು ನಿನ್ನ ಕನಸುಗಳು ನನಸಾಗಲಿ ಎಂದು ಆಶೀರ್ವಾದಿಸಿದ್ದಾರೆ.

## ರಾಜ್ಯದ ಹತ್ತು ಮಹಾನಗರ ಪಾಲಿಕೆ ನೌಕರರಿಂದ ವಿವಿಧ ಬೇಡಿಕೆ ಆಗ್ರಹಿಸಿ ಇಂದು ಬೆಂಗಳೂರಲ್ಲಿ ಪ್ರತಿಭಟನೆ



**ಮೈಸೂರು:** ರಾಜ್ಯದ ಎಲ್ಲ ಹತ್ತು ಮಹಾನಗರ ಪಾಲಿಕೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಇವತ್ತು ತಮ್ಮ ಹಲವಾರು ಬೇಡಿಕೆಗಳ ಜಾರಿಗೆ ಆಗ್ರಹಿಸಿ ಬೆಂಗಳೂರು ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆ ನಡೆಸಲಿದ್ದಾರೆ. ಪ್ರತಿಭಟನೆಯಲ್ಲಿ ಭಾಗವಹಿಸಲು ಮೈಸೂರು ಪಾಲಿಕೆ ಅಧಿಕಾರಿವರ್ಗ ಮತ್ತು ಸಿಬ್ಬಂದಿ ನಗರದಿಂದ ಬೆಂಗಳೂರಿಗೆ ಹೊರಡಲಣಿಯಾಗಿದ್ದು ಒಂದಷ್ಟು ಅಧಿಕಾರಿಗಳು ನಮ್ಮ ಮೈಸೂರು ವರದಿಗಾರನೊಂದಿಗೆ ಮಾತಾಡಿ ಪ್ರತಿಭಟನೆಯ ಉದ್ದೇಶಗಳನ್ನು ಹೇಳಿದ್ದಾರೆ. ವೇತನ ಅನುದಾನದ ಬಗ್ಗೆ ನೌಕರರಲ್ಲಿ ತೀವ್ರ ಅಸಮಾಧಾನವಿದೆ.

ವೇತನದ ಶೇಕಡ 20ರಷ್ಟನ್ನು ಪಾಲಿಕೆಯ ಆದಾಯದಲ್ಲಿ ಪಡೆದುಕೊಳ್ಳುವಂತೆ ಸರ್ಕಾರ ಹೇಳಿರುವುದು ಸರಿಯಲ್ಲ, ಪಾಲಿಕೆಗಳು ನಷ್ಟದಲ್ಲಿ ಸಾಗುತ್ತಿರುವುದರಿಂದ 1/5 ಭಾಗದಷ್ಟು ಸಂಬಳವನ್ನು ಹೊಂದಿಸಿಕೊಳ್ಳಲು ಸಾಧ್ಯವಾಗೋದಿಲ್ಲ, ಶತ ಪ್ರತಿಶತದಷ್ಟು ಸಂಬಳವನ್ನು ಸರ್ಕಾರವೇ ಭರಿಸಬೇಕು ಎಂದು ಅಧಿಕಾರಿ ಹೇಳುತ್ತಾರೆ.

## ಎತ್ತಿನಹೊಳೆ ಯೋಜನೆಗೆ ಹಿನ್ನಡೆ

**ನಿಯಮ ಉಲ್ಲಂಘನೆ, ಶಿಸ್ತು ಕ್ರಮಕ್ಕೆ ಶಿಫಾರಸು:** ಅನುಮೋದನೆ ಲಭ್ಯವಾಗುವ ಮೊದಲೇ ಅರಣ್ಯ ಭೂಮಿಯನ್ನು ಬಳಸಿ ಯೋಜನೆಯಲ್ಲಿ ಭಾಗಿಯಾದ ಸರ್ಕಾರಿ ಅಧಿಕಾರಿಗಳು ಅರಣ್ಯ ನಿಯಮ ಉಲ್ಲಂಘಿಸಿರುವುದಾಗಿ ಸಮಿತಿಯು ವರದಿ ಸಲ್ಲಿಸಿದ್ದು, ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕೆಂಬ ಶಿಫಾರಸು ಮಾಡಿದೆ. ಜೊತೆಗೆ, ಲೋಪಗಳನ್ನು ಸರಿಪಡಿಸಿ ಸಮಜಾಯಿಷಿ ನೀಡಿದ ಬಳಿಕ ಮಾತ್ರ ಮುಂದಿನ ಸಭೆಯಲ್ಲಿ ಪ್ರಸ್ತಾವನೆ ಪರಿಗಣನೆಗೆ ಒಳಪಡಬಹುದೆಂದು ಸೂಚಿಸಿದೆ.

**ಷರತ್ತುಗಳ ಉಲ್ಲಂಘನೆಯೂ ಕಾರಣ:** ಎತ್ತಿನಹೊಳೆ ಯೋಜನೆಗೆ 2016 ರಲ್ಲೇ 13.93 ಹೆಕ್ಟೇರ್ ಅರಣ್ಯ ಭೂಮಿ ಬಳಕೆಗೆ ಕೇಂದ್ರವು ಅನುಮೋದನೆ ನೀಡಿದ್ದು, 33 ಷರತ್ತುಗಳನ್ನು ವಿಧಿಸಿತ್ತು. ಆದರೆ ಬಹುತೇಕ ಷರತ್ತುಗಳನ್ನು ಈವರೆಗೆ ಪಾಲನೆ ಮಾಡಲಾಗಿಲ್ಲ. ಕಾಮಗಾರಿಯ ವೇಳೆ ಭೂಕುಸಿತ, ಮಣ್ಣಿನ ಕೊರೆತ, ಮನೆಗಳ ಹಾನಿ ಮುಂತಾದ ಪರಿಸರ ಭೀತಿಗಳು ಉಂಟಾಗಿದ್ದು, ಯಾವುದೇ ಪರಿಹಾರ ವ್ಯವಸ್ಥೆ ಕಲ್ಪಿಸಲಾಗಿಲ್ಲ ಎಂಬ ತೀವ್ರ ಆಕ್ಷೇಪಗಳನ್ನು ಎನ್‌ಜಿಟಿ ಮೇಲ್ವಿಚಾರಣಾ ತಂಡವು 2019ರ ವರದಿಯಲ್ಲಿ ಉಲ್ಲೇಖಿಸಿತ್ತು.

**ಏನಿದು ಎತ್ತಿನಹೊಳೆ ಯೋಜನೆ?:** ಎತ್ತಿನಹೊಳೆ ನದಿಯಿಂದ ಸುಮಾರು 24 ಟಿಎಂಸಿ ನೀರನ್ನು ಬಯಲುಸೀಮೆಯ ಜಿಲ್ಲೆಗಳಾದ ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು, ಬೆಂಗಳೂರು, ರಾಮನಗರ, ಹಾಸನ ಮತ್ತು ಚಿಕ್ಕಮಗಳೂರು ಜಿಲ್ಲೆಗಳತ್ತ ಪೂರ್ವಾಭಿಮುಖವಾಗಿ ಹರಿಸುವ ಮಹತ್ವಾಕಾಂಕ್ಷೆಯ ಯೋಜನೆ ಇದಾಗಿದೆ. ಯೋಜನೆಯ ಮೊದಲ ಹಂತದ ಕಾಮಗಾರಿ 2024ರ ಸೆಪ್ಟೆಂಬರ್??ನಲ್ಲಿ ಸಕಲೇಶಪುರದಲ್ಲಿ ಉದ್ಘಾಟನೆಯಾಗಿತ್ತು.

## ದೂರು ನೀಡಿದ ಕಾಂಗ್ರೆಸ್

ದಿಕ್ಕು ತಪ್ಪಿಸುವ ಹೇಳಿಕೆಗಳಿಂದ ರಾಜ್ಯದ ಜನರಿಗೆ, ಸಿದ್ದರಾಮಯ್ಯ ನವರ ಅಭಿಮಾನಿಗಳಿಗೆ ಹಾಗೂ ಲಕ್ಷಾಂತರ ಕಾರ್ಯಕರ್ತರಿಗೆ ತೀವ್ರ ಸ್ವರೂಪದ ನೋವು ಉಂಟಾಗಿರುತ್ತದೆ. ಇದರಿಂದ ಕಾನೂನಿನ ಸುವ್ಯವಸ್ಥೆ ಮೇಲೆ ಪರಿಣಾಮ ಬೀರುವುದು ಹಾಗೂ ಶಾಂತಿ ಕದಡುವ ಇಂತಹ ಕಿಡಿಗೇಡಿಗಳ ಹೇಳಿಕೆಯನ್ನು ಗಂಭೀರವಾಗಿ ಪರಿಗಣಿಸಿ ಪ್ರಕರಣ ದಾಖಲಿಸಿ ಬಂಧಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ವಿನಂತಿಸಿಕೊಳ್ಳುತ್ತೇವೆ. ಸಂಬಂಧಿಸಿದ ಎಲ್ಲಾ ದಾಖಲಾತಿಗಳ ಸ್ಕ್ರೀನ್ ಶಾಟ್ ಗಳ ನಕಲು ಪ್ರತಿಗಳನ್ನು ದೂರಿನೊಂದಿಗೆ ಲಗತ್ತಿಸಲಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಇಂದು ಇಡೀ ದಿನ ಸಿಎಂ ಸಿದ್ದರಾಮಯ್ಯ ವಿಶ್ರಾಂತಿ ಪಡೆಯಲಿದ್ದಾರೆ. ಯಾವುದೇ ಸಭೆ, ಸಮಾರಂಭ, ಕಾರ್ಯಕ್ರಮಗಳಲ್ಲಿ ಭಾಗಿಯಾಗುವುದಿಲ್ಲ ಎಂದು ಮುಖ್ಯಮಂತ್ರಿಗಳ ಕಚೇರಿ ತಿಳಿಸಿದೆ. ನಾಳೆ ಅವರು ದೆಹಲಿಗೆ ತೆರಳಲಿದ್ದಾರೆ.

## ಪಡಿತರ ವಿತರಣೆಯಲ್ಲಿ ವ್ಯತ್ಯಯ!

ರಾಜ್ಯ ಸರ್ಕಾರಕ್ಕೆ ಲಾರಿ ಮಾಲೀಕರ ಸಂಘ ಬಾಕಿ ಹಣ ಪಾವತಿ ಮಾಡಲು ಸರ್ಕಾರಕ್ಕೆ 15 ದಿನ ಗಡುವು ನೀಡಿತ್ತು. ಆದರೆ ಇದಕ್ಕೆ ಕ್ಯಾರೆ ಎಂದಿಲ್ಲ. ಇದರಿಂದ ಸಿಡಿದ 3–4 ಲಾರಿ ಮಾಲೀಕರು ಲಾರಿಗಳ ಸಂಚಾರವನ್ನೇ ಬಂದ್ ಮಾಡಿ ಸರ್ಕಾರಕ್ಕೆ ಬಿಸಿ ಮುಟ್ಟಿಸಿದ್ದಾರೆ. ನೂರಾರು ಲಾರಿಗಳು ಬೆಂಗಳೂರಿನ ಯಶವಂತಪುರ ಡಿಪೋದಲ್ಲೇ ನಿಂತಿವೆ. ದಾವಣಗೆರೆಯಲ್ಲೂ ಲಾರಿ ಮಾಲೀಕರಿಗೆ 10 ಕೋಟಿಯಷ್ಟು ಹಣ ಬಾಕಿ ಇದ್ದು, ಅಲ್ಲಿಯೂ ಮುಷ್ಕರ ಮಾಡಲಾಗುತ್ತಿದೆ.

## ಆಮದು ಸುಂಕ ಹೇರಿಕೆ

**ಅಮೆರಿಕದಿಂದ ಹೊಸ ಟ್ಯಾರಿಫ್ ಹೇರಲಾಗಿರುವ 14 ದೇಶಗಳು:** ಜಪಾನ್, ಸೌತ್ ಕೊರಿಯಾ, ಮಯನ್ಮಾರ್, ಲಾವೋಸ್, ಥಾಯ್ಲೆಂಡ್, ಸೌತ್ ಆಫ್ರಿಕಾ, ಬಾಂಗ್ಲಾದೇಶ, ಕಜಕಸ್ತಾನ್, ಇಂಡೋನೇಷ್ಯಾ, ಟುನಿಶಿಯಾ, ಮಲೇಷ್ಯಾ, ಸರ್ಬಿಯಾ, ಕಾಂಬೋಡಿಯಾ, ಬೋಸ್ನಿಯಾ ಹರ್ಜೆಗೊವಿನಾ ದೇಶಗಳಿಗೆ ಅಮೆರಿಕ ಹೊಸ ಆಮದು ಸುಂಕಗಳನ್ನು ಪ್ರಕಟಿಸಿದೆ. ಆಗಸ್ಟ್ 1ರಿಂದ ಇದು ಚಾಲನೆಗೆ ಬರುತ್ತದೆ.

**ಸದ್ಯಕ್ಕೆ ಬಚಾವಾದ ಭಾರತ:** ಡೊನಾಲ್ಡ್ ಟ್ರಂಪ್ ಅವರು ಎಲ್ಲಾ ದೇಶಗಳ ಮೇಲೆ ಟ್ಯಾರಿಫ್ ಹೇರಿಕೆಗೆ ಬೆದರಿಕೆ ಹಾಕುತ್ತಿರುವ ಉದ್ದೇಶವೇ ಟ್ಯಾಕ್ಸ್ ಮುಕ್ತ ವ್ಯಾಪಾರ ಒಪ್ಪಂದಗಳನ್ನು ಗಿಟ್ಟಿಸಲು. ಅಮೆರಿಕದ ಟ್ರೇಡ್ ಡೆಫೆಸಿಟ್ ಅಧಿಕ ಇದ್ದು, ಅದನ್ನು ತಗ್ಗಿಸುವ ಯೋಜನೆ ಟ್ರಂಪ್ ರದ್ದು. ಹೀಗಾಗಿ, ಅಮೆರಿಕದೊಂದಿಗೆ ಮುಕ್ತ ವ್ಯಾಪಾರ ಒಪ್ಪಂದ ಮಾಡಿಕೊಳ್ಳಲು ಎಲ್ಲಾ ದೇಶಗಳನ್ನೂ ಆಹ್ವಾನಿಸಿದ್ದಾರೆ. ಒಪ್ಪಂದ ಮಾಡಿಕೊಳ್ಳುವ ಮತ್ತು ಒಪ್ಪಂದ ಮಾಡಿಕೊಂಡಿರುವ ದೇಶಗಳನ್ನು ಹೊರತುಪಡಿಸಿ ಉಳಿದ ದೇಶಗಳಿಗೆ ಅವರು ಆಮದು ಸುಂಕ ವಿಧಿಸುತ್ತಿದ್ದಾರೆ. ಅದರ ಮೊದಲ ಭಾಗವಾಗಿ 14 ದೇಶಗಳ ಮೇಲೆ ಟ್ಯಾರಿಫ್ ಪ್ರಕಟಿಸಿದ್ದಾರೆ.

ಭಾರತವು ಕಳೆದ ಕೆಲ ವಾರಗಳಿಂದ ಅಮೆರಿಕದ ಜೊತೆ ವ್ಯಾಪಾರ ಒಪ್ಪಂದ ಕುದುರಿಸಲು ನಿರಂತರ ಮಾತುಕತೆಯಲ್ಲಿ ತೊಡಗಿದೆ. ಇತ್ತೀಚೆಗಷ್ಟೇ ಭಾರತದಿಂದ ನಿಯೋಗವೊಂದು

ಮೊದಲನೇ ಪುಟದಿಂದ...

ಅಮೆರಿಕಕ್ಕೆ ಹೋಗಿ ಬಂದಿತ್ತು. ಒಪ್ಪಂದದ ಮಾತುಕತೆ ಅಂತಿಮ ಹಂತದಲ್ಲಿದೆ ಎಂದು ಭಾರತ ಹೇಳಿತ್ತು. ಡೊನಾಲ್ಡ್ ಟ್ರಂಪ್ ಕೂಡ ಇದನ್ನು ಪುನರುಚ್ಚರಿಸಿದ್ದಾರೆ.

'ನಾವು ಎಲ್ಲರೊಂದಿಗೂ ಮಾತನಾಡಿದ್ದೇವೆ. ಡೀಲ್ ಮಾಡಿಕೊಳ್ಳೋಣ ಎಂದು ತಿಳಿಸಿದ್ದೇವೆ. ನೀವು ಅತ್ಯಂತ ಯಶಸ್ವಿ ಮತ್ತು ಶ್ರೇಷ್ಠ ದೇಶದೊಂದಿಗೆ ಸಹಭಾಗಿತ್ವ ಹೊಂದಲು ಬಯಸುತ್ತಿದ್ದರೆ ನಿಮಗೆ ಅಮೆರಿಕಕ್ಕೆ ಸ್ವಾಗತ ಬ್ರಿಟನ್ ಜೊತೆ ಡೀಲ್ ಮಾಡಿಕೊಂಡಿದ್ದೇವೆ. ಚೀನಾ ಜೊತೆ ಡೀಲ್ ಮಾಡಿಕೊಂಡಿದ್ದೇವೆ. ಭಾರತದೊಂದಿಗೆ ಡೀಲ್ ಅಂತಿಮಗೊಳ್ಳಲು ಬಹಳ ಹತ್ತಿರದಲ್ಲಿದ್ದೇವೆ. ಯಾರು ಒಪ್ಪಂದ ಮಾಡಿಕೊಳ್ಳುವುದಿಲ್ಲವೋ ಅವರಿಗೆ ಪತ್ರ ಕಳುಹಿಸುತ್ತೇವೆ. ಅದರಲ್ಲಿ ಟ್ಯಾರಿಫ್ ಎಷ್ಟು ಎಂದು ತಿಲಿಸುತ್ತೇವೆ. ಅವರು ಅದನ್ನು ಕಟ್ಟಬೇಕು ಅಷ್ಟೇ' ಎಂದು ಡೊನಾಲ್ಡ್ ಟ್ರಂಪ್ ತಮ್ಮ ಟ್ರೂತ್ ಸೋಷಿಯಲ್‌ನ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

## ಮಹತ್ವದ ಮಾತುಕತೆ

ಈ ಬಗ್ಗೆ ಕೆಲ ವಾರಗಳ ಹಿಂದೆ ಹೇಳಿಕೆಯನ್ನು ನೀಡಿದ್ದರು. ತೆಲಂಗಾಣದ ಹೈದರಾಬಾದ್ ಅನ್ನು ವಿಶ್ವದ ಅತ್ಯುತ್ತಮ ಸಿನಿಮಾ ನಿರ್ಮಾಣ ಹಬ್ ಆಗಿ ರೂಪುಗೊಳಿಸಲು ಸರ್ಕಾರ ಬದ್ಧವಾಗಿದೆ ಎಂದಿದ್ದರು. ತೆಲಂಗಾಣ ಸರ್ಕಾರ ಸಿನಿಮಾ ರಂಗಕ್ಕೆ ನೀಡುತ್ತಿರುವ ಬೆಂಬಲವನ್ನು ಗಮನಿಸಿ, ಅಜಯ್ ದೇವಗನ್ ಅವರು ತೆಲಂಗಾಣದಲ್ಲಿ ಸ್ಟುಡಿಯೋ ನಿರ್ಮಾಣಕ್ಕೆ ಮುಂದಾಗಿದ್ದಾರೆ.

ಅಜಯ್ ದೇವಗನ್, ವಿಶ್ವದರ್ಜೆಯ ಸ್ಟುಡಿಯೋ ಅನ್ನು ತೆಲಂಗಾಣದಲ್ಲಿ ನಿರ್ಮಾಣ ಮಾಡಲು ಮುಂದಾಗಿದ್ದಾರೆ. ವಿಎಫ್‌ಎಕ್ಸ್, ಅನಿಮೇಷನ್, ಡಬ್ಬಿಂಗ್ ಸ್ಟುಡಿಯೋ, ಗ್ರೀನ್ ಮ್ಯಾಟ್ ಸ್ಟುಡಿಯೋ, ಎಡಿಟಿಂಗ್ ಫೆಸಿಲಿಟಿ, ರೀರೆಕಾರ್ಡಿಂಗ್ ಫೆಸಿಲಿಟಿ ಸಿನಿಮಾದ ಪೋಸ್ಟ್ ಪ್ರೊಡಕ್ಷನ್ ಮತ್ತು ಅನಿಮೇಷನ್, ವಿಎಫ್‌ಎಕ್ಸ್‌ಗೆ ಬೇಕಾದ ಎಲ್ಲ ತಂತ್ರಜ್ಞಾನವನ್ನು ಒಳಗೊಂಡ ಸ್ಟುಡಿಯೋ ಅನ್ನು ಅಜಯ್ ದೇವಗನ್ ನಿರ್ಮಾಣ ಮಾಡಲಿದ್ದಾರೆ. ಸುಮಾರು ನೂರು ಕೋಟಿಗೂ ಹೆಚ್ಚು ಹಣವನ್ನು ಅಜಯ್ ದೇವಗನ್ ಸ್ಟುಡಿಯೋ ನಿರ್ಮಾಣಕ್ಕೆ ಹೂಡಿಕೆ ಮಾಡಲಿದ್ದಾರೆ.

ತೆಲಂಗಾಣದ ಹೈದರಾಬಾದ್ ಈಗಾಗಲೇ ಸಿನಿಮಾ ನಿರ್ಮಾಣದ ಹಲವಾರು ಸವಲತ್ತುಗಳನ್ನು ಒಳಗೊಂಡಿದೆ. ದೇಶದಲ್ಲಿಯೇ ಪ್ರಸಿದ್ಧವಾಗಿರುವ ರಾಮೋಜಿರಾವ್ ಫಿಲಂ ಸಿಟಿ, ಅನ್ನಪೂರ್ಣ ಸ್ಟುಡಿಯೋಸ್ ಇನ್ನೂ ಹಲವಾರು ಸ್ಟುಡಿಯೋ ಮತ್ತು ಫಿಲಂ ಸಿಟಿಗಳು ಹೈದರಾಬಾದ್ ನಲ್ಲಿವೆ. ಸರ್ಕಾರ ಇನ್ನಷ್ಟು ಹೂಡಿಕೆಯನ್ನು ಸಿನಿಮಾ ಕ್ಷೇತ್ರದಲ್ಲಿ ಆಹ್ವಾನಿಸಿದೆ.

## ನಟ ಪವನ್ ಕಲ್ಯಾಣ್

ವಿಶೇಷ ತಂಡ ಈ ಭಾಗದಲ್ಲಿ ಬೆಳೆದ ಗಾಂಜಾ ಬೆಳೆಯನ್ನು ನಾಶ ಮಾಡಿದೆ. ಗಾಂಜಾ ಕೃಷಿಯಲ್ಲಿ ಪ್ರಮುಖವಾಗಿ ತೊಡಗಿಸಿಕೊಂಡಿದ್ದ 375 ಹಳ್ಳಿಗಳ ಮೇಲೆ ಅಧಿಕಾರಿಗಳು ಸಂಪೂರ್ಣ ದಾಳಿ ನಡೆಸಿ ಇದಕ್ಕೆ ತಡೆ ಹಾಕಿದ್ದಾರೆ.

ಸಾಮಾನ್ಯವಾಗಿ ಗಾಂಜಾ ಕೃಷಿ ಜುಲೈ ಅಥವಾ ಆಗಸ್ಟ್‌ನಲ್ಲಿ ಪ್ರಾರಂಭವಾಗುತ್ತಿತ್ತು. ಆದರೆ ಹೊಸ ಸರ್ಕಾರದ ಮುಂಜಾಗ್ರತಾ ಕ್ರಮಗಳಿಂದ ಕಳೆದ ಜುಲೈ ಮತ್ತು ಆಗಸ್ಟ್‌ನಲ್ಲಿ ಬಹುತೇಕ ಎಲ್ಲಾ ಬೆಳೆಗಳು ನಾಶವಾದವು. ಈ ಬಾರಿಯೂ ಹಾಗೆಯೇ ಮಾಡಲಾಗುತ್ತಿದೆ.

ರಾಜ್ಯದ ಜನತೆ ಮಾದಕ ವ್ಯಸನಗಳಿಗೆ ಒಳಗಾಗುತ್ತಿರುವ ಬಗ್ಗೆ ಪವನ್ ಕಲ್ಯಾಣ್ ಸಾಕಷ್ಟು ಬಾರಿ ಆತಂಕ ಹೊರಹಾಕಿದ್ದರು. ಈ ಕಾರಣದಿಂದಲೇ ಅವರು ನಿರಂತರವಾಗಿ ಈ ಚಟುವಟಿಕೆಗಳ ವಿರುದ್ಧ ಕ್ರಮ ಕೈಗೊಳ್ಳುತ್ತಾ ಬರುತ್ತಿದ್ದಾರೆ.

ಸದ್ಯ ಪವನ್ ಕಲ್ಯಾಣ್ ಕ್ರಮಕ್ಕೆ ಸಾಕಷ್ಟು ಮೆಚ್ಚುಗೆ ವ್ಯಕ್ತವಾಗುತ್ತಿದೆ. ಅವರು ನಿಜವಾದ ಓಜಿ ಎಂದು ಅನೇಕರು ಹೇಳಿದ್ದಾರೆ. ಸಿನಿಮಾ ವಿಚಾರಕ್ಕೆ ಬರೋದಾದರೆ ಪವನ್ ಕಲ್ಯಾಣ್ ಅವರು 'ಹರಿ ಹರ ವೀರ ಮಲ್ಲು', 'ಓಜಿ' ಮೊದಲಾದ ಸಿನಿಮಾಗಳಲ್ಲಿ ತೊಡಗಿಕೊಂಡಿದ್ದಾರೆ.

## ಸರ್ಕಾರಕ್ಕೆ ಕೋರ್ಟ್ ಪ್ರಶ್ನೆ

ಸ್ಮಾರ್ಟ್ ಮೀಟರ್ ಶುಲ್ಕಕ್ಕೆ ಮಧ್ಯಂತರ ತಡೆ ನೀಡಿತ್ತು. ಅಲ್ಲದೇ ಬಡವರಿಂದ ಇಷ್ಟು ಹಣ ಕಿತ್ತುಕೊಂಡರೆ ಎಲ್ಲಿಗೆ ಹೋಗಬೇಕು. ಎಲ್ಲರೂ ಸ್ಮಾರ್ಟ್ ಮೀಟರ್ ಹಾಕಬೇಕೆಂದರೆ ಬಡವರೇನು ಮಾಡಬೇಕು ಎಂದು ಕೋರ್ಟ್ ಅಸಮಾಧಾನ ವ್ಯಕ್ತಪಡಿಸಿತ್ತು.

## ಪತಿ

ಈ ಸಂಬಂಧ ಚಿಕ್ಕಬಳ್ಳಾಪುರ ಮಹಿಳಾ ಠಾಣೆಗೆ ಗಂಡನ ವಿರುದ್ಧ ಪೂಜಾ ದೂರು ನೀಡಿದ್ದು, ಪೊಲೀಸರು ಆರೋಪಿ ಅಶ್ವತ್ಥನಾರಾಯಣನನ್ನು ಬಂಧಿಸಿ ವಿಚಾರಣೆ ನಡೆಸಿದ್ದಾರೆ.

ಅಸಲಿಗೆ ಆರೋಪಿ ಅಶ್ವತ್ಥನಾರಾಯಣ, ಪೂಜಾಳನ್ನು ಮದುವೆ ಆಗುವುದಕ್ಕೂ ಮುನ್ನ, ಇಬ್ಬರನ್ನು ಮದುವೆಯಾಗಿದ್ದನಂತೆ. ಒಬ್ಬಾಕೆಗೆ ವಿಚ್ಛೇದನ ಪಡೆದುಕೊಂಡು ಹೋಗಿದ್ದರೆ, ಮತ್ತೋರ್ವಳು ಈತನ ಕಿರುಕುಳ ತಾಳಲಾರದೆ ಮನೆ ಬಿಟ್ಟು ಹೋಗಿದ್ದಾಳೆ. ಇನ್ನೂ ಇರೋ ಪತ್ನಿ ಪೂಜಾ ಹಾಗೂ ಮಕ್ಕಳ ಜೊತೆ ನ್ಯಾಯಯುತವಾಗಿ ಇರದ ಭಂಡ ಅಶ್ವತ್ಥನಾರಾಯಣ ಪ್ರತಿದಿನ ಕುಡಿದು ಬಂದು ಕಿರುಕುಳ ಕೊಡುತ್ತಿದ್ದಾನಂತೆ,.ಇದರಿಂದ ರೋಸಿ ಹೋದ ಪೂಜಾ, ಪತಿ ಅಶ್ವತ್ಥನಾರಾಯಣ ವಿರುದ್ಧ ಚಿಕ್ಕಬಳ್ಳಾಪುರ ಮಹಿಳಾ ಠಾಣೆಗೆ ದೂರು ನೀಡಿದ್ದು ನ್ಯಾಯಕ್ಕಾಗಿ ಅಂಗಲಾಚುತ್ತಿದ್ದಾಳೆ.

## ಸಜೀವ ದಹನ

ಈ ಭಯಾನಕ ಘಟನೆಯು 3 ದಿನಗಳ ಹಿಂದೆ ಗ್ರಾಮದಲ್ಲಿ ನಡೆದ ಸ್ಥಳೀಯ ಭೂತೋಚ್ಚಾಟನೆ ಆಚರಣೆ ಮತ್ತು ಚಿಕಿತ್ಸೆಯ ಸಮಯದಲ್ಲಿ ರಾಮ್‌ದೇವ್ ಒರಾನ್ ಅವರ ಮಗನ ಸಾವಿನ ಬಳಿಕ ಗ್ರಾಮದಲ್ಲಿ ಆಕ್ರೋಶ ಹೆಚ್ಚಾಗಿತ್ತು. ಅವರ ಇನ್ನೊಬ್ಬ ಮಗ ಕೂಡ ಅನಾರೋಗ್ಯಕ್ಕೆ ಒಳಗಾಗಿದ್ದ. ಅವರ ಕುಟುಂಬದಲ್ಲಿ ''ಮಾಟಗಾರರು'' ಇರುವುದೇ ಈ ದುರಂತಗಳಿಗೆ ಕಾರಣ ಎಂದು ಗ್ರಾಮಸ್ಥರು ಆರೋಪಿಸಿದ್ದರು. ಇದರಿಂದ ಅವರೆಲ್ಲರೂ ಸೇರಿ ಆ ಕುಟುಂಬದ ಐವರನ್ನು ಸುಟ್ಟು ಕೊಂದಿದ್ದಾರೆ.

ಮೃತರನ್ನು ಬಾಬು ಲಾಲ್ ಒರಾನ್, ಸೀತಾ ದೇವಿ, ಮಂಜೀತ್ ಒರಾನ್, ರಾನಿಯಾ ದೇವಿ ಮತ್ತು ತಪ್ಟೋ ಮೊಸಾಮತ್ ಎಂದು ಗುರುತಿಸಲಾಗಿದೆ. ಇವರೆಲ್ಲರೂ ಒಂದೇ ಕುಟುಂಬಕ್ಕೆ ಸೇರಿದವರು. ಈ ಘಟನೆಯ ನಂತರ ಆ ಊರಿನಲ್ಲಿ ಭಯದ ವಾತಾವರಣ ನಿರ್ಮಾಣವಾಗಿದ್ದು, ಅನೇಕ ಗ್ರಾಮಸ್ಥರು ತಮ್ಮ ಮನೆಗಳನ್ನು ತೊರೆದಿದ್ದಾರೆ. ಪೊಲೀಸರು ಸ್ಥಳದಲ್ಲಿ ಗಸ್ತು ತಿರುಗುತ್ತಿದ್ದಾರೆ ಮತ್ತು ಎಫ್‌ಎಸ್‌ಎಲ್ (ವಿಧಿವಿಜ್ಞಾನ ವಿಜ್ಞಾನ ಪ್ರಯೋಗಾಲಯ) ತಂಡದೊಂದಿಗೆ ಶ್ವಾನ ದಳ ತನಿಖೆ ನಡೆಸುತ್ತಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಕುಲ್ ಕುಮಾರ್ ಎಂಬ ವ್ಯಕ್ತಿಯನ್ನು ಬಂಧಿಸಲಾಗಿದೆ. ಅವರೆಲ್ಲರನ್ನು ಜೀವಂತವಾಗಿ ಸುಡಲು ಗ್ರಾಮಸ್ಥರನ್ನು ನಕುಲ್ ಪ್ರಚೋದಿಸಿದ್ದ ಎಂಬ ಆರೋಪ ಕೇಳಿಬಂದಿದೆ. ಮೃತಪಟ್ಟವರ ಕುಟುಂಬದಲ್ಲಿ ಬದುಕುಳಿದ ಏಕೈಕ ವ್ಯಕ್ತಿಯೆಂದರೆ ಲಲಿತ್. ಆತ ಈ ಭಯಾನಕ ಘಟನೆಯನ್ನು ವಿವರಿಸಿದ್ದಾರೆ. ತನ್ನ ಇಡೀ ಕುಟುಂಬವನ್ನು ಮೊದಲು ವಾಮಾಚಾರಿಗಳು ಎಂಬ ಆರೋಪದ ಮೇಲೆ ನಿರ್ದಯವಾಗಿ ಥಳಿಸಲಾಯಿತು. ನಂತರ ಥಳಿಸಿ, ಬೆಂಕಿ ಹಚ್ಚಲಾಯಿತು ಎಂದು ಆತ ಹೇಳಿದ್ದಾರೆ. ನಾನು ಹೇಗೋ ತಪ್ಪಿಸಿಕೊಂಡು ಪ್ರಾಣ ಉಳಿಸಿಕೊಂಡೆ. ಸುಟ್ಟ ನಂತರ ಶವಗಳನ್ನು ನೀರಿಗೆ ಎಸೆಯಲಾಗಿದೆ ಎಂದು ಅವರು ಹೇಳಿದ್ದಾರೆ.

# ಕಾಡುಪ್ರಾಣಿ ಹಾವಳಿ, ಬೆಳೆ ಪರಿಹಾರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ

**ಚಾಮರಾಜನಗರ:** ಕಾಡು ಪ್ರಾಣಿಗಳ ಹಾವಳಿ ಸಂಬಂಧ ಜನರಿಂದ ಬರುವ ದೂರುಗಳು, ಬೆಳೆಹಾನಿ ಪರಿಹಾರದಂತಹ ಸಮಸ್ಯೆಗಳಿಗೆ ಅಧಿಕಾರಿಗಳು ತ್ವರಿತವಾಗಿ ಸ್ಪಂದಿಸಬೇಕೆಂದು ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅರಣ್ಯ ಇಲಾಖೆ ಸಂಬಂಧ ಸಾರ್ವಜನಿಕರಿಂದ ಹೆಚ್ಚು ದೂರುಗಳು ಬರುತ್ತಿವೆ. ಗ್ರಾಮಗಳಲ್ಲಿ ಚಿರತೆ ಕಾಣಿಸಿಕೊಂಡ ಬಗ್ಗೆ ಗ್ರಾಮಸ್ಥರಿಂದ ಅರಣ್ಯ ಇಲಾಖೆಗೆ ಮಾಹಿತಿ ಬರುತ್ತಿದೆ. ಇಂತಹ ಸಂದರ್ಭಗಳಲ್ಲಿ ನಿರ್ಲಕ್ಷ್ಯ ವಹಿಸದೇ ಅರಣ್ಯ ಅಧಿಕಾರಿಗಳು ಕೂಡಲೇ ಧಾವಿಸಬೇಕು. ಕಾಡು ಪ್ರಾಣಿಗಳಿಂದ ನಾಶವಾಗುವ ಬೆಳೆಗೆ ಪರಿಹಾರ ನೀಡಲು ಶೀಘ್ರ ಕ್ರಮ ವಹಿಸಬೇಕು ಎಂದು ಸಚಿವರು ತಿಳಿಸಿದರು.

ರೈತ ಸಂಘಟನೆಗಳು ವಿವಿಧ ಬೇಡಿಕೆಗಳನ್ನು ಈಡೇರಿಸಲು ಹಾಗೂ ಸಮಸ್ಯೆ ಪರಿಹರಿಸುವ ಸಂಬಂಧ ಸಲ್ಲಿಸಲಾಗಿರುವ ಮನವಿ ಕುರಿತು ಅಧಿಕಾರಿಗಳಿಗೆ ಸೂಚನೆ ನೀಡಿದ ಜಿಲ್ಲಾ ಉಸ್ತುವಾರಿ ಸಚಿವರು ಬಾಳೆ ಬೆಳೆಗಾರರಿಗೆ ಯಾವುದೇ ತಾರತಮ್ಯವಾಗದಂತೆ ಉತ್ತಮ ದರ ಸಿಗಬೇಕು. ಈ ನಿಟ್ಟಿನಲ್ಲಿ ಎಪಿಎಂಸಿ, ತೋಟಗಾರಿಕೆ ಇಲಾಖೆ ಅಧಿಕಾರಿಗಳು ಸಭೆ ಕರೆದು ಸಮಸ್ಯೆ ಇತ್ಯರ್ಥ ಮಾಡಬೇಕೆಂದು ನಿರ್ದೇಶನ ನೀಡಿದರು.

ಕೆ.ಎಸ್.ಆರ್.ಟಿ.ಸಿ ಬಸ್ಸುಗಳ ಸೇವೆ ಗ್ರಾಮಾಂತರ ಪ್ರದೇಶಗಳಲ್ಲಿ ಸಮರ್ಪಕವಾಗಿ ಇರಬೇಕು. ಶಾಲಾ ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಬಸ್ಸುಗಳ ನಿಯೋಜನೆಯಾಗಬೇಕು. ಈ ಸಂಬಂಧ ಸಭೆ ಕರೆದು ಅನುಕೂಲ ಮಾಡಿಕೊಡುವ ದಿಸೆಯಲ್ಲಿ ಮುಂದಾಗುವಂತೆ ಸಚಿವರು ತಿಳಿಸಿದರು. ಆರೋಗ್ಯ ಇಲಾಖೆ ಪರಿಶೀಲನೆ ವೇಳೆ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವರು ಆರೋಗ್ಯ ಸೇವೆ ಎಲ್ಲ ಜನರಿಗೂ ಉತ್ತಮವಾಗಿ ತಲುಪಬೇಕು. ಹಾಡಿಗಳಿಗೆ ವೈದ್ಯರ ತಂಡವೇ ಭೇಟಿ ನೀಡಿ ಆರೋಗ್ಯ ತಪಾಸಣೆ, ಚಿಕಿತ್ಸೆಯಂತಹ ಔಷದೋಪಚಾರಗಳನ್ನು ಮಾಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು, ಹಿಂದು ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆಯ ಆಯುಕ್ತರು ಹಾಗೂ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ. ಎಂ.ವಿ. ವೆಂಕಟೇಶ್ ಅವರು ಮಾತನಾಡಿ ಆಸ್ಪತ್ರೆಗಳಲ್ಲೇ ಸುರಕ್ಷಿತವಾಗಿ ಹೆರಿಗೆ ಆದರೆ ತಾಯಿ ಮಗು ಆರೋಗ್ಯವಾಗಿರುತ್ತಾರೆ. ಮನೆಗಳಲ್ಲಿ ಹೆರಿಗೆ ಪ್ರಕರಣಗಳು ಆಗದಂತೆ ಮನವೊಲಿಸಬೇಕು. ತಾಯಿ ಮಕ್ಕಳ ಶಿಶು ಮರಣ ಸಂಖ್ಯೆ ತಗ್ಗಬೇಕು ಎಂದರು. ಶಿಕ್ಷಣ ಇಲಾಖೆ ಪ್ರಗತಿ ಪರಿಶೀಲನಾ ವೇಳೆ ವಿಧಾನ ಪರಿಷತ್ ಸದಸ್ಯರಾದ ಕೆ. ವಿವೇಕಾನಂದ ಅವರು ಮಾತನಾಡಿ ಶಿಕ್ಷಕರ ಕೊರತೆಯ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಪೂರ್ಣ ಮಾಹಿತಿ ಒದಗಿಸಬೇಕು. ಈ ಸಂಬಂಧ ಚರ್ಚಿಸಿ ಪರಿಹಾರ ಕಂಡುಕೊಳ್ಳಲು ಸಹಾಯಕವಾಗುತ್ತದೆ. ಶಾಲಾ ನಿರ್ಮಾಣಕ್ಕೆ ದಾನ ನೀಡಿರುವ ನಿವೇಶನ, ಕಟ್ಟಡ, ಇನ್ನಿತರ ವಿವರಗಳನ್ನು ಒದಗಿಸಬೇಕು ಎಂದರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಮಾತನಾಡಿ ಕೊಳ್ಳೇಗಾಲದಲ್ಲಿನ ಅಬ್ದುಲ್ ಕಲಾಂ ಸಂಸ್ಥೆ ಪ್ರಕರಣದಲ್ಲಿ ಯಾರೇ ಭಾಗಿಯಾಗಿದ್ದರೂ ತಪ್ಪು ತಪ್ಪೇ. ಈ ವಿಷಯದಲ್ಲಿ ಸ್ಪಷ್ಟನೆ ನೀಡಬೇಕು ಎಂದರು.

ಕುಡಿಯುವ ನೀರಿನ ವ್ಯವಸ್ಥೆ ಪರಾಮರ್ಶಿಸಿದ ಜಿಲ್ಲಾ ಉಸ್ತುವಾರಿ ಸಚಿವರು ಟ್ಯಾಂಕರ್ ಮೂಲಕ ನೀರು ಪೂರೈಸುತ್ತಿರುವ ಗ್ರಾಮಗಳಲ್ಲಿ ಖಾಯಂ ನೀರು ವ್ಯವಸ್ಥೆ ಕಾಮಗಾರಿಯನ್ನು ಕೈಗೊಳ್ಳಬೇಕು. ನೀರು ಕೊರತೆಯಿರುವ ಗ್ರಾಮದ ಅಕ್ಕಪಕ್ಕದ ಸ್ಥಳಗಳಲ್ಲಿ ಬೋರ್ ವೆಲ್ ಕೊರೆಯಿಸಿ ಪೈಪ್ ಲೈನ್ ಮೂಲಕ ನೀರು ಪೂರೈಸಬೇಕು. ಕುಡಿಯುವ ನೀರಿನ ಸಮಸ್ಯೆ ತಕ್ಷಣವೇ ಬಗೆಹರಿಸಬೇಕು ಎಂದು ಸೂಚನೆ ನೀಡಿದರು.

ಚೆಕ್ ಡ್ಯಾಂಗಳನ್ನು ನಿರ್ಮಾಣ ಮಾಡಿ ರೈತರಿಗೆ ಅನುಕೂಲ ಕಲ್ಪಿಸಬೇಕು. ಅರಣ್ಯ ಇಲಾಖೆ ವನ್ಯಜೀವಿಗಳಿಗೆ ನೀರು ಲಭ್ಯವಾಗುವಂತಹ ಕಾರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ನರೇಗಾ ಅಡಿ ನೀರು ಪೂರೈಸುವ ಸಂಬಂಧ ಕೆಲಸಗಳನ್ನು ಕೈಗೊಂಡು ಉಪಯುಕ್ತವಾಗುವಂತೆ ನೋಡಿಕೊಳ್ಳಬೇಕು ಎಂದು ಸಚಿವರು ತಿಳಿಸಿದರು.

ಶಾಸಕರಾದ ಎಂ.ಆರ್. ಮಂಜುನಾಥ್ ಮಾತನಾಡಿ ಜೆ.ಜೆ.ಎಂ ಕುಡಿಯುವ ನೀರಿನ ಕಾಮಗಾರಿಗಳು ತಡವಾಗಿ ಆಗುತ್ತಿದೆ. ಕೆಲವೆಡೆ ಇನ್ನೂ ಅರಣ್ಯ ಇಲಾಖೆಯಿಂದ ಅನುಮತಿ ಸಿಕ್ಕಿಲ್ಲ. ಯಾವ ವೇಳೆಗೆ ನೀರಿನ ಕಾಮಗಾರಿ ಪೂರ್ಣಗೊಳ್ಳುತ್ತವೆ ಎಂಬುದನ್ನು ಅಧಿಕಾರಿಗಳು ಸ್ಪಷ್ಟಪಡಿಸಬೇಕು ಎಂದರು.

ಚಾಮರಾಜನಗರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ. ಎಂ.ವಿ. ವೆಂಕಟೇಶ್ ಅವರು ಮಾತನಾಡಿ ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳನ್ನು ಗುರುತಿಸಬೇಕು. ಅಂತರ್ಜಲ ಹೆಚ್ಚಳ ಮಾಡುವ ಕಾಮಗಾರಿಗಳಿಗೂ ಹೆಚ್ಚಿನ ಆದ್ಯತೆ ನೀಡಬೇಕು ಎಂದರು. ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಸುದೀರ್ಘವಾಗಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲಿಸಿದರು.

ಶಾಸಕರಾದ ಹೆಚ್.ಎಂ. ಗಣೇಶ್ ಪ್ರಸಾದ್, ಕಾಡಾ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ವಿ. ಚಂದ್ರು, ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಅಧಿಕಾರೇತರ ಕೆಡಿಪಿ ಸದಸ್ಯರಾದ ಸಯ್ಯದ್ ಮುಸ್ಸೆಯಿಬ್, ಎಂ.ಶಂಕರಪ್ಪ, ಕ.ರಾ.ಸ.ಕೃ ಉಪಸ್ಥಿತರಿದ್ದರು.

# ಸಹಸ್ರಾರು ಶಿಷ್ಯ ಭಕ್ತರಿಗೆ ತಪ್ತಮುದ್ರಾಧಾರಣೆ

**ಬೆಂಗಳೂರು:** ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪ್ರಥಮ ಏಕಾದಶಿ ಪ್ರಯುಕ್ತ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರು ಶ್ರೀರಾಮದೇವರ ಸಂಸ್ಥಾನ ಪೂಜೆಯನ್ನು ನೆರವೇರಿಸಿ ನಂತರ ಸುವರ್ಣದ ತೊಟ್ಟಿಲಿನಲ್ಲಿ ಶ್ರೀಮನ್ ಮೂಲ ರಾಮದೇವರಿಗೆ ಮಂಗಳಾರತಿಯನ್ನು ನೆರವೇರಿಸಿ ಸುದರ್ಶನ ಹೋಮದೊಂದಿಗೆ ತಪ್ತಮುದ್ರಾಧಾರಣೆಯನ್ನು ತಾವು ಸ್ವೀಕರಿಸಿ, 35,000ಕ್ಕೂ ಮಿಗಿಲಾಗಿ ಸಹಸ್ರಾರು ಶಿಷ್ಯರಿಗೆ ಭಕ್ತರಿಗೆ ಬೆಳಗ್ಗೆ 7:30 ರಿಂದ ರಾತ್ರಿ 10:30ರವರೆಗೂ ಮುದ್ರಾಧಾರಣೆಯನ್ನು ನೆರವೇರಿಸಿದರು. ಬೆಳಗ್ಗೆಯಿಂದ ರಾತ್ರಿಯವರೆಗೆ ನಾಡಿನ ಪ್ರಖ್ಯಾತ ವಿದ್ವಾಂಸರುಗಳಿಂದ ಅಖಂಡ ಭಾಗವತ ಪ್ರವಚನ ಆಯೋಜಿಸಿತ್ತು. ಈ ಎಲ್ಲಾ ಕಾರ್ಯಕ್ರಮಗಳು ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಜರುಗಿದವು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು. ಈ ಸಂದರ್ಭದಲ್ಲಿ ಮುದ್ರಾಧಾರಣೆ ಸ್ವೀಕರಿಸಲು ಆಗಮಿಸಿದ ಶಿಷ್ಯರಿಗಾಗಿ ಅಚ್ಚುಕಟ್ಟಾದ ವ್ಯವಸ್ಥೆಯನ್ನು ಮಾಡಲಾಗಿತ್ತು. ವಯೋವೃದ್ಧರಿಗೂ, ವಿಕಲಚೇತನರಿಗೂ ಪ್ರತ್ಯೇಕ ವ್ಯವಸ್ಥೆಯೂ ಮಾಡಲಾಗಿತ್ತು. ಈ ವ್ಯವಸ್ಥೆಯನ್ನು ಕಂಡ ಶಿಷ್ಯರು ಭಕ್ತರು ಸಂತೋಷವನ್ನು ವ್ಯಕ್ತಪಡಿಸುತ್ತಾ ಮುದ್ರಾಧಾರಣವನ್ನು ಸ್ವೀಕರಿಸಿ, ಶ್ರೀ ಹರಿವಾಯುಗುರುಗಳ ಅನುಗ್ರಹಕ್ಕೆ ಪಾತ್ರರಾದರು. ಈ ಸಂದರ್ಭದಲ್ಲಿ ಚಿತ್ರನಟಿ ತಾರಾ ಅನುರಾಧ ಮತ್ತು ಚಿತ್ರನಟಿ ಪ್ರೇಮಾರವರು ಚಿತ್ರನಟಿ ಸುಜಾತ ಅಕ್ಷಯ್ ರವರು ಕೂಡ ಮುದ್ರಾಧಾರಣವನ್ನು ಸ್ವೀಕರಿಸಿ ಗುರುಗಳ ಅನುಗ್ರಹಕ್ಕೆ ಪಾತ್ರರಾದರು.



# ಬೆಳೆ ಸಮೀಕ್ಷೆ ನಿಖರವಾಗಿರಲಿ

## ರೈತರಿಗೆ ಬೆಳೆ ವಿಮೆ ಬಗ್ಗೆ ಅರಿವು ಮೂಡಿಸಿ: ಜಿಲ್ಲಾಧಿಕಾರಿ ಎ.ಬಿ ಬಸವರಾಜು

**ಬೆಂಗಳೂರು ಗ್ರಾಮಾಂತರ:** ಕೃಷಿ, ತೋಟಗಾರಿಕೆ ಅಧಿಕಾರಿಗಳು ಮತ್ತು ಬೆಳೆ ವಿಮಾ ಸಂಸ್ಥೆಗಳು ಜಂಟಿಯಾಗಿ ಸ್ಥಳೀಯ ಮಟ್ಟದಲ್ಲಿ ರೈತರಿಗೆ ಬೆಳೆ ವಿಮೆ ಬಗ್ಗೆ ಹಾಗೂ ಅದರಿಂದ ಆಗುವ ಅನುಕೂಲಗಳ ಬಗ್ಗೆ ಅರಿವು ಮೂಡಿಸುವ ಮೂಲಕ ರೈತರು ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಲು ಪ್ರೇರೆಪಿಸಿ ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಎ.ಬಿ ಬಸವರಾಜು ಅವರು ಸೂಚಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ಕಚೇರಿ ಸಭಾಂಗಣದಲ್ಲಿ ನಡೆದ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ, ಬೆಳೆ ಸಮೀಕ್ಷೆ, ಎಣ್ಣೆಕಾಳು ಅಭಿಯಾನ ಯೋಜನೆಯ ಜಿಲ್ಲಾ ಮಟ್ಟದ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು. ರೈತರು ಬೆಳೆ ವಿಮೆ ಮಾಡಿಸುವುದರಿಂದ ಅತಿವೃಷ್ಟಿ, ಅನಾವೃಷ್ಟಿ ಹಾಗೂ ಇನ್ನೂ ಮುಂತಾದ ಪ್ರಕೃತಿ ವಿಕೋಪಗಳಿಂದ ಬೆಳೆಗಳಿಗೆ ಹಾನಿಯಾದರೆ ಅಂತಹ ಸಂದರ್ಭದಲ್ಲಿ ಬೆಳೆ ನಷ್ಟ ಪರಿಹಾರ ಸಿಗಲಿದೆ. ಹಾಗಾಗಿ



ಅಧಿಕಾರಿಗಳು ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ ಬಗ್ಗೆ ಜಿಲ್ಲೆಯ ಎಲ್ಲಾ ರೈತರಿಗೆ ಜಾಗೃತಿ ಮೂಡಿಸಿ ಬೆಳೆ ವಿಮೆಗೆ ನೋಂದಾಯಿಸಲು ಪ್ರೇರೇಪಿಸಿ ಎಂದರು.ಜಿಲ್ಲೆಯಲ್ಲಿ ಈ ಸಾಲಿನ ಬೆಳೆ ಸಮೀಕ್ಷೆ ಆರಂಭಗೊಳ್ಳುತ್ತಿದ್ದು ಸಮೀಕ್ಷೆಯು ಸರಿಯಾದ ಕ್ರಮದಲ್ಲಿ ಆಗಬೇಕಿದೆ. ಸಮೀಕ್ಷೆ ಮಾಡುವವರಿಗೆ ಸೂಕ್ತ ತರಬೇತಿ ನೀಡಬೇಕು. ಮೊಬೈಲ್ ಅಪ್ಲಿಕೇಶನ್ ನಲ್ಲಿ ಸಮೀಕ್ಷೆ ನಡೆಸಿ ನಿಖರ ಅಂಕಿ ಅಂಕಿಅಂಶಗಳ ಕ್ರೂಡಿಕರಣ ಮಾಡಿ. ಬೆಳೆ ಸಮೀಕ್ಷೆಯಿಂದ ಸರೆ ಹಿಡಿಯಲಾದ ದತ್ತಾಂಶವನ್ನು ಸರ್ಕಾರದ ವಿವಿಧ ಯೋಜನೆಗಳಲ್ಲಿ ಕನಿಷ್ಠ ಬೆಂಬಲ, ಸಬ್ಸಿಡಿ ಪಾವತಿ, ಬೆಳೆ ಪ್ರದೇಶದ ಅಂದಾಜು ಕೃಷಿ ಮತ್ತು ತೋಟಗಾರಿಕೆ ಯೋಜನೆಗಳ ಅಡಿಯಲ್ಲಿ ಫಲಾನುಭವಿಗಳ ಆಯ್ಕೆಗೆ ಮುಂತಾದ ಸೌಲಭ್ಯ ಒದಗಿಸಲು ಸಹಕಾರಿಯಾಗಲಿದೆ. ಆದ್ದರಿಂದ ಬೆಳೆ ಸಮೀಕ್ಷೆ ನಿಖರವಾಗಿ ಇರಲಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕರಾದ ಬಿ.ಜಿ ಕಲಾವತಿ, ಉಪನಿರ್ದೇಶಕರಾದ ಗಾಯಿತ್ರಿ, ತೋಟಗಾರಿಕೆ ಇಲಾಖೆ ಉಪ ನಿರ್ದೇಶಕರಾದ ಗುಣವಂತ ಜೆ, ರೇಷ್ಮೆ ಇಲಾಖೆ ಉಪನಿರ್ದೇಶಕರಾದ ಲಕ್ಷ್ಮಣ, ಜಿಲ್ಲಾ ಮಟ್ಟದ ಅಧಿಕಾರಿಗಳು, ಬೆಳೆ ವಿಮೆ ಪ್ರತಿನಿಧಿಗಳು, ರೈತ ಪ್ರತಿನಿಧಿಗಳು ಉಪಸ್ಥಿತರಿದ್ದರು.

### ಯಾವ ಬೆಳೆಗೆ ಎಷ್ಟು ವಿಮೆ ಸಿಗಲಿದೆ?

**ರಾಗಿ (ಮಳೆಯಾಶ್ರಿತ) ರೈತರು ಪ್ರೀಮಿಯಂ ಮೊತ್ತ ಎಕರೆಗೆ 340 ಪಾವತಿಸಿದರೆ ವಿಮಾ ಮೊತ್ತ 17000 ಪಡೆಯಬಹುದು. ರಾಗಿ (ನೀರಾವರಿ ) ರೈತರು ಪ್ರೀಮಿಯಂ ಮೊತ್ತ ಎಕರೆಗೆ 406 ಪಾವತಿಸಿದರೆ ವಿಮಾ ಮೊತ್ತ 20300 ಪಡೆಯಬಹುದು. ಭತ್ತ (ನೀರಾವರಿ) ರೈತರು ಪ್ರೀಮಿಯಂ ಮೊತ್ತ ಎಕರೆಗೆ 746 ಪಾವತಿಸಿದರೆ ವಿಮಾ ಮೊತ್ತ 37300 ಪಡೆಯಬಹುದು. ಮುಸುಕಿನ ಜೋಳ (ನೀರಾವರಿ) ರೈತರು ಪ್ರೀಮಿಯಂ ಮೊತ್ತ ಎಕರೆಗೆ 452 ಪಾವತಿಸಿದರೆ ವಿಮಾ ಮೊತ್ತ 22600 ಪಡೆಯಬಹುದು. ಮುಸುಕಿನ ಜೋಳ (ಮಳೆಆಶ್ರಿತ) ರೈತರು ಪ್ರೀಮಿಯಂ ಮೊತ್ತ ಎಕರೆಗೆ 516 ಪಾವತಿಸಿದರೆ ವಿಮಾ ಮೊತ್ತ 25800 ಪಡೆಯಬಹುದು. ಹುರಳಿ (ಮಳೆಆಶ್ರಿತ) ರೈತರು ಪ್ರೀಮಿಯಂ ಮೊತ್ತ ಎಕರೆಗೆ 164 ಪಾವತಿಸಿದರೆ ವಿಮಾ ಮೊತ್ತ 8200 ಪಡೆಯಬಹುದು. ನೆಲಗಡಲೆ (ಮಳೆಆಶ್ರಿತ) ರೈತರು ಪ್ರೀಮಿಯಂ ಮೊತ್ತ ಎಕರೆಗೆ 436 ಪತಿಸಿದರೆ ವಿಮಾ ಮೊತ್ತ 21800 ಪಡೆಯಬಹುದು. ತೊಗರಿ (ಮಳೆಆಶ್ರಿತ) ರೈತರು ಪ್ರೀಮಿಯಂ ಮೊತ್ತ ಎಕರೆಗೆ 384 ಪಾವತಿಸಿದರೆ ವಿಮಾ ಮೊತ್ತ 19200 ಪಡೆಯಬಹುದು. ತೊಗರಿ (ನೀರಾವರಿ) ರೈತರು ಪ್ರೀಮಿಯಂ ಮೊತ್ತ ಎಕರೆಗೆ 402 ಪಾವತಿಸಿದರೆ ವಿಮಾ ಮೊತ್ತ 20100 ಪಡೆಯಬಹುದು. ಟಮೋಟೊ ಬೆಳೆಗೆ ರೈತರು ಪ್ರೀಮಿಯಂ ಮೊತ್ತ ಎಕರೆಗೆ 1132 ಪಾವತಿಸಿದರೆ ವಿಮಾ ಮೊತ್ತ 56600 ಪಡೆಯಬಹುದು. ರೈತರಿಗೆ ಕೃಷಿ ಕಾರ್ಯಾಗಾರವನ್ನು ಆಯೋಜನೆ ಮಾಡಿ, ರೋಗ ಬಾಧೆಯಿಂದ ಬೆಳೆಯ ರಕ್ಷಣೆ, ಗೊಬ್ಬರ ಪೂರೈಕೆ, ಇಳುವರಿ ಹೆಚ್ಚಿಸುವ ಬೆಳೆಗಳ ಕುರಿತು ಜಾಗೃತಿ ಮೂಡಿಸಿ. ಸಿರಿಧಾನ್ಯ, ಎಣ್ಣೆ ಕಾಳುಗಳ ಬೆಳೆಗೆ ಹೆಚ್ಚಿನ ಪ್ರೊತ್ಸಾಹ ಕಲ್ಪಿಸಿಕೊಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಹೇಳಿದರು.**

# ಬೀದಿನಾಟಕ, ಜಾನಪದ ಸಂಗೀತ ಕಲಾತಂಡಗಳ ಆಯ್ಕೆಗೆ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಸರ್ಕಾರದ ಯೋಜನೆಗಳನ್ನು ಪ್ರಚಾರ ಮಾಡುವ ನಿಟ್ಟಿನಲ್ಲಿ ಬೀದಿನಾಟಕ/ಜಾನಪದ ಸಂಗೀತ ಕಲಾ ತಂಡಗಳನ್ನು ಆಯ್ಕೆ ಮಾಡಿಕೊಳ್ಳಲು ಕಲಾ ತಂಡಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರತಿ ಬೀದಿನಾಟಕ ತಂಡದಲ್ಲಿ 8 ಜನ ಕಲಾವಿದರು ಇರಬೇಕು, ಅದರಲ್ಲಿ ಕಡ್ಡಾಯವಾಗಿ ಇಬ್ಬರು ಮಹಿಳೆಯರು ಹಾಗೂ ಒಬ್ಬರು ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಕ್ಕೆ ಸೇರಿದ ಕಲಾವಿದರನ್ನೊಳಗೊಂಡಿರಬೇಕು. ಪ್ರತಿ ಜಾನಪದ ಸಂಗೀತ ಕಲಾ ತಂಡದಲ್ಲಿ 3 ಜನ ಕಲಾವಿದರು ಇರಬೇಕು, ಅದರಲ್ಲಿ ಕಡ್ಡಾಯವಾಗಿ ಒಬ್ಬರು ಮಹಿಳೆಯರು ಹಾಗೂ ಒಬ್ಬರು ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಕ್ಕೆ ಸೇರಿದ ಕಲಾವಿದರನ್ನೊಳಗೊಂಡಿರಬೇಕು.

ಆಸಕ್ತ ಕಲಾ ತಂಡಗಳು ಜುಲೈ 31 ರೊಳಗೆ ಉಪನಿರ್ದೇಶಕರ ಕಛೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ವಾರ್ತಾ ಸೌಧ 2ನೇ ಮಹಡಿ ನಂ.17, 2ನೇ ಮಹಡಿ, ಭಗವಾನ್ ಮಹಾವೀರ ರಸ್ತೆ(ಇನ್ಫೆಂಟ್ರಿ ರಸ್ತೆ) ಬೆಂಗಳೂರು-560001 ಇಲ್ಲಿ ಅಗತ್ಯ ದಾಖಲೆಗಳೊಂದಿಗೆ ಕಛೇರಿಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಉಪನಿರ್ದೇಶಕರಾದ ಅಶೋಕ್ ಕುಮಾರ್ ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಘಾಟಿ ಸುಬ್ರಮಣ್ಯ ದೇವಸ್ಥಾನ ಪ್ರದೇಶ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ಬಳಕೆ, ಮಾರಾಟ ನಿಷೇಧ

**ಬೆಂಗಳೂರು ಗ್ರಾಮಾಂತರ:** ಘಾಟಿ ಸುಬ್ರಮಣ್ಯ ದೇವಸ್ಥಾನ ಪ್ರದೇಶದಲ್ಲಿರುವ ಸಸ್ಯ ಸಂಕುಲಗಳನ್ನು, ಪ್ರಾಣಿ ಪಕ್ಷಿಗಳನ್ನು, ಸೂಕ್ಷ್ಮ ಜೀವಿಗಳನ್ನು ಮತ್ತು ಮಾನವ ಸಂಕುಲವನ್ನು ಸಂರಕ್ಷಿಸುವ ಹಾಗೂ ಇಲ್ಲಿನ ಪ್ರಾಕೃತಿಕ ಸೊಬಗಿನ ನೈರ್ಮಲ್ಯತೆಯನ್ನು ಕಾಪಾಡುವ ಹಿತ ದೃಷ್ಟಿಯಿಂದ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ಘಾಟಿ ಸುಬ್ರಮಣ್ಯ ದೇವಸ್ಥಾನ ಪ್ರದೇಶದ ವ್ಯಾಪ್ತಿಯಲ್ಲಿ ಥರ್ಮಕೋಲ್, ಪ್ಲಾಸ್ಟಿಕ್ ಮತ್ತು ಮೈಕ್ರೋ ಬೀಡ್ಸ್ ನಿಂದ ತಯಾರಾದಂತಹ ಪ್ಲಾಸ್ಟಿಕ್ ವಸ್ತುಗಳ ಕೊಂಡೊಯ್ಯುವಿಕೆ, ಬಳಕೆ ಮತ್ತು ಮಾರಾಟ ಮಾಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿ ಎ.ಬಿ ಬಸವರಾಜು ಅವರು ಆದೇಶಿಸಿದ್ದಾರೆ.



# ಸಮರ್ಪಕವಾಗಿ ಅಂಬೇಡ್ಕರ್ ಭವನವನ್ನು ನಿರ್ವಹಿಸಿ: ಡಾ. ಕುಮಾರ

**ಮಂಡ್ಯ:** ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲಾಗುವ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನವನ್ನು ಸಮಯಕ್ಕೆ ಸರಿಯಾಗಿ ಸ್ವಚ್ಛಗೊಳಿಸಿ ಸಮರ್ಪಕವಾಗಿ ನಿರ್ವಹಿಸಿ ಎಂದು ಜಿಲ್ಲಾಧಿಕಾರಿ ಡಾ ಕುಮಾರ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಅಂಬೇಡ್ಕರ್ ಭವನ ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಅಂಬೇಡ್ಕರ್ ಅಂಬೇಡ್ಕರ್ ಭವನದ ನಿರ್ಮಾಣದ ಗುಣಮಟ್ಟದಲ್ಲಿ ತೊಂದರೆ ಇದೆ ಎಂದು ದೂರು ಸಲ್ಲಿಕೆಯಾಗಿತ್ತು, ಇದನ್ನು ಪರಿಶೀಲಿಸಿ ವರದಿ ಸಲ್ಲಿಕೆಯಾಗಿದೆ ಎಂದರು.

ಸ್ವಚ್ಛತೆ ಕಪಾಡಿ ಅಂಬೇಡ್ಕರ್ ಭವನದಲ್ಲಿ ಕಾರ್ಯಕ್ರಮ ಆಯೋಜಿಸುವವರು ಸ್ವಚ್ಛತೆಗೆ ಆದ್ಯತೆ ನೀಡಿ, ಭವನಕ್ಕೆ ಆಗಮಿಸುವ ವೀಕ್ಷಕರಿಗೂ ಸ್ವಚ್ಛತೆಗೆ ಆದ್ಯತೆ ನೀಡುವಂತೆ ಜಾಗೃತಿ ಮೂಡಿಸಿ, ಭವನದ ಹೊರ ಆವರಣ, ಶೌಚಾಲಯಗಳ ಸ್ವಚ್ಛತೆಗೆ ಆದ್ಯತೆ ನೀಡಿ ಎಂದರು. ಡಾ. ಬಿ.ಆರ್. ಅಂಬೇಡ್ಕರ್ ಭವನದ ನಿರ್ವಹಣೆ 1 ಕೋಟಿಗೂ ಹೆಚ್ಚಿನ ಅನುದಾನ ನೀಡಲಾಗಿದ್ದು, ಮೊದಲನೇಯ ಹಂತದಲ್ಲಿ 25 ಲಕ್ಷ ಬಿಡುಗಡೆ ಮಾಡಲಾಗಿದೆ ಮೊದಲ ಹಂತದಲ್ಲಿ, ಡಾ.ಬಿ.ಆರ್. ಅಂಬೇಡ್ಕರ್ ಭವನಕ್ಕೆ ಕುರ್ಚಿಗಳು, ಟೇಬಲ್ ಗಳು, ಫ್ಯಾನ್ ಗಳನ್ನು ಹಾಗೂ ಮಿನಿ ಹಾಲ್, ಜನರೇಟರ್, ಪೆಯಿಂಟಿಂಗ್, ವಾಟರ್ ಲೀಕೇಜ್ ದುರಸ್ತಿ, ಸಣ್ಣ ಪುಟ್ಟ ಕೆಲಸಗಳು ಅವಶ್ಯಕವಾಗಿದ್ದು ಇದನ್ನು ಅನುದಾನದ ಹಣದಲ್ಲಿ ಸರಿಪಡಿಸಲಾಗುವುದು ಎಂದರು. ಅಧಿಕಾರಿಗಳು ಸರಿಯಾದ ಯೋಜನೆ ರೂಪಿಸಿ ಸಮಿತಿಗೆ ತಿಳಿಸಿದ




ನಂತರ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು. ವಾರದೊಳಗಾಗಿ ಯೋಜನೆ ಸಿದ್ದ ಪಡಿಸಿ ಎಂದರು.

ಮುಂದಿನ ಅನುದಾನದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಭವನಕ್ಕೆ ಸೋಲಾರ್ ಅಳವಡಿಸುವ ಚಿಂತನೆಯಲ್ಲಿ ಇರುವುದಾಗಿ ಸಭೆಗೆ ತಿಳಿಸಿದರು. ಸಭೆಯಲ್ಲಿ ಉಪವಿಭಾಗಾಧಿಕಾರಿ ಶಿವಮೂರ್ತಿ, ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಧನುಷ್, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಶ್ರೀನಿವಾಸ್, ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿ ಕಾವ್ಯಶ್ರೀ, ನಿರ್ಮಿತಿ ಕೇಂದ್ರದ ಜಯಪ್ರಕಾಶ್, ಡಾ.ಬಾಬು ಜಗಜೀವನರಾಂ ಸಂಘಟನೆಯ ಜಿಲ್ಲಾ ಅಧ್ಯಕ್ಷ ಎನ್.ಆರ್. ಚಂದ್ರಶೇಖರ್ ಮುಖಂಡರುಗಳಾದ ಗುರು ಪ್ರಸಾದ್, ವೆಂಕಟಗಿರಿಯಯ್ಯ, ಮಹೇಶ್ ಕೃಷ್ಣ, ಎನ್.ಬಿ. ರಾಜು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



**ಬಿ.ವೈ.ವಿಜಯೇಂದ್ರ, ಅಭಿಮಾನಿಗಳ ಸಂಘದ ವತಿಯಿಂದ ನಗರದ ರೈಲು ನಿಲ್ದಾಣದ ಸಮೀಪವಿರುವ ಶ್ರೀ ವೀರಾಂಜನೇಯಸ್ವಾಮಿ ದೇವಾಲಯದ ಆವರಣದಲ್ಲಿ ನಡೆದ ನಂದಗೋಕುಲ ಗೋಶಾಲೆ, ಮೇಲುಕೋಟೆಯಲ್ಲಿರುವ ಗೋವುಗಳಿಗೆ ಮೇವು ವಿತರಿಸಲಾಯಿತು. ಸಂಘದ ಜಿಲ್ಲಾಧ್ಯಕ್ಷ ಕೃಷ್ಣ ಎನ್.ಗೌಡ, ಶಿವಕುಮಾರ್ ಆರಾಧ್ಯ, ಸಚಿನ್, ಸಿದ್ದರಾಜುಗೌಡ, ಚಂದ್ರು, ಕೆಂಪಬೋರಯ್ಯ, ವಿವೇಕ್, ವಸಂತ್ಕುಮಾರ್, ನಾರಾಯಣಸ್ವಾಮಿ, ಗಂಗಾನಾಥ್ ಪ್ರಭು, ನಿತ್ಯಾನಂದ ಭಾಗವಹಿಸಿದ್ದರು.**

# ಅಗ್ನಿಪತ್ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಭಾರತೀಯ ವಾಯುಪಡೆಯ ಅಗ್ನಿಪತ್ ಯೋಜನೆಯಡಿ ಅಗ್ನಿವೀರ್ವಾಯು ಪ್ರವೇಶ 02/2026ರ ಆಯ್ಕೆ ಪರೀಕ್ಷೆಗಾಗಿ ಅವಿವಾಹಿತ ಭಾರತೀಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ವೆಬ್ ಪೋರ್ಟಲ್ https://agnipathvayu.cdac.in ನಲ್ಲಿ ಜುಲೈ 11 ರಿಂದ ಜುಲೈ 31 ರೊಳಗೆ ಸಲ್ಲಿಸಬಹುದು. ಸೆಪ್ಟೆಂಬರ್ 25 ರಿಂದ ಆನ್ ಲೈನ್ ಪರೀಕ್ಷೆ ನಡೆಯಲಿದೆ. ನೋಂದಣಿ ಮತ್ತು ಪರೀಕ್ಷಾ ಶುಲ್ಕ 550 ರೂ ಗಳು. ಶಿಕ್ಷಣ ಅರ್ಹತೆ, ಪ್ರವೇಶ ಮಟ್ಟದ ವಿದ್ಯಾರ್ಹತೆ, ವೈದ್ಯಕೀಯ ಮಾನದಂಡಗಳು, ನಿಯಮಗಳು ಮತ್ತು ಷರತ್ತುಗಳು, ಆನ್ ಲೈನ್ ಅರ್ಜಿಗಳನ್ನು ಭರ್ತಿ ಮಾಡುವ ವಿವರಗಳು ಮತ್ತು ಅಗ್ನಿವೀರ್ವಾಯು ಪ್ರವೇಶ 02/2026 ಕ್ಕೆ ನೋಂದಣಿಗಾಗಿ ವಿವರವಾದ ಮಾಹಿತಿಗಾಗಿ https://agnipathvayu.cdac.in ಅನ್ನು ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿ ಎಂ. ಪ್ರಸಾದ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಉಸ್ತುವಾರಿ ಸಚಿವರಿಂದ ಅರುಣ್ ಯೋಗಿರಾಜ್‌ಗೆ ಸನ್ಮಾನ

**ಚಾಮರಾಜನಗರ:** ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ, ಶ್ರೀ ಭಗೀರಥ ಮಹರ್ಷಿ ಹಾಗೂ ಶ್ರೀ ಕನಕದಾಸರ ಪುತ್ಥಳಿಗಳನ್ನು ಅಯೋಧ್ಯೆಯ ಶ್ರೀರಾಮಲಲ್ಲಾ ಶಿಲ್ಪದ ನಿರ್ಮಾತೃ ಮೈಸೂರಿನ ಹೆಮ್ಮೆಯ ಶಿಲ್ಪಿ ಅರುಣ್ ಯೋಗಿರಾಜ್ ಅವರು ನಿರ್ಮಿಸಲಿದ್ದು ಇವರನ್ನು ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಸನ್ಮಾನಿಸಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ಶಿಲ್ಪಿ ಅರುಣ್ ಯೋಗಿರಾಜ್ ಅವರಿಗೆ ಶಾಲು ಹೊದಿಸಿ, ಫಲ ತಾಂಬೂಲ ನೀಡಿ ಸನ್ಮಾನಿಸುವ ಮೂಲಕ ಶ್ರೀ ಮಹರ್ಷಿ ವಾಲ್ಮೀಕಿ, ಶ್ರೀ ಭಗೀರಥ ಮಹರ್ಷಿ ಹಾಗೂ ಶ್ರೀ ಕನಕದಾಸರ ಪುತ್ಥಳಿಗಳ ನಿರ್ಮಾಣಕ್ಕೆ ಸಾಂಕೇತಿಕವಾಗಿ ಚಾಲನೆ ನೀಡಲಾಯಿತು. ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ನಂಜುಂಡಯ್ಯ, ಇನ್ನಿತರ ಅದಿಕಾರಿಗಳು ಈ ಸಂದರ್ಭದಲ್ಲಿ ಇದ್ದರು. ಜಿಲ್ಲಾಡಳಿತ ಭವನದ ಆವರಣದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ, ಶ್ರೀ ಭಗೀರಥ ಮಹರ್ಷಿ ಹಾಗೂ ಶ್ರೀ ಕನಕದಾಸರ ಪುತ್ಥಳಿಗಳ ನಿರ್ಮಾಣಕ್ಕೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಗುದ್ದಲಿ ಪೂಜೆ ನೆರವೇರಿಸಿದ್ದರು.



## ಇಂಟರ್‌ಶಿಪ್ ಅವಕಾಶ

**ರಾಮನಗರ:** ಕರ್ನಾಟಕ ಮಾಧ್ಯಮ ಅಕಾಡೆಮಿಯು ಮಹಿಳಾ ಆಯವ್ಯಯ ಹಾಗೂ ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆಗಳಡಿ ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಸ್ನಾತಕೋತ್ತರ ಪದವೀಧರರಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್‌ಶಿಪ್ ಅವಕಾಶ ಕಲ್ಪಿಸಿದೆ. ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದವರಿಗೆ ಆದ್ಯತೆ ನೀಡಲಾಗುವುದು. ಬರವಣಿಗೆಯಲ್ಲಿ ಪರಿಣತಿ ಹೊಂದಿರುವ, ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. 2022-23 ಹಾಗೂ 2023-24 ನೇ ಶೈಕ್ಷಣಿಕ ವರ್ಷದಲ್ಲಿ ಯಾವುದೇ ವಿಷಯದಲ್ಲಿ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಪಡೆದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಪ್ರವೇಶ ಪರೀಕ್ಷೆಯ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು ಎಂದು ಅಕಾಡೆಮಿ ಅಧ್ಯಕ್ಷೆ ಶ್ರೀಮತಿ ಆಯೇಶಾ ಖಾನಂ ತಿಳಿಸಿದ್ದಾರೆ. ಒಟ್ಟು 24 ಅಭ್ಯರ್ಥಿಗಳಿಗೆ ಇಂಟರ್ನ್‌ಶಿಪ್ ಅವಕಾಶ ಒದಗಿಸಲಾಗುವುದು. ಅದರ ವಿವರ ಹೀಗಿದೆ: ಮಹಿಳಾ ಆಯವ್ಯಯದಡಿ 10 ಮಹಿಳೆಯರು, ಪರಿಶಿ?ಟ ಜಾತಿ ಉಪಯೋಜನೆಯಡಿ 10 ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು ಹಾಗೂ ಪರಿಶಿಷ್ಟ ಪಂಗಡ ಉಪ ಯೋಜನೆಯಡಿ 4 ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಇಂಟರ್ನ್‌ಶಿಪ್ಗೆ ಅವಕಾಶ ಕಲ್ಪಿಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಎರಡು ತಂಡಗಳಲ್ಲಿ ಎರಡು ತಿಂಗಳ ಇಂಟರ್‌ಶಿಪ್ ಅವಕಾಶ ಕಲ್ಪಿಸಲಾಗುವುದು. ಇಂಟರ್ನ್‌ಶಿಪ್ಗೆ ಸಂಸ್ಥೆ ಹಾಗೂ ಸ್ಥಳವನ್ನು ಅಕಾಡೆಮಿಯೇ ನಿಗದಿ ಪಡಿಸುತ್ತದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಅಕಾಡೆಮಿ ವತಿಯಿಂದ ಮಾಸಿಕ 20,000/- ರೂ. ಸ್ಟೈಪೆಂಡ್ ನೀಡಲಾಗುವುದು. ಅಭ್ಯರ್ಥಿಗಳು ತಮ್ಮ ಸ್ವವಿವರ ದೊಂದಿಗೆ ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಪೂರಕ ದಾಖಲೆಗಳೊಂದಿಗೆ ಗೂಗಲ್ ಫಾರ್ಮ್ https://forms.gle/UgNqDcFs1v6akyAD9 ರಲ್ಲಿ ಅರ್ಜಿ ಸಲ್ಲಿಸುವುದು. ಅಭ್ಯರ್ಥಿಗಳ ಆಯ್ಕೆಯ ಅಂತಿಮ ತೀರ್ಮಾನ ಅಕಾಡೆಮಿಯ ಸಮಿತಿಯದ್ದೇ ಆಗಿರುತ್ತದೆ. ಅರ್ಜಿ ಸಲ್ಲಿಸಲು 2025 ರ ಜು. 25 ಕೊನೆಯ ದಿನವಾಗಿದೆ. ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ.

## ಮದ್ಯ ಮಾರಾಟ ನಿಷೇಧ

**ರಾಮನಗರ:** ರಾಮನಗರ ಟೌನಿನ ಶ್ರೀ ಬನ್ನಿಮಹಾಂಕಾಳಿ ಅಮ್ಮನವರ ಕರಗ ಮತ್ತು ಶ್ರೀ ಚಾಮುಂಡೇಶ್ವರಿ ಮತ್ತು ಇತರೆ 9 ಕರಗಳಗಳ ಮೆರವಣಿಗೆಗಳು, ಅಗ್ನಿಕೊಂಡ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳ ಜಾತ್ರಾ, ಜಾತ್ರೋತ್ಸವ ಕಾರ್ಯಕ್ರಮಗಳು ನಡೆಯುತ್ತಿವೆ. ಈ ಕಾರ್ಯಕ್ರಮಗಳು ಶಾಂತ ರೀತಿಯಲ್ಲಿ ನಡೆಯಲು ಹಾಗೂ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಸಲುವಾಗಿ ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯ ಮಾರಾಟ) ನಿಯಮಗಳು, 1968ರ ನಿಯಮ 3 ರನ್ವಯ ರಾಮನಗರ ನಗರಸಭಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ರೀತಿಯ ಮದ್ಯ ಸನ್ನದುಗಳನ್ನು ಜು. 8 ರಂದು ಬೆಳಿಗ್ಗೆ 6 ಗಂಟೆಯಿಂದ ಜು. 9ರ ಮಧ್ಯಾಹ್ನ 12 ಗಂಟೆವರೆಗೆ ಮತ್ತು ಜು. 15ರ ಬೆಳಿಗ್ಗೆ 6 ಗಂಟೆಯಿಂದ ಜು. 16 ರ ಮಧ್ಯರಾತ್ರಿ 12 ಗಂಟೆವರೆಗೆ ಮುಚ್ಚುವಂತೆ ಹಾಗೂ ಮದ್ಯ ಮಾರಾಟವನ್ನು ನಿಷೇಧಿಸಿ ಜಿಲ್ಲಾಧಿಕಾರಿ ಮತ್ತು ಜಿಲ್ಲಾದಂಡಾಧಿಕಾರಿಗಳಾದ ಯಶವಂತ್ ವಿ. ಗುರುಕರ್ ಅವರು ಆದೇಶಿಸಿದ್ದಾರೆ.

## ನೀರು ಸಬರಾಜಿನಲ್ಲಿ ವ್ಯತ್ಯಯ

**ರಾಮನಗರ:** ಚನ್ನಪಟ್ಟಣ ನಗರಕ್ಕೆ ತೊರೆಕಾಡನಹಳ್ಳಿಯಿಂದ ಕಾವೇರಿ ನೀರು ಕುಡಿಯುವುದಕ್ಕಾಗಿ ಸರಬರಾಜಾಗುತ್ತಿದ್ದು, ಕನಕಪುರ ತಾಲ್ಲೂಕಿನ ಗುರುವಿನಪುರ ಗ್ರಾಮದಲ್ಲಿರುವ ಮಧ್ಯಂತರ ಪಂಪಿನ ಮನೆಯಲ್ಲಿ 400 ಎಚ್.ಪಿ ಸಾಮರ್ಥ್ಯದ ಸೆಂಟರಿಫ್ಯೂಗಲ್ ಪಂಪ್‌ಸೆಟ್ ದುರಸ್ಥಿಯಲ್ಲಿರುವುದರಿಂದ ಈ ಪಂಪಿನ ದುರಸ್ಥಿ ಕಾಮಗಾರಿಯನ್ನು ಜು. 8 ಮತ್ತು 9ರಂದು ಕೈಗೊಳ್ಳಲಾಗುವುದು. ಆದ್ದರಿಂದ ಚನ್ನಪಟ್ಟಣ ನಗರಕ್ಕೆ ಜು.8 ಮತ್ತು 9ರಂದು 2 ದಿನಗಳು ಕಾವೇರಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗುತ್ತದೆ. ಸಾರ್ವಜನಿಕರು ಚನ್ನಪಟ್ಟಣ ನಗರಸಭೆ ಮತ್ತು ಜಲಮಂಡಳಿರವರೊಂದಿಗೆ ಸಹಕರಿಸುವಂತೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಚನ್ನಪಟ್ಟಣ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ರಾಮನಗರ:** ಪ್ರಧಾನ ಮಂತ್ರಿ ಆವಾಸ ಯೋಜನೆ 2.0 ಯೋಜನೆ ಅಡಿಯಲ್ಲಿ 4 ಯೋಜನೆಯನ್ನು ಜಾರಿಗೊಳಿಸಿದ್ದು, ಅರ್ಹ ಹಾಗೂ ಆಸಕ್ತಿಯುಳ್ಳ ಫಲಾನುಭವಿಗಳು ಈ ಯೋಜನೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು ಫಲಾನುಭವಿ ನೇತೃತ್ವದ ನಿರ್ಮಾಣ ವಸತಿ ಯೋಜನೆ (ಬಿಎಲ್‌ಸಿ), ಪಾಲುದಾರಿಕೆಯಲ್ಲಿ ಕೈಗೆಟುಕುವ ಬಹುಮಹಡಿ ವಸತಿ ಯೋಜನೆ (ಎಎಚ್‌ಪಿ), ಕೈಗೆಟುಕುವ ಬಾಡಿಗೆ ವಸತಿ ಯೋಜನೆ (ಎಆರ್‌ಎಚ್), ಬಡ್ಡ ಸಹಾಯಧನ (ಸಬ್ಸಿಡಿ) ವಸತಿ ಯೋಜನೆ (ಐಎಸ್‌ಎಸ್)ಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿದಾರರು ಆನ್‌ಲೈನ್ ಸೇವಾ ಕೇಂದ್ರದಲ್ಲಿ ಅಥವಾ ತಾವೇ ಖುದ್ದಾಗಿ pmay.urban.gov.in ವೆಬ್‌ಸೈಟ್‌ನಲ್ಲಿ ಅರ್ಜಿ ಹಾಗೂ ದಾಖಲೆಗಳನ್ನು ಜು. 21ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಬಿಡದಿ ಪುರಸಭೆ ಕಚೇರಿಯ ವಸತಿ ವಿಭಾಗವನ್ನು ಸಂಪರ್ಕಿಸಬಹುದು.

## ಅಧ್ಯಯನ ಶಿಬಿರಕ್ಕೆ ಅರ್ಜಿ ಆಹ್ವಾನ

**ರಾಮನಗರ:** ಕರ್ನಾಟಕ ಸಾಹಿತ್ಯ ಅಕಾಡೆಮಿಯು ಪತ್ರಕರ್ತರಿಗೆ ಕನ್ನಡ ಸಾಹಿತ್ಯ ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬರವನ್ನು ಆಗಸ್ಟ್ 3ನೇ ವಾರ ಅಥವಾ ಕೊನೆಯ ವಾರದಲ್ಲಿ ನಡೆಸಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು 20 ರಿಂದ 40 ವರ್ಷ ವಯಸ್ಸುಳ್ಳ ಈಗಾಗಲೇ ಪತ್ರಿಕೆಯಲ್ಲಿ ಕೆಲಸ ಮಾಡುತ್ತಿರುವವರು ಪತ್ರಿಕೋದ್ಯಮ ಪದವಿ ಪಡೆದವರು ಹಾಗೂ ಆಸಕ್ತಿಯುಳ್ಳವರು ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಯನ್ನು ಜು. 25ರೊಳಗೆ ಸಲ್ಲಿಸಬೇಕು. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ https://sahithyaacademy.karnataka.gov.in ಮೂಲಕ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳುವಂತೆ ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರ

**ರಾಜ್ಯ ಅಭಿಯಾನ ನಿರ್ದೇಶಕರು,**

**ಸ್ವಚ್ಛ ಭಾರತ ಅಭಿಯಾನ (ನಗರ) ನಗರಾಭಿವೃದ್ಧಿ ಇಲಾಖೆ**

9ನೇ ಮಹಡಿ, ವಿಶ್ವೇಶ್ವರಯ್ಯ ಟವರ್, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು-560001.
ದೂರವಾಣಿ: 080- 22867172 / 22866302, ಫ್ಯಾಕ್ಸ್: 080-22863576 /22861665
ಇ-ಮೇಲ್: smdsbmkar@gmail.com

ಸಂಖ್ಯೆ: 1690456/ಪೌನಿ/ಘವನಿ/ಎಸ್.ಬಿ.ಎಂ2.0/19/2025 ದಿನಾಂಕ:07-07-2025

**ಟೆಂಡರ್ ಪ್ರಕಟಣೆ**

ರಾಜ್ಯ ಅಭಿಯಾನ ನಿರ್ದೇಶನಾಲಯದ ವತಿಯಿಂದ ಸ್ವಚ್ಛ ಭಾರತ್ ಮಿಷನ್(ನಗರ) ಅಡಿಯಲ್ಲಿ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯಕ್ಷಮತೆಯನ್ನು ಸುಧಾರಿಸಲು ಹಾಗೂ ಉತ್ತಮ ಶ್ರೇಯಾಂಕಗಳನ್ನು ಹೊಂದಲು ರಾಜ್ಯ ಮಟ್ಟದಲಿ Project Management Unit (PMU) ನೇಮಿಸಲು ಇಂಡೆಂಟ್ ಸಂಖ್ಯೆ DMA/2025-26/SE5214 ನ್ನು ಕೆಪಿಪಿ ಪೋರ್ಟಲ್ ಮೂಲಕ ಸಾರ್ವಜನಿಕ ಖರೀದಿಯಲ್ಲಿನ ಕರ್ನಾಟಕ ಪಾರದರ್ಶಕ ಕಾಯ್ದೆ 1999 ಮತ್ತು ನಿಯಮ 2000ರ ಪ್ರಕಾರ ಟೆಂಡರ್ ಆಹ್ವಾನಿಸಲಾಗಿದ್ದು, ಕೆಪಿಪಿ ಪೋರ್ಟಲ್‌ನಲ್ಲಿ ನೊಂದಾಯಿತ ಫರ್ಮ್/ಕಂಪನಿ/ಏಜೆನ್ಸಿ/ವ್ಯಕ್ತಿಗಳಿಂದ Quality and Cost Based Selection (QCBS) ಎರಡು ಲಕೋಟೆ ಟೆಂಡರ್‌ನ್ನು (ಕರ್ನಾಟಕದ ಕೆಪಿಪಿ ಪೋರ್ಟಲ್ ಮೂಲಕ ಮಾತ್ರ) ಆಹ್ವಾನಿಸಲಾಗಿದೆ. ಮುಂಗಡ ಠೇವಣಿ ಮೊತ್ತ, ಟೆಂಡರ್ ಪ್ರೊಸೆಸ್ಸಿಂಗ್ ಫೀ ಕೆಪಿಪಿಪಿ ನಿಯಮಾನುಸಾರ. ಟೆಂಡರ್ ಡಾಕ್ಯುಮೆಂಟ್‌ಗಳನ್ನು ವೆಬ್‌ಸೈಟ್ https://kppp.karnataka.gov.in ಮೂಲಕ ದಿನಾಂಕ:07.07.2025 ರಿಂದ 06.08.2025ರ ವರೆಗೆ ಪಡೆಯಬಹುದು (available for download). ಪ್ರೀ-ಬಿಡ್ ನಡೆಯುವ ದಿನಾಂಕ: 21.07.2025 ಬೆಳ್ಳಿಗೆ 11.30 ಗಂಟೆಗೆ, ತಾಂತ್ರಿಕ ಬಿಡ್ ತೆರೆಯುವ ದಿನಾಂಕ:08.08.2025 ಬೆಳ್ಳಿಗೆ 11.30 ಗಂಟೆಗೆ, ತಾಂತ್ರಿಕ ಬಿಡ್ ಅನುಮೋದನೆಗೊಂಡ ನಂತರ ಆರ್ಥಿಕ ಬಿಡ್‌ನ್ನು ತೆರೆಯಲಾಗುವುದು. ಮೇಲಿನ ಟೆಂಡರ್ ನಿಯಮ ಮತ್ತು ವೇಳಾ ಪಟ್ಟಿಯಲ್ಲಿ ಯಾವುದೇ ಬದಲಾವಣೆಯನ್ನು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಮಾತ್ರ ತಿಳಿಸಲಾಗುವುದು ಮತ್ತು ಯಾವುದೇ ವಾರ್ತಾ/ಸುದ್ದಿ ಪತ್ರಿಕೆಯಲ್ಲಿ ಪ್ರಕಟಿಸಲಾಗುವುದಿಲ್ಲ.

ಸಹಿ/-
ಅಧೀಕ್ಷಕ ಅಭಿಯಂತರರು,
ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.

DIPR/CP/1676/NR/2025-26

## ಪ್ರಥಮ ಏಕಾದಶಿ ಮಾರಿಯಮ್ಮಗೆ ವಿಶೇಷ ಅಲಂಕಾರ



**ಮಾಲೂರು:** ಆಷಾಢ ಏಕಾದಶಿ, ಪದ್ಮ ಏಕಾದಶಿ ಮತ್ತು ಹರಿಶಯನಿ ಏಕಾದಶಿ ಎಂದೂ ಕರೆಯಲ್ಪಡುವ ದೇವಶಯನಿ ಏಕಾದಶಿಯನ್ನು ಭಾನುವಾರದಂದು ಆಚರಿಸಲಾಯಿತು. ಹಿಂದೂ ಪಂಚಾಂಗದ ಪ್ರಕಾರ, ಪ್ರತಿ ವರ್ಷ ಆಷಾಢ ಮಾಸದ ಶುಕ್ಲ ಪಕ್ಷದ ಏಕಾದಶಿ ತಿಥಿಯಂದು ದೇವಶಯನಿ ಏಕಾದಶಿಯನ್ನು ಆಚರಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ತಾಲ್ಲೂಕಿನ ತೊರ್ನಹಳ್ಳಿ ಸಮೀಪದ ಉಮ್ಮಲು ಗ್ರಾಮದಲ್ಲಿನ ಶ್ರೀ ಮಾರಿಯಮ್ಮ ಅಮ್ಮನವರಿಗೆ ವಿಶೇಷ ಹೂವಿನ ಅಲಂಕಾರ ಮಾಡಲಾಗಿತ್ತು. ಅಮ್ಮನವರಿಗೆ ಏಕಾದಶಿ ಹಿನ್ನೆಲೆಯಲ್ಲಿ ವಿಶೇಷ ಪೂಜೆ, ಅಭಿಷೇಕ ಹಾಗೂ ಪ್ರಸಾದ ವಿನಿಯೋಗ ನಡೆಯಿತು. ಈ ಸಂದರ್ಭದಲ್ಲಿ ಉಮ್ಮಲು ಸೇರಿದಂತೆ ಸುತ್ತಮುತ್ತಲಿನ ಗ್ರಾಮಸ್ಥರು ಇದ್ದರು.

## ಬೀದಿನಾಟಕ ಮತ್ತು ಜಾನಪದ ಸಂಗೀತ ಕಲಾತಂಡಗಳಿಂದ ಅರ್ಜಿ

**ಕೋಲಾರ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸರ್ಕಾರದ ಯೋಜನೆಗಳನ್ನು ಪ್ರಚುರ ಪಡಿಸುವ ಉದ್ದೇಶಕ್ಕಾಗಿ ಬೀದಿನಾಟಕ ಮತ್ತು ಜಾನಪದ ಸಂಗೀತ ಕಲಾತಂಡಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಅಧೀನ ಕಚೇರಿಗಳ ಮೂಲಕ 2025–26ನೇ ಸಾಲಿನಲ್ಲಿ ಬೀದಿನಾಟಕ ಮತ್ತು ಜಾನಪದ ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲು ಅನುಕೂಲವಾಗುವಂತೆ ಪ್ರತಿ ಜಿಲ್ಲೆಯಿಂದ 3 ಬೀದಿನಾಟಕ ಹಾಗೂ 3 ಜಾನಪದ ಸಂಗೀತ ಕಲಾತಂಡಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು. ಪ್ರತಿ ಬೀದಿನಾಟಕ ತಂಡದಲ್ಲಿ 8 ಜನ ಕಲಾವಿದರಿದ್ದು, ಅದರಲ್ಲಿ ಕಡ್ಡಾಯವಾಗಿ ಇಬ್ಬರು ಮಹಿಳೆಯರು ಹಾಗೂ ಒಬ್ಬರು ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಠ ವರ್ಗಕ್ಕೆ ಸೇರಿದ ಕಲಾವಿದರನನ್ನು ಒಳಗೊಂಡಿರಬೇಕು. ಪ್ರತಿ ಜಾನಪದ ಸಂಗೀತ ಕಲಾ ತಂಡದಲ್ಲಿ 3 ಜನ ಕಲಾವಿದರಿದ್ದು, ಅದರಲ್ಲಿ ಕಡ್ಡಾಯವಾಗಿ ಒಬ್ಬರು ಮಹಿಳೆಯರು ಹಾಗೂ ಒಬ್ಬರು ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಠ ವರ್ಗಕ್ಕೆ ಸೇರಿದ ಕಲಾವಿದರು ಇರುವುದು ಖಡ್ಡಾಯವಾಗಿದೆ. ಕಲಾ ತಂಡಗಳ ಆಯ್ಕೆ ಮಾಡಲು ಜಿಲ್ಲಾ ಮಟ್ಟದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಮಾಜ ಕಲ್ಯಾಣ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಕೃಷಿ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳನ್ನೊಳಗೊಂಡ ಸಮಿತಿ ರಚಿಸಲಾಗಿದ್ದು, 2025ರ ಆಗಸ್ಟ್ 12 ರಂದು ಬೆಳಿಗ್ಗೆ 11 ಗಂಟೆಗೆ ರಾಜ್ಯಾದ್ಯಂತ 31 ಜಿಲ್ಲೆಗಳಲ್ಲಿ ಏಕಕಾಲಕ್ಕೆ ಆಯ್ಕೆ ಪ್ರಕ್ರಿಯೆ ನಡೆಸಲಾಗುತ್ತದೆ. ಅದೇ ಆಗಸ್ಟ್ 12 ರಂದು, ನಿಗದಿತ ಸಮಯಕ್ಕೆ ಕೋಲಾರ ಜಿಲ್ಲೆಯ ಬೀದಿ ನಾಟಕ ಮತ್ತು ಜಾನಪದ ಸಂಗೀತ ಕಲಾ ತಂಡಗಳ ಆಯ್ಕೆ ಪ್ರಕ್ರಿಯೆಯು ಕೋಲಾರ ವಾರ್ತಾ ಇಲಾಖೆಯ ವಾರ್ತಾಭವನದಲ್ಲಿ ಜರುಗಲಿದೆ. ಆಸಕ್ತ ಅರ್ಹ ಬೀದಿ ನಾಟಕ ತಂಡಗಳು ಮತ್ತು ಜಾನಪದ ಸಂಗೀತ ಕಲಾ ತಂಡಗಳು ಆಗಸ್ಟ್ 01, 2025ರ ಸಂಜೆ 5 ಗಂಟೆಯೊಳಗೆ ಅರ್ಜಿ ಸಲ್ಲಿಸಬಹುದು. ನಿಗದಿತ ಅರ್ಜಿ ನಮೂನೆಗಳನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಛೇರಿ ವೇಳೆಯಲ್ಲಿ ಪಡೆಯಬಹುದೆಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಮಂಚೇನಹಳ್ಳಿತೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಭೇಟಿ

**ಚಿಕ್ಕಬಳ್ಳಾಪುರ:** ಮಂಚೇನಹಳ್ಳಿ ತಾಲ್ಲೂಕಿನ ಮಂಚೇನಹಳ್ಳಿ ಅಂಗನವಾಡಿ ಕೇಂದ್ರಕ್ಕೆ ಸೋಮವಾರ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಭೇಟಿ ನೀಡಿ ಅಲ್ಲಿನ ಮಕ್ಕಳೊಂದಿಗೆ ಮಕ್ಕಳಂತೆ ಮಾತನಾಡಿ ಅಲ್ಲಿನ ಸೌಲಭ್ಯಗಳು ಹಾಗೂ ಕುಂದುಕೊರತೆಗಳನ್ನು ಆಲಿಸಿದರು. ಈ ವೇಳೆ ಕೇಂದ್ರದಲ್ಲಿ ನಿರ್ವಹಿಸುತ್ತಿರುವ ಎಲ್ಲಾ ಕಡತಗಳು ಹಾಗೂ ದಿನವಹಿಗಳನ್ನು ಪರಿಶೀಲನೆ ಮಾಡಿದರು.

ಈ ವೇಳೆ ಕೆಲವು ಗರ್ಭಿಣಿಯರಿಗೆ ಪೌಷ್ಟಿಕ ಆಹಾರದ ಕಿಟ್ಗಳನ್ನು ವಿತರಣೆ ಮಾಡದೇ ಇರುವುದು ಕಂಡು ಬಂದಿದ್ದು, ಈ ದಿನವೇ ಗರ್ಭಿಣಿಯರಿಗೆ ಕಿಟ್ ಗಳನ್ನು ವಿತರಿಸಬೇಕೆಂದು ಅಂಗನವಾಡಿ ಕಾರ್ಯಕರ್ತೆಗೆ ಸೂಚಿಸಿ ಮುಂದಿನ ದಿನಗಳಲ್ಲಿ ವಿಳಂಬವಾಗದಂತೆ ಕಿಟ್ ವಿತರಣೆ ಮಾಡಲು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು.ಆ ನಂತರ ಜರಬಂಡಹಳ್ಳಿ ನ್ಯಾಯ ಬೆಲೆ ಅಂಗಡಿಗೆ ಭೇಟಿ ನೀಡಿ ಈ ಕೇಂದ್ರ ನಿರ್ವಹಣೆಯ ಆನ್ ಲೈನ್ ಮಾಹಿತಿಗೂ ಭೌತಿಕ ಮಾಹಿತಿಗೂ ತಾಳೆ ಬರುತ್ತಿಲ್ಲ, ಮತೊಮ್ಮೆ ಪರಿಶೀಲಿಸಿ ಎಂದು ವಿತರಕರಿಗೆ ಸೂಚಿಸಿದರು ನಂತರ ಡಾ. ಬಿ. ಆರ್. ಅಂಬೇಡ್ಕರ್ ಮಹಿಳಾ ವಸತಿ ಶಾಲೆಗೆ ಭೇಟಿ ನೀಡಿ ವಸತಿ ಶಾಲೆಯಲ್ಲಿ ಪ್ರತಿ ತರಗತಿಯ ಮಕ್ಕಳ ಚಟುವಟಿಕೆಗಳನ್ನು ಗಮನಿಸಿದರು. ಬಯೋಮೆಟ್ರಿಕ್ ಹಾಜರಾತಿ, ವಾಸ್ತವಾಂಶದ ಹಾಜರಾತಿ ತಾಳೆ ಮಾಡಿದರಲ್ಲದೆ ಮಕ್ಕಳಿಗೆ ಚೆನ್ನಾಗಿ ಓದಿ ಎಂದು ಸಲಹೆ ನೀಡಿದರು ಜೊತೆಗೆ ಮಧ್ಯಾಹ್ನದ ಊಟವನ್ನು ಮಕ್ಕಳೊಂದಿಗೆ ಸೇವಿಸಿ ಆಹಾರದ ಗುಣಮಟ್ಟವನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಮಂಚೇನಹಳ್ಳಿ ತಾಲ್ಲೂಕು ತಹಶೀಲ್ದಾರ್ ಎನ್ ದೀಪ್ತಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಚನ್ನಪ್ಪ ಸೋಮಪ್ಪ ಗೌಡನಾಯ್ಕರ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.



# ಚಿಕ್ಕಬಳ್ಳಾಪುರ ಕಾಂಗ್ರೆಸ್ ಕಚೇರಿ ನಿರ್ಮಾಣಕ್ಕೆ ನಿವೇಶನ ನೋಂದಣಿ

**ಚಿಕ್ಕಬಳ್ಳಾಪುರ:** ದೇಶ ಮತ್ತು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನ ಬಲಿಷ್ಟವಾಗಿ ಕಟ್ಟಿ ಬೆಳೆಸಲು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಸ್ವಂತ ಕಚೇರಿಗಳ ಅನಿವಾರ್ಯ ಇದೆ ಆ ಕುರಿತು ಎಐಸಿಸಿ ಅಧ್ಯಕ್ಷ ಕೆಪಿಸಿಸಿ ಅಧ್ಯಕ್ಷರು ಜಿಲ್ಲಾ ಸಮಿತಿಗಳಿಗೆ ಸೂಚನೆ ನೀಡಿದೆ ಅದರ ಫಲವಾಗಿಯೇ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲೂ ಪಕ್ಷದ ಕಟ್ಟಡ ನಿರ್ಮಾಣಕ್ಕೆ ನಿವೇಶನ ಮುಂಜೂರು ಮಾಡಿಸಿಕೊಂಡು ಇಂದು ನಗರದ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ನೊಂದಾವಣೆ ಮಾಡಿಸಲಾಗಿದೆ ಎಂದು ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೆ ಎನ್ ಕೇಶವರೆಡ್ಡಿ ತಿಳಿಸಿದರು.ಚಿಕ್ಕಬಳ್ಳಾಪುರ ಜಿಲ್ಲಾ ಕಾಂಗ್ರೆಸ್ ಪಕ್ಷದ ಕಚೇರಿಗೆ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಇಂದು ಸಿಎ ಸೈಟೊಂದನ್ನ ರಿಜಿಸ್ಟ್ರ ಮಾಡಿಸಿದರು.

ಜಿಲ್ಲಾದಿಕಾರಿಗಳ ಕಚೇರಿ ಹಿಂಬಾಗದಲ್ಲಿರುವ ಸದಾಶಿವ ನಗರ ಲೇ ಔಟ್ ನಲ್ಲಿ ಇರುವ ಸಮಾರು 3200 ಅಡಿ ಗಾತ್ರದ ಸೈಟನ್ನ ಕ್ಯಾಬಿನೆಟ್ ಸಭೆಯಲ್ಲೆ ಮುಂಜೂರು ಮಾಡಿಸಿಕೊಂಡಿದ್ದು ಸರ್ಕಾರವೇ ನಿಗದಿಗೊಳಿಸಿದ ಶೇಕಡಾ ಐದರಷ್ಟು ಹಣ ಅಂದ್ರೆ 14 ಲಕ್ಷ 75 ಸಾವಿರ ಹಣ ಪಾವತಿಸಿ ಇಂದು ಕಾಂಗ್ರೆಸ್ ಭವನ ಟ್ರಸ್ಟ್ ಹೆಸರಿಗೆ ಇಂದು ನೊಂದಾವಣೆ ಮಾಡಿಸಿದರು.ಈ ವೇಳೆ ಕಾಂಗ್ರೆಸ್ ಭವನ ಟ್ರಸ್ಟ್ ಕಾರ್ಯದರ್ಶಿ ನಾರಾಯಣ ಹಾಗೂ ಖಜಾಂಚಿ ವಿನಯ ಕಾರ್ತಿಕ್ ಅವರೊಂದಿಗೆ ಇದ್ದರು.



ಈ ವೇಳೆ ಮಾತನಾಡಿದ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಹಾಗೂ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೆ ಎನ್ ಕೇಶವರೆಡ್ಡಿ ಜಿಲ್ಲಾದಿಕಾರಿಗಳ ಕಚೇರಿ ಹಿಂಬಾಗದ ಸಧಾಶಿವನಗರದಲ್ಲಿ ನಿವೇಶನ ಗುರ್ತಿಸಿ ಕಾಂಗ್ರೆಸ್ ಭವನ ಟ್ರಸ್ಟ್ ಹಸರಿಗೆ ನೊಂದಾಯಿಸಲಾಗಿದೆ ಅಲ್ಲಿ ನಿರ್ಮಾಣಮಾಡುವ ಕಟ್ಟಡದಲ್ಲಿ ಟೈಲರಿಂಗ್ ತರಬೇತಿ ಕಂಪ್ಯೂಟರ್ ಶಿಕ್ಷಣ ಇತ್ಯಾದಿ ಜನೋಪಯೋಗಿ ಕಾರ್ಯಗಳಿಗೂ ಬಳಸಲಾಗುವುದು ಇಲ್ಲಿ ನಿರ್ಮಾಣ ಮಾಡುವ ಕಟ್ಟಡಲ್ಲಿ ಸಭೆ ಸಮಾರಂಭಗಳು ನಡೆಸಲು ಅನುಕೂಲವಾಗಲಿದೆ ಪಕ್ಷದ ಸಂಘಟನೆಗೆ ಹೆಚ್ಚು ಅನುಕೂಲವಾಗಲಿದೆ ಎಂದರು ಇದೆ ವೇಳೆ ಪಕ್ಷದಲ್ಲಿ ಗುಂಪುಗಾರಿಕೆ ಹೆಚ್ಚುತ್ತಿದೆ ಉಸ್ತುವಾರಿ ಸಚಿವರೆ ಅದಕ್ಕೆ ಕಾರಣ ಎಂದು ನಿಮ್ಮದೆ ಪಕ್ಷದಮುಖಂಡರು ಶಿಡ್ಲಘಟ್ಟದಲ್ಲಿ ಆರೋಪಿಸಿದ್ದಾರೆಂದು ಕೇಳಿದ ಪ್ರಶ್ನೆಗೆ ಉತ್ತರಿಸಿ ಸಣ್ಣ ಪುಟ್ಟ ಸಮಸ್ಯೆಗಳು ಇದ್ದೆ ಇರುತ್ತವೆ ಉಸ್ತುವಾರಿ ಸಚಿವರು ಆ ರೀತಿ ಒಡೆದು ಆಳುವ ನೀತಿಯನ್ನ ಅನುಸರಿಸಲ್ಲ ಎಲ್ಲರೊಟ್ಟಿಗೂ ಬೆರೆತು ಕೆಲಸ ಮಾಡುತಿದ್ದಾರೆ ಯಾರನ್ನೂ ಕಡೆಗಣಿಸೊದಿಲ್ಲ ಎಂದು ಸಮಜಾಯಿಸಿ ನೀಡಿದರು.ಇನ್ನೂ ಪಕ್ಷದ ಜಿಲ್ಲಾಧ್ಯಕ್ಷ ಸ್ಥಾನವನ್ನ ಹೈಕಮಾಂಡ್ ಯಾರಿಗೆ ಕೊಟ್ಟರೂ ನಾವು ಮನಸಾ ವಾಚಾ ಕೆಲಸ ಮಾಡುತ್ತೇವೆ ಎಂದು ಅದ್ಯಕ್ಷರ ಆಯ್ಕೆಗೆ ಗೊಡೆ ಮೇಲೆ ದೀಪ ಇಟ್ಟಂತೆ ನುಡಿದರು.

ಈ ವೇಳೆ ಚಿಕ್ಕಬಳ್ಳಾಪುರ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಆರ್ ರಕ್ಷಿತ್,ಮಂಡಿಕಲ್ ಮಂಚೇನಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗಭೂಷಣ್,ಅಡ್ಡಗಲ್ ಶ್ರೀದರ್, ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಯುವ ಕಾಂಗ್ರೆಸ್ ಅಧ್ಯಕ್ಷ ನಾಗೇಶ್ ,ಚಿಕ್ಕಬಳ್ಳಾಪುರ

ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯ ಹಮೀಮ್, ಚಿಕ್ಕಬಳ್ಳಾಪುರ ಅಲ್ಪಸಂಖ್ಯಾತ ಬ್ಲಾಕ್ ಅಧ್ಯಕ್ಷ ಇಬ್ರಾಹಿಂ ಖಲೀಲ್,ಯುವ ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ವಿನಯ್ ಬಂಗಾರಿ,ಕಾಂಗ್ರೆಸ್ ಪಕ್ಷದ ಯುವ ಮುಖಂಡರಾದ ಸುಶಾಂತ್ ,ಯಲುವಳ್ಳಿ ಜನಾರ್ದನ್,ಉಮೇಶ್ ಜಿ, ಕೋನಪಲ್ಲಿ ಕೋದಂಡ,ಮಂಗಳ ಪ್ರಕಾಶ್ ಇತರರು ಹಾಜರಿದ್ದರು.

### ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ

# ದ್ವಿಭಾಷಾ ನೀತಿ ಜಾರಿಗೆ ಒತ್ತಾಯ

**ಕೋಲಾರ:** ರಾಜ್ಯದಲ್ಲಿ ಶಿಕ್ಷಣ ವ್ಯವಸ್ಥೆಯಲ್ಲಿ ದ್ವಿಭಾಷಾ ನೀತಿಯನ್ನು ಜಾರಿಗೆ ತರಬೇಕು ಎಂದು ಒತ್ತಾಯಿಸಿ, ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ನಗರ ಹೊರವಲಯದ ಜಿಲ್ಲಾಡಳಿತ ಭವನದ ಎದುರು ಸೋಮವಾರ ಪ್ರತಿಭಟನೆ ನಡೆಸಿದರು.

ವೇದಿಕೆಯ ಜಿಲ್ಲಾಧ್ಯಕ್ಷ ಮೇಡಿಹಾಳ ರಾಘವೇಂದ್ರ, ಮಾತನಾಡಿ, ಶೈಕ್ಷಣಿಕ ಪಠ್ಯಕ್ರಮದಲ್ಲಿ ಸುಧಾರಣೆ ತರಲು ಕನ್ನಡವನ್ನು ಪ್ರಥಮ ಭಾಷೆ, ಇಂಗ್ಲಿಷನ್ನು ದ್ವಿತಿಯ ಭಾಷೆಯಾಗಿ ಹಾಗೂ ಹಿಂದಿಯನ್ನು ತೃತೀಯ ಭಾಷೆ ಕಲಿಸಲಾಗುತ್ತಿದೆ. ಹಿಂದಿಯನ್ನು ಕಡ್ಡಯವಾಗಿ ಕಲಿಸಬೇಕು ಎಂಬ ಒತ್ತಡ ಹೇರಬಾರದು ಎಂದು ಮನವಿ ಮಾಡಿದರು.

2024ರ ಪರೀಕ್ಷೆಯಲ್ಲಿ 90,794 ವಿದ್ಯಾರ್ಥಿಗಳು ಹಿಂದಿಯಲ್ಲಿ ಅನುತ್ತೀರ್ಣರಾಗಿದ್ದಾರೆ, ಇದು ಒಟ್ಟು ವಿದ್ಯಾರ್ಥಿಗಳಲ್ಲಿ ಸುಮಾರು ಶೇ.21ರಷ್ಟಿದೆ. 2025ರಲ್ಲಿ ಈ ಸಂಖ್ಯೆ 1.2 ಲಕ್ಷಕ್ಕಿಂತ ಹೆಚ್ಚು ಮಕ್ಕಳು ಅನುತ್ತೀರ್ಣರಾಗಿದ್ದಾರೆ. ಇದು ಅತ್ಯಂತ ಆಘಾತಕಾರಿ ಬೆಳವಣಿಗೆಯಾಗಿದೆ. ಇದು ಹಿಂದಿಯ ಕಡ್ಡಾಯ ಶಿಕ್ಷಣದಿಂದ ವಿದ್ಯಾರ್ಥಿಗಳಿಗೆ ಉಂಟಾಗುತ್ತಿರುವ ಶೈಕ್ಷಣಿಕ ಹೊರೆಯನ್ನು ಸ್ಪಷ್ಟವಾಗಿ ತೋರುತ್ತಿದೆ ಎಂದು ಬೇಸರ ವ್ಯಕ್ತಪಡಿಸಿರು.

ತ್ರಿಭಾಷಾ ಸೂತ್ರದ ಕುರಿತು ರಾಷ್ಟ್ರಕವಿ ಕುವೆಂಪು ಅವರು ಹಿಂದೆಯೇ ತೀಕ್ಷಣವಾದ ವಿರೋಧವನ್ನು ಸಾರಿದ್ದರು. ಸಾಂಸ್ಕೃತಿಕ ಮತ್ತು ಭಾಷಿಕ ಅಸ್ಮಿತೆಯಲ್ಲಿ ಈ ನೆಲದ ನುಡಿಯಾದ ಕನ್ನಡವು ಕೇಂದ್ರ ಸ್ಥಾನವನ್ನು ಹೊಂದಿದೆ. ಬದಲಾದ ಕಾಲಘಟ್ಟದಲ್ಲಿ ಇಂಗ್ಲಿಷ್ ಭಾಷೆಯು ಜಾಗತಿಕ ವ್ಯವಹಾರಗಳಿಗೆ, ಉನ್ನತ ಶಿಕ್ಷಣ ಮತ್ತು ವೃತ್ತಿ ನಿರ್ವಹಣೆಗೆ ಅಗತ್ಯವಾಗಿದ್ದು, ಇದನ್ನು ಕಲಿಯುವುದು ವಿದ್ಯಾರ್ಥಿಗಳ ಭವಿಷ್ಯಕ್ಕೆ ಪೂರಕವಾಗಿದೆ. ಆದರೆ, ಹಿಂದಿಯನ್ನು ಕಡ್ಡಾಯವಾಗಿ ಓದಿಸುವುದರಿಂದ ವಿದ್ಯಾರ್ಥಿಗಳಿಗೆ ಲಾಭವಿಲ್ಲ ಎಂದು ಹೇಳಿದರು.

ತಮಿಳುನಾಡು ಸರ್ಕಾರವು 1968ರಿಂದಲೇ ತ್ರಿಭಾಷಾ ನೀತಿಯನ್ನು ತಿರಸ್ಕರಿಸಿ ತಮಿಳು ಮತ್ತು ಇಂಗ್ಲಿಷ್ ಭಾಷೆಯನ್ನು ಒಳಗೊಂಡ ದ್ವಿಭಾಷಾ ನೀತಿಯನ್ನು ಜಾರಿಗೆ ತಂದಿದೆ. ಮಹಾರಾಷ್ಟ್ರದಲ್ಲೂ ಸಹ ದ್ವಿಭಾಷಾ ನೀತಿಯನ್ನು ಅನುಸರಿಸುತ್ತಿದ್ದು, ಶೈಕ್ಷಣಿಕ ಗುಣಮಟ್ಟವನ್ನು ಕಾಪಾಡಿಕೊಂಡಿವೆ ಎಂದು ತಿಳಿಸಿದರು.




ಕರ್ನಾಟಕದ ಶಾಲೆಗಳಲ್ಲಿ ಕನ್ನಡ ಮತ್ತು ಇಂಗ್ಲಿಷ್ ಭಾಷೆಗಳನ್ನು ಕಡ್ಡಾಯಗೊಳಿಸುವ ದ್ವಿಭಾಷಾ ನೀತಿಯನ್ನು ಜಾರಿಗೆ ತರಬೇಕು. ತೃತೀಯ ಭಾಷೆಯಾದ ಹಿಂದಿಯನ್ನು ಪಠ್ಯಕ್ರಮದಿಂದ ಹೊರಗಿಡಬೇಕು. ರಾಜ್ಯ ಮತ್ತು ಕೇಂದ್ರೀಯ ಶಿಕ್ಷಣ ವ್ಯವಸ್ಥೆಗಳಾದ ಸಿಬಿಎಸ್‌ಇ, ಐಸಿಎಸ್‌ಇ ಶಾಲೆಗಳಿಗೆ ಏಕರೂಪದ ದ್ವಿಭಾಷಾ ನೀತಿಯನ್ನು ಜಾರಿಗೊಳಿಸಬೇಕು.

ಸಿಬಿಎಸ್‌ಇ, ಐಸಿಎಸ್‌ಇ ಶಾಲೆಗಳಲ್ಲೂ ಪ್ರಥಮ ಭಾಷೆಯಾಗಿ ಕನ್ನಡವನ್ನೇ ಕಡ್ಡಾಯಗೊಳಿಸಬೇಕು. ಕನ್ನಡ ಮಾಧ್ಯಮ ಶಾಲೆಗಳನ್ನು ಬಲಪಡಿಸಿ, ಉತ್ತಮ ಗುಣಮಟ್ಟದ ಇಂಗ್ಲಿಷ್ ಶಿಕ್ಷಣವನ್ನು ನೀಡಬೇಕು.

ಕರ್ನಾಟಕದ ಶಿಕ್ಷಣ ವ್ಯವಸ್ಥೆಯು ರಾಜ್ಯದ ಭಾಷಿಕ ಅಸ್ಮಿತೆಯನ್ನು ಗೌರವಿಸುವ, ವಿದ್ಯಾರ್ಥಿಗಳ ಶೈಕ್ಷಣಿಕ ಯಶಸ್ಸನ್ನು ಖಾತ್ರಿಪಡಿಸುವ ಮತ್ತು ಜಾಗತಿಕ ಸ್ಪರ್ಧೆಗೆ ಸಿದ್ಧವಾಗಿರುವಂತಹ ಒಂದು ವ್ಯವಸ್ಥೆಯಾಗಿರಬೇಕು. ತ್ರಿಭಾಷಾ ನೀತಿಯಿಂದ ಕರ್ನಾಟಕದ ವಿದ್ಯಾರ್ಥಿಗಳಿಗೆ ಉಂಟಾಗುತ್ತಿರುವ ಅನಗತ್ಯ ಒತ್ತಡವನ್ನು ತೆಗೆದುಹಾಕಿ, ತಮಿಳುನಾಡು ಮತ್ತು ಮಹಾರಾಷ್ಟ್ರದಂತಹ ರಾಜ್ಯಗಳ ದ್ವಿಭಾಷಾ ನೀತಿಯನ್ನು ಅನುಸರಿಸುವ ಮೂಲಕ ಕರ್ನಾಟಕವು ತನ್ನ ಭಾಷಿಕ ಗುರುತನ್ನು ರಕ್ಷಿಸಬೇಕು ಎಂದು ಒತ್ತಾಯಿಸಿದರು.

ಪ್ರಭಟನೆಯಲ್ಲಿ ವೇದಿಕೆಯ ಮಹಿಳಾ ಘಟಕದ ಅಧ್ಯಕ್ಷೆ ಲತಾಬಾಯಿ ಮಾಡಿಕ್, ಜಿಲ್ಲಾ ಪದಾಧಿಕಾರಿಗಳಾದ ವಿ.ಮುನಿರಾಜು, ತಾಲ್ಲೂಕು ಅಧ್ಯಕ್ಷರುಗಳಾದ ಮಾಲೂರು ಎಂ.ಶ್ರೀನಾವಾಸ, ಕೋಲಾರ ಶಶಿಕುಮಾರ, ಬಂಗಾರಪೇಟೆ ರಾಮಪ್ರಸಾದ್, ಮಹಬೂಬ್, ಡಿ.ವಿ.ಮಂಜುನಾಥ ಹುಸೇನ್, ಲತಾಬಾಯಿ ಮಾಡಿಕ್, ಜೆ.ಜಿ.ನೇತ್ರ, ಲೀಲಾವತಿ, ಜಯಮ್ಮ, ಸುಮ, ಅಶ್ವಿನಿ, ಬಾಗ್ಯ ಗಣೇಶ್, ಕೆ ನವೀನ್, ಮಾಲೂರು ಸಂತೋಷ್, ರಾಮಕೃಷ್ಣಪ್ಪ, ರಂಜಿತ್, ಲೀಲಾವತಿ, ನೇತ್ರಾವತಿ, ಜಯಮ್ಮ, ಸುಮಾ ಇದ್ದರು.

# ಕೋಮುಲ್ ಅಧ್ಯಕ್ಷ ನಂಜೇಗೌಡಗೆ ಸನ್ಮಾನ

**ಮಾಲೂರು:** ಕೋಲಾರ ಹಾಲು ಉತ್ಪಾದಕರ ಒಕ್ಕೂಟದ ಅಧ್ಯಕ್ಷರಾಗಿ ಮೂರನೇ ಬಾರಿಗೆ ಅವಿರೋಧವಾಗಿ ಆಯ್ಕೆಯಾದ ಶಾಸಕ ಕೆ.ವೈ.ನಂಜೇಗೌಡ ಅವರನ್ನು ತೊರ್ನಹಳ್ಳಿ ಜಿ ಪಂ ಕ್ಷೇತ್ರದ ತೊರ್ನಹಳ್ಳಿ ಗ್ರಾಪಂ ನ ಕಾಂಗ್ರೆಸ್ ಪಕ್ಷದ ಮುಖಂಡ ಗೇರುಪುರ ಅಂಜಿ ಹಾಗೂ ಪಕ್ಷದ ಮುಖಂಡರು ಕೋಮುಲ್ ನೂತನ ಅಧ್ಯಕ್ಷರನ್ನು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಶಾಸಕ ಕೆ.ವೈ.ನಂಜೇಗೌಡ ಅವರು ಕೋಲಾರ ಹಾಲು ಉತ್ಪಾದಕರ ಒಕ್ಕೂಟಕ್ಕೆ ಮಾಲೂರು ಕ್ಷೇತ್ರದಿಂದ ಮೂರು ಬಾರಿ ನಿರ್ದೇಶಕರಾಗಿ ಮೂರು ಬಾರಿ ಅಧ್ಯಕ್ಷರಾಗಿ ಒಕ್ಕೂಟವು ಲಾಭದಾಯಕವನ್ನಾಗಿ ಮಾಡಿದ್ದು ಅಭಿವೃದ್ಧಿಗೆ ಶ್ರಮಿಸಿದ್ದಾರೆ.

ಆಯ್ಕೆಯಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಭೈರತಿ ಸುರೇಶ್ ಅವರ ಸಹಕಾರ ಹಾಗೂ ನಿರ್ದೇಶಕರ ಸಹಕಾರದಿಂದ ಮೂರನೇ ಬಾರಿಗೆ ಅಧ್ಯಕ್ಷರಾಗಿ ಆಯ್ಕೆಯಾಗಿರುವುದು ತಾಲೂಕಿನ ಜನತೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರಿಗೆ ಸಂತಸ ತಂದಿದೆ ಎಂದರು. ತಾಲೂಕಿನಲ್ಲಿ ಪಕ್ಷಾತೀತವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಹಾಲು ಉತ್ಪಾದಕ ಸಹಕಾರ ಸಂಘಗಳನ್ನು ಪ್ರಾರಂಭಿಸಿದರಲ್ಲದೆ ಹಾಲು ಉತ್ಪಾದನೆಗೆ ಅಗತ್ಯವಿರುವ ಸವಲತ್ತುಗಳನ್ನು ಒದಗಿಸಿ ಹೈನುಗಾರಿಕೆ ಉದ್ದಿಮೆಯನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಶ್ರಮಿಸಿದ್ದು ಅವರ ಮೇಲಿನ ಪ್ರೀತಿ ವಿಶ್ವಾಸದಿಂದ ಮೂರನೇ ಬಾರಿಗೆ ಆಯ್ಕೆ ಆಗಿದ್ದಾರೆ ಎಂದರು.

ಮಲಿಯಪ್ಪನಹಳ್ಳಿ, ಶ್ರೀನಿವಾಸ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಧ್ಯಕ್ಷ ಎಚ್.ಎಂ.ವಿಜಯ ನರಸಿಂಹ, ಗ್ರಾಪಂ ಮಾಜಿ ಅಧ್ಯಕ್ಷ ಮುನಯ್ಯ, ಸದಸ್ಯ ನಾಗರಾಜ್, ಮಧು ಗೌಡ, ವೆಂಕಟರೋಣಪ್ಪ, ಬಿ ಎಂ ನಾಗರಾಜ್, ಇನ್ನಿತರರು ಹಾಜರಿದ್ದರು.




## ಮಾದಿಗ ದಂಡೋರ 31ನೇ ಸಂಸ್ಥಾಪನಾ ದಿನಾಚರಣೆ



**ಕೋಲಾರ:** ಮಾದಿಗ ದಂಡೋರ ಮಾದಿಗ ಮೀಸಲಾತಿ ಹೋರಾಟ ಸಮಿತಿ ಕೋಲಾರ ಜಿಲ್ಲಾ ಶಾಖೆ ವತಿಯಿಂದ ಕೋಲಾರ ಜಿಲ್ಲಾ ಅಧ್ಯಕ್ಷತೆಯಲ್ಲಿ ಒಳಮೀಸಲಾತಿ ರೂವಾರಿಗಳು ಮಾದಿಗ ದಂಡೋರ ಸಂಸ್ಥಾಪಕರು ಹಾಗೂ ರಾಷ್ಟ್ರೀಯ ಅಧ್ಯಕ್ಷ ಮಂದಕೃಷ್ಣ ಮಾದಿಗಣ್ಣನವರ ಹುಟ್ಟುಹಬ್ಬ ಹಾಗೂ ಮಾದಿಗ ದಂಡೋರ 31ನೇ ಸಂಸ್ಥಾಪನಾ ದಿನಾಚರಣೆಯನ್ನು ಕೋಲಾರ ನಗರದ ಬಂಗಾರಪೇಟೆ ವೃತ್ತದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ರವರಿಗೆ ಮಾಲಾರ್ಪಣೆ ಮಾಡಿ ಮತ್ತು ಅನ್ನ ಸಂತರ್ಪಣೆ ಮಾಡಿ ರಕ್ತದಾನವನ್ನು ಮಾಡಲಾಯಿತು.

ಈ ಸಂದರ್ಭದಲ್ಲಿ ರಾಜ್ಯ ಗೌರವಾಧ್ಯಕ್ಷ ಎಂ ರವಿಕುಮಾರ್, ರಾಜ್ಯಪ್ರಧಾನ ಕಾರ್ಯದರ್ಶಿ, ಆರ್.ಬ ನಾಗರಾಜ್, ಸಾಹುಕಾರ್ ಶಂರಪ್ಪ ರಾಜ್ಯ ಉಪಾಧ್ಯಕ್ಷ ಆರ್. ವೇಣು, ರಾಜ್ಯ ಸಂಘಟನಾ ಕಾರ್ಯದರ್ಶಿ ಜಿ ಶಂಕರ್, ಕೋಲಾರ ಜಿಲ್ಲಾಧ್ಯಕ್ಷ ಆಲೇರಿ ಮುನಿರಾಜು, ಉಪಾಧ್ಯಕ್ಷ ದೇವರಾಜ್, ಉಪಾಧ್ಯಕ್ಷ ರಾಜೇಶ್, ಹಿರಿಯ ಉಪಾಧ್ಯಕ್ಷ ಮಾರ್ಕಂಡಪ್ಪ ಕಾರ್ಮಿಕ ಘಟಕ ಜಿಲ್ಲಾ ಅಧ್ಯಕ್ಷ ಸುರೇಶ್ ಕೋಲಾರ ಜಿಲ್ಲಾ ಕಾರ್ಯಾಧ್ಯಕ್ಷ ಡಿ ಎನ್ ಅಂಜಿ, ಗುರು. ಗುರುಸ್ವಾಮಿ., ಶ್ರೀನಿವಾಸಪುರ ತಾಲೂಕು ಅಧ್ಯಕ್ಷ ರವಿ, ಕೋಲಾರ ತಾಲೂಕ ಅಧ್ಯಕ್ಷ ನರಸಿಂಹ ಮೂರ್ತಿ, ಶ್ರೀನಿವಾಸ್, ನಾರಾಯಣಸ್ವಾಮಿ, ನಾಗೇಶ್, ಇನ್ನೂ ಅನೇಕ ಸಮುದಾಯದ ಮುಖಂಡರು ಭಾಗವಹಿಸಿದ್ದರು.



**ಹುಳಿಯಾರಿನ ಇಂದಿರಾನಗರ ಫರ್ಕಿನ್ ಷರೀಫ್ ಅವರಿಗೆ ಡಿಎಂಡಿ ಆಗಿದ್ದು ನಡೆಯಲು ಅಸಾಧ್ಯವಾಗಿದ್ದರಿಂದ ಜನಮಂಗಳ ಕಾರ್ಯಕ್ರಮದಡಿಯಲ್ಲಿ ಮಂಜೂರು ಮಾಡಿದ ವೀಲ್ ಚೇರ್ ಅನ್ನು ಯೋಜನಾಧಿಕಾಗಳಾದ ರಾಮಚಂದ್ರ, ನೀಡಿದರು. ವಲಯದ ಮೇಲ್ವಿಚಾರಕರಾದ ಭಾಗ್ಯಮ್ಮ, ಶಾರದಮ್ಮ ಸೇರಿದಂತೆ ಸಂಘದ ಸದಸ್ಯರು ಉಪಸ್ಥಿತಿ ಇದ್ದರು.**

# ಪ್ರಧಾನಮಂತ್ರಿ 15 ಅಂಶದ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆ

**ಕೋಲಾರ:** ಅಲ್ಪಸಂಖ್ಯಾತರ ಸಮುದಾಯಕ್ಕಾಗಿ ಜಾರಿಗೊಳಿಸಲಾಗಿರುವ ಪ್ರಧಾನಮಂತ್ರಿ 15 ಅಂಶದ ಕಾರ್ಯಕ್ರಮಗಳ ಪ್ರಗತಿ ಸಾಧಿಸುವಂತೆ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಸಭೆಯಲ್ಲಿ ಮಾತನಾಡಿದ ಅವರು ವಿವಿಧ ಇಲಾಖೆಗಳಡಿ ಅಲ್ಪಸಂಖ್ಯಾತರಿಗಾಗಿ ಇರುವ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು ಕೂಡಲೇ ಸಾಧಿಸುವಂತೆ ನಿರ್ದೇಶನ ನೀಡಿದರು.

ಶೈಕ್ಷಣಿಕ ಸೌಲಭ್ಯ ಕಲ್ಪಿಸುವುದು, ತಂತ್ರಜ್ಞಾನ ತರಬೇತಿ ಮೂಲಕ ಕೌಶಲ್ಯ ಕಾರ್ಯಕ್ರಮ ತಲುಪಿಸುವುದು, ಆರ್ಥಿಕ ಚಟುವಟಿಕೆ ಬಲಪಡಿಸಲು ಸಾಲ ಸೌಲಭ್ಯ ಕಲ್ಪಿಸುವುದು. ನಾಗರಿಕ ಸೇವೆಗಳ ಬಗ್ಗೆ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳುವುದು, ವಸತಿ ಯೋಜನೆ, ಅಲ್ಪಸಂಖ್ಯಾತರ ಜೀವನ ಮಟ್ಟ ಸುಧಾರಿಸಲು ವಸತಿ ಯೋಜನೆ ಕಲ್ಪಿಸುವುದು. ಹೀಗೆ ಹಲವು ಕಾರ್ಯಕ್ರಮಗಳನ್ನು ಅಲ್ಪಸಂಖ್ಯಾತರಿಗೆ ತಲುಪಿಸುವಂತೆ ನಿರ್ದೇಶನ ನೀಡಿದರು.

ಶಾಸಕರಾದ ಕೊತ್ತೂರು ಜಿ.ಮಂಜುನಾಥ್ ಅವರು ಮಾತನಾಡಿ ಅಲ್ಪಸಂಖ್ಯಾತರ ಅಭಿವೃದ್ಧಿಗೆ ಸರ್ಕಾರವು ಅನೇಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿಗೆ ತರುತಿದ್ದು, ಅಧಿಕಾರಿಗಳು ಅದನ್ನು ಸಾಮಾನ್ಯ ಜನರಿಗೆ ತಲುಪಿಸುವ ಕೆಲಸವನ್ನು ಮಾಡಬೇಕಾಗಿದೆ ನೂತನವಾಗಿ ಸಮಿತಿಯನ್ನು ರಚಿಸಿದ್ದು ಅವರೊಂದಿಗೂ ಅಧಿಕಾರಿಗಳು ಸೇರಿ ಯೋಜನೆಗಳ ಮಾಹಿತಿಯನ್ನು ಹಂಚಿಕೊಂಡು ಅವರ ಸಹಯೋಗದೊಂದಿಗೆ ಕಾರ್ಯಕ್ರಮ ಅನುಷ್ಠಾನ ಗೊಳಿಸಬೇಕು ಎಂದು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನಾರಾಯಣಸ್ವಾಮಿ ಮಾಹಿತಿ ನೀಡಿ 197 ಅಂಗನವಾಡಿ ಕೇಂದ್ರಗಳಿದ್ದು, ಇಲಾಖೆಯಿಂದಪೂರಕಪೌಷ್ಠಿಕಆಹಾರಕಲ್ಪಿಸುವುದು, ಭಾಗ್ಯಲಕ್ಷ್ಮಿ, ಗೃಹಲಕ್ಷ್ಮಿ, ಪ್ರಧಾನಮಂತ್ರಿ ಅವರ ಮಾತೃವಂದನಾ ಯೋಜನೆ ತಲುಪಿಸುವುದು ಸೇರಿದಂತೆ ಹಲವು ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಹೇಳಿದರು. ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಕೃಷ್ಣಮೂರ್ತಿ ಅವರು ಮಾತನಾಡಿ ಶಾಲೆಗಳಲ್ಲಿ ಸಮವಸ್ತ್ರ, ಉಚಿತ ಪಠ್ಯಪುಸ್ತಕ ವಿತರಣೆ, ವಿದ್ಯಾರ್ಥಿ ವೇತನ ಮತ್ತಿತರ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ ಎಂದರು.



ಕೃಷಿ ಇಲಾಖೆಯ ಅಧಿಕಾರಿ ಮಾಹಿತಿ ನೀಡಿ ಕೃಷಿ ಇಲಾಖೆ ಸೂಕ್ಷ್ಮ ನೀರಾವರಿ, ಕೃಷಿ ಯಾಂತ್ರೀಕರಣ, ಬಿತ್ತನೆ ಬೀಜ ವಿತರಣೆ ಹೀಗೆ ಹಲವು ಕಾರ್ಯಕ್ರಮ ತಲುಪಿಸಲಾಗುತ್ತಿದೆ ಎಂದರು.

ತೋಟಗಾರಿಕೆ ಇಲಾಖೆ ಅಧಿಕಾರಿ ಮಾತನಾಡಿ ಇಲಾಖೆಯಿಂದ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ,ರಾಷ್ಟ್ರೀಯ ತೋಟಗಾರಿಕಾ ಮಿಷನ್ ಯೋಜನೆ, ಹನಿ ನೀರಾವರಿ ಯೋಜನೆ, ಜೇನು ಸಾಕಾಣಿಕೆ, ಅನುಷ್ಠಾನ ಸಹಾಯಧನ ಹೀಗೆ ಹಲವು ಯೋಜನೆಗಳನ್ನು ಅಲ್ಪಸಂಖ್ಯಾತರಿಗೆ ತಲುಪಿಸಲಾಗುತ್ತಿದೆ. 2024–25ನೇ ಸಾಲಿನಲ್ಲಿ ಶೇ.100ರಷ್ಟು ಗುರಿ ಸಾಧಿಸಲಾಗಿದೆ ಎಂದರು.

ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧಿಕಾರಿ ಶಿರಿನ್ ತಾಜ್ ಅವರು ಮಾಹಿತಿ ನೀಡಿ ಶ್ರಮಶಕ್ತಿ, ಸ್ವಾವಲಂಭಿ ಸಾರಥಿ, ವೃತ್ತಿ ಪ್ರೋತ್ಸಾಹ, ಅರಿವು, ವಿದೇಶಿ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹಧನ, ನೇರಸಾಲ ಯೋಜನೆ, ಉನ್ನತ ಶಿಕ್ಷಣಕ್ಕೆ ಸಾಲ ಯೋಜನೆ ಹೀಗೆ ಹಲವು ಯೋಜನೆ ತಲುಪಿಸಲಾಗುತ್ತಿದೆ. ಕಳೆದ ಸಾಲಿನಲ್ಲಿ ಇಬ್ಬರು ವಿದ್ಯಾರ್ಥಿಗಳನ್ನು ವಿದೇಶಿ ವಿದ್ಯಾಭ್ಯಾಸಕ್ಕಾಗಿ ಕಳುಹಿಸಿಕೊಡಲಾಗಿದೆ ಎಂದು ಮಾಹಿತಿ ನೀಡಿದರು.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮೂಲಕ 3 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, 8 ಮೌಲನಾ ಆಜಾದ್ ವಸತಿ ಶಾಲೆಗಳ ಅಭಿವೃದ್ಧಿ ಸಂಬಂಧಿಸಿದಂತೆ ಮಾತನಾಡಿ ದಾಖಲಾತಿಗಳ ಬಗ್ಗೆ ಮಾಹಿತಿ ನೀಡಿದರು.

ಅಲ್ಪಸಂಖ್ಯಾತರ ಇಲಾಖೆಯ ಶಾಲೆಗಳಲ್ಲಿ ಈಗಾಗಲೇ ದಾಖಲಾತಿಗಳು ಪ್ರಾರಂಭವಾಗಿದ್ದು, ಕೊನೆಯ ದಿನಾಂಕ ಮುಗಿಯುವುದರೊಳಗೆ ಇರುವಂತಹ ಬಾಕಿ ಇರುವಂತಹ ದಾಖಲಾತಿಯನ್ನು ಸಮುದಾಯದ ಮುಖಂಡರೊಂದಿಗೆ ಅರಿವು ಮೂಡಿಸಿ ದಾಖಲಾತಿ ಪೂರ್ಣಗೊಳಿಸಬೇಕು ಎಂದರು. ಇಲಾಖೆಯ ಅಧಿಕಾರಿಗಳು ಯೋಜನೆಗಳನ್ನು ಸಮುದಾಯದ ಜನರಿಗೆ ತಲುಪಿಸುತ್ತಿರುವ ಬಗ್ಗೆ ಸಮಿತಿಯ ಸದಸ್ಯರು ಆಗಾಗ್ಗೆ ಗಮನವಹಿಸಬೇಕು ಎಂದು ತಿಳಿಸಿದರು.

ನಗರಾಭಿವೃದ್ಧಿ ಯೋಜನಾ ಶಾಖೆಯ ಯೋಜನಾ ನಿರ್ದೇಶಕರಾದ ಅಂಬಿಕಾ ಅವರು ಮಾತನಾಡಿ ಸ್ಥಳೀಯ ಪಟ್ಟಣ ಪಂಚಾಯಿತಿ, ಪುರಸಭೆ ಹಾಗೂ ನಗರಸಭೆ ವ್ಯಾಪ್ತಿಯಲ್ಲಿ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸಕ್ಕೆ ಸಹಾಯಧನ ನೀಡಲಾಗಿದೆ, ಶಸ್ತ್ರ ಚಿಕಿತ್ಸೆಗೆ ಸಹಾಯಧನ, ವೈದ್ಯಕೀಯ ಧನ, ಲಘು ವಾಹನ ಚಾಲನಾ ತರಬೇತಿ,ಇತರೆ ಅವಕಾಶಗಳನ್ನು ಕಲ್ಪಿಸಲಾಗುತ್ತಿದೆ ಎಂದರು ಅಲ್ಪಸಂಖ್ಯಾತರಿಗೆ ಮೀಸಲು ಇಟ್ಟಿರುವಂತಹ ಅನುದಾನವನ್ನು ಅವರಿಗೆ ಮಾತ್ರ ಪೂರ್ಣ ಬಳಕೆಯಲ್ಲಿ ಬಳಕೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಕಾರ್ಯಕ್ರಮದಲ್ಲಿ ಸಮಿತಿಯ ಸದಸ್ಯರಾದ ಶಫೀಕ್ ಅಹಮ್ಮದ್, ಇನಾಯತ್ತುಲ್ಲ ಷರೀಫ್, ಇಂದಿರಾ ಮತಿ, ಶಬೀರ್ ಅಹ್ಮದ್, ಅಲ್ಪಸಂಖ್ಯಾತರ ಇಲಾಖೆ ಅಧಿಕಾರಿ ಮೈಲಾರಪ್ಪ, ಜಿಲ್ಲಾ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಉಪ ನಿರ್ದೇಶಕರಾದ ರವಿಚಂದ್ರ, ಲೀಡ್ ಬ್ಯಾಂಕ್ ವ್ಯವಸ್ಥಾಪಕರಾದ ಜೋಶಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಅಧಿಕಾರಿ ಶ್ರೀನಿವಾಸ್, ಪಶುಪಾಲನಾ ಇಲಾಖೆ ಉಪ ನಿರ್ದೇಶಕರಾದ ರಮೇಶ್, ಜಿಲ್ಲಾ ಹಣಕಾಸು ಸಂಸ್ಥೆ, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಜನ ಸುರಕ್ಷಾ ಕ್ಯಾಂಪ್




**ಹುಳಿಯಾರು:** ಕರ್ನಾಟಕ ಗ್ರಾಮೀಣ ಬ್ಯಾಂಕ್ ಕಂದಿಕೆರೆ ಶಾಖೆ ಹಾಗೂ ಆರ್ಥಿಕ ಸಾಕ್ಷರತಾ ಸಲಹಾ ಕೇಂದ್ರ, ಚಿಕ್ಕನಾಯಕನಹಳ್ಳಿ ಇವರ ಜಂಟಿ ಆಶ್ರಯದಲ್ಲಿ ಬೆಳಗುಲಿ ಗ್ರಾಮದಲ್ಲಿ ಜನ ಸುರಕ್ಷಾ ಕ್ಯಾಂಪ್ ನಡೆಸಲಾಯಿತು. ಕರ್ನಾಟಕ ಗ್ರಾಮೀಣ ಬ್ಯಾಂಕಿನ ಮೆನೇಜರ್ ತಿಪ್ಪೇಸ್ವಾಮಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಜನರು ಬ್ಯಾಂಕಿನಿಂದ ಪಡೆದ ಸಾಲವನ್ನು ಸರಿಯಾದ ರೀತಿಯಲ್ಲಿ ಸದ್ಬಳಕೆ ಮಾಡಿಕೊಂಡು ಬರುವ ಆದಾಯದಲ್ಲಿ ಸ್ವಲ್ಪ ಭಾಗ ತೆಗೆದು ಸಾಲವನ್ನು ಮರು ಪಾವತಿ ಮಾಡಿ ಬ್ಯಾಂಕ್ ಹಾಗೂ ದೇಶದ ಆರ್ಥಿಕತೆಗೆ ನೆರವಾಗಬೇಕೆಂದು ಕರೆ ನೀಡಿದರು. ಆರ್ಥಿಕ ಸಾಕ್ಷರತಾ ಸಲಹೆಗಾರರಾದ ಆರ್.ಎಂ.ಕುಮಾರಸ್ವಾಮಿ ಮಾತನಾಡುತ್ತಾ ಕೇವಲ ರೂ.20 ಹಾಗೂ ರೂ 436/–ನ್ನು ಬ್ಯಾಂಕಿನ ಮುಖಾಂತರ ಪ್ರಧಾನಮಂತ್ರಿ ಸುರಕ್ಷಾ ಹಾಗೂ ಜೀವನ ಜ್ಯೋತಿ ವಿಮಾ ಯೋಜನೆಯನ್ನು ನೊಂದಣಿ ಮಾಡಿಕೊಂಡು ಮರಣ ಹೊಂದಿದಲ್ಲಿ ಎರಡರಿಂದ ನಾಲ್ಕು ಲಕ್ಷ ರೂಪಾಯಿಗಳವರೆಗೆ ವಿಮಾ ಮೊತ್ತ ನಾಮ ನಿರ್ದೇಶನ ಮಾಡಿದವರಿಗೆ ದೊರೆಯುವುದೆಂದು ತಿಳಿಸಿದರು. ಈ ಶಿಬಿರದಲ್ಲಿ ಬೆಳಗುಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಉದಯಕುಮಾರ್, ಮಾಜಿ ಅಧ್ಯಕ್ಷರಾದ ರಾಮಯ್ಯ, ಊರಿನ ಗುಡಿ ಗೌಡರಾದ ಶ್ರೇಯಾಂಶು ಕುಮಾರ್, ಸ್ವಸಹಾಯ ಸಂಘದ ಪ್ರತಿನಿಧಿಗಳಾದ ಶಿವಮ್ಮ ಹಾಗೂ ಸದಸ್ಯರು ಕರ್ನಾಟಕ ಗ್ರಾಮೀಣ ಬ್ಯಾಂಕಿನ ಸಿಬ್ಬಂದಿ ವರ್ಗದವರಾದ ಅಶೋಕ್ ಉಪಸ್ಥಿತರಿದ್ದರು.

ಸಂಜೆ ಮುಗಿಲು
ಮಂಗಳವಾರ
8.7.2025



# ದೇಶದ ಆಹಾರ ಸ್ವಾವಲಂಬನೆಗೆ ಬಾಬೂಜಿ ಕೊಡುಗೆ ಅಪಾರ

**ಪಿರಿಯಾಪಟ್ಟಣ:** ದೇಶದ ಆಹಾರ ಕ್ಷೇತ್ರದ ಸ್ವಾವಲಂಬನೆಗೆ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ್ ರಾಮ್ ಅವರ ಕೊಡುಗೆ ಅಪಾರವಾಗಿದೆ ಎಂದು ಪಟ್ಟಣದ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಪಿ.ಕೆ. ಮಹದೇವ್ ಅಭಿಪ್ರಾಯಪಟ್ಟರು.

ಪಟ್ಟಣದ ತಾಲ್ಲೂಕು ಆಡಳಿತ ಭವನದಲ್ಲಿ ತಾಲ್ಲೂಕು ಆಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಭಾರತದ ಮಾಜಿ ಉಪಪ್ರಧಾನಿ, ದಲ್ಲಿ ಮಾತನಾಡಿದರು.

ರಾಜಕೀಯ ಮುತ್ಸದ್ದಿಯಾಗಿದ್ದ ಬಾಬೂಜೀ, ದೇಶವು ಆಹಾರ ಸಮಸ್ಯೆ ಎದುರಿಸಿದ ಸಮಯದಲ್ಲಿ ಸಮಗ್ರ ಆಹಾರ ನೀತಿಯನ್ನು ಜಾರಿಗೊಳಿಸಿ ಭಾರತವು ಆಹಾರ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾಧಿಸುವಲ್ಲಿ ಪ್ರಮುಖ ಪಾತ್ರ ವಹಿಸಿದರು. ದೇಶದ ದಲಿತ ಚರಿತ್ರೆಯಲ್ಲಿ ಅಸಮಾನತೆ, ಹಸಿವು, ಅಪಮಾನ, ದೌರ್ಜನ್ಯಕ್ಕೊಳಗಾದವರನ್ನು ಸಂಕಷ್ಟದಿಂದ ಮೇಲೆತ್ತಿ ಸಮಾನತೆಯ ಬೆಳಕು ಚೆಲ್ಲಿದವರಲ್ಲಿ ಬಾಬೂಜೀ ಹಾಗೂ ಅಂಬೇಡ್ಕರ್ ಅಗ್ರಗಣ್ಯರು. ವ್ಯಕ್ತಿತ್ವ, ನಡೆ–ನುಡಿ ಬದ್ಧತೆ, ಕ್ರೀಯಾಶೀಲತೆಯಲ್ಲಿ ಇಂದಿನ ರಾಜಕಾರಣಿಗಳಿಗೆ ಬಾಬೂಜೀ ಮಾದರಿಯಾಗಿದ್ದಾರೆ ಇವರು, ಅಂಬೇಡ್ಕರ್ ರವರು ಕಾರ್ಮಿಕ ಕಾಯ್ದೆಗೆ ಭದ್ರ ಬುನಾದಿ ಹಾಕಿದರು. ಅದರ ಅನುಷ್ಠಾನದಲ್ಲಿ



ಬಾಬೂಜೀ ಕಾಣಿಕೆ ಅಪಾರವಾಗಿದೆ. ಕಾರ್ಮಿಕರ ರಕ್ಷಣೆ, ಸಬಲೀಕರಣಕ್ಕೆ ನಾಂದಿ ಹಾಡಿ, ಕಾರ್ಮಿಕರು ದೇಶದಲ್ಲಿ ಸುಭದ್ರ ಜೀವನ ನಡೆಸಲು ಈ ಇಬ್ಬರು ಮಹನೀಯರು ಕಾರಣೀಭೂತರಾಗಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ಅಂಚೆ ಕಚೇರಿ ಸ್ಥಾಪನೆ ಮೂಲಕ ಪ್ರತಿ ಹಳ್ಳಿ ಹಳ್ಳಿಗಳಲ್ಲಿಯೂ ಜನರ ಹೂಡಿಕೆಯನ್ನು ಪ್ರೋತ್ಸಾಹಿಸಿ ಜನಸಾಮಾನ್ಯರು ಆರ್ಥಿಕ ಸದೃಢತೆ ಹೊಂದಲು ನೆರವಾದರು ಎಂದರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ನಿಸರ್ಗ ಪ್ರಿಯಾ ಮಾತನಾಡಿ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ದೇಶದಲ್ಲಿ ಉತ್ತಮ ಆಹಾರ ನೀತಿಯನ್ನು ಅನುಷ್ಠಾನಗೊಳಿಸಿ ರೈತರ ಬೆನ್ನೆಲುಬಾಗಿ ನಿಂತರು. ಶೋಷಿತರ ಪರವಾಗಿ ವಿದ್ಯಾರ್ಥಿ ದೆಸೆಯಲ್ಲಿಯೇ ಹೋರಾಡಿದ ಬಾಬೂಜೀ ಹಲವಾರು ಮಹೋನ್ನತ ಸ್ಥಾನಗಳನ್ನು ಅಲಂಕರಿಸಿ ದೇಶದ ರಾಜಕೀಯ ಕ್ಷೇತ್ರಕ್ಕೆ ಮೆರುಗು ತಂದಿದ್ದಾರೆ. ಸಮಾಜ ಸುಧಾರಕರು, ಸ್ವಾತಂತ್ರ್ಯ ಹೋರಾಟಗಾರರಾಗಿದ್ದ ಜಗಜೀವನರಾಮ್ ಚಿಂತನೆಗಳು, ರಾಜಕೀಯ ಮಜಲುಗಳು ದೇಶದ ಜನರಿಗೆ ಅರ್ಥವಾಗಬೇಕಿದೆ. ಅವರ ರಾಜಕೀಯ ಸಾಧನೆ ಅವಿಸ್ಮರಣೀಯ ವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಎಡಿಎಲ್ಆರ್ ಮುನಿಯಪ್ಪ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಶಿರಸ್ಥೆದಾರ್ ಸಣ್ಣಸ್ವಾಮಿ, ತಾಪಂ ಸಹಾಯಕ ನಿರ್ದೇಶಕ ರಂಗನಾಥ್, ಅಬಕಾರಿ ನಿರೀಕ್ಷಕ ವೆಂಕಟೇಶ್, ಕೆಸ್ಆರ್ಟಿಸಿ ವ್ಯವಸ್ಥಾಪಕ ದರ್ಶನ್ ರಾಮಚಂದ್ರ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೃಷ್ಣೇಗೌಡ, ಎಪಿಎಂಸಿ ಸಹಾಕಯ ಅಧಿಕಾರಿ ಟಿ.ಎಸ್.ಚಲುವರಾಯಿ, ಆದಿ ಜಾಬಂವ ಸಂಘದ ಗೌರವಾಧ್ಯಕ್ಷ ಭೂತನಹಳ್ಳಿ ಶಿವಣ್ಣ, ದಸಂಸ ಮುಖಂಡರಾದ ಪಿ.ಮಹದೇವ್, ಭೀಮ್ ಆರ್ಮಿ ಗಿರೀಶ್, ಸಮಾಜ ಕಲ್ಯಾಣ ಇಲಾಖೆ ಸಿಬ್ಬಂಧಿಗಳು ಉಪಸ್ಥಿತರಿದ್ದರು.

# ಮೈಸೂರಲ್ಲಿ ಅಭಿವೃದ್ಧಿ ಕಾಮಗಾರಿಗೆ ಚಾಲನೆ

**ಮೈಸೂರು:** ಮೈಸೂರಿನ ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕರ ಎಸ್.ಎಫ್.ಸಿ. ವಿಶೇಷ ಅನುದಾನದಲ್ಲಿ ಅಂದಾಜು 4 ಕೋಟಿ ವೆಚ್ಚದ ಕಾಮಗಾರಿಗೆ ಶಾಸಕ ಕೆ ಹರೀಶ್ ಗೌಡ ರವರು ಗುದ್ದಲಿ ಪೂಜೆ ನೆರವೇರಿಸಿದರು.

ವಾರ್ಡ್ ನಂ. 22ರ ವ್ಯಾಪ್ತಿಯ ಮಾತೃಮಂಡಳಿ ಶಾಲೆಯಿಂದ ಮಹದೇಶ್ವರ ದೇವಸ್ಥಾನದ ವಾಲ್ಮೀಕಿ ರಸ್ತೆಯವರೆಗೆ ಚರಂಡಿ ಮತ್ತು ಪಾದಚಾರಿ ಮಾರ್ಗ ಅಭಿವೃದ್ಧಿ ಕಾಮಗಾರಿ,ಅಂದಾಜು ಮೊತ್ತ ರೂ. 100.00ಲಕ್ಷಗಳು, ಹಾಗೂ ವಾರ್ಡ್ ನಂ. 19ರ ವ್ಯಾಪ್ತಿಯ

ನಿರ್ಮಲ ಕಾನ್ವೆಂಟ್ ಹತ್ತಿರ ಚರಂಡಿ ಹಾಗೂ ಪಾದಚಾರಿ ಮಾರ್ಗ ಅಭಿವೃದ್ಧಿ ಕಾಮಗಾರಿ,ವಿ.ವಿ.ಮೊಹಲ್ಲಾ 13, 14, 12ನೇ ಎ ಹಾಗೂ 8ನೇ ಕ್ರಾಸ್ ರಸ್ತೆ ಅಭಿವೃದ್ಧಿ ಹಾಗೂ ಜಯಲಕ್ಷ್ಮೀಪುರಂನ 7ನೇ ಮೇನ್ ರಸ್ತೆ ಹಾಗೂ ಇತರ ರಸ್ತೆಗಳ ಅಭಿವೃದ್ಧಿ ಕಾಮಗಾರಿ. ಅಂದಾಜು ಮೊತ್ತ ರೂ. 100.00ಲಕ್ಷಗಳು, ಮತ್ತು ವಾರ್ಡ್ ನಂ. 24ರ ಶೇಷಾದ್ರಿ ಅಯ್ಯರ್ ರಸ್ತೆ ಹಾಗೂ ವಾರ್ಡ್ ನಂ.23ರ ಜೆ. ಕೆ. ಗೌಂಡ್ ವೃತ್ತ,ಬಾಬುಜಗಜೀವನ್‌ರಾಂ ವೃತ್ತ ಡಾಂಬರೀಕರಣ ಹಾಗೂ ಪುಟ್‌ಪಾತ್ ಕಾಮಗಾರಿ ಮತ್ತು ವಾರ್ಡ್ ನಂ.23ರ ದಿವಾನ್ಸ್ ರಸ್ತೆಯ ಧನ್ವಂತರಿ ರಸ್ತೆಯಿಂದ ವಿನೋಬ ರಸ್ತೆಯವರೆಗೆ ಹಾಗೂ ಫ್ರೀಡಂ ಪಾರ್ಕ್ ಹಿಂಭಾಗದ ದಿವಾನ್ಸ್ ರಸ್ತೆಗೆ ಚರಂಡಿ ಮತ್ತು ಪುಟ್‌ಬಾತ್ ಅಭಿವೃದ್ಧಿ ಕಾಮಗಾರಿ, ಅಂದಾಜು ಮೊತ್ತ ರೂ.120 ಲಕ್ಷಗಳು ಹಾಗೂ

ವಾರ್ಡ್ ನಂ. 40ರ ಹೈದರ್‌ಗುಂಟೆ ಪಾರ್ಕ್ ಮುಂಭಾಗದ ಸಾಯಿಬಾಬಾ ಟೆಂಪಲ್ ಮುಂಭಾಗದಿಂದ ಶಾಂತವೇರಿ ಗೋಪಾಲಗೌಡ ವೃತ್ತದ ಮುಖಾಂತರ ನಜರ್‌ಬಾದ್ ಸರ್ಕಲ್ ವರೆಗೆ, ಕೂಡು ರಸ್ತೆಗಳಲ್ಲಿ ರಸ್ತೆ ಮತ್ತು ಮಳೆ ನೀರು ಚರಂಡಿ ಅಭಿವೃದ್ಧಿ ಕಾಮಗಾರಿ,ಅಂದಾಜು ಮೊತ್ತ ರೂ.70 ಲಕ್ಷಗಳ ಕಾಮಗಾರಿಗೆ ಶಾಸಕ ಕೆ ಹರೀಶ್ ಗೌಡರವರು ಚಾಲನೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಪಾಲಿಕೆ ಅಧಿಕಾರಿಗಳಾದ ಯೋಗನಂದ, ವೆಂಕಟೇಶ್ ,ರಾಮಣ್ಣ,ಕೃಷ್ಣಮೂರ್ತಿ, ಬ್ಲಾಕ್ ಅಧ್ಯಕ್ಷರುಗಳಾದ ರವಿ , ರಮೇಶ್ ರಾಯಪ್ಪ, ಮುಖಂಡರುಗಳಾದ ನಾಗರಾಜ್ ,ಮರಿಸ್ವಾಮಿ, ಕುಮಾರ್, ಯೋಗೇಶ್ , ಮಹದೇಶ್, ಕೃಪಾನಂದ, ಗುರುರಾಜ್, ಸೌಭಾಗ್ಯ, ನಿತಿನ್ ಪುಟ್ಟಸ್ವಾಮಿ, ರಾಜಣ್ಣ, ಮಾಜಿ ಪಾಲಿಕೆ ಸದಸ್ಯರಾದ ರಮೇಶ್, ರಾಮಕೃಷ್ಣ , ಜಯಪ್ರಕಾಶ್, ಸುಶೀಲ ಮರೀಗೌಡ, ಗಾಯತ್ರಿ ನಾರಾಯಣಗೌಡ,ನಿಶಾಂತ್, ಅರುಣ್ ಕುಮಾರ್, ಮಾಜಿ ಪಾಲಿಕೆ ಸದಸ್ಯರಾದ ಎಂ .ಡಿ. ನಾಗರಾಜ್, ಬಾಲರಾಜ್,ಇಮ್ರಾನ್, ಆನಂದ್, ನಂಜುಂಡಿ, ಮಹದೇವ್, ಅನಂತ್ ನಾರಾಯಣ, ಶಿವಕುಮಾರ್, ಇಬ್ರಾಹಿಂ,ವಿನೋದ್, ಹರೀಶ್ ಗೌಡ, ಚಂದ್ರಶೇಖರ್, ಶಾಂತ, ಮಂಗಳ,ರಾಣಿ, ಹೇಮಾ ಸಿಂಗ್, ಸಮೀನ , ಮಾಜಿ ಪಾಲಿಕೆ ಸದಸ್ಯರಾದ ಕುಶಾಲ್ ಕುಮಾರ್, ಎಸ್.ಆರ್. ರವಿಕುಮಾರ್, ವರದರಾಜು, ನಿರಂಜನ್, ವರಲಕ್ಷ್ಮಿ,ಕುಮುದ, ದೀಪಕ್ ಪುಟ್ಟಸ್ವಾಮಿ, ಮೋಹನ್, ಸುಹಾಸ್, ರವಿ ನಾಯಕ್, ಸೇರಿದಂತೆ ಪದಾಧಿಕಾರಿಗಳು, ಕಾರ್ಯಕರ್ತರು, ಸಾರ್ವಜನಿಕರು ಭಾಗವಹಿಸಿದ್ದರು.



## ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಲಹೆ

# ಬಾಲ್ಯ ವಿವಾಹ ತಡೆಗಟ್ಟಲು ಸಹಕರಿಸಿ

**ಮಂಡ್ಯ:** ತಾಲ್ಲೂಕಿನ ಸಿದ್ದಯ್ಯನಕೊಪ್ಪಲು ರಿಪಬ್ಲಿಕ್ ಸೆಂಟ್ರಲ್ ಸ್ಕೂಲ್ ಅವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ(ಬೆಂಗಳೂರು), ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ರಿಪಬ್ಲಿಕ್ ಸೆಂಟ್ರಲ್ ಸ್ಕೂಲ್ ವತಿಯಿಂದ ಬಾಲ್ಯ ವಿವಾಹ ಮುಕ್ತ ಜಿಲ್ಲೆ ಘೋಷಣೆ ಅಂಗವಾಗಿ ಮಕ್ಕಳ ಕಾನೂನುಗಳ ಹಾಗೂ ಮಕ್ಕಳ ಸುರಕ್ಷತೆ ಅರಿವು ಕಾರ್ಯಕ್ರಮ ನಡೆಯಿತು.

ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ಆನಂದ್, 21ನೇ ಶತಮಾನದಲ್ಲಿಯೂ ಬಾಲ್ಯ ವಿವಾಹ ನಡೆಯುತ್ತದೆ ಎಂದರೆ ಎಲ್ಲರೂ ತಲೆ ತಗ್ಗಿಸುವ ವಿಚಾರವಾಗಿದೆ. ಜಿಲ್ಲೆಯಲ್ಲಿ ಭ್ರೂಣ ಹತ್ಯೆ, ಅಪ್ರಾಪ್ತ ವಯಸ್ಸಿನ ಗರ್ಭಿಣಿ ಹಾಗೂ ಬಾಲ್ಯವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಸಾಗಬೇಕು ಎಂದರು.

ಜಿಲ್ಲೆಯ ಎಲ್ಲ ಶಾಲಾ ಕಾಲೇಜುಗಳಲ್ಲಿ ಬಾಲ್ಯ ವಿವಾಹದ ಬಗ್ಗೆ ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಬಾಲ್ಯ ವಿವಾಹ ಮಾಡುವುದು ನಿಲ್ಲಬೇಕು. ಮಕ್ಕಳು ಆಟ ಆಡುವ ವಯಸ್ಸಿನಲ್ಲಿ ಮದುವೆ ಮಾಡುವುದು ಏಕೆ? ಭವಿಷ್ಯ ರೂಪಿಸಿಕೊಳ್ಳುವ ಕಡೆ ಗಮನ ಹರಿಸಿ ಮಕ್ಕಳಿಗೆ ಸಹಾಯ ಮಾಡುವುದನ್ನು ಬಿಟ್ಟು ಬಾಲ್ಯ ವಿವಾಹವೆಂಬುವ ಪಿಡುಗಿಗೆ ದೂಡುವುದನ್ನು ಸಂಪೂರ್ಣವಾಗಿ ವಿರೋಧಿಸುವ ಮೂಲಕ ಎಚ್ಚರಿಕೆ ನೀಡಬೇಕು ಎಂದು ಸಲಹೆ ನೀಡಿದರು.

ಯಾರೇ ಬಾಲ್ಯ ವಿವಾಹ ಮಾಡಿದರೆ ಮತ್ತು ಅದನ್ನು ಪ್ರೋತ್ಸಾಹಿಸಿದರೆ ಅವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ತೆಗೆದುಕೊಳ್ಳಬಹುದು ಎನ್ನುವುದು ಕಾನೂನಿನಲ್ಲಿ ಇದೆ ಎನ್ನುವುದನ್ನು ಅರ್ಥ ಮಾಡಿಸಬೇಕು. ಈ ಸಂಬಂಧ



ಅಧಿಕಾರಿಗಳು ಸಾರ್ವಜನಿಕರಿಗೆ ತಿಳಿಸುವ ಕೆಲಸವನ್ನು ತುರ್ತಾಗಿ ಮಾಡುವ ಮೂಲಕ ಕ್ರಮ ವಹಿಸಬೇಕು ಎಂದು ತಿಳಿಸಿದರು.

ಅಪರ ಪೊಲೀಸ್ ವರಿಷ್ಠಾಧಿಕಾರಿ ಗಂಗಾಂಧರಸ್ವಾಮಿ ಮಾತನಾಡಿ, ಮಕ್ಕಳಿಗೆ ಒಂದು ಮಗುವಾದರೆ ಅದನ್ನು ಬೆಳೆಸುವ ಪರಿ ಹೇಗಿರುತ್ತದೆ ಎಂಬುದನ್ನು ಊಹಿಸಲು ಸಾಧ್ಯವಿಲ್ಲ ಏಕೆಂದರೆ ನೀವೆ ಮಕ್ಕಳಾಗಿ ಇನ್ನೂ ಪ್ರಾಪಂಚಿಕ ಜ್ಞಾನವನ್ನು ಪಡೆದಿರುವುದಿಲ್ಲ ಹೀಗಿದ್ದಾಗ ಕಷ್ಟವಾಗುವುದಿಲ್ಲವೇ? ಹಾಗಾಗಿ ಕಾನೂನಿನಲ್ಲಿ ಹೆಣ್ಣಿಗೆ 18 ವರ್ಷ ಮತ್ತು ಗಂಡಿಗೆ 21 ವರ್ಷ ಇರಬೇಕೆಂಬುದು ಇದೆ. ಆದರೆ ಇದನ್ನು ಬದಲಿಸ ಬೇಕೆನ್ನುವ ಅಭಿಪ್ರಾಯವಿದೆ. ನೀವು ಕಲಿಯುವ ವಯಸ್ಸಲ್ಲಿ ಮದುವೆ ಸಂಕೋಲೆಯನ್ನು ತೊಡಿಸುವುದು ಬೇಡ ಎಂದು ತಿಳಿಸಿದರು.

ಮಕ್ಕಳ ರಕ್ಷಣಾ ಘಟಕದ ಅಧ್ಯಕ್ಷ ಮಿಕ್ಕೆರೆ ವೆಂಕಟೇಶ್ ಮಾತನಾಡಿದರು. ಬಾಲ್ಯ ವಿವಾಹ ಮುಕ್ತ ಮಾಡಲು ಶಾಲಾ ಹಂತದಲ್ಲಿಯೇ ಪ್ರಯತ್ನ ಪಡಬೇಕು. ಬಾಲ್ಯ ವಿವಾಹವೆನ್ನುವುದು ದೊಡ್ಡ ಸಮಸ್ಯೆ ಆಗಿದೆ. ಇದರಿಂದ ಪೋಷಕರು ಎಚ್ಚರಿಕೆಯಿಂದ ಇರಬೇಕು. ಮಕ್ಕಳ ಭವಿಷ್ಯದ ದೃಷ್ಟಿಯಿಂದ ಅವರ ನೆರವಿಗೆ ಬರಬೇಕು ಎಂದು ಮನವಿ ಮಾಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ(ದಕ್ಷಿಣ ವಲಯ)ಮಹದೇವು, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಶ್ಮಿ, ಸ್ಕೂಲ್ ಕಾರ್ಯದರ್ಶಿ ಮಂಜುನಾಥ್, ಪ್ರಾಂಶುಪಾಲರಾದ ಸುನೀತಾ, ಕಾರ್ಯಕ್ರಮ ಸಂಯೋಜನಾಧಿಕಾರಿ ರಾಜೇಂದ್ರ ಭಾಗವಹಿಸಿದ್ದರು.

## ಪಿಂಚಣಿ ಸೌಲಭ್ಯ ನೀಡುವಂತೆ ಮನವಿ

**ವೃತ್ತಿ ಶಿಕ್ಷಣ ವಿಭಾಗದಲ್ಲಿಕಾರ್ಯನಿರ್ವಹಿಸಿ 2013 ರಲ್ಲಿಖಾಯಂಗೊಂಡ ವಿವಿಧ ಇಲಾಖೆಗಳಲ್ಲಿ ಸರ್ಕಾರಿ ಹಾಗೂ ಅನುದಾನಿತ ಸೇವಾ ವಿಲೀನ ಹೊಂದಿ ಸೇವೆ ಸಲ್ಲಿಸುತ್ತಿರುವ ನೌಕರರಿಗೆ 2006 ರ ಹಿಂದಿನ ಸೇವೆಯನ್ನು ಪರಿಗಣಿಸಿ ಪಿಂಚಣಿ ಸೌಲಭ್ಯ ನೀಡುವಂತೆ ಮಾನ್ಯ ಮುಖ್ಯಮಂತ್ರಿಅವರೊಂದಿಗೆಚರ್ಚಿಸಲು ಮಾಜಿ ಶಾಸಕರಾದ ಎಂ.ಕೆ.ಸೋಮಶೇಖರ್ ಅವರನ್ನು ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಲಾಯಿತು. ಇದೇ ಸಂದರ್ಭದಲ್ಲಿ ವೃತ್ತಿಪರ ವಿಭಾಗದ ಸಿಬ್ಬಂದಿಗಳಿಂದ ಎಂ.ಕೆ. ಸೋಮಶೇಖರ್‌ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.**

## ಆರ್‌ಎಸ್‌ಎಸ್‌ನ ಮನಸೋ ಇಚ್ಚೆ ತೆಗಳುವ ಹುಚ್ಚು ಹಿಡಿದಿದೆ

**ಮೈಸೂರು:** ಪ್ರಿಯಾಂಕ ಖರ್ಗೆ ಅವರಿಗೆ ಪ್ರಚಾರದ ಹುಚ್ಚು ಹಿಡಿದಿದೆ ಒಳ್ಳೆಯ ಕೆಲಸ ಮಾಡಿ ತಾವು ಸಚಿವರಾಗಿರುವಂತಹ ಇಲಾಖೆಯ ಕೆಲಸದಲ್ಲಾಗಲಿ ಅಥವಾ ಅವರ ಕ್ಷೇತ್ರ ಅಭಿವೃದ್ಧಿಯ ಕೆಲಸದಲ್ಲಾಗಲಿ ಅಲ್ಲ ರಾಷ್ಟ್ರ ಭಕ್ತ ಸಂಘಟನೆಯಾದ ಆರ್ ಎಸ್ ಎಸ್ ನ ಮನಸೋ ಇಚ್ಛೆ ತೆಗಳುವ ಹುಚ್ಚು ಹಿಡಿದಿದೆ. ಈ ರೀತಿಯ ಹೇಳಿಕೆಗಳನ್ನು ನೀಡಿ ನಿಮ್ಮ ಕಾಂಗ್ರೆಸ್ ಹೈ ಕಮಾಂಡ್ ನ ಮೆಚ್ಚಿಸೋದನ್ನು



ಬಿಟ್ಟು ನಿಮ್ಮ ಇಲಾಖೆಯ ಕೆಲಸ ಮಾಡಿ ನಿಮ್ಮ ಕ್ಷೇತ್ರದ ಕೆಲಸ ಮಾಡಿ ಪ್ರಿಯಾಂಕ ಖರ್ಗೆ ರವರೆ ಆರ್ ಎಸ್ ಎಸ್ ನ ಬ್ಯಾನ್ ಮಾಡಬೇಕು ಎಂದು ಹೇಳಿಕೆ ಕೊಟ್ಟಿದ್ದೀರಿ ನಿಮಗೆ ತಾಕತ್ತಿದ್ದರೆ ಒಂದೇ ಒಂದು ಕಾರಣ ಕೊಡಿ ಏಕೆ ಬ್ಯಾನ್ ಮಾಡಬೇಕು ಎಂದು ನಿಮ್ಮ ಕಾಂಗ್ರೆಸ್ ಡಾ .ಬಾಬಾ ಸಾಹೇಬ್ ಅಂಬೇಡ್ಕರ್ ರವರನ್ನು ಸೋಲಿಸುವುದಕ್ಕೆ ಹುನ್ನಾರ ಮಾಡಿದ್ದಾಗ ಅಂಬೇಡ್ಕರ್ ರವರ ಪರವಾಗಿ ಆರ್ ಎಸ್ ಎಸ್ ನ ಸ್ವಯಂ ಸೇವಕರು ಚುನಾವಣೆಯಲ್ಲಿ ಕೆಲಸ ಮಾಡಿದ್ದಕ್ಕಾಗಿ ಈ ಹೇಳಿಕೆ ಕೊಟ್ಟಿದ್ದೀರ ಹಾಗಾದರೆ ಬಾಬಾ ಸಾಹೇಬರ ವಿರೋಧಿಗಳು ನೀವು ಈ ಉದ್ಧಟತನದ ಹೇಳಿಕೆಗಳನ್ನು ಕೊಡೋದು ಬಿಟ್ಟು ನಿಮ್ಮ ನಂಬಿ ವೋಟು ಹಾಕಿದ ಜನರ ಕೆಲಸ ಮಾಡಿ ನಿಮ್ಮ ಪಕ್ಷವನ್ನು ಕಟ್ಟಿದ ನೆಹರು ಇಂದಿರಾಗಾಂಧಿ ಅವರ ಕೈಯಲ್ಲೆ ಆಗಲಿಲ್ಲ ಇನ್ನು ನಿಮ್ಮ ಅಪ್ಪನಾಣೆ ನಿಮ್ಮ ಕೈಯಲ್ಲು ಆಗಲ್ಲ ನಿಮ್ಮ ಅಪ್ಪನ ಕೈಯಲ್ಲು ಆಗಲ್ಲ ಎಂದು ಬಿಜೆಪಿ ಮೈಸೂರು ನಗರ ಎಸ್ ಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಕಾರ್ತಿಕ್ ಮರಿಯಪ್ಪ ಆಕ್ರೋಶ ವ್ಯಕ್ತ ಪಡಿಸಿದರು.

## ಮಿನಿ ಬಸ್ ಪಲ್ಟಿ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಯಳಂದೂರು ತಾಲ್ಲೂಕಿನ ಬಿಳಿಗಿರಿರಂಗಬೆಟ್ಟ ಮುಖ್ಯ ರಸ್ತೆಯ ಪುರಾಣಿ ಪೋಡು ಚೈನ್ಗೇಟ್ ಸಮೀಪ ಸೋಮವಾರ ನಡೆದ ಅಪಘಾತದಲ್ಲಿ ಮಿನಿ ಬಸ್ಸೊಂದು ಪಲ್ಟಿಯಾಗಿ 12ಕ್ಕೂ ಹೆಚ್ಚು ಮಂದಿ ಗಾಯಗೆಡಿದಿದ್ದಾರೆ. ತುಮಕೂರು ಮೂಲದ ಒಂದೇ ಕುಟುಂಬದ ಸದಸ್ಯರು ಮತ್ತು ಅವರ ಸ್ನೇಹಿತರು ಒಟ್ಟಾರೆ 17 ಮಂದಿ ಬಿಳಿಗಿರಿರಂಗಬೆಟ್ಟದ ದೇವಾಲಯಕ್ಕೆ ಭೇಟಿ ನೀಡಿ ದರ್ಶನ ಮುಗಿಸಿಕೊಂಡು ವಾಪಾಸಾಗುತ್ತಿದ್ದ ಸಂದರ್ಭದಲ್ಲಿ, ಚಾಲಕನ ನಿಯಂತ್ರಣ ತಪ್ಪಿದ ಪರಿಣಾಮ ಬಸ್ ಪಲ್ಟಿಯಾಗಿದೆ. ಅಪಘಾತದಲ್ಲಿ ನಾಲ್ಕು ಮಂದಿ ಗಂಭೀರವಾಗಿ ಗಾಯಗೊಂಡಿದ್ದು, ಉಳಿದವರಿಗೆ ಸಣ್ಣ ಪುಟ್ಟ ಗಾಯಗಳಾಗಿವೆ. ಗಾಯಾಳುಗಳನ್ನು ತಕ್ಷಣವೇ ಆಂಬುಲೆನ್ಸ್ ಮೂಲಕ ಪೋಲಿಸರ ಸಹಾಯದಿಂದ ಯಳಂದೂರು ಮತ್ತು ಚಾಮರಾಜನಗರದ ಆಸ್ಪತ್ರೆಗೆ ದಾಖಲಿಸಲಾಗಿದೆ.

## ಶಾಲಾ ಸಂಸತ್ ಚುನಾವಣೆ

**ಚಾಮರಾಜನಗರ :** ತಾಲೂಕಿನ ಪ್ರತಿಷ್ಠಿತ ಸರ್ಕಾರಿ ವಿದ್ಯಾಸಂಸ್ಥೆಯಾದ ಆದರ್ಶ ವಿದ್ಯಾಲಯ ಮಲ್ಲಯ್ಯನಪುರ ಇಲ್ಲಿ ಶಾಲಾ ಸಂಸತ್ ಚುನಾವಣೆ ನಡೆಸಲಾಯಿತು. ಈ ಚುನಾವಣೆಯು ಇಂದಿನ ವಿದ್ಯಾರ್ಥಿಗಳಲ್ಲಿ ಮತದಾನದ ಮಹತ್ವ ಮತ್ತು ಮತದಾನದ ಪ್ರಕ್ರಿಯೆ ಬಗ್ಗೆ ನೈಜವಾದ ಅರಿವನ್ನು ಮೂಡಿಸುವ ರೀತಿಯಲ್ಲಿ ಸಾಮಾನ್ಯ ಚುನಾವಣೆ ನಡೆಸುವ ಮಾದರಿಯಲ್ಲಿ ನಡೆಸಲಾಯಿತು, ಮತದಾನ ಸಾಕ್ಷರತಾ ಸಮಿತಿ ಅಡಿಯಲ್ಲಿ ಅಧಿಸೂಚನೆ ಹೊರಡಿಸುವ ಮೂಲಕ ಚುನಾವಣಾ ಪ್ರಕ್ರಿಯೆಯನ್ನು ಆರಂಭಿಸಿ ಉಮೇದುವಾರರ ನಾಮಪತ್ರ ಸಲ್ಲಿಕೆ, ನಾಮಪತ್ರ ಪರಿಶೀಲನೆ, ನಾಮಪತ್ರ ಹಿಂತೆಗೆದುಕೊಳ್ಳುವುದು, ಅಂತಿಮವಾಗಿ ಚುನಾವಣೆಗೆ ಸ್ಪರ್ಧಿಸಿರುವ ಉಮೇದುವಾರರ ಪಟ್ಟಿ ಪ್ರಕಟಣೆ, ಬಹಿರಂಗ ಪ್ರಚಾರಕ್ಕೆ ಅವಕಾಶ, ಉಮೇದುವಾರರಿಗೆ ಪ್ರತ್ಯೇಕ ಚಿಹ್ನೆಗಳನ್ನು ನೀಡುವುದು, ಅಂತಿಮವಾಗಿ ಮತದಾನ ನಡೆಸುವ ವಿಧಾನ ಹೀಗೆ ಎಲ್ಲವನ್ನು ನೈಜವಾಗಿ ನಡೆಸಲಾಯಿತು. ಮೊಬೈಲ್ನಲ್ಲಿ ವೋಟಿಂಗ್ ಮಷೀನ್ ಎನ್ನುವ ಆಪ್ ಡೌನ್ಲೋಡ್ ಮಾಡಿಕೊಂಡು ಕಂಟ್ರೋಲಿಂಗ್ ಬ್ಯಾಲೆಟ್ ಯೂನಿಟ್ ಮಾದರಿಯಲ್ಲಿ ಚುನಾವಣೆ ನಡೆಸಲಾಯಿತು. ಈ ಎಲ್ಲಾ ಪ್ರಕ್ರಿಯೆಗೆ ಪ್ರಭಾರ ಮುಖ್ಯ ಶಿಕ್ಷಕರ ಮಾರ್ಗದರ್ಶನದಲ್ಲಿ ಸಮಾಜ ವಿಜ್ಞಾನ ಶಿಕ್ಷಕರಾದ ಸುರೇಶ್ ಮಂಜುನಾಥ್ ಸ್ವಾಮಿ ತಂತ್ರಜ್ಞಾನದ ಸಹಾಯದಿಂದ ಚುನಾವಣೆಯನ್ನು ಯಶಸ್ವಿಯಾಗಿ ನಡೆಸಿದರು ಇವರಿಗೆ ಉಳಿದ ಶಿಕ್ಷಕರುಗಳಾದ ಶಿವಕುಮಾರ್, ಸಂತೋಷ್ ಕುಮಾರ್, ನಂಜುಂಡಸ್ವಾಮಿ,ಶಾಲಿನಿ, ಲೀಲಾ, ಹಾಸಿಯ ಪರ್ವೀನ್ ಮತ್ತು ಮತ್ತು ಅತಿಥಿ ಶಿಕ್ಷಕರು ಸಂಪೂರ್ಣ ಸಹಕಾರವನ್ನು ನೀಡಿದರು ಶಾಲೆಯಲ್ಲಿ ಈ ರೀತಿಯ ವಿನೂತನ ಚಟುವಟಿಕೆಗಳನ್ನು ನಡೆಸಲು ಶಾಲಾ ಅಭಿವೃದ್ಧಿ ಮೇಲುಸ್ತುವಾರಿ ಸಮಿತಿ ಎಲ್ಲ ರೀತಿ ಸಹಕಾರ ನೀಡುತ್ತಿದೆ ಅದರಲ್ಲೂ ನಗರಸಭೆ ಮಹೇಶ್ ಅವರ ಸಹಕಾರ ಮರೆಯುವಂತಿಲ್ಲ ಎಂದು ಮುಖ್ಯಶಿಕ್ಷಕರು ತಿಳಿಸಿದರು.



## ಸಿದ್ದೇಶ್ವರ ದೇವಸ್ಥಾನಕ್ಕೆ ಅನುದಾನ

**ಹುಳಿಯಾರು:** ಹುಳಿಯಾರು ಹೋಬಳಿಯ ಯಳನಾಡು ವಲಯದ ಬರಗಿಹಳ್ಳಿ ಶ್ರೀ ಸಿದ್ದೇಶ್ವರ ದೇವಸ್ಥಾನಕ್ಕೆ ಸಮುದಾಯ ಅಭಿವೃದ್ಧಿ ಕಾರ್ಯಕ್ರಮದಡಿಯಲ್ಲಿ ಡಾ.ಡಿ.ವೀರೇಂದ್ರ ಹೆಗ್ಗಡೆಯವರು ದೇವಸ್ಥಾನದ ಜೀರ್ಣೋದ್ಧಾರಕ್ಕೆ 1.50.000 ರೂ. ಅನುದಾನವನ್ನು ಮಂಜೂರು ಮಾಡಿದ್ದು ಅದನ್ನು ಧರ್ಮಸ್ಥಳ ಯೋಜನೆಯ ಯೋಜನಾಧಿಕಾರಿಗಳಾದ ರಾಮಚಂದ್ರ, ಅವರು ದೇವಸ್ಥಾನದ ಕಮಿಟಿಯವರಿಗೆ ಚೆಕ್ ಹಸ್ತಂತರಿಸಿದರು. ಕಾರ್ಯಕ್ರಮದಲ್ಲಿ ಜನಜಾಗೃತಿ ವೇದಿಕೆಯ ಸದಸ್ಯರಾದ ದಾಸಪ್ಪ, ಗ್ರಾಪಂ ಸದಸ್ಯ ಯತೀಶ್, ಒಕ್ಕೂಟದ ಅಧ್ಯಕ್ಷರಾದ ಕಲಾವತಿ, ಜ್ಞಾನವಿಕಾಸ ಸಮನ್ವಯ ಅಧಿಕಾರಿಗಳಾದ ಸುನೀತ, ಸೇವಾ ಪ್ರತಿನಿಧಿ ಕಾಮೇರಮ್ಮ, ಹಾಗೂ ದೇವಸ್ಥಾನ ಸದಸ್ಯರು ರುದ್ರಯ್ಯ, ಲೋಹಿತ್, ಶರತ್, ವಿಶ್ವನಾಥ್, ವಿನಯ್, ಕುಮಾರ್ ಹಾಜರಿದ್ದರು.



# ಪೊಲೀಸರಿಂದ ಸಿಗದ ನೆರವು ದಂಪತಿ ಪರದಾಟ

**ಯಳಂದೂರು:** ತಾಲೂಕಿನ ಕಂದಹಳ್ಳಿ ಗ್ರಾಮದಲ್ಲಿ ನಡೆದಿದ್ದ ಹಲ್ಲೆ ಪ್ರಕರಣದಲ್ಲಿ ವ್ಯಕ್ತಿಯೊಬ್ಬರು ಗಾಯಗೊಂಡಿದ್ದು ಹಲ್ಲೆ ನಡೆಸಿದವರ ವಿರುದ್ಧ ಕ್ರಮ ವಹಿಸುವಂತೆ ಪೊಲೀಸರಿಗೆ ದೂರು ನೀಡಿದ್ದರೂ ನಮಗೆ ಸೂಕ್ತ ನ್ಯಾಯ ಸಿಕ್ಕಿಲ್ಲ, ಗ್ರಾಮದ ಯಜನಮಾನರು ನ್ಯಾಯ ದೊರಕಿಸಲು ನೀಡಿದ್ದ ಭರವಸೆಯೂ ಹುಸಿಯಾಗಿದೆ ಎಂದು ದಂಪತಿ ಪೊಲೀಸ್ ಹಾಗೂ ಆರಕ್ಷಕ ಮಹಾನಿರ್ದೇಶಕರಿಗೆ ದೂರು ಸಲ್ಲಿಸಿರುವ ಘಟನೆ ನಡೆದಿರುವುದು ತಡವಾಗಿ ಬೆಳಕಿಗೆ ಬಂದಿದೆ.

ಕಂದಹಳ್ಳಿ ಗ್ರಾಮದ ಮಾದೇಶ ಹಾಗೂ ಲಕ್ಷ್ಮಿ ಎಂಬ ದಂಪತಿಯೇ ದೂರು ನೀಡಿದ್ದವರಾಗಿದ್ದಾರೆ. ಕಂದಹಳ್ಳಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಭಗೀರಥ ಹೆಬ್ಬಾಗಿಲು ನಿರ್ಮಾಣ ಕಾಮಗಾರಿ ನಡೆಯುತ್ತಿತ್ತು. ಇದರಲ್ಲಿ ಮಾದೇಶ ಎಂಬುವರೂ ಕೂಡ ಉಪ್ಪಾರ ಸಮುದಾಯದ ಯಜಮಾನರಾಗಿದ್ದು ಕಾಮಗಾರಿಯ ಉಸ್ತುವಾರಿ ನೋಡಿಕೊಳ್ಳುತ್ತಿದ್ದರು. ಈ ಸಂದರ್ಭದಲ್ಲಿ ಸರದಿಗೆ ಕೆಲಸಕ್ಕೆ ತಡವಾಗಿ ಬಂದ



ಮಹದೇವಶೆಟ್ಟಿ ಮತ್ತು ನಾಗೇಂದ್ರ ಎಂಬುವರಿಗೆ ಈಗ ಸಮಯವಾಗಿದೆ. ನಾಳೆ ಬನ್ನಿ ಎಂದು ಹೇಳಿದಾಗ ಇವರಿಬ್ಬರೂ ಸೇರಿ ಮಾದೇಶ ಎಂಬುವರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ. ಈ ಘಟನೆ ಸಂಬಂಧ ಗ್ರಾಮದ ಯಜಮಾನರು ಠಾಣೆಗೆ ದೂರು ನೀಡಬಾರದು. ನಿನಗೆ ಪರಿಹಾರ ಕೊಡಿಸುತ್ತೇವೆ ಎಂದು ಭರವಸೆ ನೀಡಿದ್ದಾರೆ. ಇದಾದ ಬಳಿಕ ಇವರು 2 ಲಕ್ಷ ರೂ. ಪರಿಹಾರ ಮೊತ್ತಕ್ಕೆ ಕೇವಲ 50 ಸಾವಿರ ಪರಿಹಾರ ನೀಡಿದ್ದರು. ಆದರೆ ನನಗೆ ಗಾಯ ಹೆಚ್ಚಾಗಿದ್ದು ಶಸ್ತ್ರ ಚಿಕಿತ್ಸೆಯೂ ಮಾಡಿದ್ದು ಕೆಲಸಕ್ಕೆ ತೆರಳಲು ಸಾಧ್ಯವಾಗದ ಸ್ಥಿತಿಯಲ್ಲಿದ್ದೆ. ನಂತರ ನನಗೆ ಬೇಕೆಂತಲೇ ಮಹದೇವಶೆಟ್ಟಿ ರವರ ಮಗ ಕುಮಾರ ಎಂಬುವರು ತಮ್ಮ ಬೈಕ್‌ನಲ್ಲಿ ಲೈಟ್ ಹಾಕದೆ ರಾತ್ರಿ ವೇಳೆ ಅತಿವೇಗವಾಗಿ ಬಂದು ನನಗೆ ಗುದ್ದಿ ಕೊಲೆಗೆ ಯತ್ನ ನಡೆಸಿದ್ದಾನೆ. ನಂತರ ನಾನು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದು ದೂರು ಈತನ ವಿರುದ್ಧವೂ ದೂರು ಸಲ್ಲಿಸಿದ್ದೇನೆ. ಆದರೂ ಕೂಡ ನನ್ನ ದೂರನ್ನು ಪೊಲೀಸರು ಕಡೆಗಣಿಸಿ ತಮಗಿಷ್ಟದಂತೆ ದೂರು ನಮೂದಿಸಿದ್ದಾರೆ. ಹಾಗಾಗಿ ನನಗೆ ಸೂಕ್ತ ನ್ಯಾಯ ಸಿಕ್ಕಿಲ್ಲ. ಆದ್ದರಿಂದ ಈ ಪ್ರಕರಣದ ತನಿಖೆಯನ್ನು ಬೇರೆ ಠಾಣೆಯ ಸಿಬ್ಬಂಧಿಯಿಂದ ಮಾಡಿಸಿ ನ್ಯಾಯ ದೊರಕಿಸಬೇಕು. ಅಲ್ಲದೆ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ವಹಿಸಬೇಕು ಎಂದು ಆಗ್ರಹಿಸಿ ಇವರು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ, ಪೊಲೀಸ್ ಅಧೀಕ್ಷಕರು, ಎಸ್‌ಪಿ ಸೇರಿದಂತೆ ಅನೇಕರಿಗೆ ದೂರು ಸಲ್ಲಿಸಿದ್ದಾರೆ.

## ರೋಟರಿ ಕ್ಲಬ್ ಆಫ್ ಹೆರಿಟೇಜ್ ಮೈಸೂರಿನ ನೂತನ

# ಅಧ್ಯಕ್ಷರಾಗಿ ರೊ.ಎಂ.ಎಸ್.ರಾಜು ಆಯ್ಕೆ

**ಮೈಸೂರು:** ನಗರದ ಖಾಸಗಿ ಹೋಟೆಲ್ ಆವರಣದಲ್ಲಿ ರೋಟರಿ ಕ್ಲಬ್ ಆಫ್ ಹೆರಿಟೇಜ್ ಮೈಸೂರಿನ 2025 26ನೇ ಸಾಲಿಗೆ ನೂತನ ಅಧ್ಯಕ್ಷರಾಗಿ ರೋಟೇರಿಯನ್ ರಾಜು ಎಂ ಎಸ್ ಅವರು ಆಯ್ಕೆಯಾಗಿದ್ದು ಇದರ ಸಂಸ್ಥಾಪನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮವನ್ನು ಮುಖ್ಯ ಅತಿಥಿಗಳಾಗಿ ಆಗಮಿಸಿದ ಅನುಸ್ಥಾಪನ ಅಧಿಕಾರಿ ರೋಟೇರಿಯನ್ ಯಶಸ್ವಿ ಎಸ್ ಸೋಮಶೇಖರ್ ಅವರು ನೂತನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳಿಗೆ ಸನ್ಮಾನಿಸಿ ಗೌರವಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಶುಭ ಹಾರೈಸಿದರು.

ಇದೆ ವೇಳೆ ಮಾಧ್ಯಮಗಳ ಜೊತೆ ಮಾತನಾಡಿದ ನೂತನ ಅಧ್ಯಕ್ಷರಾದ ರೋಟೇರಿಯನ್ ರಾಜು ಎಂ ಎಸ್ ಅವರು ಪ್ರಸಕ್ತ ಸಾಲಿಗೆ ನೂತನ ಅಧ್ಯಕ್ಷರಾಗಿ ನನ್ನನ್ನು ನೇಮಕ ಮಾಡಿರುವುದು ಸಂತಸ ತಂದಿದೆ ಅಲ್ಲದೆ ಇಷ್ಟು ದಿನ ರೋಟೇರಿಯನಾಗಿ ಕಾರ್ಯ ನಿರ್ವಹಿಸುತ್ತಿದ್ದ ನನಗೆ ಮುಂದಿನ ಒಂದು ವರ್ಷದ ಅವಧಿಗೆ ಅಧ್ಯಕ್ಷರನ್ನಾಗಿ ಮಾಡಿರುವುದು ಮತ್ತಷ್ಟು ನನ್ನ ಜವಾಬ್ದಾರಿಯನ್ನು ಹೆಚ್ಚಿಸಿದೆ ಈ ನನ್ನ ಅವಧಿಯಲ್ಲಿ ನನಗೆ ವಹಿಸಿದ ಜವಾಬ್ದಾರಿಯನ್ನು ಶ್ರದ್ಧೆಯಿಂದ ನಿಭಾಯಿಸುತ್ತೇನೆ ಎಂದರು ನಂತರ ಮಾತನಾಡಿದ ಕಾರ್ಯದರ್ಶಿ ರೋಟೇರಿಯನ್ ಬಾಲಸುಬ್ರಹ್ಮಣ್ಯ ಅವರು ಇದುವರೆಗೂ ನಾನು ರೋಟರಿ ಸಂಸ್ಥೆಯಲ್ಲಿ ಸದಸ್ಯನಾಗಿ ಕಾರ್ಯ ನಿರ್ವಹಿಸಿದ್ದೇ ಮುಂದಿನ




ಒಂದು ವರ್ಷಕ್ಕೆ ಕಾರ್ಯದರ್ಶಿಯನ್ನಾಗಿ ನನ್ನನ್ನು ಆಯ್ಕೆ ಮಾಡಿರುವುದಕ್ಕೆ ಸಂತಸವಿದ್ದು ಕಾಯಾ ವಾಚ ಮನಸ ನಿಷ್ಠೆಯಿಂದ ಕಾರ್ಯನಿರ್ವಹಿಸಿದರೆ ಉತ್ತಮ ಹಂತಕ್ಕೆ ತಲುಪಬಹುದು ಎಂಬುದಕ್ಕೆ ನಾನೇ ಸಾಕ್ಷಿ ಹಾಗಾಗಿ ನನಗೆ ನೀಡಿದ ಜವಾಬ್ದಾರಿಯನ್ನು ಎಲ್ಲರನ್ನು ಒಗ್ಗೂಡಿಸಿ ಪ್ರತಿಯೊಬ್ಬರ ಸಲಹೆ ತೆಗೆದುಕೊಂಡು ಜವಾಬ್ದಾರಿಯನ್ನು ನಿರ್ವಹಿಸಿದ ಎಂದರು ಇದೆ ವೇಳೆ ಕಾರ್ಯಕ್ರಮದಲ್ಲಿ ಸಹಾಯಕ ಗವರ್ನರ್ ಆದ ರೋಟೇರಿಯನ್ ರಾಘವೇಂದ್ರ, ಪ್ರಸಾದ್, ಕಾರ್ಯಕ್ರಮದ ಮುಖ್ಯ ಅತಿಥಿಗಳು ಚೇತನ್ ರಾಮ್, ವಲಯ ಸೇನಾನಿ ರೋಟೇರಿಯನ್ ರವಿ ಜಿ ಸೇರಿದಂತೆ ಹಲವು ಗಣ್ಯರು ಕುಟುಂಬದವರು ಉಪಸ್ಥಿತರಿದ್ದರು.

# ಅಂಗವಿಕಲರಿಗೆ ಲ್ಯಾಪ್‌ಟಾಪ್ ವಿತರಣೆ

**ಯಳಂದೂರು:** ಗ್ರಾಮ ಪಂಚಾಯಿತಿಗಳಲ್ಲಿ ವಿಕಲ ಚೇತನರ ಗ್ರಾಮೀಣ ಪುನರ್ ವಸತಿ ಕಾರ್ಯಕರ್ತರಿಗೆ ತಾಲೂಕು ಪಂಚಾಯಿತಿಯ 2024–25 ನೇ ಸಾಲಿನ ಅನಿರ್ಬಂಧಿತ ಶೇ.5ರ ವಿಕಲ ಚೇತನರ ಅನುದಾನದಲ್ಲಿ ಲ್ಯಾಪ್‌ಟಾಪ್ ಗಳನ್ನು ಶನಿವಾರ ಶಾಸಕ ಎ.ಆರ್. ಕೃಷ್ಣಮೂರ್ತಿ ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮ ಪಂಚಾಯಿತಿಯಲ್ಲಿ ಕೆಲಸ ನಿರ್ವಹಿಸುವ ಗ್ರಾಮೀಣ ಪುನರ್ ವಸತಿ ಕಾರ್ಯಕರ್ತರು ಆಯಾ ಪಂಚಾಯಿತಿ ವ್ಯಾಪ್ತಿಯ ವಿಶೇಷ ಚೇತನರ ಮಾಹಿತಿಯನ್ನು ಕಲೆ ಹಾಕಿ ಸರ್ಕಾರದಿಂದ ಲಭಿಸುವ ಸೌಲಭ್ಯಗಳ ದಾಖಲೆಗಳನ್ನು ಕ್ರೂಢೀಕರಿಸುವುದು, ಇದನ್ನು ಸರ್ಕಾರ, ಸಂಬಂಧಪಟ್ಟ ಇಲಾಖೆಗಳಿಗೆ ಮಾಹಿತಿಯನ್ನು ಕಳುಹಿಸಲು ಅನುಕೂಲವಾಗುವಂತೆ ನಮಗೆ ಲ್ಯಾಪ್‌ಟಾಪ್‌ಗಳು ಬೇಕೆಂದು ಬೇಡಿಕೆ ಸಲ್ಲಿಸಿದ್ದರು. ಯಳಂದೂರು ತಾಲೂಕಿನಲ್ಲಿ ಒಟ್ಟು 12 ಗ್ರಾಮ ಪಂಚಾಯಿತಿಗಳಿದ್ದು ಇದರಲ್ಲಿ ಎಲ್ಲಾ ಪಂಚಾಯಿತಿಗಳ ಪುನರ್ ವಸತಿ ಕಾರ್ಯಕರ್ತರಿಗೂ ಲ್ಯಾಪ್‌ಟಾಪ್‌ಗಳನ್ನು ನೀಡಲಾಗುತ್ತಿದೆ. ಇದರಿಂದ ಯಳಂದೂರು ತಾಲೂಕಿನಲ್ಲಿರುವ 1950 ಕ್ಕೂ ಹೆಚ್ಚು ವಿಕಲಚೇತನರಿಗೆ ಅನುಕೂಲವಾಗಲಿದೆ. ಪ್ರತಿಯೊಬ್ಬ ಕಾರ್ಯಕರ್ತರು ಇದರ ಸದ್ಬಳಕೆಯನ್ನು ಮಾಡಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ತಾಲೂಕು



ಪಂಚಾಯಿತಿಯ ಅನುದಾನದಲ್ಲಿ ಹೊನ್ನೂರು, ಅಗರ–ಮಾಂಬಳ್ಳಿ ಹಾಗೂ ಗೌಡಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಇಸಿಜಿ ಯಂತ್ರಗಳನ್ನೂ ಕೂಡ ವಿತರಣೆ ಮಾಡಲಾಯಿತು. ಇದನ್ನೂ ಕೂಡ ಗ್ರಾಮೀಣ ಆರೋಗ್ಯವೃದ್ಧಿಗಾಗಿ ನೀಡಲಾಗುತ್ತಿದ್ದು ಇದರಿಂದ ಹೃದಯಸಂಬಂಧಿ ಕಾಯಿಲೆಗಳನ್ನು ತಕ್ಷಣ ಪತ್ತೆ ಹಚ್ಚಿ ಹೆಚ್ಚಿನ ಚಿಕಿತ್ಸೆಗೆ ತಾಲೂಕು, ಜಿಲ್ಲಾಸ್ಪತ್ರೆಗಳಿಗೆ ರೋಗಿಗಳನ್ನು ಕಳುಹಿಸಲು ಅನುಕೂಲವಾಗಲಿದ್ದು ಸಂಬಂಧಪಟ್ಟವರು ಇದನ್ನು ಸದಾ ಸುಸ್ಥಿತಿಯಲ್ಲಿಟ್ಟುಕೊಂಡು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು. ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಎಚ್.ವಿ. ಚಂದ್ರು, ತಹಸೀಲ್ದಾರ್ ನಯನ ಜಿಲ್ಲಾ ಕಾರ್ಮಿಕ ಅಧಿಕಾರಿ ಡಾ. ರಾಮಚಂದ್ರಯ್ಯ ಜಿಪಂ ಮಾಜಿ ಉಪಾಧ್ಯಕ್ಷ ಜೆ. ಯೋಗೇಶ್, ಪಪಂ ಅಧ್ಯಕ್ಷೆ ಲಕ್ಷ್ಮಿಮಲ್ಲು, ತಾಪಂ ಇಒ ಉಮೇಶ್, ಸಿಪಿಐ ಶ್ರೀಕಾಂತ್ ಪಿಎಸ್‌ಐ ಆಕಾಶ್ ಹಿರಿಯ ಕಾರ್ಮಿಕ ನಿರೀಕ್ಷಕ ವಿ.ಎಲ್. ಪ್ರಸಾದ್ ಮುಖಂಡರಾದ ಕಂಹದಳ್ಳಿ ನಂಜುಂಡಸ್ವಾಮಿ, ಜಯಣ್ಣ, ಅಸಂಘಟಿತ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ಕೃಷ್ಣಾಪುರ ದೇವರಾಜು ಸೇರಿದಂತೆ ಅನೇಕರು ಇದ್ದರು.

# ಸಂಜೆ ಟಿಪ್ಸ್

## ಮಿನಿ-ಟ್ರಕ್ ಏಸ್ ಪ್ರೋ ಅನ್ನು ಬಿಡುಗಡೆ ಮಾಡಿದ ಟಾಟಾ ಮೋಟಾರ್ಸ್

ಭಾರತದ ಅತಿದೊಡ್ಡ ವಾಣಿಜ್ಯ ವಾಹನ ತಯಾರಕರಾದ ಟಾಟಾ ಮೋಟಾರ್ಸ್, ಸರಕು ಸಾಗಣೆ ವಿಭಾಗದಲ್ಲಿ ಹೊಸ ಅಧ್ಯಾಯ ಪ್ರಾರಂಭಿಸಲು 4 ಚಕ್ರದ ಮಿನಿ ಟ್ರಕ್ ಏಸ್ ಪ್ರೋ ಅನ್ನು ಬಿಡುಗಡೆ ಮಾಡಿದೆ. ಕೇವಲ 3.99 ಲಕ್ಷದಿಂದ ಆರಂಭವಾಗುವ ಅತ್ಯಂತ ಕೈಗೆಟಕುವ ಬೆಲೆಯೊಂದಿಗೆ, ಟಾಟಾ ಏಸ್ ಪ್ರೋ ಭಾರತದ ಅತ್ಯಂತ ಕೈಗೆಟಕುವ ನಾಲ್ಕು-ಚಕ್ರದ ಮಿನಿ ಟ್ರಕ್ ಆಗಿದ್ದು, ಅಸಾಧಾರಣ ದಕ್ಷತೆ, ಬಹುಮುಖತೆ ಮತ್ತು ಉನ್ನತ ಮೌಲ್ಯವನ್ನು ನೀಡುತ್ತದೆ. ಹೊಸ ತರಂಗದ ಉದ್ಯಮಿಗಳನ್ನು ಸಶಕ್ತೀಕರಣಗೊಳಿಸಲು ವಿನ್ಯಾಸಗೊಳಿಸಲಾದ ಟಾಟಾ ಏಸ್ ಪ್ರೋ, ಪೆಟ್ರೋಲ್, ಬೈ-ಫ್ಯೂಯಲ್ (ಸಿ ಎನ್ ಜಿ + ಪೆಟ್ರೋಲ್), ಮತ್ತು ಎಲೆಕ್ಟ್ರಿಕ್ ರೂಪಾಂತರಗಳಲ್ಲಿ ಲಭ್ಯವಿದೆ ಗ್ರಾಹಕರಿಗೆ ತಮ್ಮ ವ್ಯಾಪಾರದ ಅಗತ್ಯಗಳಿಗೆ ಸೂಕ್ತವಾದ ವಾಹನವನ್ನು ಆಯ್ಕೆ ಮಾಡಲು ಸೌಲಭ್ಯವನ್ನು ಒದಗಿಸುತ್ತದೆ. ಗ್ರಾಹಕರು ದೇಶಾದ್ಯಂತ ಟಾಟಾ ಮೋಟರ್ಸ್‌ನ 1250 ವಾಣಿಜ್ಯ ವಾಹನ ಮಾರಾಟ ಸಂಪರ್ಕ ಕೇಂದ್ರಗಳಲ್ಲಿ ಅಥವಾ ಟಾಟಾ ಮೋಟರ್ಸ್‌ನ ಆನ್‌ಲೈನ್ ಮಾರಾಟ ವೇದಿಕೆಯಾದ ಫ್ಲೀಟ್ ವರ್ಸ್‌ನಲ್ಲಿ ತಮ್ಮ ಆದ್ಯತೆಯ ಏಸ್ ಪ್ರೋ ರೂಪಾಂತರವನ್ನು ಬುಕ್ ಮಾಡಬಹುದು. ಟಾಟಾ ಏಸ್ ಪ್ರೋನ ಮಾಲೀಕತ್ವವನ್ನು ಸುಲಭಗೊಳಿಸಲು, ಟಾಟಾ ಮೋಟರ್ಸ್ ಪ್ರಮುಖ ಬ್ಯಾಂಕ್‌ಗಳು ಮತ್ತು ಎನ್ ಬಿ ಎಫ್ ಸಿ ಗಳೊಂದಿಗೆ ಸಹಯೋಗ ಮಾಡಿಕೊಂಡು, ತ್ವರಿತ ಸಾಲ ಅನುಮೋದನೆ, ಹೊಂದಿಕೊಳ್ಳುವ ಇ ಎಂ ಐ ಆಯ್ಕೆಗಳು ಮತ್ತು ವಿವಿಧ ಗ್ರಾಹಕರ ಅಗತ್ಯಗಳಿಗೆ ಸರಿಹೊಂದುವಂತೆ ವರ್ಧಿತ ಧನಸಹಾಯ ಬೆಂಬಲವನ್ನು ಒಳಗೊಂಡಂತೆ ತೊಂದರೆ-ಮುಕ್ತ ಫೈನಾನ್ಸಿಂಗ್ ಸೌಲಭ್ಯಗಳನ್ನು ಒದಗಿಸಿದೆ.ಏಸ್ ಪ್ರೋನ ಬಿಡುಗಡೆ ಕುರಿತು, ಟಾಟಾ ಮೋಟಾರ್ಸ್‌ನ ಕಾರ್ಯನಿರ್ವಾಹಕ ನಿರ್ದೇಶಕ ಗಿರೀಶ್ ವಾಘ್ ಅವರು, ''ಟಾಟಾ ಏಸ್‌ನ ಬಿಡುಗಡೆಯು ಭಾರತದಲ್ಲಿ ಸರಕು ಸಾಗಣೆ ವಿಭಾಗದಲ್ಲಿ ಕ್ರಾಂತಿಯನ್ನು ತಂದಿತು. ಕಳೆದ ಎರಡು ದಶಕಗಳಲ್ಲಿ, ಇದು 25 ಲಕ್ಷಕ್ಕೂ ಹೆಚ್ಚು ಉದ್ಯಮಿಗಳಿಗೆ ಸಶಕ್ತೀಕರಣಗೊಳಿಸಿ, ಪ್ರಗತಿ ಮತ್ತು ಸಾಧ್ಯತೆಯ ಸಂಕೇತವಾಯಿತು. -ಹೊಸ ಟಾಟಾ ಏಸ್ ಪ್ರೋನೊಂದಿಗೆ, ನಾವು ಹೊಸ ತಲೆಮಾರಿನ ಕನಸುಗಾರರಿಗಾಗಿ ಈ ಪರಂಪರೆಯನ್ನು ನವೀಕೃತ ಉದ್ದೇಶದೊಂದಿಗೆ ಮುಂದುವರೆಸುತ್ತಿದ್ದೇವೆ. ಸ್ಥಿರತೆ, ಸುರಕ್ಷತೆ ಮತ್ತು ಲಾಭದಾಯಕತೆಗಾಗಿ ವಿನ್ಯಾಸಗೊಳಿಸಲಾದ ಏಸ್ ಪ್ರೋ, ತಮ್ಮ ಭವಿಷ್ಯವನ್ನು ತಾವೇ ತೆಗೆದುಕೊಳ್ಳಲು ಸಿದ್ಧರಿರುವ ಆಕಾಂಕ್ಷಿಗಳ ಆಕಾಂಕ್ಷೆಗಳನ್ನು ಈಡೇರಿಸಲು ಹೆಚ್ಚಿನ ಗಳಿಕೆಯ ಸಾಮರ್ಥ್ಯವನ್ನು ಒದಗಿಸುತ್ತದೆ ಎಂದು ಹೇಳಿದರು.

## ಪಾಲಕ್ ಸೊಪ್ಪಿನ ತಂಬುಳಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಪಾಲಕ್ ಸೊಪ್ಪು- 1 ಕಟ್ಟು ತುಪ್ಪ - 1 ಚಮಚ ಕಾಳು ಮೆಣಸು - 1 ಚಮಚ ಜೀರಿಗೆ - 1 ಚಮಚ ಒಣ ಮೆಣಸು ಸಾಸಿವೆ ಉದ್ದಿನ ಬೇಳೆ ಕರಿಬೇವು ಬೆಳ್ಳುಳ್ಳಿ - 6, ಹಸಿ ಮೆಣಸಿನಕಾಯಿ - 1 ಚಮಚ ಕೊತ್ತಂಬರಿ ಸೊಪ್ಪು ಮೊಸರು ಉಪ್ಪು ಎಣ್ಣೆ

### ಮಾಡುವ ವಿಧಾನ

ಮೊದಲು ಪಾಲಕ್ ಸೊಪ್ಪನ್ನು ಚೆನ್ನಾಗಿ ತೊಳೆದುಕೊಂಡು ಇಟ್ಟುಕೊಳ್ಳಿ. ಈಗ ಒಲೆ ಮೇಲೆ ಒಂದು ಬಾಣಲೆ ಇಟ್ಟು ಅದಕ್ಕೆ ಎಣ್ಣೆ ಹಾಕಿ ಬಳಿಕ ಜೀರಿಗೆ, ಕಾಳು ಮೆಣಸು, ಹಸಿ ಮೆಣಸು, ಬೆಳ್ಳುಳ್ಳಿ ಹಾಕಿಕೊಂಡು ಫ್ರೈ ಮಾಡಿ. 1 ನಿಮಿಷದ ಬಳಿಕ ತೊಳೆದುಕೊಂಡಿರುವ ಪಾಲಕ್ ಸೊಪ್ಪನ್ನು ಇಡಿಯಾಗಿ ಹಾಕಿ, ಹಾಗೆ ಕೊತ್ತಂಬರಿ ಸೊಪ್ಪು ಕೂಡ ಹಾಕಿ ಫ್ರೈ ಮಾಡಿಕೊಳ್ಳಿ. ಇದು ಚೆನ್ನಾಗಿ ಫ್ರೈ ಆಗಿ ಸೊಪ್ಪು ಬಾಡಿಕೊಳ್ಳಬೇಕು ಹೀಗಾಗಿ 2ರಿಂದ 3 ನಿಮಿಷಗಳ ಕಾಲ ಚೆನ್ನಾಗಿ ಫ್ರೈ ಮಾಡಿಕೊಳ್ಳಿ. ನಂತರ ಒಲೆ ಆಫ್ ಮಾಡಿಕೊಂಡು ತೆಂಗಿನಕಾಯಿ ತುರಿ ಹಾಕಿ ಮಿಕ್ಸ್ ಮಾಡಿ. ಪಾತ್ರೆಯ ಬಿಸಿಯಲ್ಲಿ ಸ್ವಲ್ಪ ಬಾಡಿಕೊಂಡರೆ ಸಾಕು, ಈಗ ಈ ಎಲ್ಲಾ ಮಸಾಲೆಗಳ ತಣ್ಣಗಾಗಲು ಬಿಡಿ. ಈ ವಸ್ತುಗಳು ತಣ್ಣಗಾದ ಬಳಿಕ ಈಗ ಒಂದು ಮಿಕ್ಸಿ ಜಾರ್‌ಗೆ ಈ ಎಲ್ಲಾ ವಸ್ತುಗಳ ತುಂಬಿಸಿಕೊಳ್ಳಿ. ನಂತರ ಸಣ್ಣದಾಗಿ ನುಣ್ಣಗೆ ರುಬ್ಬಿಕೊಳ್ಳಬೇಕು. ರುಬ್ಬಿದ ಈ ಮಸಾಲೆಯನ್ನು ಬದಿಗಿಟ್ಟುಕೊಂಡು ಒಂದು ಪಾತ್ರೆಯಲ್ಲಿ ಈಗ ಅರ್ಧ ಲೀಟರ್ ಮೊಸರು ಹಾಗೂ ಸ್ವಲ್ಪ ನೀರು ಹಾಕಿ ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ಇದು ಗಟ್ಟಿ ಮಜ್ಜಿಗೆಯಂತೆ ಆಗಬೇಕು ಹೀಗಾಗಿ ಸ್ವಲ್ಪ ಮಿಕ್ಸ್ ಮಾಡಿಕೊಳ್ಳಬೇಕು. ನಂತರ ಈಗ ಮಿಕ್ಸಿಯಲ್ಲಿ ರುಬ್ಬಿರುವ ಈ ಮಸಾಲೆಗಳನ್ನು ಮಜ್ಜಿಗೆಗೆ ಹಾಕಿಕೊಂಡು ಮಿಕ್ಸ್ ಮಾಡಿಕೊಳ್ಳಿ. ಈಗ ಒಲೆ ಮೇಲೆ ಒಂದು ಬಾಣಲೆ ಇಟ್ಟು ತುಪ್ಪ ಅಥವಾ ಎಣ್ಣೆ ಹಾಕಿಕೊಂಡು ಸಾಸಿವೆ, ಜೀರಿಗೆ ಉದ್ದಿನಬೇಳೆ, ಕರಿಬೇವು, ಒಣ ಮೆಣಸು, ಇಂಗು ಹಾಕಿ ಒಗ್ಗರಣೆ ಮಾಡಿ ಈಗ ತಂಬುಳಿಗೆ ಹಾಕಿ ಮಿಕ್ಸ್ ಮಾಡಿಕೊಳ್ಳಿ. ಇಷ್ಟಾದರೆ ನಿಮ್ಮ ಮುಂದೆ ತಂಪು ತಂಪಿನ ತಂಬುಳಿ ರೆಡಿಯಾಗುತ್ತದೆ.

## ಸೂಪರ್‌ಸ್ಟಾರ್ ಮಹೇಶ್ ಬಾಬುಗೆ ಸಂಕಷ್ಟ



ಟಾಲಿವುಡ್ ಸೂಪರ್‌ಸ್ಟಾರ್ ಮಹೇಶ್ ಬಾಬು ಖ್ಯಾತ ನಟರಷ್ಟೇ ಅಲ್ಲದೆ, ಹಲವು ಉತ್ಪನ್ನಗಳಿಗೆ ಬ್ರ್ಯಾಂಡ್ ಅಂಬಾಸಿಡರ್ ಕೂಡ ಆಗಿದ್ದಾರೆ. ಇದೀಗ ರಿಯಲ್ ಎಸ್ಟೇಟ್ ಕಂಪನಿಯೊಂದರ ಪ್ರಚಾರಕರಾಗಿಯೂ ಗುರುತಿಸಿಕೊಂಡಿದ್ದ ಮಹೇಶ್ ಬಾಬುಗೆ ಇಡಿ ನಂತರ ಇದೀಗ ಗ್ರಾಹಕ ವೇದಿಕೆಯಿಂದ ಸಂಕಷ್ಟ ಎದುರಾಗಿದೆ. ರಂಗಾರೆಡ್ಡಿ ಜಿಲ್ಲಾ ಗ್ರಾಹಕ ವೇದಿಕೆ ನೀಡಿದ ಸಾಯಿ ಸೂರ್ಯ ಡೆವಲಪರ್ಸ್ ಕಂಪನಿಯು ನಡೆಸಿದ ಅಕ್ರಮಕ್ಕೆ ಸಂಬಂಧಿಸಿದಂತೆ ಈ ಕಂಪನಿಯ ಬ್ರಾಂಡ್ ಅಂಬಾಸಿಡರ್ ಆದ ಮಹೇಶ್ ಬಾಬು ಅವರ ಮೇಲೆ ದೂರು ನೀಡಲಾಗಿದೆ. ಈ ಕಂಪನಿಯಿಂದ ಫ್ಲಾಟ್ ಖರೀದಿಸಿ ವಂಚನೆಗೊಳಗಾದ ವೈದ್ಯ ಮತ್ತು ಇನ್ನೊಬ್ಬ ವ್ಯಕ್ತಿಯು ಗ್ರಾಹಕ ಆಯೋಗಕ್ಕೆ ದೂರು ನೀಡಿದ್ದಾರೆ. ಇದರ ಮಾಲೀಕರು ಫ್ಲಾಟ್ ಕೊಡುವುದಾಗಿ ವಂಚಿಸಿದ್ದಾರೆ. ಆದರೆ ಇದಕ್ಕೆ ನಟ ಇದುವರೆಗೂ ಯಾವುದೇ ರೀತಿಯಲ್ಲಿ ಪ್ರತಿಕ್ರಿಯಿಸಿಲ್ಲ ಎಂದು ಇದರಲ್ಲಿ ಉಲ್ಲೇಖಿಸಲಾಗಿದೆ.

ಸಾಯಿ ಸೂರ್ಯ ಡೆವಲಪರ್ಸ್ ಕಂಪನಿಯಿಂದ ಫ್ಲಾಟ್ ಗಳನ್ನು ಖರೀದಿಸಲು ಮಹೇಶ್ ಬಾಬು ಪ್ರಚಾರ ಮಾಡಿದ್ದರು. ಆದರೆ ಅವು ನಕಲಿ ಸೈಟ್ ಎಂಬುದು ತಿಳಿದುಬಂದಿದೆ. ಇವರಿಂದ ವಂಚನೆಗೊಳಗಾದವರಲ್ಲಿ ಒಬ್ಬರಾದ ವೈದ್ಯನೊಬ್ಬ ತಾನು ನೀಡಿದ ಹಣವನ್ನು ಮರುಪಾವತಿಸಬೇಕೆಂದು ಗ್ರಾಹಕ ವೇದಿಕೆಗೆ ದೂರು ನೀಡಿದ್ದಾನೆ. ಈ ಪ್ರಕರಣದಲ್ಲಿ, ಮೆಸರ್ಸ್ ಸಾಯಿ ಸೂರ್ಯ ಡೆವಲಪರ್ಸ್ ಸನ್ಸ್ ಅವರನ್ನು ಮೊದಲ ಪ್ರತಿವಾದಿಯನ್ನಾಗಿ ಮತ್ತು ಮಾಲೀಕ ಕಂಚರ್ಲ ಸತೀಶ್ ಚಂದ್ರಗುಪ್ತ ಅವರನ್ನು ಎರಡನೇ ಪ್ರತಿವಾದಿಯನ್ನಾಗಿ ಹೆಸರಿಸಲಾಗಿದ್ದು, ಈ ಬಗ್ಗೆ ಜಾಹೀರಾತು ನೀಡಿದ್ದ ಮಹೇಶ್ ಬಾಬು ಅವರನ್ನು ಮೂರನೇ ಪ್ರತಿವಾದಿಯಾಗಿ ಸೇರಿಸಲಾಗಿದೆ.

ಈ ಮೊದಲು ಸಾಯಿ ಸೂರ್ಯ ಡೆವಲಪರ್ಸ್‌ಗೆ ಸಂಬಂಧಿಸಿದ ಅದೇ ಪ್ರಕರಣದಲ್ಲಿ, ಮಹೇಶ್ ಬಾಬು ಅವರಿಗೆ ಇಡಿ ನೋಟಿಸ್ ನೀಡಿತ್ತು. ಇನ್ನೂ ಬ್ರಾಂಡ್ ಅಂಬಾಸಿಡರ್ ಆಗಿದ್ದಕ್ಕೆ ಸಂಭಾವನೆಯಾಗಿ ಪಡೆದ ಹಣದಲ್ಲಿ ಅರ್ಧದಷ್ಟು ಹಣ ಬ್ಲಾಕ್ ಮನಿ ಎಂಬ ಅನುಮಾನದ ಮೇಲೆ ತನಿಖೆ ಮಾಡಲು ಇಡಿ ಮಹೇಶ್ ಬಾಬುಗೆ ನೋಟಿಸ್ ನೀಡಿ, ತನಿಖೆಗೆ ಖುದ್ದು ಹಾಜರಾಗುವಂತೆ ತಿಳಿಸಿತ್ತು. ಆದರೆ ಶೂಟಿಂಗ್‌ಗಾಗಿ ವಿದೇಶಕ್ಕೆ ಹೋಗುತ್ತಿರುವುದರಿಂದ ಶೂಟಿಂಗ್‌ನಿಂದ ಹಿಂದಿರುಗಿದ ಬಳಿಕ ಇಡಿ ಮುಂದೆ ಹಾಜರಾಗುವುದಾಗಿ ನಟ ತಿಳಿಸಿದ್ದಾರೆ. ಶ್ರೀ ಸಾಯಿ ಸೂರ್ಯ ಡೆವಲಪರ್ಸ್ ಎಂಬ ರಿಯಲ್‌ಎಸ್ಟೇಟ್‌ನಲ್ಲಿ ಫ್ಲಾಟ್ ಖರೀದಿಸಿದ್ದ ವೈದ್ಯ ಹಾಗೂ ಇನ್ನೊಬ್ಬ ವ್ಯಕ್ತಿ 33 ಲಕ್ಷ ರೂ.ಗಳಿಗೂ ಹೆಚ್ಚು ಹೂಡಿಕೆ ಮಾಡಿದ್ದಾರೆ. ಈ ಕಂಪನಿಯು ಸರ್ಕಾರಿ ಅನುಮತಿ ಇದೆ ಮತ್ತು ಮಹೇಶ್‌ಬಾಬು ಇದರ ಪ್ರವರ್ತಕರು ಎಂದು ಸುಳ್ಳು ಹೇಳಿ ಹಣ ಪಡೆದಿದ್ದಾರೆ. ಅಷ್ಟಕ್ಕೂ ಅಲ್ಲಿ ಯಾವ ಫ್ಲಾಟ್ ಕೂಡ ಇಲ್ಲ, ಇದುವರೆಗೂ ಕಂಪನಿ ಅರ್ಧದಷ್ಟು ಹಣವನ್ನು ಮಾತ್ರ ಹಿಂದಿರುಗಿಸಿದೆ ಎಂದು ವಂಚನೆಗೊಳಗಾದವರು ದೂರಿನಲ್ಲಿ ಉಲ್ಲೇಖಿಸಿದ್ದಾರೆ.

## ಅಂಜೂರ ತಿನ್ನುವುದರಿಂದ ಆಗುವ ಲಾಭ

### ಹೆಲ್ತ್ ಟಿಪ್ಸ್



ಒಣ ಹಣ್ಣುಗಳನ್ನು ಪ್ರತಿದಿನ ಸೇವಿಸಬೇಕು. ಇದು ದೇಹಕ್ಕೆ ಶಕ್ತಿಯನ್ನು ನೀಡುತ್ತದೆ ಮತ್ತು ಅನೇಕ ರೋಗಗಳ ವಿರುದ್ಧ ಹೋರಾಡುವ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ. ಹೆಚ್ಚಿನ ಜನರು ಗೋಡಂಬಿ, ಬಾದಾಮಿ ಮತ್ತು ಒಣದ್ರಾಕ್ಷಿಗಳನ್ನು ಮಾತ್ರ ತಿನ್ನುತ್ತಾರೆ. ಆದರೆ ಅಂಜೂರವು ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ. ಅಂಜೂರವು ಫೈಬರ್‌ನಲ್ಲಿ ಸಮೃದ್ಧವಾಗಿದ್ದು, ದೇಹದ ಕೆಲವು ಭಾಗಗಳಿಗೆ ವರದಾನವಾಗಿ ಕಾರ್ಯನಿರ್ವಹಿಸುತ್ತದೆ. ಅಂಜೂರವನ್ನು ಹೊಟ್ಟೆಗೆ ಉತ್ತಮವೆಂದು ಪರಿಗಣಿಸಲಾಗುತ್ತದೆ. ಪ್ರತಿದಿನ ಅಂಜೂರವನ್ನು ತಿನ್ನುವುದರಿಂದ ಮಲಬದ್ಧತೆ ಸಮಸ್ಯೆ ನಿವಾರಣೆಯಾಗುತ್ತದೆ. ಹೊಟ್ಟೆ ಸ್ವಚ್ಛವಾಗಿರುತ್ತದೆ, ಗ್ಯಾಸ್ ಮತ್ತು ಆಮ್ಲೀಯತೆ ಕಡಿಮೆಯಾಗುತ್ತದೆ. ಅಂಜೂರವನ್ನು ತಿನ್ನಲು ಉತ್ತಮ ಮಾರ್ಗ ಯಾವುದು ಯಾವ ರೋಗಕ್ಕೆ ಅಂಜೂರವು ಹೆಚ್ಚು ಪ್ರಯೋಜನಕಾರಿ ಎಂಬುದರ ಬಗ್ಗೆ ತಿಳಿಯಿರಿ...

ಅಂಜೂರತಿನ್ನುವುದರಿಂದ ಮಲಬದ್ಧತೆ, ಗ್ಯಾಸ್, ಆಮ್ಲೀಯತೆ ಮುಂತಾದ ಹೊಟ್ಟೆಯ ಕಾಯಿಲೆಗಳಿಂದ ಪರಿಹಾರ ಸಿಗುತ್ತದೆ. ನಾರಿನಂಶ ಹೆಚ್ಚಿರುವ ಅಂಜೂರ ತಿನ್ನುವುದರಿಂದ ಹೊಟ್ಟೆ ತುಂಬಿರುತ್ತದೆ ಮತ್ತು ತೂಕ ಬೇಗನೆ ಕಡಿಮೆಯಾಗುತ್ತದೆ. ನೀವು ತೂಕ ಇಳಿಸಿಕೊಳ್ಳಲು ಬಯಸಿದರೆ ಖಂಡಿತ ಅಂಜೂರ ತಿನ್ನಿರಿ. ಅಂಜೂರದಲ್ಲಿ ಹೆಚ್ಚಿನ ಪೊಟ್ಯಾಸಿಯಮ್ ಇರುವುದರಿಂದ, ಇದು ರಕ್ತದೊತ್ತಡ ರೋಗಿಗಳಿಗೆ ಒಳ್ಳೆಯದು. ಅಂಜೂರದಲ್ಲಿ ಕಬ್ಬಿಣವಿದೆ, ಆದ್ದರಿಂದ ರಕ್ತಹೀನತೆ ಇರುವವರಿಗೆ ಅಂಜೂರ ಪ್ರಯೋಜನಕಾರಿ. ಇದು ರಕ್ತಹೀನತೆಯನ್ನು ಗುಣಪಡಿಸಲು ಸಹಾಯ ಮಾಡುತ್ತದೆ. ಸೀಮಿತ ಪ್ರಮಾಣದಲ್ಲಿ ತಿಂದರೆ ಅಂಜೂರ ಮಧುಮೇಹ ರೋಗಿಗಳಿಗೆ ಸಹ ಒಳ್ಳೆಯದು. ಕ್ಯಾಲ್ಸಿಯಂ ಮತ್ತು ವಿಟಮಿನ್‌ಗಳಿಂದ ಸಮೃದ್ಧವಾಗಿರುವ ಅಂಜೂರ ತಿನ್ನುವುದರಿಂದ ಮೂಳೆಗಳು ಬಲಗೊಳ್ಳುತ್ತವೆ.

ಹೊಟ್ಟೆಯ ಸಮಸ್ಯೆ ಮತ್ತು ದೌರ್ಬಲ್ಯದಿಂದ ಬಳಲುತ್ತಿರುವ ಜನರು ದಿನಕ್ಕೆ 4 ಅಂಜೂರದ ಹಣ್ಣುಗಳನ್ನು ತಿನ್ನಬಹುದು. ಸರಾಸರಿ ದಿನಕ್ಕೆ 2-3 ಅಂಜೂರದ ಹಣ್ಣುಗಳನ್ನು ಸೇವಿಸುವುದು ಪ್ರಯೋಜನಕಾರಿ. ಮಧುಮೇಹ ರೋಗಿಗಳು 2 ಅಂಜೂರದ ಹಣ್ಣುಗಳನ್ನು ತಿನ್ನಬಹುದು.

ಕೆಲವರು ಅಂಜೂರದ ಹಣ್ಣುಗಳನ್ನು ಒಣಗಿಸಿ ತಿನ್ನುತ್ತಾರೆ. ಆದರೆ ಅಂಜೂರವನ್ನು ತಿನ್ನಲು ಉತ್ತಮ ಮಾರ್ಗವೆಂದರೆ ಅವುಗಳನ್ನು ರಾತ್ರಿಯಿಡೀ ನೀರಿನಲ್ಲಿ ನೆನೆಸಿಡುವುದು. ಬೆಳಗ್ಗೆ ನೆನೆಸಿದ ಅಂಜೂರದ ಹಣ್ಣುಗಳನ್ನು ತಿಂದು ನೀರನ್ನು ಕುಡಿಯಿರಿ. ಶಕ್ತಿಗಾಗಿ ನೀವು ಅಂಜೂರವನ್ನು ನೆನೆಸಿ ಅಥವಾ ಹಾಲಿನಲ್ಲಿ ಕುದಿಸಿ ತಿನ್ನಬಹುದು. ಇದುಅಂಜೂರವನ್ನು ಹೆಚ್ಚು ಶಕ್ತಿಶಾಲಿಯನ್ನಾಗಿ ಮಾಡುತ್ತದೆ

## ಹೊಸ ರ್‍ಯಾಪ್ ಗೀತೆ ಏನೋ ಬಿಡುಗಡೆ

ಬೆಂಗಳೂರಿನದೇ ಆದ ಫಾಸ್ಟ್ ಫ್ಯಾಷನ್ ಬ್ರಾಂಡ್ ''ದಿ ಇಂಡಿಯನ್ ಗರಾಜ್ ಕೋ.'' ಯುವಜನರ ಗಮನ ಸೆಳೆಯುವ, ಅವರಿಗೆ ಪಾರ್ಟಿಗಳಲ್ಲಿ ಹಾಡಿ ಕುಣಿಯುವಂತೆ ಮಾಡುವ ಹೊಚ್ಚಹೊಸ ರ್‍ಯಾಪ್ ಗೀತೆ ''ಏನೋ'' ಬಿಡುಗಡೆ ಮಾಡಿದೆ. ಮೂವರು ರ್‍ಯಾಪರ್ ಗಳ ಅದ್ಭುತ ಸಂಯೋಜನೆಯಲ್ಲಿ ಮೂಡಿಬಂದಿದ ಈ ಗೀತೆ ಸಂಚಲನ ಸೃಷ್ಟಿಸಲು ಸಜ್ಜಾಗಿದೆ.

ದಿ ಇಂಡಿಯನ್ ಗರಾಜ್ ಕೋ. ಬೆಂಗಳೂರಿನೊಂದಿಗೆ ತನ್ನ ಆಳವಾದ ಬಾಂಧವ್ಯವನ್ನು ಬಿಂಬಿಸುವಂತೆ ಈ ಗೀತೆಯನ್ನು ಪ್ರಸ್ತುತಪಡಿಸುತ್ತಿದ್ದು ಬೆಂಗಳೂರಿನವರೇ ಖ್ಯಾತ ರ್‍ಯಾಪರ್ ಗುಬ್ಬಿ ಅವರೊಂದಿಗೆ ಆಡಿಯೋ ಹಾಗೂ ಆರ್ಕೆಡೋ ಸೇರಿಕೊಂಡು ಈ ಗೀತೆಗೆ ಮತ್ತಷ್ಟು ಮೆರುಗು ತದಿದ್ದಾರೆ. ಈ ಬ್ರಾಂಡ್ ಸದಾ ತನ್ನ ''ಬೆಂಗಳೂರಿನ'' ಎನ್ನಿಸುವ ಉಪಕ್ರಮಗಳ ಮೂಲಕವೇ ತನ್ನ ಸಮುದಾಯದ ಬಾಂಧವ್ಯವನ್ನು ಗಟ್ಟಿಗೊಳಿಸುತ್ತಾ ಬಂದಿದೆ.

''ಏನೋ'' ಗೀತೆಗಾಗಿ ಒಂದಾಗಿರುವ ಮೂವರು ರ್‍ಯಾಪರ್ ಗಳಾದ ಗುಬ್ಬಿ, ಆಡಿಯೋ ಹಾಗೂ ಆರ್ಕೆಡೋ ಯುವಜನರಿಗೆ ಹೊಸ ಉತ್ಸಾಹ ತರಲಿದ್ದಾರೆ. ಗುಬ್ಬಿ ಕನ್ನಡದ ಖ್ಯಾತ ರ್‍ಯಾಪರ್ ಆಗಿದ್ದು ಅವರು ಕರ್ನಾಟಕದ ಶ್ರೀಮಂತ ಸಂಸ್ಕೃತಿ ಮತ್ತು ಪರಂಪರೆಯನ್ನು ಬಿಂಬಿಸುವುದು ಅವರ ವಿಶೇಷತೆಯಾಗಿದೆ.

ಆಡಿಯೋ ದೆಹಲಿಯ ಕೇವಲ 19 ವರ್ಷ ವಯಸ್ಸಿನ ರ್‍ಯಾಪರ್ ತಮ್ಮ ಹಾಡುಗಳ ಮೂಲಕ ಯುವಜನರನ್ನು ಗೆದ್ದಿದ್ದಾರೆ. ಈ ಗೀತೆಯಲ್ಲಿ ಅವರ ಬೆಂಗಳೂರು ಪ್ರೀತಿ ವ್ಯಕ್ತವಾಗುತ್ತದೆ. ಆರ್ಕೆಡೋ ಈಗಾಗಲೇ ಕನ್ನಡ ಹಾಗೂ ಮಲಯಾಳಂ ಸಂಗೀತ ಉದ್ಯಮದಲ್ಲಿ ಅತ್ಯಂತ ಜನಪ್ರಿಯವಾಗುತ್ತಿರುವ ಮ್ಯೂಸಿಕ್ ಪ್ರೊಡ್ಯೂಸರ್.

ಏನೋ'' ಎನ್ನುವುದು ಬೆಂಗಳೂರು ನಗರ ಹಾಗೂ ಇಲ್ಲಿನ ಸಂಸ್ಕೃತಿಗೆ ಒಂದು ಅದ್ಭುತ ಕಾಣಿಕೆಯಾಗಿದೆ. ಬೆಂಗಳೂರಿಗರು ಸದಾ ತಮ್ಮ ಆಹಾರಪ್ರಿಯರು, ಕ್ರಿಕೆಟ್ ಅಂದರೆ ಪ್ರಾಣ, ತಂಪಾದ ಉದ್ಯಾನ ನಗರಿಯ ವಾತಾವರಣ, ಕಂಗೊಳಿಸುವ ಹಸಿರು, ಹೊಸ ಫ್ಯಾಷನ್ ಹಾಗೂ ಇಲ್ಲಿ ಬೇರೂರಿದ ಸಂಸ್ಕೃತಿಯನ್ನು ತಮ್ಮ ಗೀತೆಯಲ್ಲಿ ಅದ್ಭುತವಾಗಿ ತೋರಿಸಿದ್ದಾರೆ. ಈ ರೋಮಾಂಚಕ ವೀಡಿಯೋ ಬ್ರಿಗೇಡ್ ರಸ್ತೆಯ ಇಂಡಿಯನ್ ಗರಾಜ್ ನ ಮಳಿಗೆಯೂ ಒಳಗೊಂಡು ಬೆಂಗಳೂರಿನ ಪ್ರಮುಖ ತಾಣಗಳಲ್ಲಿ ಚಿತ್ರೀಕರಣಗೊಂಡಿದೆ.




ತನ್ನ ಬ್ರಾಂಡ್ ತತ್ವಗಳು ನಗರದೊಂದಿಗೆ ಭಾವನಾತ್ಮಕವಾಗಿ ಸಂಪರ್ಕ ಹೊಂದಿರುವುದನ್ನು ಮರು ದೃಢೀಕರಿಸಿದ ದಿ ಇಂಡಿಯನ್ ಗರಾಜ್ ಇತ್ತೀಚೆಗೆ ಬಿಡುಗಡೆ ಮಾಡಿದ ಇನ್ಸ್ಟಾಗ್ರಾಂ ರೀಲ್ ''ಆಟೋ ಕನ್ನಡಿಗ'' ಅತ್ಯಂತ ಜನಪ್ರಿಯವಾಗಿದೆ. ಅದರಲ್ಲಿ ಅಡಿಯಿಂದ ಮುಡಿಯವರೆಗೆ ದಿ ಇಂಡಿಯನ್ ಗರಾಜ್ ಕೋ ಫ್ಯಾಷನ್ ಉತ್ಪನ್ನಗಳನ್ನು ಧರಿಸಿದ ಆಟೋ ಅಣ್ಣ ''ಫಾಸ್ಟ್ ಅಂಡ್ ಫ್ಯೂರಿಯಸ್'' ಆಗಿ ಬದಲಾಗುತ್ತಾನೆ. ತಮಾಷೆಯಾಗಿ, ಆಕರ್ಷಕವಾಗಿರುವ ಈ ರೀಲ್ ಕೊನೆಯಲ್ಲಿ ಆಟೋ ಅಣ್ಣನ ಅತಿ ಉತ್ಸಾಹಕ್ಕೆ ಪ್ರಯಾಣಿಸುತ್ತಿದ್ದ ಹುಡುಗಿ ಕಂಗಾಲಾಗುವುದನ್ನು ತೋರುತ್ತದೆ. ಇಂಡಿಯನ್ ಗರಾಜ್ ಕೋ.ನಲ್ಲಿ ನಾವು ಸಮುದಾಯದ ಶಕ್ತಿಯಲ್ಲಿ ಹಾಗೂ ಹಿಂದಕ್ಕೆ ನೀಡುವುದರ ಪ್ರಾಮುಖ್ಯತೆಯಲ್ಲಿ ನಂಬಿಕೆ ಇರಿಸಿದ್ದೇವೆ. 'ಏನೋ' ಬರೀ ಗೀತೆಯಲ್ಲ, ಇದು ಆಲಿಸಬೇಕಾದ ಧ್ವನಿಗಳ ಸಬಲೀಕರಣದ ಚಳವಳಿ ಮತ್ತು ಜಾಗತಿಕ ವೇದಿಕೆಯಲ್ಲಿ ನಮ್ಮ ತವರಾದ ನಗರವನ್ನು ಸಂಭ್ರಮಿಸುವುದಾಗಿದೆ'' ಎಂದು ಇಂಡಿಯನ್ ಗರಾಜ್ ಕೋ. ಸಂಸ್ಥಾಪಕ ಮತ್ತು ಸಿಇಒ ಅನಂತ್ ತಂತೇಡ್, ''ನಾವು ಉದಯೋನ್ಮುಖ ಮತ್ತು ಪರಿಣಿತ ನೃತ್ಯಗಾರರು, ಗಾಯಕರು ಮತ್ತು ಕಲಾವಿದರಿಗೆ ಶಕ್ತಿ ತುಂಬಲು ವೇದಿಕೆಗಳನ್ನು ಸೃಷ್ಟಿಸಲು ಮತ್ತು ಅವರ ಕಥೆಗಳನ್ನು ವಿಶ್ವಕ್ಕೆ ಹಂಚಲು ಬದ್ಧವಾಗಿದ್ದೇವೆ. ತನ್ನ ಕೇಂದ್ರದಲ್ಲಿ ಇಂಡಿಯನ್ ಗರಾಜ್ ಬರೀ ಫ್ಯಾಷನ್ ಮಾತ್ರವಲ್ಲ ಇದು ಅವಕಾಶ, ಒಳಗೊಳ್ಳುವಿಕೆ, ವಿನೂತನ ಚಿಂತನೆ ಮತ್ತು ಪ್ರತಿ ಧ್ವನಿಯೂ ಮುಖ್ಯ ಎಂಬ ನಂಬಿಕೆ ಒಳಗೊಂಡಿದೆ'' ಎಂದರು.

ತನ್ನ ಸಮುದಾಯವೇ ಪ್ರಥಮ ಎಂಬ ನೀತಿಯನ್ನು ಅನುಸರಿಸುವ ದಿ ಇಂಡಿಯನ್ ಗರಾಜ್ ಯುವಜನರ ಅಗತ್ಯಕ್ಕೆ ತಕ್ಕಂತೆ ಉತ್ಪನ್ನಗಳನ್ನು ರೂಪಿಸುತ್ತದೆ. ಆನ್ಲೈನ್ ನಲ್ಲಿ ಬೀದಿ ನೃತ್ಯದ ಹಣಾಹಣಿ ''ಸೈಫರ್ ಸಿಟಿ'' ಮತ್ತು ಗರಾಜ್ ಗಾಲಾದಂತಹ ಈ ಬ್ರಾಂಡ್ ಹೊಂದಿರುವ ಸೃಜನಶೀಲತೆಯ ಉದಾಹರಣೆಗಳು ಅಲ್ಲದೆ ಇವು ಸಂಸ್ಕೃತಿಗೆ ಹೇಗೆ ಜೀವಂತಿಕೆ ತರುತ್ತವೆ ಎನ್ನುವುದನ್ನು ಬಿಂಬಿಸುತ್ತದೆ.

ಈ ಚಳವಳಿಯಲ್ಲಿ ಭಾಗವಹಿಸಲು ಹಾಗೂ ಬೆಂಗಳೂರಿನ ವಿಕಾಸಗೊಳ್ಳುತ್ತಿರುವ ಸಾಂಸ್ಕೃತಿಕ ಪ್ರಯಾಣದ ಭಾಗವಾಗಲು ''ಏನೋ'' ವೀಕ್ಷಿಸುವ ಮೂಲಕ ಆಹ್ವಾನಿಸಲಾಗುತ್ತಿದೆ. ರ್‍ಯಾಪ್ ಗೀತೆಯ ವಿಡಿಯೋವನ್ನು ಇಲ್ಲಿ ವೀಕ್ಷಿಸಿ.

ಹೆಚ್ಚಿನ ಅಪ್ಡೇಟ್ ಗಳು ಮತ್ತು ಸಮುದಾಯದೊಂದಿಗೆ ಸಕ್ರಿಯವಾಗಿರಲು ಇನ್ಸ್ಟಾಗ್ರಾಂ @theindiangarageco ಮತ್ತು @ TIGCGarageCrew ಫ್ರೆಡ್ಸ್‌ಗೆ ಫಾಲೋ ಮಾಡಿ.

## ಕಣ್ಣಿನ ಹುಬ್ಬಿನ ಕೆಳಭಾಗದ ನೋವಿಗೆ ಕಾರಣವೇನು

### ಬ್ಯೂಟಿ ಟಿಪ್ಸ್



ಹುಬ್ಬಿನ ಕೆಳಭಾಗದ ನೋವಿಗೆ ಪ್ರಮುಖ ಕಾರಣವೆಂದರೆ ಅದು ನಿರಂತರವಾಗಿ ಕಾಡುವಂತಹ ತಲೆನೋವು. ದಿನದಲ್ಲಿ ಹಲವಾರು ಬಾರಿ ಈ ತಲೆನೋವು ಕಾಣಿಸಬಹುದು ಹಾಗೂ ತೀವ್ರ ರೀತಿಯಲ್ಲಿ ಇರಬಹುದು. ಇದು ದಿನದಿಂದ ವಾರ ಹಾಗೂ ತಿಂಗಳುಗಳ ಕಾಲ ಇರಬಹುದು. ಇದು ಹೋದರೂ ಮತ್ತೆ ಬರಹುದು. ಇಂತಹ ತಲೆನೋವು ಹೆಚ್ಚಾಗಿ ಮಹಿಳೆಯರಿಗಿಂತಲೂ ಪುರುಷರಲ್ಲಿ ಕಂಡುಬರುವುದು ಹೆಚ್ಚು. ಹದಿಹರೆಯ ಮತ್ತು ವಯಸ್ಕ ಪುರುಷರಲ್ಲಿ ಇದು ಬರುವುದು. ಇದಕ್ಕೆ ನಿಖರ ಕಾರಣಗಳು ತಿಳಿದುಬಂದಿಲ್ಲ. ಆದರೆ ಹಿಸ್ಟಮೈನ್ ಮತ್ತು ಸೆರೊಟಿನಿನ್ ಅಂಶವು ಸಮತೋಲನ ಕಳೆದುಕೊಳ್ಳುವುದು ಪ್ರಮುಖ ಕಾರಣ ಎಂದು ವಿಜ್ಞಾನಿಗಳು ಹೇಳಿರುವರು.ಈ ರೀತಿಯ ತಲೆನೋವಿಗೆ ಆಲ್ಕೋಹಾಲ್, ಪ್ರಖರ ಬೆಳಕು, ಉಷ್ಣತೆ, ಸಿಗರೇಟ್ ಮತ್ತು ಔಷಧಿಯು ಕಾರಣವಾಗಿರಬಹುದು. ಒತ್ತಡದಿಂದ ಕಾಡುವಂತಹ ತಲೆನೋವು ಕಣ್ಣಿನ ಸುತ್ತಲು ನೋವು ಮತ್ತು ಅಹಿತಕರವನ್ನು ಉಂಟು ಮಾಡುವುದು.

ತಲೆಯಲ್ಲಿ ಒತ್ತಲ್ಪಟ್ಟಂತಹ ಭಾವನೆಯು ಆದ ವೇಳೆ ನೋವು ಕಂಡುಬರುವುದು.ಇದಕ್ಕೆ ನಿಖರ ಕಾರಣವು ತಿಳಿದುಬಂದಿಲ್ಲವಾದರೂ ಒತ್ತಡ, ನಿದ್ರಾಹೀನತೆ ಮತ್ತು ಜ್ವರ ಅಥವಾ ಶೀತವು ಕಾರಣವಾಗಿರಬಹುದು. ಕಣ್ಣಿನ ಸುತ್ತಲು ಸೋಂಕು ಇದ್ದರೆ ಆಗ ಇದು ಹುಬ್ಬುಗಳ ಭಾಗದಲ್ಲಿ ನೋವು ಉಂಟು ಮಾಡಬಹುದು. ತಲೆಬುರುಡೆ ಭಾಗದಲ್ಲಿನ ಕುಳಿಗಳಲ್ಲಿ ಸೈನಸ್ ಇರುವುದು ಮತ್ತು ಇದರಲ್ಲಿ ಸೋಂಕು ಕಂಡುಬಂದರೆ, ಆಗ ಅದು ಹುಬ್ಬಿನ ಭಾಗದಲ್ಲಿ ನೋವುಂಟು ಮಾಡುವುದು.ಗ್ಲುಕೋಮಾದಿಂದಾಗಿ ಕಣ್ಣಿನ ಭಾಗದಲ್ಲಿ ಹೆಚ್ಚಿನ ಒತ್ತಡವು ಉಂಟಾಗುವುದು ಮತ್ತು ಇದರಿಂದ ಹುಬ್ಬುಗಳ ಕೆಳಗಿನ ಭಾಗದಲ್ಲಿ ನೋವು ಕಂಡುಬರುವುದು. ಅತಿಯಾದ ಒತ್ತಡದಿಂದಾಗಿ ದೃಷ್ಟಿಯ ನರಗಳಿಗೆ ಹಾನಿ ಉಂಟಾಗಬಹುದು. ಇದು ಅಂಧತ್ವ ಉಂಟು ಮಾಡಬಹುದು. ಗ್ಲುಕೋಮಾಕ್ಕೆ ಸ್ಪಷ್ಟ ಕಾರಣಗಳು ತಿಳಿದುಬಂದಿಲ್ಲ. ಕಣ್ಣಿನಲ್ಲಿ ದ್ರವಾಂಶದ ಕೊರತೆಯಾಗಿ ಒಣಗಿದ ವೇಳೆ ಗ್ಲುಕೋಮಾ ಕಾಣಿಸುವುದು.ಹುಬ್ಬಿನ ಭಾಗ ಮತ್ತು ಕಣ್ಣಗುಡ್ಡೆಯಲ್ಲಿನ ಸೆಳೆತದಿಂದಾಗಿಯೂ ಹುಬ್ಬುಗಳ ಭಾಗದಲ್ಲಿ ನೋವು ಬರುವುದು. ಇದು ಕೆಲವು ದಿನಗಳ ಕಾಲ ಇರುವುದು ಮತ್ತು ಹಾಗೆ ನಿಂತು ಹೋಗುವುದು. ಇದು ನಿದ್ರಾಹೀನತೆ ಅಥವಾ ನಿದ್ರೆಯು ಸರಿಯಾಗಿ ಆಗದೆ ಇದ್ದರೆ ಬರುವುದು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಯತ್ನ ಕಾರ್ಯಗಳಲ್ಲಿ ವಿಳಂಬ, ಕೃಷಿಕರಿಗೆ ಲಾಭ, ಉತ್ತಮ ಆದಾಯ, ವಿದ್ಯಾರ್ಥಿಗಳಲ್ಲಿ ಗೊಂದಲ.

**ವೃಷಭ:** ನಿಷ್ಠುರದ ಮಾತುಗಳು ಬೇಡ, ಸ್ವಂತ ಉದ್ಯಮಿಗಳಿಗೆ ಅಲ್ಪ ಆದಾಯ, ಆರೋಗ್ಯದ ಬಗ್ಗೆ ಎಚ್ಚರ.

**ಮಿಥುನ:** ದಾಂಪತ್ಯದಲ್ಲಿ ಪ್ರೀತಿ, ಸಮಾಜದಲ್ಲಿ ಗೌರವ, ಅಧಿಕ ಖರ್ಚು, ಪಿತ್ರಾರ್ಜಿತ ಆಸ್ತಿ ಗಳಿಕೆ, ದುಷ್ಟ ಜನರಿಂದ ತೊಂದರೆ.

**ಕಟಕ:** ಆಪ್ತರಿಂದ ಸಹಾಯ, ಅನಿರೀಕ್ಷಿತ ದೂರ ಪ್ರಯಾಣ, ಶತ್ರು ಭಾದೆ, ಧನ ಪ್ರಾಪ್ತಿ.

**ಸಿಂಹ:** ಕುಟುಂಬ ಸೌಖ್ಯ, ಉದ್ಯೋಗದಲ್ಲಿ ಬಡ್ತಿ, ಮಾತಿನ ಹಿಡಿತವಿರಲಿ, ಭಯ, ಮನಕ್ಲೇಶ.

**ಕನ್ಯಾ:** ಈ ದಿನ ಹಣದ ತೊಂದರೆ, ವ್ಯಾಸಂಗಕ್ಕೆ ತೊಂದರೆ, ಚಂಚಲ ಮನಸ್ಸು, ಮಾತಾಪಿತರಲ್ಲಿ ವಾತ್ಸಲ್ಯ.

**ತುಲಾ:** ಈ ದಿನ ಪಾಪ ಬುದ್ಧಿ, ನ್ಯಾಯಾಲಯದ ಕೆಲಸಗಳಲ್ಲಿ ವಿಳಂಬ, ಗುರು ಹಿರಿಯರ ಭೇಟಿ, ಮನಶಾಂತಿ.

**ವೃಶ್ಚಿಕ:** ಆರ್ಥಿಕ ಪರಿಸ್ಥಿತಿಯಲ್ಲಿ ಏರುಪೇರು, ಮಿತ್ರರಲ್ಲಿ ದ್ವೇಷ, ಅಕಾಲ ಭೋಜನ, ಋಣ ಭಾದೆ, ಅಧಿಕ ಖರ್ಚು.

**ಧನಸ್ಸು:** ಶುಭ ವಾರ್ತೆ ಕೇಳುವಿರಿ, ಮನೆಗೆ ಹಿರಿಯರ ಆಗಮನ, ಉದ್ಯೋಗದಲ್ಲಿ ಅಭಿವೃದ್ಧಿ.

**ಮಕರ:** ಪರಸ್ಥಳ ವಾಸ, ದುಷ್ಟಬುದ್ಧಿ, ಕೆಲಸ ಕಾರ್ಯಗಳಲ್ಲಿ ತೊಂದರೆ, ಸೇವಕರಿಂದ ತೊಂದರೆ, ವಾಹನ ರಿಪೇರಿ.

**ಕುಂಭ:** ಮನಸ್ಸಿನಲ್ಲಿ ಗೊಂದಲ, ಅನಾರೋಗ್ಯದಿಂದ ಸ್ವಲ್ಪ ಚೇತರಿಕೆ, ಅಲ್ಪ ಆದಾಯ ಅಧಿಕ ಖರ್ಚು.

**ಮೀನ:** ರಿಯಲ್ ಎಸ್ಟೇಟ್ ನವರಿಗೆ ಲಾಭ, ವಿನಾಕಾರಣ ಯೋಚನೆ, ಉದ್ಯಮಿಗಳಿಗೆ ಸುದಿನ, ಸುಗಂಧ ದ್ರವ್ಯಗಳಿಂದ ಲಾಭ.

## ಗಣಿತ 2.0 ದಿನ




ಜುಲೈ 8 ರಂದು ಆಚರಿಸಲಾಗುವ ಗಣಿತ 2.0 ದಿನವು ಗಣಿತ ಮತ್ತು ತಂತ್ರಜ್ಞಾನದ ಸಂಯೋಜನೆಯ ಮಹತ್ವವನ್ನು ಸ್ಮರಿಸುವ ರಜಾದಿನವಾಗಿದೆ. ಗಣಿತ ಮತ್ತು ತಂತ್ರಜ್ಞಾನ ಕ್ಷೇತ್ರದ ಸಂಯೋಜನೆಯ ಮೂಲಕ ಮಾಡಿದ ಸಾಧನೆಗಳನ್ನು ಮತ್ತು ಮುಂಬರುವ ವರ್ಷಗಳಲ್ಲಿ ಅದು ಜಗತ್ತಿಗೆ ಹೇಗೆ ಪ್ರಯೋಜನವನ್ನು ನೀಡುತ್ತದೆ ಎಂಬುದನ್ನು ಆಚರಿಸಲು ಈ ದಿನವನ್ನು ರಚಿಸಲಾಗಿದೆ. ಇದರರ್ಥ ಗಣಿತವಿಲ್ಲದೆ, ಇಂದು ನಾವು ಹೊಂದಿರುವ ವಿಭಿನ್ನ ಪ್ರಯಾಣ ಮತ್ತು ಮನರಂಜನಾ ಮಾಧ್ಯಮಗಳನ್ನು ನಮಗೆ ಒದಗಿಸುವುದು ಅಸಾಧ್ಯವಾಗಿತ್ತು. ಹಲವಾರು ದೈನಂದಿನ ಕೆಲಸದ ಕಾರ್ಯಗಳನ್ನು ಸಾಧಿಸಲು ನಾವು ಬಳಸುವ ತಂತ್ರಜ್ಞಾನವೂ ನಮ್ಮಲ್ಲಿರುತ್ತಿರಲಿಲ್ಲ. ಆದ್ದರಿಂದ ತಾಂತ್ರಿಕ ಆವಿಷ್ಕಾರಗಳು ನಿಮ್ಮ ಜೀವನವನ್ನು ಎಷ್ಟು ಸುಲಭಗೊಳಿಸಿವೆ ಎಂಬುದನ್ನು ನೀವು ಇಷ್ಟಪಟ್ಟರೆ, ಗಣಿತ 2.0 ದಿನವನ್ನು ಆಚರಿಸುವುದು ಅತ್ಯಗತ್ಯ! ಗಣಿತ 2.0 ದಿನವನ್ನು 2009 ರಲ್ಲಿ ಗಣಿತ ಆಸಕ್ತಿ ಗುಂಪು ರಚಿಸಿದೆ. ಆನ್‌ಲೈನ್‌ನಲ್ಲಿ ಗಣಿತದ ಬಳಕೆಯನ್ನು ಉತ್ತೇಜಿಸಲು ಮತ್ತು ಸಕ್ರಿಯಗೊಳಿಸಲು ಈ ಗುಂಪನ್ನು ರಚಿಸಲಾಗಿದೆ. ತಂತ್ರಜ್ಞಾನ, ವಿಜ್ಞಾನ ಮತ್ತು ಶಿಕ್ಷಣದ ಪ್ರಗತಿಗೆ ಗಣಿತವು ನಿರ್ಣಾಯಕವಾಗಿರುವುದರಿಂದ ಇದು ಅತ್ಯಗತ್ಯ. ಗಣಿತ ಆಸಕ್ತಿ ಗುಂಪು ಹಣಕಾಸು, ಎಂಜಿನಿಯರಿಂಗ್, ವೈದ್ಯಕೀಯ ಮತ್ತು ಸಾಮಾಜಿಕ ವಿಜ್ಞಾನ ಕ್ಷೇತ್ರಗಳಲ್ಲಿ ಅಗತ್ಯವಿರುವ ಗಣಿತ ಶಿಕ್ಷಣದ ಮೇಲೆ ಕೇಂದ್ರೀಕರಿಸುವ ಸಂಶೋಧನೆ ಮತ್ತು ಅಭಿವೃದ್ಧಿ ಯೋಜನೆಗಳಲ್ಲಿಯೂ ಸಹಕರಿಸುತ್ತದೆ. ಶತಮಾನಗಳಿಂದ ಗಣಿತವು ಹಲವಾರು ಆವಿಷ್ಕಾರಗಳಿಗೆ ಕೊಡುಗೆ ನೀಡಿದೆ.

ಉದಾಹರಣೆಗೆ, ಪೈಥಾಗರಸ್ (ಕ್ರಿ.ಪೂ. 570?495) ಗ್ರಹಗಳನ್ನು ಅಧ್ಯಯನ ಮಾಡಲು ಸಹಾಯ ಮಾಡಿದ ಪೈಥಾಗರಸ್ ಪ್ರಮೇಯವನ್ನು ರಚಿಸಿದ್ದಾರೆ. 17 ನೇ ಶತಮಾನದಲ್ಲಿ, ಧೂಮಕೇತುಗಳು ಮತ್ತು ಗ್ರಹಗಳ ಕಕ್ಷೆಗಳ ಚಲನೆಯನ್ನು ಕಂಡುಹಿಡಿಯಲು ಜೋಹಾನ್ಸ್ ಕೆಪ್ಲರಸ್ ಗಣಿತದ ಲೆಕ್ಕಾಚಾರಗಳನ್ನು ರಚಿಸಿದರು. ಮತ್ತು 1680 ರ ದಶಕದಲ್ಲಿ ಗುರುತ್ವಾಕರ್ಷಣೆಯ ಆಕರ್ಷಣೆಯ ಸಿದ್ಧಾಂತವನ್ನು ಸಾಬೀತುಪಡಿಸಲು ಐಸಾಕ್ ನ್ಯೂಟನ್ ಸಹ ಲೆಕ್ಕಾಚಾರಗಳನ್ನು ಬಳಸಿದರು. ಇದಲ್ಲದೆ, ವಿಲಿಯಂ ರೋವನ್ ಹ್ಯಾಮಿಲ್ಟನ್ 19 ನೇ ಶತಮಾನದ ಆರಂಭದಲ್ಲಿ ಕ್ವಾಂಟಮ್ ಮೆಕ್ಯಾನಿಕ್ಸ್ ವಿಕಸನಕ್ಕೆ ಕಾರಣವಾದ ಬಹಳಷ್ಟು ಕೆಲಸಗಳನ್ನು ಮಾಡಿದರು. ಇದರ ನಂತರ 1865 ರಲ್ಲಿ ಜೇಮ್ಸ್ ಕ್ಲರ್ಕ್ ಮ್ಯಾಕ್ಸ್‌ವೆಲ್ ಅವರಿಂದ ವಿದ್ಯುತ್ಕಾಂತೀಯ ಕ್ಷೇತ್ರದ ಕ್ರಿಯಾತ್ಮಕ ಸಿದ್ಧಾಂತ ಬಂದಿತು. ವಿದ್ಯುತ್ಕಾಂತೀಯತೆಯನ್ನು ನಿಯಂತ್ರಿಸುವ ನಾಲ್ಕು ಸಮೀಕರಣಗಳನ್ನು ಮೌಲ್ಯಮಾಪನ ಮಾಡುವ ಮೂಲಕ ಅವರು ತಮ್ಮ ಸಿದ್ಧಾಂತವನ್ನು ರಚಿಸಿದರು. ಇಂಗ್ಲಿಷ್ ಗಣಿತಜ್ಞ ಅಲನ್ ಟ್ಯೂರಿಂಗ್, ಜರ್ಮನ್ ಮಿಲಿಟರಿ ಸಂಕೇತಗಳನ್ನು ಮುರಿಯಬಲ್ಲ ಯಂತ್ರವನ್ನು ರಚಿಸಲು ಹಲವಾರು ಕಷ್ಟಕರ ಲೆಕ್ಕಾಚಾರಗಳನ್ನು ರೂಪಿಸಿದರು. ನಂತರ ಅವರು ಅಲ್ಗಾರಿದಮ್‌ಗಳು ಮತ್ತು ಕೃತಕ ಬುದ್ಧಿಮತ್ತೆ ಸೇರಿದಂತೆ ಸೈದ್ಧಾಂತಿಕ ಕಂಪ್ಯೂಟರ್ ವಿಜ್ಞಾನವನ್ನು ಅಭಿವೃದ್ಧಿಪಡಿಸಿದರು. ಇದರ ನಂತರ 1950 ರ ದಶಕದ ಮಧ್ಯಭಾಗದಲ್ಲಿ ಅಮೇರಿಕನ್ ಗಣಿತಜ್ಞ ಮತ್ತು ಹವಾಮಾನಶಾಸ್ತ್ರಜ್ಞ ಎಡ್ವರ್ಡ್ ನಾರ್ಟನ್ ಲೊರೆಂಜಿನ್ ಹವಾಮಾನವನ್ನು ಮುನ್ಸೂಚಿಸಲು ಸೂತ್ರವನ್ನು ರಚಿಸಿದರು.

ಸಂಜೆ ಮುಗಿಲು
ಮಂಗಳವಾರ
8.7.2025



# ಕೇರಳದಲ್ಲಿ ಮತ್ತೆ ನಿಫಾ ಆತಂಕ

**ಪಾಲಕ್ಕಾಡ್(ಕೇರಳ):** ಉತ್ತರ ಕೇರಳದಲ್ಲಿ ಮಾರಣಾಂತಿಕ ನಿಫಾ ವೈರಸ್ ಆತಂಕ ಹೆಚ್ಚಾಗುತ್ತಿದೆ. ಸೋಂಕಿತರ ಸ್ಥಿತಿ ಗಂಭೀರವಾಗಿದ್ದು, ಅವರಿಗೆ ಸಾಧ್ಯವಾಗುವ ಎಲ್ಲಾ ಚಿಕಿತ್ಸೆಗಳನ್ನು ನೀಡಲಾಗುತ್ತಿದೆ ಎಂದು ಕೇರಳ ಆರೋಗ್ಯ ಸಚಿವೆ ವೀಣಾ ಜಾರ್ಜ್ ತಿಳಿಸಿದ್ದಾರೆ.

ಕಳೆದ ವಾರ ಮಲ್ಲಪುರಂನ ಸೋಂಕಿತ ಮಹಿಳೆಯೊಬ್ಬರು ನಿಫಾ ವೈರಸ್ ನಿಂದ ಸಾವನ್ನಪ್ಪಿದ್ದರು. ಥಚನಟ್ಟುಕರ ಮೂಲದ ಮತ್ತೊಬ್ಬ ಸೋಂಕಿತ ಮಹಿಳೆ ನೆರೆಯ ಕೋಝಿಕೋಡ್ ಜಿಲ್ಲೆಯ ಸರ್ಕಾರಿ ವೈದ್ಯಕೀಯ ಕಾಲೇಜಿನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಶಿಷ್ಟಾಚಾರದ ಅನುಸಾರ, ಮಹಿಳೆಗೆ ಮೊನೊಕ್ಲೋನಲ್ ಆಯಂಟಿಬಾಡಿ ಚಿಕಿತ್ಸೆ ನೀಡಲಾಗುತ್ತಿದ್ದು, ಎರಡನೇ ಡೋಸ್ ಚಿಕಿತ್ಸೆಯ ಕಣ್ಗಾವಲಿನಲ್ಲಿದ್ದಾರೆ. ಪಾಲಕ್ಕಾಡ್‌ನಲ್ಲಿ ಸೋಂಕಿತ ಪ್ರಕರಣಗಳು ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ ಆರೋಗ್ಯ ಸಚಿವೆ ಇಲ್ಲಿನ ವೈದ್ಯಕೀಯ ಕಾಲೇಜಿನಲ್ಲಿ ಉನ್ನತ ಮಟ್ಟದ ಸಭೆ ನಡೆಸಿದ್ದಾರೆ.

ಈ ಕುರಿತು ಮಾತನಾಡಿರುವ ಅವರು, ಪಾಲಕ್ಕಾಡ್ ನ ಮೊದಲ ಪ್ರಕರಣ ಇದು. ರೋಗಿಯ ಪರಿಸ್ಥಿತಿ ಗಂಭೀರವಾಗಿದೆ. ಆದರೆ, ಅಗತ್ಯವಿರುವ ಎಲ್ಲಾ ಚಿಕಿತ್ಸೆಯನ್ನು ನೀಡಲಾಗುತ್ತಿದೆ ಎಂದರು.

ಒಟ್ಟಾರೆ, 173 ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ. 101 ಪ್ರಾಥಮಿಕ ಮತ್ತು 73 ಮಧ್ಯಮ ಹಂತದ ಪ್ರಕರಣಗಳಾಗಿವೆ. 52 ಪ್ರಕರಣಗಳು ಹೆಚ್ಚಿನ ಅಪಾಯ ಹೊಂದಿದ್ದು, 48 ಪ್ರಕರಣಗಳು ಕಡಿಮೆ ತೀವ್ರತೆ ಹೊಂದಿದೆ ಎಂದು ಸಚಿವೆ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಪತ್ತೆಯಾಗಿರುವ ಐದು ಮಾದರಿಗಳಲ್ಲಿ ನೆಗೆಟಿವ್ ಬಂದಿದ್ದು, ಇನ್ನು ನಾಲ್ಕು ಮಾದರಿಗಳನ್ನು ಪರೀಕ್ಷೆಗೆ ಮಂಜೇರಿ ವೈದ್ಯಕೀಯ ಕಾಲೇಜಿಗೆ ಕಳುಹಿಸಲಾಗಿದೆ.

# ಖಲಿಸ್ತಾನಿ ಉಗ್ರ ಭಾರತಕ್ಕೆ ಹಸ್ತಾಂತರ!




**ನವದೆಹಲಿ:** ಅಮೆರಿಕ ಮೂಲದ ಖಲಿಸ್ತಾನಿ ಭಯೋತ್ಪಾದಕ ಹರ್‌ಪ್ರೀತ್ ಸಿಂಗ್ ಅಲಿಯಾಸ್ ಹ್ಯಾಪಿ ಪಾಸಿಯಾನನ್ನು ಏಪ್ರಿಲ್ ನಲ್ಲಿ ಬಂಧಿಸಿ ಇಮಿಗ್ರೇಷನ್ ಮತ್ತು ಕಸ್ಟಮ್ಸ್ ಎನ್‌ಫೋಸ್ ‍ಮೆಂಟ್ ವಶಕ್ಕೆ ಒಪ್ಪಿಸಲಾಗಿತ್ತು. ಈಗ ಉಗ್ರನನ್ನು ಭಾರತಕ್ಕೆ ಕರೆತರಲಾಗುತ್ತಿದೆ ಎಂದು ವರದಿಯಾಗಿದೆ. ಪಂಜಾಬ್ ನಲ್ಲಿ ಕನಿಷ್ಠ 16 ಭಯೋತ್ಪಾದಕ ದಾಳಿಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಹರ್‌ಪ್ರೀತ್ ಸಿಂಗ್‌ಗೆ ಬೇಕಾಗಿದ್ದಾನೆ.

ಈತನ ವಿರುದ್ಧ ಪಾಕಿಸ್ತಾನದ ಇಂಟರ್-ಸರ್ವೀಸಸ್ ಇಂಟೆಲಿಜೆನ್ಸ್ ಮತ್ತು ಖಲಿಸ್ತಾನಿ ಭಯೋತ್ಪಾದಕ ಸಂಘಟನೆ ಬಬ್ಬರ್ ಖಾಲ್ಸಾ ಇಂಟರ್‌ನ್ಯಾಷನಲ್ ಜೊತೆ ಸಹಕರಿಸಿದ ಆರೋಪವಿದೆ. ಪಂಜಾಬ್ ಮತ್ತು ಅಮೆರಿಕದಲ್ಲಿ ಈತ ಪೊಲೀಸ್ ಠಾಣೆಗಳ ಮೇಲೆ ಹಲವು ಹ್ಯಾಂಡ್ ಗ್ರೆನೇಡ್ ದಾಳಿಗಳನ್ನು ನಡೆಸಿದ್ದಾನೆ. ಅಮೃತಸರದ ನಿವಾಸಿಯಾದ ಹರ್ ಪ್ರೀತ್ ನನ್ನು ಏಪ್ರಿಲ್ 18 ರಂದು ಅಮೆರಿಕದ ಫೆಡರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್ ಮತ್ತು ಖಅಇ ತಂಡಗಳು ಬಂಧಿಸಿದ್ದವು. ಬಂಧನದ ನಂತರ ನಿರ್ದೇಶಕ ಕಾಶ್ ಪಟೇಲ್, ನ್ಯಾಯ ಒದಗಿಸಲಾಗುವುದು ಎಂದು ಭರವಸೆ ನೀಡಿದ್ದರು. ಅಕ್ರಮವಾಗಿ ಅಮೆರಿಕದಲ್ಲಿದ್ದ ವಿದೇಶಿ ಭಯೋತ್ಪಾದಕ ಗ್ಯಾಂಗ್‌ನ ಭಾಗವಾಗಿರುವ ಹರ್‌ಪ್ರೀತ್ ಸಿಂಗ್ ನನ್ನು ಸೆರೆಹಿಡಿಯಲಾಗಿದೆ. ಈತ ಭಾರತ ಮತ್ತು ಅಮೆರಿಕದಲ್ಲಿ ಪೊಲೀಸ್ ಠಾಣೆಗಳ ಮೇಲಿನ ದಾಳಿಗಳ ಯೋಜನೆಯಲ್ಲಿ ಭಾಗಿಯಾಗಿದ್ದಾನೆ ಎಂದು ನಾವು ಭಾವಿಸಿದ್ದೇವೆ ಎಂದು ಅವರು ಏಪ್ರಿಲ್ 22 ರಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದರು.

## ಒಟ್ಟು ಎನ್‌ಎಫ್‌ಒ ಮೂಲಕ 17,800 ಕೋಟಿ ರೂ.ಸಂಗ್ರಹಿಸಿದ ಜಿಯೋ ಬ್ಲ್ಯಾಕ್‌ರಾಕ್

**ಮುಂಬೈ :** ಜಿಯೋ ಬ್ಲ್ಯಾಕ್‌ರಾಕ್ ಅಸೆಟ್ ಮ್ಯಾನೇಜ್ಮೆಂಟ್ ಜುಲೈ 7 ರಂದು ಮೂರು ನಗದು ಅಥವಾ ಡೆಟ್ ಮ್ಯೂಚುವಲ್ ಫಂಡ್ ಯೋಜನೆಗಳಲ್ಲಿ 17,800 ಕೋಟಿ ರೂ.ಗಳನ್ನು ಸಂಗ್ರಹಿಸಿದೆ.. ಜಿಯೋ ಬ್ಲಾಕ್‌ರಾಕ್ ನೈಟ್ ಫಂಡ್ , ಜಿಯೋ ಬ್ಲಾಕ್‌ರಾಕ್ ಲಿಕ್ವಿಡ್ ಫಂಡ್ ಮತ್ತು ಜಿಯೋ ಬ್ಲಾಕ್‌ರಾಕ್ ಮನಿ ಮಾರ್ಕೆಟ್ ಫಂಡ್ ಈ ಮೂರು ಯೋಜನೆಗಳಾಗಿವೆ. ಜಿಯೋ ಬ್ಲ್ಯಾಕ್‌ರಾಕ್, ಮುಕೇಶ್ ಅಂಬಾನಿ ಅವರ ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್‌ನ ಭಾಗವಾದ ಜಿಯೋ ಫೈನಾನ್ಷಿಯಲ್ ಸರ್ವೀಸಸ್ ಮತ್ತು ಯುಎಸ್ ಮೂಲದ ಬ್ಲ್ಯಾಕ್‌ರಾಕ್ ನಡುವಿನ ಜಂಟಿ ಉದ್ಯಮವಾಗಿದೆ.ಮೂರು ದಿನಗಳ ಕೊಡುಗೆಯಲ್ಲಿ 90 ಕ್ಕೂ ಹೆಚ್ಚು ಸಾಂಸ್ಥಿಕ ಹೂಡಿಕೆದಾರರಿಂದ ಮತ್ತು 67,000 ಕ್ಕೂ ಹೆಚ್ಚು ಚಿಲ್ಲರೆ ಹೂಡಿಕೆದಾರರಿಂದ ಹೂಡಿಕೆಗಳನ್ನು ಆಕರ್ಷಿಸಲಾಗಿದೆ. ಜಿಯೋಬ್ಲಾಕ್ ರಾಕ್ ಅಸೆಟ್ ಮ್ಯಾನೇಜ್ಮೆಂಟ್‌ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಒ ಸಿದ್ ಸ್ವಾಮಿನಾಥನ್ ಮಾತನಾಡಿ , ಸಾಂಸ್ಥಿಕ ಮತ್ತು ಚಿಲ್ಲರೆ ಹೂಡಿಕೆದಾರರಿಂದ ನಮ್ಮ ಮೊದಲ ಎನ್‌ಎಫ್ ಒಗೆ ಹೆಚ್ಚಿನ ಪ್ರತಿಕ್ರಿಯೆ ದೊರೆತಿರುವುದ ಜಿಯೋ ಬ್ಲ್ಯಾಕ್ ರಾಕ್ ಅಸೆಟ್ ಮ್ಯಾನೇಜ್ಮೆಂಟ್‌ನ ನವೀನ ಹೂಡಿಕೆ ತತ್ವ, ಅಪಾಯ ನಿರ್ವಹಣಾ ಸಾಮರ್ಥ್ಯಗಳು ಮತ್ತು ಡಿಜಿಟಲ್ -ಮೊದಲ ವಿಧಾನಕ್ಕೆ ಪ್ರಬಲ ಅನುಮೋದನೆಯಾಗಿದೆ. ಎಲ್ಲಾ ರೀತಿಯ ಹೂಡಿಕೆದಾರರನ್ನು ಪೂರೈಸುವ ಭಾರತದ ವಿಕಸನಗೊಳ್ಳುತ್ತಿರುವ ಹೂಡಿಕೆ ಕ್ಷೇತ್ರದಲ್ಲಿ ಪರಿವರ್ತಕ ಶಕ್ತಿಯಾಗುವ ನಮ್ಮ ಪ್ರಯಾಣಕ್ಕೆ ಇದು ಬಲವಾದ ಆರಂಭವಾಗಿದೆ ಎಂದರು.ಜುಲೈ 2, 2025 ರಂದು ಮುಕ್ತಾಯಗೊಂಡ ಎನ್‌ಎಫ್‌ಒ ಭಾರತದ ನಗದು / ಸಾಲ ನಿಧಿ ವಿಭಾಗದಲ್ಲಿ ಅತಿದೊಡ್ಡದಾಗಿದೆ.



ಜಮ್ಮು ಮತ್ತು ಕಾಶ್ಮೀರದ ಅನಂತನಾಗ್ ಜಿಲ್ಲೆಯಲ್ಲಿರುವ ಅಮರನಾಥದ ಪವಿತ್ರ ಗುಹಾ ದೇವಾಲಯದ ಕಡೆಗೆ ತೆರಳಿದ ಯಾತ್ರಾರ್ಥಿಗಳು.

# ಪಾಕ್ ವಿರುದ್ಧ ಮೋದಿ ಗುಡುಗು!



**ನವದೆಹಲಿ:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬ್ರೆಜಿಲ್‌ನ ಬ್ರಿಕ್ಸ್ ಶೃಂಗಸಭೆಯಲ್ಲಿ ಪಾಕಿಸ್ತಾನವು ಭಯೋತ್ಪಾದನೆಗೆ ಬೆಂಬಲ ನೀಡುತ್ತಿರುವುದನ್ನು ತೀವ್ರವಾಗಿ ಖಂಡಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಖಂಡಿಸಿ ಪಾಕಿಸ್ತಾನಕ್ಕೆ ಛೀ ಮಾರಿ ಹಾಕಿದ ರಾಷ್ಟ್ರಗಳಿಗೆ ಮೋದಿ ಧನ್ಯವಾದ ಸಲ್ಲಿಸಿದ್ದು, ಇದೇ ವೇಳೆ ಪಾಕಿಸ್ತಾನ ನಡೆಸಿದ ಹೀನ ಕೃತ್ಯವನ್ನು ವಿರೋಧಿಸಿ ಆಕ್ರೋಶ ವ್ಯಕ್ತಪಡಿಸಿದ್ದರು. ಏಪ್ರಿಲ್ 22, 2025ರಂದು ಪಾಕ್ ಬೆಂಬಲಿತ ಉಗ್ರರು ನಡೆಸಿದ ಈ ದಾಳಿಯಲ್ಲಿ 26 ಪ್ರವಾಸಿಗರು ಸಾವನ್ನಪ್ಪಿದ್ದರು. ಇದಕ್ಕೆ ಪ್ರತಿಕ್ರಿಯೆಯಾಗಿ ಭಾರತವು 'ಆಪರೇಷನ್ ಸಿಂದೂರ್' ಆರಂಭಿಸಿ, ಪಾಕಿಸ್ತಾನದ ಭಯೋತ್ಪಾದಕ ಮೂಲಸೌಕರ್ಯ ಹಾಗೂ ವಾಯುನೆಲೆಗಳ ಮೇಲೆ ದಾಳಿ ನಡೆಸಿತು. ಈ ವಿಷಯ ಕುರಿತಾಗಿ ಬ್ರಿಕ್ಸ್ ಶೃಂಗಸಭೆಯಲ್ಲಿ ಮಾತನಾಡಿದ ಮೋದಿ, ಭಾರತವು ಭಯೋತ್ಪಾದನೆಯ ಬಲಿಪಶುವಾದರೆ, ಪಾಕಿಸ್ತಾನವು ಅದರ ಬೆಂಬಲಿಗ. ಇವೆರಡನ್ನೂ ಒಂದೇ ತಕ್ಕಡಿಯಲ್ಲಿ ತೂಗಲಾಗದು ಎಂದರು. ವೈಯಕ್ತಿಕ ಅಥವಾ ರಾಜಕೀಯ ಲಾಭಕ್ಕಾಗಿ ಭಯೋತ್ಪಾದನೆಯ ವಿರುದ್ಧ ಮೌನವಾಗಿರುವವರನ್ನು ಟೀಕಿಸಿದ ಅವರು, ಉಗ್ರರಿಗೆ ಸಹಕಾರ ಹಾಗೂ ಸಮ್ಮತಿ ನೀಡುವುದು ಸ್ವೀಕಾರಾರ್ಹವಲ್ಲ ಎಂದು ಒತ್ತಿ ಹೇಳಿದರು. ಪಾಕಿಸ್ತಾನವು ತನ್ನ ನೆಲದಲ್ಲಿ ಉಗ್ರರಿಗೆ ಆಶ್ರಯ ನೀಡುವ ಮೂಲಕ ಭಯೋತ್ಪಾದನೆಯನ್ನು ರಾಜ್ಯ ನೀತಿಯಾಗಿ ಬಳಸುತ್ತಿರುವುದನ್ನು ಭಾರತವು ಪದೇ ಪದೇ ಸಾಕ್ಷ್ಯಗಳೊಂದಿಗೆ ಸಾಬೀತುಪಡಿಸಿದೆ ಎಂದರು.

2026ರಲ್ಲಿ ಭಾರತವು ಬಿಆರ್‌ಐಸಿಎಸ್ ಶೃಂಗಸಭೆಯನ್ನು ಆಯೋಜಿಸಲಿದೆ. 'ರಿಯೊ ಡಿ ಜನೈರೊ ಘೋಷಣೆ' ಎಂಬ ಜಂಟಿ ಘೋಷಣೆಯಲ್ಲಿ, ಯಾವುದೇ ಉಗ್ರ ಕೃತ್ಯವನ್ನು ಅಪರಾಧ ಮತ್ತು ಸಮರ್ಥನೀಯವಲ್ಲ ಎಂದು ಬ್ರಿಕ್ಸ್ ನಾಯಕರು ಖಂಡಿಸಿದ್ದಾರೆ. ಪಹಲ್ಗಾಮ್‌ನ ದಾಳಿಯನ್ನು ತೀವ್ರವಾಗಿ ಖಂಡಿಸುತ್ತೇವೆ. ಗಡಿಯಾಚೆಗಿನ ಉಗ್ರರ ಚಲನೆ, ಭಯೋತ್ಪಾದನೆಗೆ ಹಣಕಾಸು ಮತ್ತು ಆಶ್ರಯದ ವ್ಯವಸ್ಥೆಯನ್ನು ಮಾಡುತ್ತಿರುವವರ ವಿರುದ್ಧ ನಾವು ಕ್ರಮ ತೆಗೆದುಕೊಳ್ಳಲು ಬದ್ಧರಾಗಿದ್ದೇವೆ ಎಂದು ಘೋಷಣೆ ತಿಳಿಸಿದ್ದು, ಆದರೆ ಎಲ್ಲೂ ಪಾಕಿಸ್ತಾನದ ಹೆಸರನ್ನು ನೇರವಾಗಿ ಉಲ್ಲೇಖಿಸಿಲ್ಲ.

## ಕರಾಚಿಯಲ್ಲಿ ಕಟ್ಟಡ ಕುಸಿದು 27 ಜನರು ಬಲಿ

**ಕರಾಚಿ:** ಕರಾಚಿಯಲ್ಲಿ ದೊಡ್ಡ ದುರಂತವೊಂದು ಸಂಭವಿಸಿದೆ. ಪಾಕಿಸ್ತಾನದ ದಕ್ಷಿಣ ಬಂದರು ನಗರವಾದ ಕರಾಚಿಯಲ್ಲಿ ಕಟ್ಟಡ ಕುಸಿದು 27 ಜನರು ಸಾವನ್ನಪ್ಪಿದ್ದಾರೆ. ಬೃಹತ್ ಕಟ್ಟಡವೊಂದು ಹಠಾತ್ತನೆ ಕುಸಿದಿದೆ. ಪ್ರಸ್ತುತ ರಕ್ಷಣಾ ಕಾರ್ಯಾಚರಣೆಗಳು ನಡೆಯುತ್ತಿವೆ. ಅವಶೇಷಗಳ ಅಡಿಯಲ್ಲಿ ಹೆಚ್ಚಿನ ಶವಗಳು ಸಿಲುಕಿವೆ ಎಂದು ವರದಿಯಾಗಿದೆ. ಈ ಬಗ್ಗೆ ಮಾತನಾಡಿರುವ ರಕ್ಷಣಾ ಕಾರ್ಯಾಚರಣೆಯ ವಕ್ತಾರ ಹಸನ್ ಉಲ್ ಹಸೀಬ್ ಖಾನ್, ರಕ್ಷಣಾ ಕಾರ್ಯಾಚರಣೆಗಳು ಅಂತಿಮ ಹಂತದಲ್ಲಿದ್ದು, ಹೆಚ್ಚಿನ ಕಟ್ಟಡದ ಅವಶೇಷಗಳನ್ನು ತೆಗೆದುಹಾಕಲಾಗಿದೆ ಎಂದು ಹೇಳಿದ್ದಾರೆ.ಸಾವನ್ನಪ್ಪಿದವರಲ್ಲಿಕನಿಷ್ಠ 15 ಮಹಿಳೆಯರು ಮತ್ತು ಮೂವರು ಮಕ್ಕಳಿದ್ದಾರೆ, ಇನ್ನೂ ಮೂವರು ಗಂಭೀರ ಸ್ಥಿತಿಯಲ್ಲಿದ್ದಾರೆಂದು ತಿಳಿದುಬಂದಿದೆ. 48 ಗಂಟೆಗಳಿಗೂ ಹೆಚ್ಚು ಕಾಲ ನಡೆದ ಈ ಕಾರ್ಯಾಚರಣೆಯಲ್ಲಿ ಅವಶೇಷಗಳನ್ನು ತೆರವುಗೊಳಿಸಲು ಭಾರೀ ಯಂತ್ರೋಪಕರಣಗಳು ಮತ್ತು ಆಧುನಿಕ ಉಪಕರಣಗಳನ್ನು ಬಳಸಲಾಗಿದೆ ಎಂದು ವರದಿಯಾಗಿದೆ. ಸ್ಥಳೀಯ ಅಧಿಕಾರಿಗಳ ಪ್ರಕಾರ, ಕುಸಿದ ಕಟ್ಟಡವು 30 ವರ್ಷ ಹಳೆಯದಾಗಿದ್ದು, ಹಿಂದೆ ಅಸುರಕ್ಷಿತವೆಂದು ಪರಿಗಣಿಸಲಾಗಿತ್ತು. ಘಟನೆಯ ತನಿಖೆಗಾಗಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದೆ. ಪಾಕಿಸ್ತಾನದ ದಕ್ಷಿಣ ಬಂದರು ನಗರವಾದ ಕರಾಚಿಯಲ್ಲಿ ಶುಕ್ರವಾರ ಐದು ಅಂತಸ್ತಿನ ವಸತಿ ಕಟ್ಟಡ ಕುಸಿದು ಏಳು ಜನರು ಸಾವನ್ನಪ್ಪಿದ್ದು, ಕನಿಷ್ಠ 10 ಜನರು ಗಾಯಗೊಂಡಿದ್ದಾರು ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಕರಾಚಿಯ ಲಿಯಾರಿ ಪ್ರದೇಶದಲ್ಲಿ ಕಟ್ಟಡ ಕುಸಿದು 30ಕ್ಕೂ ಹೆಚ್ಚು ಜನರು ಅವಶೇಷಗಳ ಅಡಿಯಲ್ಲಿ ಸಿಲುಕಿದ್ದು, ಉಳಿದವರನ್ನು ರಕ್ಷಿಸಲು ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ ಎಂದು ಸ್ಥಳೀಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಕುಸಿದ ಕಟ್ಟಡದ ಅವಶೇಷಗಳನ್ನು ತೆಗೆದುಹಾಕಲು ಭಾರೀ ಯಂತ್ರೋಪಕರಣಗಳನ್ನು ಬಳಸಲಾಗುತ್ತಿದೆ, ಅಧಿಕಾರಿಗಳು ಈಗಾಗಲೇ ಅಸುರಕ್ಷಿತ ಎಂದು ಘೋಷಿಸಿದ್ದಾರೆ.

# ಅಮರನಾಥ ಯಾತ್ರೆ: ಗುಹಾ ದೇಗುಲಕ್ಕೆ ತೆರಳಿದ 6ನೇ ಯಾತ್ರಿಕರ ತಂಡ

**ಜಮ್ಮು ಮತ್ತು ಕಾಶ್ಮೀರ:** ಹಿಮಾಲಯದಲ್ಲಿ ವಾರ್ಷಿಕ ಅಮರನಾಥ ಯಾತ್ರೆಗೆ ತೆರಳಲು 8,600 ಕ್ಕೂ ಹೆಚ್ಚು ಯಾತ್ರಿಕರ ಆರನೇ ತಂಡ ಸೋಮವಾರ ಮುಂಜಾನೆ ಜಮ್ಮುವಿನ ಭಗವತಿ ನಗರ ಮೂಲ ಶಿಬಿರದಿಂದ ಹೊರಟಿದೆ.

ಜುಲೈ 3 ರಂದು ಅನಂತ್‌ನಾಗ್ ಜಿಲ್ಲೆಯ ಪಹಲ್ಗಾಮ್ ಮತ್ತು ಗಂಡೇರ್‌ಬಾಲ್ ಜಿಲ್ಲೆಯ ಬಾಲ್ಟಾಲ್ ಜೋಡಿ ಹಳಿಗಳಿಂದ ಯಾತ್ರೆ ಪ್ರಾರಂಭಿಸಲಾಗಿತ್ತು. ಇಲ್ಲಿಯವರೆಗೆ 70,000 ಕ್ಕೂ ಹೆಚ್ಚು ಯಾತ್ರಿಕರು 3,880 ಮೀಟರ್ ಎತ್ತರದಲ್ಲಿರುವ ಪವಿತ್ರ ಗುಹಾ ದೇವಾಲಯದಲ್ಲಿರುವ ಶಿವನ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಕೆ ಮಾಡಿದ್ದಾರೆ.

6,486 ಪುರುಷರು, 1,826 ಮಹಿಳೆಯರು, 42 ಮಕ್ಕಳು ಮತ್ತು 251 ಸಾಧುಗಳು ಮತ್ತು ಸಾಧ್ವಿಗಳು ಸೇರಿದಂತೆ 8,605 ಯಾತ್ರಿಕರ ಹೊಸ ತಂಡವು 372 ವಾಹನಗಳಲ್ಲಿ ಇಲ್ಲಿನ ಭಗವತಿ ನಗರ ಮೂಲ ಶಿಬಿರದಿಂದ ಕಾಶ್ಮೀರದ ಅವಳಿ ಮೂಲ ಶಿಬಿರಗಳಿಗೆ ಬೆಳಗ್ಗೆ 3.30 ಮತ್ತು ಬೆಳಗ್ಗೆ 4.25 ಕ್ಕೆ ಬಿಗಿ ಭದ್ರತಾ ವ್ಯವಸ್ಥೆಗಳ ನಡುವೆ ಹೊರಟಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

3,486 ಯಾತ್ರಿಕರನ್ನು ಹೊತ್ತ ಮೊದಲ ಯಾತ್ರಿಕರ 166 ವಾಹನಗಳು ಗಂಡೇರ್ಬಲ್ ಜಿಲ್ಲೆಯ ಬಾಲ್ಟಾಲ್ ಮಾರ್ಗದಲ್ಲಿ ಸಾಗಿದವು. 5,119 ಯಾತ್ರಿಕರನ್ನು ಹೊತ್ತ 206 ವಾಹನಗಳು ಅನಂತ್‌ನಾಗ್ ಜಿಲ್ಲೆಯ ಪಹಲ್ಗಾಮ್ ಮಾರ್ಗದಲ್ಲಿ ಸಾಗಿದ್ದವು ಎಂದು ಅವರು ಹೇಳಿದ್ದಾರೆ.

ಜುಲೈ 2 ರಂದು ಜಮ್ಮುವಿನಲ್ಲಿ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಯಾತ್ರೆಗೆ ಹಸಿರು ನಿಶಾನೆ ತೋರಿದ ನಂತರದ ಅತಿ ದೊಡ್ಡ ಯಾತ್ರಿಕರ ತಂಡ ಇದಾಗಿದೆ. ಇದರೊಂದಿಗೆ, ಒಟ್ಟು 40,361 ಯಾತ್ರಿಕರು ಜಮ್ಮು ಮೂಲ ಶಿಬಿರದಿಂದ ಕಣಿವೆಗೆ ತೆರಳಿದ್ದಾರೆ.

# ಅಮೆರಿಕ ವಿರೋಧಿ ನೀತಿಗಳನ್ನು ಬೆಂಬಲಿಸುವ ಬ್ರಿಕ್ಸ್ ದೇಶಗಳ ಮೇಲೆ ಹೆಚ್ಚುವರಿ ತೆರಿಗೆ; ಟ್ರಂಪ್ ಬೆದರಿಕೆ

**ವಾಷಿಂಗ್ಟನ್ ಅಮೆರಿಕ:** ಬ್ರೆಜಿಲ್‌ನಲ್ಲಿ ಬ್ರಿಕ್ಸ್ ಶೃಂಗಸಭೆ ನಡೆಯುತ್ತಿದೆ. ಈ ನಡುವೆ ಅಮೆರಿಕ ಅಧ್ಯಕ್ಷರು ಬ್ರಿಕ್ಸ್ ನ ಅಮೆರಿಕ ವಿರೋಧಿ ನೀತಿಗಳನ್ನು ಅನುಸರಿಸುವ ರಾಷ್ಟ್ರಗಳಿಗೆ ಟ್ರಂಪ್ ಬೆದರಿಕೆಯೊಂದನ್ನು ಹಾಕಿದ್ದಾರೆ. ಬ್ರಿಕ್ಸ್ ಶೃಂಗಸಭೆಯಲ್ಲಿ ಅಮೆರಿಕದ ಸುಂಕ ಹೆಚ್ಚಳವನ್ನು ವಿರೋಧಿಸಿದ ಕೆಲವೇ ಗಂಟೆಗಳ ಬಳಿಕ, ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಆ ಬಣದಲ್ಲಿನ ಅಮೆರಿಕ-ವಿರೋಧಿ ನೀತಿಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳುವ ದೇಶಗಳ ಮೇಲೆ ಹೆಚ್ಚುವರಿ 10 ಪ್ರತಿಶತ ಸುಂಕವನ್ನು ವಿಧಿಸುವುದಾಗಿ ಘೋಷಿಸಿದ್ದಾರೆ.

ಃಖಬಅಖನ ಅಮೆರಿಕ-ವಿರೋಧಿ ನೀತಿಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳುವ ಯಾವುದೇ ದೇಶಕ್ಕೆ ಹೆಚ್ಚುವರಿ 10% ಸುಂಕವನ್ನು ವಿಧಿಸಲಾಗುವುದು. ಈ ನೀತಿಗೆ ಯಾವುದೇ ವಿನಾಯಿತಿ ಇರುವುದಿಲ್ಲ. ಈ ವಿಷಯದ ಬಗ್ಗೆ ನಿಮ್ಮ ಗಮನಕ್ಕೆ ಧನ್ಯವಾದಗಳು ಎಂದು ಅಧ್ಯಕ್ಷ ಟ್ರಂಪ್ ನಿನ್ನೆ ರಾತ್ರಿ ತಮ್ಮ ಟ್ರೂತ್ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಒಂದನ್ನು ಹಂಚಿಕೊಂಡಿದ್ದಾರೆ.

ಈ ಬಣ ಮೊದಲು ಬ್ರೆಜಿಲ್, ರಷ್ಯಾ, ಭಾರತ, ಚೀನಾ ಮತ್ತು ದಕ್ಷಿಣ ಆಫ್ರಿಕಾವನ್ನು ದೇಶಗಳನ್ನು ಒಳಗೊಂಡಿತ್ತು. 2024ರಲ್ಲಿ ಈ ಬಣಕ್ಕೆ ಈಜಿಪ್ಟ್, ಇಥಿಯೋಪಿಯಾ, ಇರಾನ್ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ ದೇಶಗಳು ಇದರೊಂದಿಗೆ ಸೇರಿಕೊಂಡು ಬಣ ವಿಸ್ತರಿಸಿದೆ. ಬಳಿಕ 2025 ಅಂದರೆ ಈ ವರ್ಷ ಇಂಡೋನೇಷ್ಯಾ ಕೂಡ ಸೇರಿಕೊಂಡಿದೆ.




## ಮುಂಬೈ ಗುಜರಾತ್‌ನ ರಾಜಧಾನಿಯಾಗಿತ್ತು: ಶಿವಸೇನಾ ಸಂಸದನ ವಿವಾದ

**ಮುಂಬೈ:** ಮಹಾರಾಷ್ಟ್ರ ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರು ಕಾರ್ಯಕ್ರಮವೊಂದರಲ್ಲಿ 'ಜೈ ಗುಜರಾತ್' ಘೋಷಣೆ ಮಾಡಿದ್ದಕ್ಕಾಗಿ ವಿರೋಧ ಪಕ್ಷದ ದಾಳಿಗೆ ಗುರಿಯಾದ ಕೆಲವು ದಿನಗಳ ನಂತರ, ಅವರ ಶಿವಸೇನಾ ಪಕ್ಷದ ಸಂಸದ ಪ್ರತಾಪ್ ಜಾಧವ್ ಅವರು ಮುಂಬೈಯನ್ನು ನೆರೆಯ ರಾಜ್ಯದ ಹಿಂದಿನ ರಾಜಧಾನಿ ಎಂದು ಕರೆದಿದ್ದಕ್ಕಾಗಿ ಟೀಕೆಗೆ ಗುರಿಯಾಗಿದ್ದಾರೆ. ಭಾನುವಾರ ಧಾರಾಶಿವ ಜಿಲ್ಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಆರೋಗ್ಯ ರಾಜ್ಯ ಸಚಿವ ಜಾಧವ್, ಇಂತಹ ವಿಷಯಗಳ ಬಗ್ಗೆ ರಾಜಕೀಯ ಮಾಡುವ ಅಗತ್ಯವಿಲ್ಲ. ಗುಜರಾತ್ ನಮ್ಮ ನೆರೆಯ ರಾಜ್ಯ. ಅದು ಪಾಕಿಸ್ತಾನದಲ್ಲಿಲ್ಲ ಎಂದು ವರದಿಗಾರರಿಗೆ ತಿಳಿಸಿದರು. ಸಂಯುಕ್ತ ಮಹಾರಾಷ್ಟ್ರ (ಚಳವಳಿ) ಸಂದರ್ಭದಲ್ಲಿ ಮುಂಬೈ ಗುಜರಾತ್‌ನ ರಾಜಧಾನಿಯೂ ಆಗಿತ್ತು ಎಂದು ಜಾಧವ್ ಹೇಳಿದರು. ಶಿವಸೇನಾ-ಉದ್ಧವ್ ಬಾಳಾಸಾಹೇಬ್ ಠಾಕ್ರೆ, ರಾಜ್ಯಸಭಾ ಸದಸ್ಯೆ ಪ್ರಿಯಾಂಕಾ ಚತುರ್ವೇದಿ ಜಾಧವ್ ಅವರ ಹೇಳಿಕೆಗಳಿಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. 'ಈ ವ್ಯಕ್ತಿ ಕೇಂದ್ರದಲ್ಲಿ ಸಚಿವರಾಗಿದ್ದಾರೆ. ಈ ವ್ಯಕ್ತಿ ಪನಾಸ್ ಖೋಕೆಗಾಗಿ (50 ಪೆಟ್ಟಿಗೆಗಳು) ತನ್ನದೇ ಪಕ್ಷದ ನಾಯಕತ್ವವನ್ನು ದ್ರೋಹ ಮಾಡಿದ ವ್ಯಕ್ತಿಯೂ ಹೌದು. ಈ ವ್ಯಕ್ತಿ ಮಹಾರಾಷ್ಟ್ರದ ಜೈ ಗುಜರಾತ್ ಪಕ್ಷದ ಭಾಗವೂ ಹೌದು. ಈ ವ್ಯಕ್ತಿ ತನ್ನ ಯಜಮಾನರನ್ನು ಮೆಚ್ಚಿಸಲು ಭ್ರಮೆಗೊಂಡು ಇತಿಹಾಸವನ್ನು ನಿರ್ಮಿಸಲು ಪ್ರಾರಂಭಿಸಿದ್ದರಲ್ಲಿ ಆಶ್ಚರ್ಯವಿಲ್ಲ' ಎಂದು ಅವರು ಸೋಮವಾರ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

# ನಾನು ಪಾಕಿಸ್ತಾನ್ ಏಜೆಂಟ್ ಆಗಿದ್ದೆ: ಉಗ್ರ ತಹವ್ವುರ್ ರಾಣಾ

**ನವದೆಹಲಿ:** 26/11ರ ಮುಂಬೈ ತಾಜ್ ಹೋಟೆಲ್ ಮೇಲಿನ ದಾಳಿಯ ಮಾಸ್ಟರ್ ಮೈಂಡ್ ಉಗ್ರ ತಹವ್ವುರ್ ರಾಣಾ ಪೊಲೀಸರ ವಿಚಾರಣೆ ವೇಳೆ ಹಲವು ಸ್ಫೋಟಕ ವಿಷಯಗಳನ್ನು ಬಾಯ್ಬಿಟ್ಟಿದ್ದಾನೆ. ಮುಂಬೈ ದಾಳಿಯಲ್ಲಿ ಪಾಕಿಸ್ತಾನದ ಸೇನೆಯ ಹಿರಿಯ ಅಧಿಕಾರಿಗಳು ಮತ್ತು ಐಎಸ್‌ಐ ಏಜೆಂಟರು ಈ ಭೀಕರ ದಾಳಿಯಲ್ಲಿ ಭಾಗಿಯಾಗಿದ್ದಾರೆ ಎಂಬುದನ್ನು ಹೇಳಿದ್ದಾನೆ. ಅಲ್ಲದೆ, ಕೆಲವು ಪ್ರಮುಖ ಸುಳಿವುಗಳ ಕುರಿತಂತೆಯೂ ಆತ ಪೊಲೀಸರೆದುರು ತಿಳಿಸಿದ್ದಾನೆ.

ಮುಂಬೈ ಕ್ರೈಂ ಬ್ರಾಂಚ್ ಇತ್ತೀಚಿಗೆ ದೆಹಲಿಯಲ್ಲಿ ಆತನನ್ನು ವಿಚಾರಣೆ ನಡೆಸಿದ ವೇಳೆ ಈ ವಿಚಾರವನ್ನು ರಾಣಾ ಹೊರಹಾಕಿದ್ದಾನೆ. ಸದ್ಯ ರಾಷ್ಟ್ರೀಯ ತನಿಖಾ ಸಂಸ್ಥೆ(ಓಋಂ) ವಶದಲ್ಲಿರುವ ರಾಣಾನನ್ನು ದೆಹಲಿಯ ತಿಹಾರ್ ಜೈಲಿನಲ್ಲಿಡಲಾಗಿದ್ದು, ಆತನನ್ನು ಮುಂಬೈ ಕ್ರೈಂ ಬ್ರ್ಯಾಂಚ್ ಅಧಿಕಾರಿಗಳು ವಿಚಾರಣೆಗೊಳಪಡಿಸಿದರು. ಈ ವೇಳೆ ಆತ ಪಾಕಿಸ್ತಾನ ಸೇನೆಗೆ ನಂಬಿಕಸ್ಥ ಏಜೆಂಟ್ ಆಗಿದ್ದ ಎಂಬುದನ್ನು ಒಪ್ಪಿಕೊಂಡಿದ್ದಾನೆ.

ಪಾಕಿಸ್ತಾನ ಸೇನೆಗೆ ನಂಬಿಕಸ್ಥ ಏಜೆಂಟ್ ಆಗಿದ್ದ ರಾಣಾ ಸೌದಿ ಅರೇಬಿಯಾದ ಮೂಲಕ ಗುಪ್ತಚರ ಮಾಹಿತಿಗಳನ್ನು ಪಾಕಿಸ್ತಾನಕ್ಕೆ ರವಾನಿಸುತ್ತಿದ್ದುದರ ಬಗ್ಗೆಯೂ ಬಹಿರಂಗಪಡಿಸಿದ್ದಾನೆ.

ಎನ್‌ಐಎ ವಿಚಾರಣೆ ವೇಳೆ ಇದೇ ವಿಚಾರವನ್ನು ತಹವ್ವುರ್ ರಾಣಾ ಬಾಯ್ಬಿಟ್ಟಿದ್ದಾನೆ ಎಂದು ರಾಷ್ಟ್ರೀಯ ತನಿಖಾ ಸಂಸ್ಥೆಯ ಅಧಿಕಾರಿಯೊಬ್ಬರು ಈಟಿವಿ ಭಾರತದೊಂದಿಗೆ ಮಾಹಿತಿ ಹಂಚಿಕೊಂಡಿದ್ದಾರೆ. ಕೆನಡಾದ ಉದ್ಯಮಿಯಾಗಿದ್ದ ರಾಣಾ ಪಾಕಿಸ್ತಾನ, ಸಿಂಧ್, ಬಲೂಚಿಸ್ತಾನ, ಬಹ್ವಾಲ್ಪುರ್, ಮತ್ತು ಸಿಯಾಚಿನ್, ಬಲೋತ್ರಾ ಸೆಕ್ಟರ್‌ನಂತಹ ಸೂಕ್ಷ್ಮ ಪ್ರದೇಶಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಎಂದು ಅವರು ತಿಳಿಸಿದರು. ಹಿಂದಿನ ಆರೋಪ ಪಟ್ಟಿಯಲ್ಲಿ ಎನ್‌ಐಎ ಅಧಿಕಾರಿಗಳು ಪಾಕಿಸ್ತಾನದ ಅಧಿಕಾರಿಗಳು ಮುಂಬೈ ದಾಳಿಯಲ್ಲಿ ಭಾಗಿಯಾಗಿರುವುದನ್ನು ವಿವರಿಸಿದ್ದರು.

# ತುಳಸಿ ಪಾತ್ರದಲ್ಲಿ ಕಾಣಿಸಿಕೊಂಡ ಸ್ಮೃತಿ ಇರಾನಿ



**ಹೊಸದಿಲ್ಲಿ:** ಸ್ಮೃತಿ ಇರಾನಿ ಅವರು ಬಹುನಿರೀಕ್ಷಿತ ಕ್ಯೂಂಕಿ ಸಾಸ್ ಭಿ ಕಭಿ ಬಹೂ ಥಿ ಸೀಸನ್-2 ಧಾರಾವಾಹಿಯ ಮೂಲಕ ಕಿರುತೆರೆಗೆ ಮತ್ತೆ ಮರಳಲು ಸಜ್ಜಾಗಿದ್ದಾರೆ.

ತುಳಸಿ ವೀರ್ಾನಿ ಪಾತ್ರದಲ್ಲಿರುವ ಸ್ಮೃತಿ ಇರಾನಿ ಅವರ ಫಸ್ಟ್ ಲುಕ್ ಬಿಡುಗಡೆಯಾಗಿದೆ. ಅವರು ಸಾಂಪ್ರದಾಯಿಕ ಮೆರೂನ್ ಬಣ್ಣದ ಸೀರೆಯನ್ನು ತೊಟ್ಟು ಗೃಹಿಣಿಯ ಲುಕ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಕೆಂಪು ಬಿಂದಿ, ಕಪ್ಪು ಮಣಿಗಳ ಮಂಗಳಸೂತ್ರ ಮತ್ತು ಆಭರಣಗಳಲ್ಲಿ ಅವರು ಮಿಂಚಿದ್ದಾರೆ. ಧಾರಾವಾಹಿಯಲ್ಲಿನ ಅವರ ಲುಕ್ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಕ್ಯೂಂಕಿ ಸಾಸ್ ಭಿ ಕಭಿ ಬಹೂ ಥಿ ಧಾರವಾಹಿ 2000 ಇಸವಿಯ ಆರಂಭದಿಂದ 2008ರವರೆಗೆ ಪ್ರಸಾರವಾಯಿತು. ಈ ಧಾರಾವಾಹಿ ಸತತ ಏಳು ವರ್ಷಗಳ ಕಾಲ ದೂರದರ್ಶನದಲ್ಲಿ ನಂಬರ್ ಒನ್ ಸ್ಥಾನವನ್ನು ಹೊಂದಿತ್ತು. ಧಾರಾವಾಹಿಯಲ್ಲಿ ಸ್ಮೃತಿ ಅವರು ಪ್ರಧಾನ ಪಾತ್ರದಲ್ಲಿ ನಟಿಸಿದ್ದರು. ತುಳಸಿ ವೀರ್ಾನಿ ಪಾತ್ರದಲ್ಲಿ ಸ್ಮೃತಿ ವೀಕ್ಷಕರ ಮನಸ್ಸನ್ನು ಗೆದ್ದುಕೊಂಡಿದ್ದರು.

ಬಹುನಿರೀಕ್ಷಿತ ಧಾರಾವಾಹಿ ಕೊನೆಗೂ ತನ್ನ ಪುನರಾಗಮನಕ್ಕೆ ಸಜ್ಜಾಗಿದೆ. ಕ್ಯೂಂಕಿ ಸಾಸ್ ಭಿ ಕಭಿ ಬಹೂ ಥಿ ಸೀಸನ್ -2 ನಲ್ಲಿ ಸ್ಮೃತಿ ಇರಾನಿ ತುಳಸಿ ಪಾತ್ರದಲ್ಲಿ ಮತ್ತು ಅಮರ್ ಉಪಾಧ್ಯಾಯ ಮಿಹಿರ್ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಈ ಧಾರವಾಹಿ ಜುಲೈ 3ರಂದು ಪ್ರಥಮ ಪ್ರದರ್ಶನಗೊಳ್ಳಬೇಕಿತ್ತು. ಆದರೆ, ನಿರ್ಮಾಣ ಸ್ವಲ್ಪ ವಿಳಂಬವಾಗಿದೆ ಎಂದು ಹೇಳಲಾಗಿದೆ.

# ಕಾಳಿಂಗ ಸರ್ಪವನ್ನು ಒಂದೇ ಏಟಿಗೆ ಹಿಡಿದ ಮಹಿಳಾ ಅಧಿಕಾರಿ



**ತಿರುವನಂತಪುರಂ:** ಪರುತಿಪಲ್ಲಿ ವಲಯದ ಅರಣ್ಯ ಬೀಟ್ ಅಧಿಕಾರಿ ಜಿ.ಎಸ್. ರೋಶನಿ ಎಂಬಾಕೆ ಕೇರಳದ ವಸತಿ ಪ್ರದೇಶದಿಂದ 18 ಅಡಿ ಉದ್ದದ ದೈತ್ಯ ಕಾಳಿಂಗ ಸರ್ಪವನ್ನು ಬರಿಗೈನಲ್ಲಿ ಹಿಡಿದು ರಕ್ಷಿಸಿದ್ದಾಳೆ. ಅವಳ ಈ ಸಾಹಸ ದೃಶ್ಯ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದು,ನೆಟ್ಟಿಗರು ಆಕೆಯ ಧೈರ್ಯವನ್ನು ಮೆಚ್ಚಿದ್ದಾರೆ. ವೈರಲ್ ಆದ ವಿಡಿಯೊದಲ್ಲಿ, ಅರಣ್ಯ ಅಧಿಕಾರಿ ಹಾವನ್ನು ಸೆರೆಹಿಡಿಯಲು ಪ್ ್ರ ಯ ತ್ನಿ ಸ ುತ್ ತಿ ್ ರ ು ವ ು ದ ು ಸೆರೆಯಾಗಿದೆ. ವಿಡಿಯೊದಲ್ಲಿ, ಅರಣ್ಯ ಅಧಿಕಾರಿ ರೋಶನಿ ತನ್ನ ಕೈಯಲ್ಲಿ ಉದ್ದವಾದ ಕೋಲು ಮತ್ತು ಹಾವನ್ನು ಹಿಡಿಯುವ ಚೀಲವನ್ನು ಹಿಡಿದುಕೊಂಡು ನಿಧಾನವಾಗಿ ಹಾವನ್ನು ಹಿಡಿಯುತ್ತಿರುವುದು ಕಂಡುಬಂದಿದೆ. ನಿರಂತರ ಪ್ರಯತ್ನದ ನಂತರ ಅವಳು ಚೀಲದಲ್ಲಿ ಹಾವನ್ನು ಹಾಕುವಲ್ಲಿ ಯಶಸ್ವಿಯಾಗಿದ್ದಾಳೆ ಜಿ.ಎಸ್. ರೋಶನಿ ಅರಣ್ಯ ಬೀಟ್ ಅಧಿಕಾರಿಯಾಗಿದ್ದು, ತಮ್ಮ ಎಂಟು ವರ್ಷಗಳ ವೃತ್ತಿಜೀವನದಲ್ಲಿ 800 ಕ್ಕೂ ಹೆಚ್ಚು ಹಾವುಗಳನ್ನು ಹಿಡಿದಿರುವುದಾಗಿ ಹೇಳಿಕೊಂಡಿದ್ದಾಳೆ. ಮತ್ತು ಅವಳು ವಿಷಕಾರಿ ಮತ್ತು ವಿಷಕಾರಿಯಲ್ಲದ ಹಾವುಗಳನ್ನು ಹಿಡಿದಿದ್ದಾಳಂತೆ. ಈ ದೈತ್ಯ ಕಿಂಗ್ ಕೋಬ್ರಾವನ್ನು ಹಿಡಿದ ನಂತರ, ಕೇರಳದ ದಕ್ಷಿಣ ಜಿಲ್ಲೆಗಳಲ್ಲಿ ಇದು ಬಹಳ ಅಪರೂಪ ಎಂದು ಅವಳು ಉಲ್ಲೇಖಿಸಿದ್ದಾಳೆ. ಹಾಗೂ ಇಂತಹ ದೈತ್ಯ ಹಾವನ್ನು ಹಿಡಿದಿದ್ದು ಇದೇ ಮೊದಲು ಎಂದು ತಿಳಿಸಿದ್ದಾಳೆ.

# 2030ರ ವೇಳೆಗೆ ಕಾಬೂಲ್‌ನಲ್ಲಿ ನೀರಿನ ಕೊರತೆ

**ಅಫ್ಘಾನಿಸ್ತಾನ:** ಆರು ದಶಲಕ್ಷಕ್ಕೂ ಹೆಚ್ಚು ಜನರಿಗೆ ನೆಲೆಯಾಗಿರುವ ಕಾಬೂಲ್, ಹೆಚ್ಚುತ್ತಿರುವ ನೀರಿನ ಬಿಕ್ಕಟ್ಟನ್ನು ಎದುರಿಸುತ್ತಿದೆ. ಲಾಭರಹಿತ ಮರ್ಸಿ ಕಾರ್ಪ್ಸ್‌ನ ಹೊಸ ವರದಿಯು, ಮುಂದಿನ ಐದು ವರ್ಷಗಳಲ್ಲಿ ಸಂಪೂರ್ಣವಾಗಿ ನೀರಿನಿಂದ ಹೊರಗುಳಿಯುವ ಮೊದಲ ಆಧುನಿಕ ನಗರ ಅಫ್ಘಾನ್ ರಾಜಧಾನಿಯಾಗಬಹುದು ಎಂದು ಎಚ್ಚರಿಸಿದೆ. ವರದಿಗಳ ಪ್ರಕಾರ, ಅತಿಯಾದ ಬಳಕೆ ಮತ್ತು ಹವಾಮಾನ ಬದಲಾವಣೆಯ ಪರಿಣಾಮಗಳಿಂದಾಗಿ ನಗರದ ಅಂತರ್ಜಲ ಮಟ್ಟಗಳು ವೇಗವಾಗಿ ಕುಸಿಯುತ್ತಿವೆ. ಏಪ್ರಿಲ್‌ನಲ್ಲಿ ಪ್ರಕಟವಾದ ಮರ್ಸಿ ಕಾರ್ಪ್ಸ್ ವರದಿಯ ಪ್ರಕಾರ, ಕಳೆದ 10 ವರ್ಷಗಳಲ್ಲಿ ಕಾಬೂಲ್‌ನ ಜಲಚರಗಳು 25 ರಿಂದ 30 ಮೀಟರ್‌ಗಳಷ್ಟು ಕುಸಿದಿವೆ. ಹೊರತೆಗೆಯಲಾಗುತ್ತಿರುವ ನೀರಿನ ಪ್ರಮಾಣವು ಪ್ರತಿ ವರ್ಷ ನೈಸರ್ಗಿಕವಾಗಿ ಮರುಪೂರಣಗೊಳ್ಳುವ ನೀರಿನ ಪ್ರಮಾಣಕ್ಕಿಂತ 44 ಮಿಲಿಯನ್ ಘನ ಮೀಟರ್ ಹೆಚ್ಚಾಗಿದೆ. ಈ ಅತಿಯಾದ ಹೊರತೆಗೆಯುವಿಕೆ 2030 ರ ವೇಳೆಗೆ ಕಾಬೂಲ್ ಒಣಗುವ ಅಪಾಯವನ್ನುಂಟುಮಾಡುತ್ತದೆ, ಇದು ಸುಮಾರು ಮೂರು ಮಿಲಿಯನ್ ನಿವಾಸಿಗಳನ್ನು ಸ್ಥಳಾಂತರಿಸಬಹುದು. ನಗರದ ಕುಡಿಯುವ ನೀರಿನ ಪ್ರಮುಖ ಮೂಲವಾದ ಕಾಬೂಲ್‌ನ ಸುಮಾರು ಅರ್ಧದಷ್ಟು ಬೋರ್‌ವೆಲ್ ಗಳು ಈಗಾಗಲೇ ಬತ್ತಿ ಹೋಗಿವೆ ಎಂದು ಯುನಿಸೆಫ್ ಗಮನಿಸಿದೆ. ನಗರದ ಅಂತರ್ಜಲದ ಶೇಕಡಾ 80 ರಷ್ಟು ಅಸುರಕ್ಷಿತವಾಗಿದೆ ಎಂದು ವರದಿಯು ಎತ್ತಿ ತೋರಿಸಿದೆ. ಮಾಲಿನ್ಯಕಾರಕಗಳಲ್ಲಿ ಒಳಚರಂಡಿ, ಆರ್ಸೆನಿಕ್ ಮತ್ತು ಹೆಚ್ಚಿನ ಮಟ್ಟದ ಉಪ್ಪು ಸೇರಿವೆ.



ಮಂಗಳವಾರ
8.7.2025
ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ದರ್ಶನ್ ಫ್ಯಾಮಿಲಿ ಕುಡಿ ಶೀಘ್ರದಲ್ಲೇ ಹೀರೋ ಆಗಿ ಎಂಟ್ರಿ?



ಸ್ಯಾಂಡಲ್‌ವುಡ್‌ನ ಖ್ಯಾತ ಖಳನಟರಾಗಿದ್ದ ತೂಗುದೀಪ ಶ್ರೀನಿವಾಸ್ ಅವರ ಬಳಿಕ ಅವರ ಮಕ್ಕಳಿಬ್ಬರು ಚಿತ್ರರಂಗಕ್ಕೆ ಎಂಟ್ರಿ ಕೊಟ್ಟರು. ಹಿರಿಯ ಮಗ ದರ್ಶನ್ ಖ್ಯಾತ ನಟನಾಗಿದ್ರೆ, ಕಿರಿಯ ಮಗ ದಿನಕರ್ ಖ್ಯಾತ ನಿರ್ದೇಶಕನಾಗಿ ಗುರುತಿಸಿಕೊಂಡರು. ಇದೀಗ ತೂಗುದೀಪ ಶ್ರೀನಿವಾಸ್ ಮೊಮ್ಮಗ ಅಂದರೆ ಮಗಳ ಮಗ ಚಂದು ಅಲಿಯಾಸ್ ಚಂದ್ರಕುಮಾರ್ ಸ್ಯಾಂಡಲ್‌ವುಡ್‌ಗೆ ಗ್ರ್ಯಾಂಡ್ ಎಂಟ್ರಿ ಕೊಡಲು ವೇದಿಕೆ ರೆಡಿಯಾಗಿದೆ. ದರ್ಶನ್, ಸೋದರಳಿಯನನ್ನು ಲಾಂಚ್ ಮಾಡಲು ಸಿದ್ಧತೆ ಮಾಡಿಕೊಂಡಿದ್ದಾರೆ ಎನ್ನಲಾಗುತ್ತಿದೆ.

ಅಂದಹಾಗೆ ಚಂದು ಈಗಾಗ್ಲೇ ಪರಿಚಯವಿರುವ ಮುಖ. ಯಾಕಂದ್ರೆ, ಹಲವು ವರ್ಷಗಳಿಂದ ಸೋದರಮಾವ ದರ್ಶನ್ ಅವರ ಜೊತೆಯಲ್ಲೇ ಚಂದು ಇದ್ದರು. ಈಗಲೂ ಇದ್ದಾರೆ. ಇದೇ ಚಂದು, ಕಾಟೇರ ಸಿನಿಮಾದಲ್ಲಿ ಕಾಟೇರನ ಬಾಲ್ಯದ ಪಾತ್ರಕ್ಕಾಗಿ ಬಣ್ಣ ಹಚ್ಚಿದ್ರು. ಬಹಳ ವರ್ಷಗಳಿಂದ ಚಂದು ಸಿನಿಮಾ ಜಗತ್ತಿಗೆ ಎಂಟ್ರಿ ಕೊಡಲು ಸಿದ್ಧರಾಗಿದ್ದು, ತೆರೆಯ ಹಿಂದಿನ ಕಾರ್ಯಗಳನ್ನ ಮಾವನ ಸಿನಿಮಾಗಳಿಂದ ನೋಡುತ್ತಲೇ ಬಂದಿದ್ದಾರೆ. ಇದೀಗ ದರ್ಶನ್ ಅಕ್ಕನ ಮಗ ಚಂದು ಹೀರೋ ಆಗಿ ಎಂಟ್ರಿ ಕೊಡಲು ಸಿದ್ಧರಾಗಿದ್ದು, ಆ ಚಿತ್ರ, ಇದೇ ಬರುವ ಶ್ರಾವಣ ಮಾಸಕ್ಕೆ ಆರಂಭವಾಗುತ್ತೆ ಎನ್ನಲಾಗುತ್ತಿದೆ.

ನೋಟದಲ್ಲಿ ದರ್ಶನ್‌ರನ್ನೇ ಹೋಲುವ ದಚ್ಚು ಅಕ್ಕನ ಮಗ ಚಂದು, ಹೀರೋ ಆಗಿ ಎಂಟ್ರಿ ಕೊಡಲು ಏನ್ ಬೇಕೋ ಅದೆಲ್ಲ ಸಿದ್ಧತೆಯನ್ನು ಹಲವು ವರ್ಷಗಳಿಂದ ಮಾಡ್ಕೊಂಡೇ ಬಂದಿದ್ದಾರೆ.



ಇದೇ ಚಂದು, ದರ್ಶನ್ ಅಭಿನಯಿಸುತ್ತಿರುವ ಡೆವಿಲ್ ಸಿನಿಮಾದಲ್ಲೂ ಚಂದು ಪುಟ್ಟ ಪಾತ್ರ ಮಾಡಬೇಕಿತ್ತು. ಆದರೆ ಅಭಿಮಾನಿಗಳ ಅತಿರೇಕ ವರ್ತನೆಯಿಂದ ಚಂದು ಅವರನ್ನು ಸಿನಿಮಾದಿಂದ ಕೈ ಬಿಟ್ಟಿದ್ದಾಗಿ ಖುದ್ದು ದರ್ಶನ್ ಇನ್ಸ್ಟಾಗ್ರಾಂನಲ್ಲಿ ಪೋಸ್ಟ್ ಹಾಕುವ ಮುಖಾಂತರ ಹೇಳಿಕೊಂಡಿದ್ದರು.

ಇದೀಗ ದರ್ಶನ್ ತಮ್ಮ ಸಹೋದರಿಯ ಪುತ್ರನ ಕನಸು ನನಸು ಮಾಡುತ್ತಿದ್ದಾರೆ. ತಮ್ಮದೇ ಬ್ಯಾನರ್ ಮೂಲಕವೇ ಚಂದುವನ್ನ ಲಾಂಚ್ ಮಾಡಲು ಸಿದ್ಧತೆ ಮಾಡಿಕೊಂಡಿದ್ದಾರಂತೆ. ನಿರ್ದೇಶನ ಯಾರದ್ದು ಸೇರಿದಂತೆ ಇನ್ನಿತರ ವಿಚಾರಗಳು ಒಂದೊಂದಾಗೇ ರಿವೀಲ್ ಆಗಬೇಕಿದೆ.

# ಕೆಡಿ ಟೀಸರ್ ಡೇಟ್ ಘೋಷಣೆ ಪ್ರಚಾರದ ವೈಖರಿಯಲ್ಲಿದೆ ಮಿಸ್ಟರಿ!

ಧ್ರುವ ಸರ್ಜಾ ನಟಿಸಿರುವ ಪ್ರೇಮ್ ನಿರ್ದೇಶಿರುವ ಬಹುನಿರೀಕ್ಷಿತ ಚಿತ್ರವೇ 'ಕೆಡಿ'. ಚಿತ್ರದ ಎರಡು ಹಾಡುಗಳು ಈಗಾಗ್ಲೇ ರಿಲೀಸ್ ಆಗಿ ವೈರಲ್ ಆಗಿದೆ. ಇದೀಗ ಟೀಸರ್ ಎಂಟ್ರಿಗೆ ಕೌಂಟ್‌ಡೌನ್ ಶುರುವಾಗಿದೆ.

ಸಾಮಾನ್ಯವಾಗಿ ಪ್ಯಾನ್ ಇಂಡಿಯಾ ಚಿತ್ರಗಳ ಟೀಸರ್, ಟ್ರೇಲರ್ ಏಕಕಾಲದಲ್ಲಿ ಎಲ್ಲಾ ಭಾಷೆಯಲ್ಲೂ ರಿಲೀಸ್ ಆಗುತ್ತವೆ. ಆದರೆ ಕೆಡಿ ಟೀಮ್ ಟೀಸರ್ ರಿಲೀಸ್ ಕಾರ್ಯಕ್ರಮಗಳನ್ನು ವಿಭಿನ್ನವಾಗಿ ನಡೆಸಲು ಪ್ಲ್ಯಾನ್ ಮಾಡಿಕೊಂಡಿದೆ. ಒಂದೊಂದು ಭಾಷೆಯಲ್ಲಿ ಒಂದೊಂದು ದಿನ ಟೀಸರ್ ರಿಲೀಸ್ ಆಗಲಿದೆ.

ಆರಂಭಿಕವಾಗಿ ಇದೇ ಗುರುವಾರ ಮುಂಬೈನಲ್ಲಿ ಹಿಂದಿ ಭಾಷೆಯ ಟೀಸರ್ ಮಧ್ಯಾಹ್ನ ರಿಲೀಸ್ ಆಗುತ್ತೆ. ಅದೇ ದಿನ ಹೈದ್ರಾಬಾದ್‌ನಲ್ಲಿ ತೆಲುಗು ಭಾಷೆಯ ಟೀಸರ್ ರಿಲೀಸ್ ಆಗುತ್ತೆ. ಕನ್ನಡದಲ್ಲಿ ಯಾವಾಗ ಎಂದು ಕಾಯುತ್ತಿದ್ದ ಫ್ಯಾನ್ಸ್ ಕುತೂಹಲಕ್ಕೆ ಇದುವರೆಗೂ ಉತ್ತರ ಕೊಟ್ಟಿಲ್ಲ ಕೆಡಿ ಟೀಮ್.

ಪ್ರೇಮ್ ಸಿನಿಮಾ ಅಂದ್ಮೇಲೆ ಪ್ರಚಾರ ಹೈಪು ದೊಡ್ಡಮಟ್ಟಕ್ಕಿರಲೇಕು. ಅದರಂತೆ ವಿವಿಧ ಊರುಗಳಲ್ಲಿ ಒಂದೊಂದು ದಿನ ಗ್ಯಾಪ್ ತೆಗೆದುಕೊಂಡು ಟೀಸರ್ ರಿಲೀಸ್ ಮಾಡಲಿದೆ ಟೀಮ್. ಘೋಷಣೆಯೂ ಮೂರು ದಿನ ನಡೆಯಲಿದ್ದು ಭಾನುವಾರ ಪೂರ್ತಿ ದಿನ ಅಭಿಮಾನಿಗಳು ಕಾದರೂ ಕನ್ನಡ ಭಾಷೆಯ ಟೀಸರ್ ಡೇಟ್ ಘೋಷಣೆ ಆಗಲಿಲ್ಲ. ಆದರೆ ಸೀಕ್ರೇಟ್ ಏನ್ ಗೊತ್ತಾ ಎಲ್ಲಾ ಭಾಷೆಯ ಬಳಿಕ ಕೊನೆಯಲ್ಲಿ ಬೆಂಗಳೂರಿನಲ್ಲಿ ಮೂಲ ಭಾಷೆ ಕನ್ನಡದಲ್ಲಿ ಟೀಸರ್ ರಿಲೀಸ್ ಆಗುತ್ತೆ. ಇದು ಕೆಡಿ ಪ್ಲ್ಯಾನ್. ಕೆಡಿ ಚಿತ್ರವನ್ನು ಬಹುಕೋಟಿ ವೆಚ್ಚದಲ್ಲಿ ಕನ್ನಡದ ಕೆವಿಎನ್ ಫಿಲಂಸ್ ನಿರ್ಮಿಸಿದೆ.



# 'ಕಾಂತಾರ: ಚಾಪ್ಟರ್ 1' ಹೊಸ ಪೋಸ್ಟರ್ ರಿಲೀಸ್

ರಾಷ್ಟ್ರ ಪ್ರಶಸ್ತಿ ವಿಜೇತ ರಿಷಬ್ ಶೆಟ್ಟಿ ನಿರ್ದೇಶಿಸಿ ನಟಿಸುತ್ತಿರುವ ಬಹುನಿರೀಕ್ಷಿತ ಚಿತ್ರ 'ಕಾಂತಾರ ಚಾಪ್ಟರ್ 1' ಅಕ್ಟೋಬರ್ 2ರಂದು ತೆರೆಗೆ ಬರಲು ಸಜ್ಜಾಗುತ್ತಿದೆ. ವಿಶ್ವದಾದ್ಯಂತ ಸಾವಿರಾರು ಚಿತ್ರಮಂದಿರಗಳಲ್ಲಿ, ಏಕಕಾಲಕ್ಕೆ 7 ಭಾಷೆಗಳಲ್ಲಿ ಚಿತ್ರ ತೆರೆ ಕಾಣಲಿದೆ ಎಂದು ಹೊಂಬಾಳೆ ಫಿಲಂಸ್ ಮಾಹಿತಿ ಹಂಚಿಕೊಂಡಿದೆ.

ಈ ಬಾರಿ ಅ.2ರ ಗಾಂಧಿ ಜಯಂತಿ ಗುರುವಾರ ಬಿದ್ದಿದೆ. ಹೀಗಾಗಿ ಶುಕ್ರವಾರ, ಶನಿವಾರ ಹಾಗೂ ಭಾನುವಾರ ಸಿನಿಮಾ ಸಹಜವಾಗಿಯೇ ಒಳ್ಳೆಯ ಕಲೆಕ್ಷನ್ ಮಾಡಲಿದೆ. ಆ ಬಳಿಕ ಅಕ್ಟೋಬರ್ ಮಧ್ಯದಲ್ಲಿ ದೀಪಾವಳಿ ಬರಲಿದೆ. ಇದು ಕೂಡ ಸಿನಿಮಾಗೆ ಸಹಕಾರಿ ಆಗಲಿದೆ. ಇಂಥ ಚಾನ್ಸ್‌ನ ತಂಡ ಬಿಡಲು ರೆಡಿ ಇಲ್ಲ. ಹೀಗಾಗಿ, ಅದಕ್ಕೆ ತಕ್ಕಂತೆ ಕೆಲಸ ನಡೆಯುತ್ತಿದ್ದು, ಅ.2ರಂದೇ ಸಿನಿಮಾ ರಿಲೀಸ್ ತೆರೆಗೆ ಬರುವುದಾಗಿ ಚಿತ್ರತಂಡ ಮಾಹಿತಿ ಹಂಚಿಕೊಂಡಿದೆ.

**ರಕ್ತಸಿಕ್ತ ಅವತಾರದಲ್ಲಿ ಪೋಸ್ಟರ್:** ಹುಟ್ಟುಹಬ್ಬದ ದಿನವೇ ರಿಷಬ್‌ಗೆ ಭರ್ಜರಿ ಗಿಫ್ಟ್ ಕೊಟ್ಟಿರುವ ಚಿತ್ರತಂಡ 'ದಂತಕಥೆಯ ಮುನ್ನುಡಿ' ಆ ನುಡಿಗೊಂದು ಪರಿಚಯ ಮನದಾಳದ ಕಥೆಗೆ ಮತ್ತೊಮ್ಮೆ ಸ್ವಾಗತ. ಎನ್ನುವ ಸಾಲಿನೊಂದಿಗೆ ವಿಶೇಷ ಪೋಸ್ಟರ್‌ವೊಂದನ್ನು ಹಂಚಿಕೊಂಡಿದೆ. ಈ ಅದ್ಧೂರಿ ಪೋಸ್ಟರ್‌ನಲ್ಲಿ ರಿಷಬ್ ಶೆಟ್ಟಿ ಕೈಯಲ್ಲಿ ಕೊಡಲಿ ಹಾಗೂ ಗುರಾಣಿ ಹಿಡಿದಿದ್ದಾರೆ. ಗುರಾಣಿಗೆ ಬಾಣಗಳು ಚುಚ್ಚಿವೆ. ಹಿಂಭಾಗದಲ್ಲಿ ಬೆಂಕಿ ಇದೆ. ರಿಷಬ್ ಶೆಟ್ಟಿ ಮುಖದಲ್ಲಿ ಆಕ್ರೋಶದ ಜ್ವಾಲೆ ಎದ್ದು ಕಾಣುತ್ತಿದೆ. ರಕ್ತಸಿಕ್ತ ಅವತಾರದಲ್ಲಿ ಘರ್ಜಿಸುತ್ತಿರುವ ಡಿವೈನ್‌ಸ್ಟಾರ್ ಅವತಾರ ಅಭಿಮಾನಿಗಳಿಗೆ ಸಖತ್ ಥ್ರಿಲ್ ಕೊಟ್ಟಿದೆ.

**ಕೆಲ ದಿನಗಳ ಹಿಂದೆಯಷ್ಟೇ 'ಕಾಂತಾರ:** ಚಾಪ್ಟರ್ 1' ಚಿತ್ರದ ಸೆಟ್‌ನಲ್ಲಿ ಸಾಕಷ್ಟು ಅವಘಡಗಳು ಸಂಭವಿಸಿದವು. ಈ ಕಾರಣದಿಂದ ಸಿನಿಮಾ ರಿಲೀಸ್ ವಿಳಂಬ ಆಗಲಿದೆ ಎಂದು ಹೇಳಲಾಗುತ್ತಿತ್ತು. ಈ ವದಂತಿಗಳನ್ನು ತಳ್ಳಿಹಾಕಿರುವ ಚಿತ್ರತಂಡ ನಿಗದಿತ ದಿನಾಂಕದಂದೇ ಸಿನಿಮಾ ರಿಲೀಸ್ ಮಾಡುವುದಾಗಿ ಹೇಳಿದೆ.



# ನಾನು ಬಾಸ್ಕೆಟ್‌ಬಾಲ್ ಪ್ಲೇಯರ್, ಸ್ಪೋರ್ಟ್ಸ್‌ಗೆ ಹೈಟ್ ಮ್ಯಾಟರ್ ಆಗಲ್ಲ

ಕ್ವೀನ್ಸ್ ಪ್ರೀಮಿಯರ್ ಲೀಗ್ ಲೋಗೊ ಲಾಂಚ್ ಕಾರ್ಯಕ್ರಮಕ್ಕೆ ಆಗಮಿಸಿದ್ದ ಸ್ಯಾಂಡಲ್‌ವುಡ್‌ನ ಮೋಹಕತಾರೆ ರಮ್ಯಾ ಲೋಗೊ ಲಾಂಚ್ ಮಾಡಿದ್ದಾರೆ.

ಈ ಸಂದರ್ಭ ಮಾತನಾಡಿದ ಅವರು, ತಮ್ಮ ಬಾಲ್ಯದ ದಿನಗಳ ಬಗ್ಗೆ ಮೆಲುಕು ಹಾಕಿಕೊಂಡಿದ್ದಾರೆ. ಅಲ್ಲದೇ ಸಿನಿಮಾ ಇಂಡಸ್ಟ್ರಿಯಲ್ಲಿ ಹೆಣ್ಣುಮಕ್ಕಳಿಗೆ ಸಪೋರ್ಟ್ ಕಡಿಮೆ. ಕ್ರೀಡೆಯಲ್ಲಿ ಗಂಡು ಮಕ್ಕಳು ಡೊಮಿನೇಟ್ ಮಾಡ್ತಾರೆ. ಹೆಣ್ಮಕ್ಕಳು ಕ್ರೀಡೆಯಲ್ಲಿ ಭಾಗಿಯಾಗಬೇಕು ಎಂದಿದ್ದಾರೆ.

ಬಡವ, ಶ್ರೀಮಂತ ಎನ್ನದೇ ಆಡೋ ಆಟ ಅಂದ್ರೆ ಅದು ಕ್ರೀಡೆ. ನಾನು ಬಾಸ್ಕೆಟ್‌ಬಾಲ್ ಪ್ಲೇಯರ್. ಅದರಲ್ಲಿ ನಾನು ಪ್ರವೀಣೆ. ನಾನು ಹೈಟ್ ಕಮ್ಮಿ ಇದೀನಿ ಅಂತಾ ಅಲ್ಲ. ಸ್ಪೋರ್ಟ್ಸ್‌ಗೆ ಹೈಟ್ ಮ್ಯಾಟರ್ ಆಗೋದೇ ಇಲ್ಲ. ಅಪ್ಪು ನಾನು ಇಬ್ಬರು ಆರ್‌ಸಿಬಿ ತಂಡಕ್ಕೆ ರಾಯಭಾರಿ ಆಗಿದ್ದೆವು. ಕನ್ನಡ ಚಿತ್ರರಂಗದಲ್ಲಿ ಯುನಿಟಿ ಕಾಣಿಸುತ್ತಿಲ್ಲ. ಈ ರೀತಿ ಸ್ಪೋರ್ಟ್ಸ್ ಹಮ್ಮಿಕೊಂಡ್ರೆ, ಆಗಲಾದ್ರೂ ಒಗ್ಗಟ್ಟು ಕಾಣಿಸುತ್ತದೆ ಎಂದು ಹೇಳಿದ್ದಾರೆ.



ಇತ್ತೀಚೆಗೆ ಸ್ಯಾಂಡಲ್‌ವುಡ್‌ನ ಹಲವಾರು ಕಾರ್ಯಕ್ರಮಗಳಿಗೆ ಬರುತ್ತಿರುವ ಬಗ್ಗೆ ಬಗ್ಗೆ ಪ್ರತಿಕ್ರಿಯಿಸಿದ ಅವರು, ಹೊಸ ಹೊಸ ಸಿನಿಮಾ ತಂಡದವ್ರು ಆಹ್ವಾನ ಮಾಡಿದ್ರೆ, ಅಥವಾ ಸಿನಿಮಾ ಪ್ರಮೋಷನ್ ಬಗ್ಗೆ ಕೇಳಿಕೊಂಡಾಗ ಮಾಡಿಕೊಟ್ಟಿದ್ದೇನೆ ಎಂದಿದ್ದಾರೆ.

ಹೊಸಬರಾದ್ರೂ, ನಾನು ಅವರಿಗೆ ಸಪೋರ್ಟ್ ಮಾಡುತ್ತೇನೆ. ನಾನು ಇವತ್ತು ಈ ಸ್ಥಾನದಲ್ಲಿ ಇರೋಕೆ ಕಾರಣ ಮಾಧ್ಯಮದವರು ಹಾಗೂ ಕರುನಾಡಿನ ಜನತೆ. ನೀವು ಸಿನಿಮಾ ನೋಡಿ, ನನಗೆ ಸಪೋರ್ಟ್ ಮಾಡಿದ್ದೀರಾ. ಕ್ವೀನ್ಸ್ ಪ್ರೀಮಿಯರ್ ಲೀಗ್‌ನಿಂದ ಹೆಣ್ಣುಮಕ್ಕಳಿಗೆ ಸ್ಪೋರ್ಟ್ಸ್‌ನಲ್ಲಿ ಭಾಗಿಯಾಗೋಕೆ ಅವಕಾಶ ಸಿಗುತ್ತದೆ. ಎಲ್ಲರೂ ಒಗ್ಗಟ್ಟಾಗಿ ಬೆರೆಯೋಕೆ, ಟೈಂ ಕಳೆಯೋಕೆ ಅವಕಾಶ ಸಿಗುತ್ತದೆ ಎಂದು ಹೇಳಿದ್ದಾರೆ.

ಮೋಹಕತಾರೆ ರಮ್ಯಾ ಇತ್ತೀಚೆಗೆ ಸ್ಯಾಂಡಲ್‌ವುಡ್ ಕಡೆ ಹಾಗೂ ಅದಕ್ಕೆ ಪೂರಕವಾದ ಕಾರ್ಯಕ್ರಮಗಳಲ್ಲಿ ಭಾಗಿಯಾಗುತ್ತಿದ್ದಾರೆ. ಅಲ್ಲದೇ ಅವರ ಅಭಿಮಾನಿಗಳಿಗೆ ಸದ್ಯದಲ್ಲಿಯೇ ಗುಡ್ ನ್ಯೂಸ್ ನೀಡಲು ರೆಡಿಯಾಗಿದ್ದಾರೆ.

# ಒಂದೇ ಮ್ಯಾಚ್‌ನಲ್ಲಿ ಬರೋಬ್ಬರಿ 34 ದಾಖಲೆ ಬರೆದ ಶುಭ್ ಮನ್ ಗಿಲ್

ಎಡ್ಜ್ ಬಾಸ್ಟನ್ ನಲ್ಲಿ ನಡೆದ ಇಂಗ್ಲೆಂಡ್ ವಿರುದ್ಧದ 2ನೇ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ ಅಮೋಘ ಗೆಲುವು ದಾಖಲಿಸಿತು. ಈ ಭರ್ಜರಿ ಗೆಲುವಿನ ರೂವಾರಿ ಶುಭ್ ಮನ್ ಗಿಲ್. ಏಕೆಂದರೆ ಈ ಪಂದ್ಯದ ಮೊದಲ ಇನಿಂಗ್ಸ್ ನಲ್ಲಿ 269 ರನ್ ಬಾರಿಸಿದ್ದ ಗಿಲ್, ದ್ವಿತೀಯ ಇನಿಂಗ್ಸ್ ನಲ್ಲಿ 161 ರನ್ ಕಲೆಹಾಕಿದರು. ಈ ಮೂಲಕ ಭಾರತ ತಂಡವು ಬೃಹತ್ ಮೊತ್ತ ಕಲೆಹಾಕುವಲ್ಲಿ ಪ್ರಮುಖ ಪಾತ್ರವಹಿಸಿದರು. ಈ ಭರ್ಜರಿ ಬ್ಯಾಟಿಂಗ್ ನೊಂದಿಗೆ ಗಿಲ್ ಹಲವು ದಾಖಲೆಗಳನ್ನು ಬರೆದಿರುವುದು ವಿಶೇಷ. ಆ ದಾಖಲೆಗಳ ಸಂಪೂರ್ಣ ಪಟ್ಟಿ ಈ ಕೆಳಗಿನಂತಿದೆ



- **ಕ್ರಿಕೆಟ್ ಇತಿಹಾಸದಲ್ಲಿ ಟೆಸ್ಟ್ ಪಂದ್ಯದಲ್ಲಿ 400, ಏಕದಿನದಲ್ಲಿ 200, ಟಿ20ಐನಲ್ಲಿ 100 ರನ್ ಗಳಿಸಿದ ಏಕೈಕ ಆಟಗಾರ ಎಂಬ ವಿಶ್ವ ದಾಖಲೆ ಶುಭ್ ಮನ್ ಗಿಲ್ ಪಾಲಾಗಿದೆ. (ಟೆಸ್ಟ್ 430, ಏಕದಿನದಲ್ಲಿ 208, ಟಿ20ಐನಲ್ಲಿ 126★)**
- **ಟೆಸ್ಟ್ ಪಂದ್ಯದಲ್ಲಿ ಭಾರತೀಯ ಬ್ಯಾಟ್ಸ್‌ಮನ್ ಗಳಿಸಿದ ಅತ್ಯಧಿಕ ಒಟ್ಟು ಸ್ಕೋರ್ ದಾಖಲೆ ಕೂಡ ಗಿಲ್ ಹೆಸರಿಗೆ ಸೇರ್ಪಡೆಯಾಗಿದೆ. (430 ರನ್ಸ್)**
- **ಟೆಸ್ಟ್ ಪಂದ್ಯದಲ್ಲಿ ಇಂಗ್ಲೆಂಡ್‌ನಲ್ಲಿ ಭಾರತದ ಅತ್ಯಧಿಕ ವೈಯಕ್ತಿಕ ಸ್ಕೋರ್ ಗಳಿಸಿದ ರೆಕಾರ್ಡ್ ಕೂಡ ಶುಭ್ ಮನ್ ಗಿಲ್ ಪಾಲಾಗಿದೆ. (430 ರನ್ಸ್)**
- **ಟೆಸ್ಟ್ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಅತಿ ಹೆಚ್ಚು ರನ್‌ಗಳಿಸಿದ ಬ್ಯಾಟರ್ ಕೂಡ ಶುಭ್ ಮನ್ ಗಿಲ್. (430 ರನ್ಸ್)**
- **ಟೆಸ್ಟ್‌ನಲ್ಲಿ ಗರಿಷ್ಠ ವೈಯಕ್ತಿಕ ಸ್ಕೋರ್ ಕಲೆಹಾಕಿದ ನಾಯಕನೆಂಬ ಹೆಗ್ಗಳಿಕೆಗೂ ಶುಭ್ ಮನ್ ಗಿಲ್ ಪಾತ್ರರಾಗಿದ್ದಾರೆ. (269 ರನ್ಸ್)**
- **SENA ದೇಶಗಳಲ್ಲಿ ಅತ್ಯಧಿಕ ವೈಯಕ್ತಿಕ ಸ್ಕೋರ್ ಗಳಿಸಿದ ಭಾರತೀಯನ ದಾಖಲೆ ಕೂಡ ಗಿಲ್ ಪಾಲಾಗಿದೆ. (269 ರನ್ಸ್) (SENA = ಸೌತ್ ಆಫ್ರಿಕಾ, ಇಂಗ್ಲೆಂಡ್, ನ್ಯೂಝಿಲೆಂಡ್, ಆಸ್ಟ್ರೇಲಿಯಾ)**
- **ಟೆಸ್ಟ್ ಪಂದ್ಯವೊಂದರಲ್ಲಿ ನಾಲ್ಕು ಶತಕಗಳ ಭಾಗವಾಗಿ ಮೊದಲ ಇನ್ನಿಂಗ್ಸ್‌ನಲ್ಲಿ 200+ ಮತ್ತು ಎರಡನೇ ಇನ್ನಿಂಗ್ಸ್‌ನಲ್ಲಿ 100+ ಗಳಿಸಿದ ಮೊದಲ ಭಾರತೀಯ ಬ್ಯಾಟ್ಸ್‌ಮನ್ ಎಂಬ ದಾಖಲೆಯನ್ನು ಗಿಲ್ ತಮ್ಮದಾಗಿಸಿಕೊಂಡಿದ್ದಾರೆ.**
- **ಎಡ್ಜ್‌ಬಾಸ್ಟನ್‌ನಲ್ಲಿ ಎರಡೂ ಇನ್ನಿಂಗ್ಸ್‌ಗಳಲ್ಲಿ 50+ ಗಳಿಸಿದ ಮೊದಲ ಭಾರತೀಯ ನಾಯಕ ಎಂಬ ಹಿರಿಮೆಗೂ ಗಿಲ್ ಪಾತ್ರರಾಗಿದ್ದಾರೆ.**
- **ಬರ್ಮಿಂಗ್ ಹ್ಯಾಮ್ ನಲ್ಲಿ ಅತ್ಯಧಿಕ ವೈಯಕ್ತಿಕ ಸ್ಕೋರ್ ಗಳಿಸಿದ 10ನೇ ಆಟಗಾರ ಶುಭ್ ಮನ್ ಗಿಲ್. (269 ರನ್ಸ್)**
- **ಎಡ್ಜ್ ಬಾಸ್ಟನ್ ನಲ್ಲಿ ಭಾರತೀಯ ಬ್ಯಾಟ್ಸ್‌ಮನ್ ಗಳಿಸಿದ ಗರಿಷ್ಠ ಸ್ಕೋರ್ ದಾಖಲೆ ಸಹ ಗಿಲ್ ಪಾಲಾಗಿದೆ. (269 ರನ್ಸ್)**
- **ಮೊದಲ ಎರಡು ಟೆಸ್ಟ್‌ಗಳಲ್ಲಿ ಅತ್ಯಧಿಕ ರನ್ ಗಳಿಸಿದ ನಾಯಕ ಶುಭ್ ಮನ್ ಗಿಲ್. (585 ರನ್ಸ್)**
- **ಟೆಸ್ಟ್ ಪಂದ್ಯವೊಂದರಲ್ಲಿ 400-ರನ್‌ಗಳನ್ನು ಕಲೆಹಾಕಿದ ಮೊದಲ ಭಾರತೀಯ ಗಿಲ್. (269 161 ರನ್ಸ್)**
- **ಎಡ್ಜ್‌ಬಾಸ್ಟನ್ ನಲ್ಲಿ ಟೆಸ್ಟ್ ಪಂದ್ಯ ಗೆದ್ದ ಮೊದಲ ಭಾರತೀಯ ನಾಯಕ ಶುಭ್ ಮನ್ ಗಿಲ್.**
- **ನಾಯಕತ್ವದ ಚೊಚ್ಚಲ ಸರಣಿಯಲ್ಲಿ ಅತಿ ಹೆಚ್ಚು ರನ್‌ಗಳಿಸಿದ ಭಾರತೀಯ ಬ್ಯಾಟರ್ ಶುಭ್ ಮನ್ ಗಿಲ್. (585 ರನ್ಸ್)**
- **ಇನ್ನಿಂಗ್ಸ್‌ನಲ್ಲಿ ಅತಿ ಹೆಚ್ಚು ಸಿಕ್ಸರ್ ಬಾರಿಸಿದ ನಾಯಕನೆಂಬ ದಾಖಲೆ ಕೂಡ ಗಿಲ್ ಪಾಲಾಗಿದೆ. (8 ಸಿಕ್ಸರ್‌ಗಳು)**
- **ವಿದೇಶದಲ್ಲಿ ಟೆಸ್ಟ್ ಪಂದ್ಯಗಳಲ್ಲಿ ದ್ವಿಶತಕ ಬಾರಿಸಿದ ಮೊದಲ ಭಾರತೀಯ ನಾಯಕ ಶುಭ್ ಮನ್ ಗಿಲ್.**
- **ಇಂಗ್ಲೆಂಡ್‌ನಲ್ಲಿ ಟೆಸ್ಟ್ ಪಂದ್ಯದಲ್ಲಿ ಅತ್ಯಧಿಕ ರನ್ ಗಳಿಸಿದ ಎರಡನೇ ಬ್ಯಾಟರ್ ಗಿಲ್. (430)**
- **ಟೆಸ್ಟ್ ಪಂದ್ಯದಲ್ಲಿ ನಾಯಕನಾಗಿ ಎರಡನೇ ಅತಿ ಹೆಚ್ಚು ಬೌಂಡರಿ ಬಾರಿಸಿದ ವಿಶ್ವ ದಾಖಲೆ ಶುಭ್ ಮನ್ ಗಿಲ್ ಹೆಸರಿಗೆ ಸೇರ್ಪಡೆಯಾಗಿದೆ. (54 ಫೋರ್)**
- **ಒಂದೇ ಟೆಸ್ಟ್‌ನಲ್ಲಿ ಎರಡು ಬಾರಿ 150+ ಸ್ಕೋರ್‌ಗಳನ್ನು ಗಳಿಸಿದ ವಿಶ್ವ ಎರಡನೇ ಬ್ಯಾಟ್ಸ್‌ಮನ್ ಎಂಬ ಹೆಗ್ಗಳಿಕೆಯನ್ನು ಗಿಲ್ ತಮ್ಮದಾಗಿಸಿಕೊಂಡಿದ್ದಾರೆ.**
- **ಇಂಗ್ಲೆಂಡ್‌ನಲ್ಲಿ ಅವಳಿ ಶತಕಗಳನ್ನು ಗಳಿಸಿದ ಎರಡನೇ ಭಾರತೀಯ ಎಂಬ ಹಿರಿಮೆಗೂ ಗಿಲ್ ಪಾತ್ರರಾಗಿದ್ದಾರೆ.**
- **ಇಂಗ್ಲೆಂಡ್‌ನಲ್ಲಿ 3 ಶತಕ ಸಿಡಿಸಿದ 3ನೇ ಕ್ಯಾಪ್ಟನ್ ಎಂಬ ಹೆಗ್ಗಳಿಕೆಯನ್ನು ಗಿಲ್ ತಮ್ಮದಾಗಿಸಿಕೊಂಡಿದ್ದಾರೆ. (4 ಇನ್ನಿಂಗ್ಸ್‌ಗಳಲ್ಲಿ 3★)**
- **ಟೆಸ್ಟ್ ಪಂದ್ಯದಲ್ಲಿ 250+ 100+ ಗಳಿಸಿದ ವಿಶ್ವದ 3ನೇ ಬ್ಯಾಟರ್ ಎಂಬ ದಾಖಲೆಯನ್ನು ಗಿಲ್ ನಿರ್ಮಿಸಿದ್ದಾರೆ.**
- **ಟೆಸ್ಟ್ ಪಂದ್ಯದಲ್ಲಿ ಅವಳಿ ಶತಕಗಳನ್ನು ಬಾರಿಸಿದ 3ನೇ ಭಾರತೀಯ ನಾಯಕ ಎಂಬ ಹಿರಿಮೆಗೂ ಗಿಲ್ ಪಾತ್ರರಾಗಿದ್ದಾರೆ.**
- **ಟೆಸ್ಟ್ ಪಂದ್ಯದಲ್ಲಿ ದ್ವಿಶತಕ ಬಾರಿಸಿದ 3ನೇ ಕಿರಿಯ ನಾಯಕ ಶುಭ್ ಮನ್ ಗಿಲ್. (25 ವರ್ಷ 291 ದಿನ)**
- **ಟೆಸ್ಟ್ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಅವಳಿ ಶತಕಗಳನ್ನು ಬಾರಿಸಿದ ವಿಶ್ವದ 3ನೇ ಕ್ಯಾಪ್ಟನ್ ಶುಭ್ ಮನ್ ಗಿಲ್.**
- **ಟೆಸ್ಟ್ ಮತ್ತು ಏಕದಿನ ಪಂದ್ಯಗಳೆರಡರಲ್ಲೂ ದ್ವಿಶತಕಗಳನ್ನು ಬಾರಿಸಿದ ವಿಶ್ವದ 5ನೇ ಆಟಗಾರ ಗಿಲ್. (ಟೆಸ್ಟ್‌ಗಳಲ್ಲಿ 269, ODIನಲ್ಲಿ 208)**
- **ಟೆಸ್ಟ್ ಪಂದ್ಯವೊಂದರಲ್ಲಿ ಅವಳಿ ಶತಕಗಳನ್ನು ಬಾರಿಸಿದ 3ನೇ ಭಾರತೀಯ ನಾಯಕನೆಂಬ ದಾಖಲೆ ಗಿಲ್ ಪಾಲಾಗಿದೆ.**
- **ಎಡ್ಜ್‌ಬಾಸ್ಟನ್‌ನಲ್ಲಿ ನಡೆದ ಟೆಸ್ಟ್ ಇನ್ನಿಂಗ್ಸ್ ನಲ್ಲಿ ಗರಿಷ್ಠ ವೈಯಕ್ತಿಕ ಸ್ಕೋರ್ ಗಳಿಸಿದ 5ನೇ ಬ್ಯಾಟರ್ ಶುಭ್ ಮನ್ ಗಿಲ್. (269 ರನ್ಸ್)**
- **ಟೆಸ್ಟ್‌ನಲ್ಲಿ ಭಾರತೀಯ ಬ್ಯಾಟ್ಸ್‌ಮನ್‌ನಿಂದ ಗಳಿಸಿದ 7ನೇ ಅತ್ಯಧಿಕ ವೈಯಕ್ತಿಕ ಸ್ಕೋರ್ ನ ದಾಖಲೆ ಕೂಡ ಗಿಲ್ ಪಾಲಾಗಿದೆ. (269 ರನ್ಸ್)**
- **ಇಂಗ್ಲೆಂಡ್‌ನಲ್ಲಿ ಪ್ರವಾಸಿ ಬ್ಯಾಟ್ಸ್‌ಮನ್ ಗಳಿಸಿದ 8ನೇ ಅತ್ಯಧಿಕ ವೈಯಕ್ತಿಕ ಸ್ಕೋರ್ ಶುಭ್ ಮನ್ ಗಿಲ್ ಬ್ಯಾಟ್ ನಿಂದ ಮೂಡಿಬಂದಿದೆ. (269 ರನ್ಸ್)**
- **ಒಂದೇ ಪಂದ್ಯದಲ್ಲಿ 200 ಮತ್ತು 100 ರನ್ ಗಳಿಸಿದ ವಿಶ್ವ 9ನೇ ಬ್ಯಾಟ್ಸ್‌ಮನ್ ಶುಭ್ ಮನ್ ಗಿಲ್.**
- **ಟೆಸ್ಟ್ ಪಂದ್ಯವೊಂದರಲ್ಲಿ ಅವಳಿ ಶತಕಗಳನ್ನು ಬಾರಿಸಿದ 9ನೇ ಭಾರತೀಯ ಬ್ಯಾಟ್ಸ್‌ಮನ್ ಗಿಲ್.**
- **ವಿದೇಶಿ ಟೆಸ್ಟ್ ಪಂದ್ಯವನ್ನು ಗೆದ್ದ ಅತ್ಯಂತ ಕಿರಿಯ ಭಾರತೀಯ ನಾಯಕನೆಂಬ (25 ವರ್ಷ 301 ದಿನ) ದಾಖಲೆ ಶುಭ್ ಮನ್ ಗಿಲ್ ಪಾಲಾಗಿದೆ.**
- **SENA ಟೆಸ್ಟ್‌ಗಳಲ್ಲಿ POTM ಗೆದ್ದ 8ನೇ ಭಾರತೀಯ ನಾಯಕನೆಂಬ ಹಿರಿಮೆಗೂ ಶುಭ್ ಮನ್ ಗಿಲ್ ಪಾತ್ರರಾಗಿದ್ದಾರೆ.**

# ಮೆಟ್ರೋ ದರ ಏರಿಕೆ: ಬಿಎಂಆರ್‌ಸಿಎಲ್‌ಗೆ ಹೈಕೋರ್ಟ್ ನೋಟಿಸ್ ಜಾರಿ

**ಬೆಂಗಳೂರು:** ನಮ್ಮ ಮೆಟ್ರೋ ದರ ನಿಗದಿ ಸಂಬಂಧ ಬೆಂಗಳೂರು ಮೆಟ್ರೋ ರೈಲು ಕಾರ್ಪೊರೇಷನ್ ಲಿಮಿಟೆಡ್‌ಗೆ ಹೈಕೋರ್ಟ್ ನೋಟಿಸ್ ಜಾರಿ ಮಾಡಿ 2 ವಾರದಲ್ಲಿ ಉತ್ತರಿಸುವಂತೆ ಸೂಚಿಸಿದೆ.

ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಅವರು ಶುಲ್ಕ ನಿಗದಿ ಸಮಿತಿ ವರದಿಯನ್ನು ಬಹಿರಂಗ ಪಡಿಸುವಂತೆ ಕೋರಿ ಸಲ್ಲಿಸಿದ್ದ ರಿಟ್ ಅರ್ಜಿಯ ವಿಚಾರಣೆ ಇಂದು ನ್ಯಾ.ಸುನಿಲ್ ದತ್ ಯಾದವ್ ಅವರ ಏಕಸದಸ್ಯ ಪೀಠದಲ್ಲಿ ನಡೆಯಿತು.

ವಿಚಾರಣೆ ವೇಳೆ, ನೀವಿಷ್ಟು ಪ್ರಬಲರಾಗಿದ್ದೂ ನಿಮಗೆ ವರದಿ ಸಿಗುತ್ತಿಲ್ಲವೇ ಎಂದು ನ್ಯಾಯಮೂರ್ತಿಗಳು ತೇಜಸ್ವಿ ಸೂರ್ಯ ಪರ ವಕೀಲರಿಗೆ ಪ್ರಶ್ನಿಸಿದರು.

ಡಿಸೆಂಬರ್ ತಿಂಗಳಲ್ಲೇ ದರ ನಿಗದಿ ಸಮಿತಿ ವರದಿ ನೀಡಿದ್ದರೂ ಬಿಎಂಆರ್‌ಸಿಎಲ್ ವರದಿ ನೀಡುತ್ತಿಲ್ಲ. ಮಾಹಿತಿ ಹಕ್ಕಿನಡಿ ಅರ್ಜಿ ಸಲ್ಲಿಸಿದ್ದರೂ ಸಮಿತಿ ವರದಿ ಬಹಿರಂಗಪಡಿಸಿಲ್ಲ ಎಂದು ವಕೀಲರು ಉತ್ತರಿಸಿದರು. ಕೊನೆಗೆ ಬಿಎಂಆರ್‌ಸಿಎಲ್‌ಗೆ ನೋಟಿಸ್ ಜಾರಿ ಮಾಡಿದ ಕೋರ್ಟ್ ಅರ್ಜಿ ವಿಚಾರಣೆಯನ್ನು 2 ವಾರ ಮುಂದೂಡಿಕೆ ಮಾಡಿತು.



**ಅರ್ಜಿಯಲ್ಲಿ ಏನಿತ್ತು?:** ದರ ನಿಗದಿ ಸಮಿತಿಯ ತಜ್ಞರು ವಿದೇಶಿ ಪ್ರವಾಸವನ್ನು ಕೈಗೊಂಡು ಅಲ್ಲಿನ ಮೆಟ್ರೋ ದರವನ್ನು ಪರಿಶೀಲಿಸಿದ ಬಳಿಕ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದರು. ಈ ವರದಿಯ ನಂತರ ಬಿಎಂಆರ್‌ಸಿಎಲ್ 130% ರವರೆಗೆ ಮೆಟ್ರೋ ರೈಲು ಟಿಕೆಟ್ ದರವನ್ನು ಏರಿಕೆ ಮಾಡಿದೆ.

ದರ ಏರಿಕೆ ಬಳಿಕ ಮೆಟ್ರೋ ರೈಲು ಪ್ರಯಾಣಿಕರ ಸಂಖ್ಯೆ ಕುಸಿದಿದೆ. ದರ ನಿಗದಿ ಸಮಿತಿ ವರದಿಯನ್ನು ನೀಡುವಂತೆ ಬಿಎಂಆರ್‌ಸಿಎಲ್ ಅನ್ನು ಕೇಳಿದ್ದರೂ ನೀಡಿಲ್ಲ. ಅಂತಿಮವಾಗಿ ಮಾಹಿತಿ ಹಕ್ಕು ಕಾಯ್ದೆಯ ಅಡಿ ಪ್ರಶ್ನಿಸಿದ್ದರೂ ಉತ್ತರ ನೀಡಿಲ್ಲ. ಹೀಗಾಗಿ ದರ ನಿಗದಿ ಸಮಿತಿಯ ವರದಿಯನ್ನು ಬಹಿರಂಗ ಪಡಿಸಬೇಕೆಂದು ಅರ್ಜಿಯಲ್ಲಿ ಉಲ್ಲೇಖಿಸಲಾಗಿತ್ತು.

**ತೇಜಸ್ವಿ ಕಿಡಿ**

ಶುಲ್ಕ ನಿಗದಿ ಸಮಿತಿ ವರದಿಯನ್ನು ಬಿಎಂಆರ್‌ಸಿಎಲ್ ಮತ್ತು ಕರ್ನಾಟಕ ಸರ್ಕಾರ ರಹಸ್ಯವಾಗಿಡುವುದು ಆಕ್ರೋಶದ ಸಂಗತಿ. ಬೆಂಗಳೂರು ಮೆಟ್ರೋ ಈಗ ಭಾರತದಲ್ಲಿ ಅತ್ಯಂತ ದುಬಾರಿಯಾಗಿದ್ದು ಅನೇಕ ಮಧ್ಯಮ ವರ್ಗದ ಪ್ರಯಾಣಿಕರಿಗೆ ಇದು ಕೈಗೆಟುಕುವಂತಿಲ್ಲ.

ದೆಹಲಿ ಸೇರಿದಂತೆ ದೇಶದ ಇತರ ಪ್ರತಿಯೊಂದು ಮೆಟ್ರೋ ವ್ಯವಸ್ಥೆಯು ತನ್ನ ಶುಲ್ಕ ನಿಗದಿ ಸಮಿತಿಯ ವರದಿಗಳನ್ನು ಸಾರ್ವಜನಿಕಗೊಳಿಸಿರುವಾಗ ಬಿಎಂಆರ್‌ಸಿಎಲ್ ಯಾಕೆ ಈ ವರದಿಯನ್ನು ಬಹಿರಂಗ ಪಡಿಸುತ್ತಿಲ್ಲ. ಸರ್ಕಾರ ಏನನ್ನು ಮರೆಮಾಡಲು ಪ್ರಯತ್ನಿಸುತ್ತಿದೆ?

ಮೂರು ತಿಂಗಳಿನಿಂದ ಪದೇ ಪದೇ ಮನವಿ ಮಾಡಲಾಗಿತ್ತು. ನಂತರ ಆರ್‌ಟಿಐ ಅರ್ಜಿಗಳ ಹೊರತಾಗಿಯೂ ವರದಿಯನ್ನು ರಹಸ್ಯವಾಗಿಡಲಾಗಿದೆ. ಇಲ್ಲಿ ಯಾವುದೇ ರಾಷ್ಟ್ರೀಯ ಭದ್ರತಾ ಕಾಳಜಿ ಇಲ್ಲ. ಹಾಗಾದರೆ ಇಷ್ಟೊಂದು ಗೌಪ್ಯತೆ ಏಕೆ? ಸಿಎಂ ಸಿದ್ದರಾಮಯ್ಯನವರು ಈ ವರದಿಯನ್ನು ಬಿಡುಗಡೆ ಮಾಡಲು ನಿರಾಕರಿಸುತ್ತಿರುವುದು ಏಕೆ ಎಂದು ಪ್ರಶ್ನಿಸಿದ್ದಾರೆ.

# ಯಶವಂತಪುರದಿಂದ ಹೊರಡುವ ವಂದೇ ಭಾರತ್ ರೈಲಿಗೆ ಹೆಚ್ಚುವರಿ ಬೋಗಿಗಳು

**ಬೆಂಗಳೂರು:** ಕಾಚಿಗುಡ- ಯಶವಂತಪುರ-ಕಾಚಿಗುಡ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಜುಲೈ 10ರಿಂದ 16 ಬೋಗಿಗಳೊಂದಿಗೆ ಸಂಚರಿಸಲಿದೆ. ಆ ಮೂಲಕ ಐಟಿ ನಗರಗಳಾದ ಬೆಂಗಳೂರು ಹಾಗೂ ಹೈದರಾಬಾದ್ ನಡುವಿನ ಸಂಚಾರಕ್ಕೆ ಮತ್ತಷ್ಟು ಅನುಕೂಲವಾಗಲಿದೆ. ಈ ಬಗ್ಗೆ ನೈರುತ್ಯ ರೈಲ್ವೆ ಮಾಧ್ಯಮ ಪ್ರಕಟಣೆ ಹೊರಡಿಸಿದೆ. ಈ ಮುಂಚೆ 8 ಬೋಗಿ ಉಳ್ಳ 530 ಪ್ರಯಾಣಿಕರ ಸಾಮರ್ಥ್ಯದೊಂದಿಗೆ ಈ ಮಾರ್ಗದ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಸಂಚರಿಸುತ್ತಿತ್ತು. ಆದರೆ ಇದೀಗ 1,128 ಪ್ರಯಾಣಿಕರ ಸಾಮರ್ಥ್ಯದ 16 ಬೋಗಿಗಳ ಹೆಚ್ಚಳದೊಂದಿಗೆ ಸಂಚರಿಸಲಿದೆ.

ರೈಲು ಸಂಖ್ಯೆ 20703/20704 ಕಾಚಿಗುಡ ಟು ಯಶವಂತಪುರ ಟು ಕಾಚಿಗುಡ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಈ ಮುಂಚೆ 08 ಬೋಗಿಗಳ ಸಂಯೋಜನೆಯೊಂದಿಗೆ ಸಂಚಾರ ಆರಂಭಿಸಿತ್ತು. ಇದರಲ್ಲಿ 01 ಎಕ್ಸಿಕ್ಯೂಟಿವ್ ಕ್ಲಾಸ್ ಮತ್ತು 07 ಚೇರ್ ಕಾರ್‌ಗಳು ಸೇರಿದ್ದವು. ಆದರೆ ಈ ಮಾರ್ಗಕ್ಕೆ ಹೆಚ್ಚಿನ ಪ್ರಯಾಣಿಕರ ಬೇಡಿಕೆಯನ್ನು ಪರಿಗಣಿಸಿ, ಹೆಚ್ಚುವರಿಯಾಗಿ 08 ಬೋಗಿಗಳ ಅಳವಡಿಕೆ ನಿರ್ಧರಿಸಲಾಗಿದೆ.



ಅದರಂತೆ, ಜುಲೈ 10ರಿಂದ ಈಗಿರುವ 08 ಕೋಚ್ ಸಾಮರ್ಥ್ಯದ ಬದಲಿಗೆ 16 ಕೋಚ್ ಸಾಮರ್ಥ್ಯದೊಂದಿಗೆ ರೈಲು ಕಾರ್ಯನಿರ್ವಹಿಸಲಿದೆ. ಹೊಸ ಸಂಯೋಜನೆಯು 1024 ಪ್ರಯಾಣಿಕರ ಸಾಮರ್ಥ್ಯದ 14 ಚೇರ್‌ಗಳು ಮತ್ತು 104 ಪ್ರಯಾಣಿಕರ ಸಾಮರ್ಥ್ಯದ 02 ಎಕ್ಸಿಕ್ಯೂಟಿವ್ ಕ್ಲಾಸ್ ಸೇರಿದಂತೆ ಒಟ್ಟು 1128 ಆಸನಗಳು ಹೊಂದಿರುತ್ತದೆ.

**ಸಂದೀಪ್ ಮಾಥುರ್ ಹೇಳಿದ್ದಿಷ್ಟು:** ಈ ಬಗ್ಗೆ ಮಾತನಾಡಿರುವ ನೈರುತ್ಯ ರೈಲ್ವೆ ಜನರಲ್ ಮ್ಯಾನೇಜರ್ ಸಂದೀಪ್ ಮಾಥುರ್, ಬೋಗಿಗಳ ಸಂಖ್ಯೆ ದ್ವಿಗುಣಗೊಳ್ಳುವುದರಿಂದ, ಹೆಚ್ಚಿನ ಸಂಖ್ಯೆಯ ಪ್ರಯಾಣಿಕರು ಇದೀಗ ಐಟಿ ನಗರಗಳಾದ ಹೈದರಾಬಾದ್ ಮತ್ತು ಬೆಂಗಳೂರು ನಡುವಿನ ವಂದೇ ಭಾರತ್ ರೈಲು ಸೇವೆಗಳನ್ನು ಪಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು 2023 ಸೆಪ್ಟೆಂಬರ್ 24 ರಂದು ಕಾಚಿಗುಡ-ಯಶವಂತಪುರ-ಕಾಚಿಗುಡ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ಹಸಿರು ನಿಶಾನೆ ತೋರಿದ್ದರು. ಇದೀಗ ಜುಲೈ 10ರಿಂದ ಹೆಚ್ಚಿನ ಪ್ರಯಾಣಿಕರ ಸಂಚಾರ ಸಾಮರ್ಥ್ಯದೊಂದಿಗೆ ಓಡಾಟ ನಡೆಸಲಿದೆ.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054